ಸಂಪುಟ: 05 ಸಂಚಿಕೆ: 33 ಪುಟಗಳು: 08 ಗುರುವಾರ 17 ಏಪ್ರಿಲ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833

₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಜೀವನವು ಒಂದು ಕಠಿಣ ಆಟ. ವ್ಯಕ್ತಿಯಾಗುವ ನಿಮ್ಮ ಜನ್ಮಸಿದ್ಧ ಹಕ್ಕನ್ನು ಉಳಿಸಿಕೊಳ್ಳುವ ಮೂಲಕ ಮಾತ್ರ, ನೀವು ಅದನ್ನು ಗೆಲ್ಲಬಹುದು.

## ನಾಲ್ಕೇ ದಿನದಲ್ಲಿ ಎಡಪ್ಪಾಡಿ ಪಳನಿಸ್ವಾಮಿ ಯೂಟರ್ನ್: ಭಾರೀ ಟ್ವಿಸ್ಟ್

• ಉದಯವಾಹಿನಿ, ಚೆನ್ನೈ

ಬಿಜೆಪಿ ಮತ್ತು ಎಐಎಡಿಎಂಕೆ ಮೈತ್ರಿ ಮಾಡಿಕೊಳ್ಳಲಿದೆ, ಮುಂಬರುವ ಚುನಾವಣೆಯನ್ನು ಜೊತೆಯಾಗಿ ಎದುರಿಸಲಿದೆ ಮತ್ತು ನಮ್ಮದೇ ಮೈತ್ರಿ ಪಕ್ಷಗಳ ಸರ್ಕಾರವನ್ನೂ ರಚಿಸಲಿದ್ದೇವೆ ಎಂದು ಅಮಿತ್ ಶಾ ಹೇಳಿದ್ದರು. ಅದಕ್ಕೆ ನಗುನಗುತ್ತಾ ಎಡಪ್ಪಾಡಿ ಪಳನಿಸ್ವಾಮಿ ತಲೆಯಾಡಿಸಿದ್ದರು. ಆದರೆ, ಇದಾದ ನಾಲ್ಕೇ ದಿನದಲ್ಲಿ ಎಡಪ್ಪಾಡಿ ಯೂಟರ್ನ್ ಹೊಡೆದಿದ್ದಾರೆ. ನಮ್ಮ ಪಕ್ಷ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡಿರುವುದು ನಿಜ. ಆದರೆ, ಒಂದು ವೇಳೆ ನಾವು ಗೆದ್ದರೂ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡು ಸರ್ಕಾರ ರಚಿಸುವುದಿಲ್ಲ. ಅಮಿತ್ ಶಾ ಅವರು ಜೊತೆಯಾಗಿ ಸರ್ಕಾರ ರಚಿಸುವ ಬಗ್ಗೆ ಪ್ರಸ್ತಾವನೆ ಮಾಡಲೇ ಇಲ್ಲ ಎಂದು ಎಡಪ್ಪಾಡಿ ಪಳನಿಸ್ವಾಮಿ ಹೇಳಿದ್ದಾರೆ. ಒಟ್ಟಾಗಿ ಸರ್ಕಾರ ರಚಿಸುತ್ತೇವೆ ಮತ್ತು ಎಡಪ್ಪಾಡಿ ಪಳನಿಸ್ವಾಮಿ ಅವರ ನೇತೃತ್ವದಲ್ಲೇ ಚುನಾವಣೆ ಎದುರಿಸಲಿದ್ದೇವೆ ಎಂದು ಅಮಿತ್ ಶಾ ಹೇಳಿದ್ದರು. ಈಗ, ಸಮ್ಮಿಶ್ರ ಸರ್ಕಾರದ ಸಾಧ್ಯತೆಯನ್ನು ನೇರಾನೇರ ಎಡಪ್ಪಾಡಿ ತಳ್ಳಿ ಹಾಕಿದ್ದಾರೆ. ನೀವೇ ತಪ್ಪಾಗಿ ಅರ್ಥೈಸಿಕೊಂಡಿದ್ದೀರಾ ಎಂದು ಮಾಧ್ಯಮದವರ ಮೇಲೆ ಗೂಬೆ ಕೂರಿಸಿದ್ದಾರೆ. ಬಿಜೆಪಿ ಮತ್ತು ಎಐಎಡಿಎಂಕೆ ನಡುವಿನ ಸ್ಪಷ್ಟ ಭಿನ್ನಾಭಿಪ್ರಾಯ ಇದೆಂದು ವಿಶ್ಲೇಷಿಸಲಾಗುತ್ತಿದ್ದು, ಚುನಾವಣೆ ಬಳಿಕ ಸಮ್ಮಿಶ್ರ ಸರ್ಕಾರದ ಸ್ವರೂಪವು ಬದಲಾಗುತ್ತದೆ ಎಂದು ಅಮಿತ್ ಶಾ ಹೇಳಿರುವುದನ್ನೂ ಎಡಪ್ಪಾಡಿ ಅಲ್ಲಗಳೆದಿದ್ದಾರೆ. ಹಾಗಾಗಿ, ಎರಡು ಪಕ್ಷಗಳ ನಡುವಿನ ಮೈತ್ರಿ ಯಾವ ಹಂತಕ್ಕೆ ಹೋಗಿ ನಿಲ್ಲುತ್ತದೆ ಎನ್ನುವುದು ಕುತೂಹಲಕ್ಕೆ ಕಾರಣವಾಗಿದೆ.

## ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಮೀಸಲಾತಿ ರಾಷ್ಟ್ರಪತಿಗಳ ಅಂಗಳಕ್ಕೆ ಮಸೂದೆ

• ಉದಯವಾಹಿನಿ, ಚೆನ್ನೈ

ರಾಜ್ಯ ಸರ್ಕಾರ ಮತ್ತು ರಾಜ್ಯಪಾಲರ ನಡುವೆ ನಡೆಯುತ್ತಿದ್ದ ಸಂಘರ್ಷ ಈಗ ರಾಷ್ಟ್ರಪತಿಗಳ ಅಂಗಳಕ್ಕೆ ತಲುಪಿದೆ. ಮುಸ್ಲಿಮ್ ಸಮುದಾಯದ ಗುತ್ತಿಗೆದಾರರಿಗೆ ಗುತ್ತಿಗೆಯಲ್ಲಿ 4% ಮೀಸಲಾತಿ ಕಲ್ಪಿಸಿದ್ದ ಮಸೂದೆಯನ್ನು ರಾಜ್ಯಪಾಲ ಥಾವರ್ ಸಿಂಗ್ ಗೆಹ್ಲೋಟ್ ಅವರು ರಾಷ್ಟ್ರಪತಿಗಳಿಗೆ ಕಳುಹಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಕಳುಹಿಸಿದ ಪತ್ರದಲ್ಲಿ ರಾಜ್ಯಪಾಲರು ಸಂವಿಧಾನದಲ್ಲಿ ಧರ್ಮ ಆಧಾರಿತ ಮೀಸಲಾತಿ ನೀಡಲು ಅವಕಾಶವಿಲ್ಲ. ಈ ಬಗ್ಗೆ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ಸಂವಿಧಾನದ ಆರ್ಟಿಕಲ್ 14,15,16 ಉಲ್ಲೇಖಿಸಿ ನಿರಾಕರಣೆ ಮಾಡಿದೆ ಎಂದು ಕೆಲ ತೀರ್ಪುಗಳನ್ನು ಉಲ್ಲೇಖಿಸಿದ್ದಾರೆ.

ಗುತ್ತಿಗೆ ಮೀಸಲಾತಿಯು ಈವರೆಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಪ್ರವರ್ಗ 1ರವರೆಗೆ ಅನ್ವಯವಾಗುತ್ತಿತ್ತು. ಈ ಸೌಲಭ್ಯವನ್ನು ಮುಸ್ಲಿಮರಿಗೆ ವಿಸ್ತರಿಸುವ ನಿರ್ಧಾರವನ್ನು ರಾಜ್ಯ ಸರ್ಕಾರ ಕೈಗೊಂಡಿತ್ತು. ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾರ್ಚ್ 7ರಂದು ಮಂಡಿಸಿದ ಬಜೆಟ್‌ನಲ್ಲಿ ಮೀಸಲಾತಿ ನೀಡುವ ಬಗ್ಗೆ ಘೋಷಣೆ ಮಾಡಿದ್ದರು. ವಿಪಕ್ಷಗಳ ವಿರೋಧದ ಮಧ್ಯೆ ಸರ್ಕಾರ ಬಜೆಟ್ ಅಧಿವೇಶನದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ಕೆಟಿಪಿಪಿ) ಕಾಯ್ದೆಗೆ ತಿದ್ದುಪಡಿ ತರುವ ಮಸೂದೆಗೆ ಒಪ್ಪಿಗೆ ನೀಡಿತ್ತು. ಮಸೂದೆ ಕಾಯ್ದೆಯಾಗಿ ಜಾರಿಯಾದರೆ 2 ಕೋಟಿ ರೂ. ವೆಚ್ಚದ ಕಾಮಗಾರಿಗಳು, 1 ಕೋಟಿ ರೂ.ವರೆಗಿನ ಸರಕು ಮತ್ತು ಸೇವೆಗಳ ಪೂರೈಕೆಯ ಟೆಂಡರ್‌ನಲ್ಲಿ ಮುಸ್ಲಿಮರಿಗೆ 4% ಮೀಸಲಾತಿ ಸಿಗಲಿದೆ.

## ಬೆಂಗಳೂರಿನಲ್ಲಿ ವ್ಯಾಪಾರ ನಡೆಸಲು ಪರವಾನಗಿ ಪಡೆಯುವುದು ಅಗತ್ಯ

• ಉದಯವಾಹಿನಿ, ಬೆಂಗಳೂರು

ಭಾರತದ ಸ್ಟಾರ್ಟ್‌ಅಪ್ ರಾಜಧಾನಿ, ಐಟಿ ಹಬ್ ಸೇರಿದಂತೆ ಹೊಸ ಆವಿಷ್ಕಾರಗಳ ತವರೂರು ಎಂದು ಗುರುತಿಸಿಕೊಂಡಿರುವ ರಾಜ್ಯ ರಾಜಧಾನಿ ಬೆಂಗಳೂರಿಗೆ ನಿತ್ಯ ಸಾವಿರಾರು ಜನರು ಉದ್ಯೋಗ ಅರಸಿ ಬರುತ್ತಾರೆ. ಹೀಗೆ ಬರುವ ಬಹುತೇಕರಿಗೆ ಬೆಂಗಳೂರಿನಲ್ಲಿ ಸ್ವಂತದ್ದೊಂದು ಉದ್ಯಮ, ವ್ಯಾಪಾರ ಆರಂಭಿಸಬೇಕು ಎಂಬ ಕನಸು ಇದ್ದೇ ಇರುತ್ತದೆ. ಆದರೆ ಬಹುತೇಕರಿಗೆ ಈ ಕನಸನ್ನು ನನಸಾಗಿಸಲು ಸಾಧ್ಯವಾಗುವುದಿಲ್ಲ. ಕೆಲವರಷ್ಟೇ ಅಂದುಕೊಂಡದ್ದನ್ನು ಸಾಧಿಸುತ್ತಾರೆ. ಬೆಂಗಳೂರು ಮಾತ್ರವಲ್ಲ, ಯಾವುದೇ ಊರಿನಲ್ಲೂ ವ್ಯಾಪಾರ ಅಥವಾ ಉದ್ಯಮ ಆರಂಭಿಸಲು ಪರವಾನಗಿ ಅಗತ್ಯ.

ಇನ್ನು ಬೆಂಗಳೂರಿನಂತಹ ಮಹಾನಗರದಲ್ಲಿ ವ್ಯಾಪಾರ ವಹಿವಾಟು ಆರಂಭಿಸಲು ಅಗತ್ಯ ದಾಖಲೆಗಳೊಂದಿಗೆ ಬೆಂಗಳೂರು ಮಹಾನಗರ ಪಾಲಿಕೆಯಿಂದ ಪರವಾನಗಿ ಪಡೆದುಕೊಳ್ಳಬೇಕು. ಬಿಬಿಎಂಪಿ ಅನುಮೋದನೆ ನೀಡಿದರಷ್ಟೇ ಕನಸು ನನಸಾಗಿಸಲು ಸಾಧ್ಯ. ಬಂಡವಾಳ ಸಾಕು, ಪರವಾನಗಿ ಯಾಕೆ ಬೇಕು? ಎಂದು ವ್ಯಾಪಾರ ಆರಂಭಿಸುವ ಹೊತ್ತಿನಲ್ಲಿ ಪ್ರತಿಯೊಬ್ಬ ಉದ್ಯಮಿ ಅಥವಾ ವ್ಯಾಪಾರಿಯೂ ಒಂದು ಕ್ಷಣ ಯೋಚಿಸಿಯೇ ಯೋಚಿಸುತ್ತಾನೆ. ಪರವಾನಗಿ ಎಂಬುದು ಕೇವಲ ಕಾಗದದ ದಾಖಲೆಯಲ್ಲ. ಅದು ನಿಮ್ಮ ವ್ಯಾಪಾರಕ್ಕೆ ಕಾನೂನಾತ್ಮಕ ಮಾನ್ಯತೆ, ಸುರಕ್ಷತೆ, ಮತ್ತು ಭದ್ರತೆ ಒದಗಿಸುತ್ತದೆ. ಸರ್ಕಾರದ ನೀತಿ ನಿಯಮಗಳನ್ನು ಗಾಳಿಗೆ ತೂರಿ ವ್ಯಾಪಾರ ನಡೆಸುವುದು ಅಪರಾಧ. ಪ್ರತಿಯೊಂದು ವ್ಯಾಪಾರ ವಹಿವಾಟು ಕಾನೂನು ಬದ್ಧವಾಗಿರಬೇಕು. ಹೀಗಿರುವಾಗ ಪರವಾನಗಿ ವಹಿವಾಟನ್ನು ಸರಕಾರದ ದಾಖಲೆಗಳಲ್ಲಿ ದಾಖಲು ಮಾಡುತ್ತದೆ. ಇದರಿಂದ ದಂಡ ಪಾವತಿಸುವುದು ಹಾಗೂ ವ್ಯಾಪಾರವನ್ನು ಅರ್ಧಕ್ಕೆ ಸ್ಥಗಿತಗೊಳಿಸಬೇಕಾಗ ಸಂದರ್ಭ ಒದಗಿ ಬರುವುದು ತಪ್ಪುತ್ತದೆ. ಜತೆಗೆ ಗ್ರಾಹಕರ ನಂಬಿಕೆ ಗಳಿಸಿ, ವ್ಯಾಪಾರ ಬೆಳವಣಿಗೆಗೆ ಸಹಾಯ ಮಾಡುತ್ತದೆ.

● ಇದು ಜಾತಿಗಣತಿಯಲ್ಲ , ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ
● ಯಾರಿಗೂ ಅನ್ಯಾಯವಾಗಲು ಬಿಡಲ್ಲ ● ಜಾತಿಗಣತಿ ಸುನಾಮಿಯಲ್ಲಿ ಸಿದ್ದರಾಮಯ್ಯ ಕೊಚ್ಚಿ ಹೋಗ್ತಾರೆ ● ಕುಮಾರಸ್ವಾಮಿ ಆಕ್ರೋಶ






# ಜಾತಿಗಣತಿ ಜ್ವಾಲಾಗ್ನಿ

**ಸಭೆಯಲ್ಲಿ ಯಾರೆಲ್ಲಾ ಭಾಗಿ ಯಾರು ಗೈರು**

ರಾಮಲಿಂಗಾರೆಡ್ಡಿ, ಕೃಷ್ಣ ಬೈರೇಗೌಡ, ಚಲುವರಾಯಸ್ವಾಮಿ, ಡಾ.ಎಂ.ಸಿ.ಸುಧಾಕರ್, ಕೆ.ಗೋವಿಂದರಾಜ್, ಟಿ.ಬಿ.ಜಯಚಂದ್ರ, ಶರತ್ ಬಚ್ಚೇಗೌಡ, ಪ್ರಿಯಾಕೃಷ್ಣ, ಕೆ.ಎಂ. ಶಿವಲಿಂಗೇಗೌಡ, ಡಾ. ರಂಗನಾಥ್, ಸಿ.ಪಿ.ಯೋಗೇಶ್ವರ್, ಕದಲೂರು ಉದಯ್, ಎಚ್.ಸಿ.ಬಾಲಕೃಷ್ಣ, ಮೇಲ್ಮನೆ ಸದಸ್ಯರಾದ ಎಸ್.ರವಿ, ಪುಟ್ಟಣ್ಣ, ಮಂಜುನಾಥ್ ಭಂಡಾರಿ, ಮಾಜಿ ಸಂಸದರಾದ ಡಿ.ಕೆ ಸುರೇಶ್, ಪ್ರೊ.ರಾಜೀವ್‌ಗೌಡ, ಮಾಜಿ ಸಚಿವರು, ಮಾಜಿ ಶಾಸಕರೂ ಸಭೆಯಲ್ಲಿದ್ದರು. ಸಚಿವ ಕೆ. ವೆಂಕಟೇಶ್, ಶಾಸಕರಾದ ಎಂ. ಕೃಷ್ಣಪ್ಪ, ಸುಬ್ಬಾರೆಡ್ಡಿ, ರಮೇಶ್ ಬಂಡಿಸಿದ್ದೇಗೌಡ, ಮಂಥರ್‌ಗೌಡ ಮತ್ತು ಟಿ.ಡಿ.ರಾಜೇಗೌಡ ಅವರು ಸಭೆಗೆ ಗೈರಾದರು.

**ಜಯಪ್ರಕಾಶ್ ಹೆಗ್ಡೆ ಹಾಜರ್**

ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷ ಕೆ.ಜಯಪ್ರಕಾಶ್ ಹೆಗ್ಡೆ ಅವರೂ ಡಿಸಿಎಂ ನಿವಾಸಕ್ಕೆ ಆಗಮಿಸಿ ಕುತೂಹಲ ಮೂಡಿಸಿದರು. ಹೆಗ್ಡೆ ಅವರು ಡಿಸಿಎಂ ಮತ್ತು ಸಮುದಾಯದ ಸಚಿವರು ಮತ್ತು ಶಾಸಕರ ಸಭೆಯಲ್ಲೂ ಭಾಗಿಯಾದರು. ಈಗಾಗಲೇ ಒಕ್ಕಲಿಗರು, ಲಿಂಗಾಯತರು ಜಾತಿ ಗಣತಿಯನ್ನು ಪ್ರಬಲವಾಗಿ ವಿರೋಧಿಸುತ್ತಿವೆ. ಆ ಹಿನ್ನೆಲೆಯಲ್ಲಿ ಜಾತಿ ಗಣತಿ ನಡೆಸಿದ ಆಯೋಗದ ಅಧ್ಯಕ್ಷರನ್ನೇ (ಈಗ ಮಾಜಿ) ಸಭೆಗೆ ಆಹ್ವಾನಿಸಲಾಗಿತ್ತು.

**ಜಾತಿಗಣತಿ ಕಾಂಗ್ರೆಸ್ ಗುರಾಣಿ ಮಾಡಿಕೊಂಡಿದೆ**


ಜಾತಿಗಣತಿ ಸುನಾಮಿಯಲ್ಲಿ ಸಿದ್ದರಾಮಯ್ಯ ಕೊಚ್ಚಿ ಹೋಗ್ತಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮತ್ತೆ ಕಿಡಿಕಾರಿದ್ದಾರೆ. ಸಿಎಂ ಸಿದ್ದರಾಮಯ್ಯ ವಿರುದ್ಧ ಆಕ್ರೋಶ ಹೊರ ಹಾಕಿರುವ ಕುಮಾರಸ್ವಾಮಿ ಮಾಜಿ ಸಿಎಂ ವೀರೇಂದ್ರ ಪಾಟೀಲ್ ಅವರ ಇತಿಹಾಸ ನೆನಪು ಮಾಡಿಕೊಂಡು ಎಕ್ಸ್‌ನಲ್ಲಿ ಪೋಸ್ಟ್ ಪ್ರಕಟಿಸಿ ಸಿಟ್ಟು ಹೊರಹಾಕಿದ್ದಾರೆ. ಎಲ್ಲಾ ರಾಜ್ಯಗಳಲ್ಲಿ ಚುನಾವಣೆ ಗೆಲ್ಲಲು ಕಾಂಗ್ರೆಸ್ ಜಾತಿಗಣತಿಯನ್ನೇ ಗುರಾಣಿ ಮಾಡಿಕೊಂಡಿದೆ. ಕುಲ, ಕುಲ, ಕುಲವೆಂದು ಹೊಡೆದಾಡದಿರಿ. ನಿಮ್ಮ ಕುಲದ ನೆಲೆಯನೇನಾದರೂ ಬಲ್ಲಿರಾ ಬಲ್ಲಿರಾ.. ಹೀಗೆಂದರೇನು ಸನ್ಮಾನ್ಯ ಮುಖ್ಯಮಂತ್ರಿಗಳೇ. ಕನಕದಾಸರ ಆಶಯ ಅರ್ಥಪೂರ್ಣ ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಜಾತಿಗಣತಿಯನ್ನ ನಾವು ಒಪ್ಪೋದಿಲ್ಲ**



ಜಾತಿಗಣತಿಯನ್ನ ನಾವು ಒಪ್ಪೋದಿಲ್ಲ, ಪ್ರಬಲವಾಗಿ ವಿರೋಧ ಮಾಡುತ್ತೇವೆ ಎಂದು ಶೋಭಾ ಕರಂದ್ಲಾಜೆ ಕಿಡಿ ಕಾರಿದರು. ಜಾತಿ ಜನಗಣತಿ ನಮ್ಮೆಲ್ಲರನ್ನು ಒಡೆದು ಆಳುವ ನೀತಿ. ಜಾತಿ ಜಾತಿಗಳ ಮಧ್ಯೆ ವಿಷ ಬೀಜ ಬಿತ್ತುವಂತಹ ಷಡ್ಯಂತ್ರವನ್ನು ಸಿದ್ದರಾಮಯ್ಯ ಮಾಡಿದ್ದಾರೆ. ಜಾತಿ ಜನಗಣತಿ ಮಾಡೋಕೆ ರಾಜ್ಯ ಸರ್ಕಾರಕ್ಕೆ ಅಧಿಕಾರನೇ ಇಲ್ಲ. ಅದನ್ನು ಕೇಂದ್ರ ಸರ್ಕಾರ ಮಾಡಬೇಕು. ಇದರ ಹೊರತಾಗಿಯೂ ಜಾತಿ ಸಮೀಕ್ಷೆ ಮಾಡಿ ಕೆಲ ಜಾತಿಗಳನ್ನು ಕಡಿಮೆ ತೋರಿಸಿದ್ದಾರೆ ಎಂದು ಆಕ್ರೋಶ ಹೊರಹಾಕಿದರು. ಲಿಂಗಾಯತರು, ಒಕ್ಕಲಿಗರು ಸೇರಿ ಬೇರೆಬೇರೆ ಜಾತಿಯವರು ವಿರೋಧ ಮಾಡುತ್ತಿದ್ದಾರೆ. ನಾವು ಅತ್ಯಂತ ಉಗ್ರವಾಗಿ ಹೋರಾಟ ಮಾಡಲು ತೀರ್ಮಾನ ಮಾಡಿದ್ದೇವೆ. ಸಿದ್ದರಾಮಯ್ಯ ಅವರು ತಕ್ಷಣವೇ ಈ ಜಾತಿ ವರದಿಯನ್ನು ಬರ್ಕಾಸ್ತ್ ಮಾಡಬೇಕು ಎಂದು ಆಗ್ರಹಿಸಿದರು

**ಎಸ್‌ಟಿ ಎಸ್ ಅಚ್ಚರಿಯ ಹಾಜರಿ**



ಯಶವಂತಪುರ ಕ್ಷೇತ್ರದ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ಅವರು ಡಿಸಿಎಂ ಅವರನ್ನು ಭೇಟಿ ಮಾಡಿ ಬೇಗ ಅಲ್ಲಿಂದ ತೆರಳಿದ್ದು ಗಮನ ಸೆಳೆಯಿತು. ಜಾತಿ ಗಣತಿ ವರದಿಯಲ್ಲಿ ಏನಾದರೂ ತಪ್ಪಾಗಿದ್ದರೆ ಸರಿಪಡಿಸಲು ಅವಕಾಶವಿರುತ್ತದೆ. ಕ್ಯಾಬಿನೆಟ್ ಚರ್ಚೆ ಬಳಿಕ ವಿಧಾನಮಂಡಲದಲ್ಲೂ ಮಂಡಿಸಿದಾಗ ಸಾರ್ವಜನಿಕ ದಾಖಲೆ ಆಗಲಿದೆ'' ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

## ಜಟಾಪಟಿ

• ಉದಯವಾಹಿನಿ, ಬೆಂಗಳೂರು

ಜಾತಿ ಜೇನುಗೂಡಿಗೆ ಕೈ ಹಾಕಿರುವ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಈಗ ಜಾತಿ ಗಣತಿ ವರದಿ ಬಿಸಿತುಪ್ಪವಾಗಿ ಪರಿಣಮಿಸಿದೆ. ಸರ್ಕಾರಕ್ಕೆ ಸಲ್ಲಿಸಿರುವ ವರದಿ ಬಹಿರಂಗವಾಗುತ್ತಿದ್ದಂತೆ ಎಲ್ಲೆಲ್ಲೂ ಕೋಲಾಹಲ ಎದ್ದಿದೆ. ಪ್ರಭಾವಿ ಸಮುದಾಯಗಳ ವಿರೋಧಕ್ಕೆ ಈಗ ಸಿಎಂ ಸಿದ್ದರಾಮಯ್ಯ ಗುರಿಯಾಗಿದ್ದಾರೆ. ಅದರಲ್ಲೂ ರಾಜ್ಯದ ಪ್ರಬಲ ಒಕ್ಕಲಿಗ ಸಮುದಾಯ ಸರ್ಕಾರದ ವಿರುದ್ಧ ಸಿಡಿದೆದ್ದಿದೆ. ಒಕ್ಕಲಿಗರು ಜಾತಿ ಗಣತಿ ವಿರುದ್ಧ ದಂಗೆ ಏಳುವ ಸೂಚನೆ ಕೊಟ್ಟಿದ್ದಾರೆ. ಇವತ್ತು ಸಭೆ ಸೇರಿದ ಒಕ್ಕಲಿಗ ಸಂಘದ ಪದಾಧಿಕಾರಿಗಳು, ಕರ್ನಾಟಕ ಬಂದ್ ರೀತಿಯ ಹೋರಾಟ ನಡೆಸುತ್ತೇವೆ ಎಂದು ಎಚ್ಚರಿಕೆ ಕೊಟ್ಟಿದ್ದಾರೆ. ಜಾತಿ ಗಣತಿ ವರದಿ ಜಾರಿಯಾದರೆ ಸರ್ಕಾರವೇ ಪತನವಾಗಲಿದೆ. ಹೊಸದಾಗಿ ಸರ್ವೆ ಮಾಡದಿದ್ದರೆ, ನಾವೇ 100 ಕೋಟಿ ರೂ. ಖರ್ಚು ಮಾಡಿ ಜನಗಣತಿ ಮಾಡುತ್ತೇವೆ ಎಂದು ಸವಾಲು ಎಸೆದಿದ್ದಾರೆ. ಅಷ್ಟೇ ಅಲ್ಲದೇ ಶೀಘ್ರವೇ ನಿರ್ಮಲಾನಂದ ಸ್ವಾಮೀಜಿ, ನಂಜಾವಧೂತ ಶ್ರೀಗಳ ಜೊತೆ ಚರ್ಚಿಸಿ ಮುಂದಿನ ಹೋರಾಟ ನಡೆಸಲು ತೀರ್ಮಾನಿಸಿದ್ದಾರೆ. ಜಾತಿಗಣತಿಯನ್ನು ವಿರೋಧಿಸಿರೋ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಇದೇನೂ ಜಾತಿಗಣತಿಯೋ, ದ್ವೇಷಗಣತಿಯೋ.. ದರ ಏರಿಕೆ, ಭ್ರಷ್ಟಾಚಾರ ಮುಜುಗರದಿಂದ ಮುಖ ಮುಚ್ಚಿಕೊಳ್ಳೋಕೆ ರೂಪಿಸಿದ ಸಂಚಿದು ಅಂತ ಕಿಡಿಕಾರಿದ್ದಾರೆ.

**ಸಿಡಿದೆದ್ದ ಶ್ರೀಗಳು:** ಸಾಕಷ್ಟು ಚರ್ಚೆಗೆ ಕಾರಣವಾಗಿರುವ ಜಾತಿ ಜನಗಣತಿ ವಿಚಾರ ಇದೀಗ ಕುತೂಹಲದ ಘಟ್ಟಕ್ಕೆ ತಲುಪಿದೆ. ಸಾಮಾಜಿ ಶೈಕ್ಷಣಿಕ ಸಮೀಕ್ಷೆಯ ಕುರಿತಾಗಿ ಬಹಿರಂಗಗೊಳ್ಳುತ್ತಿರುವ ಅಂಕಿ- ಸಂಖ್ಯೆಗಳು ಪ್ರಭಾವಿ ಸಮುದಾಯಗಳ ವಿರೋಧಕ್ಕೆ ಕಾರಣವಾಗುತ್ತಿದೆ. ಒಂದು ಕಡೆ ಒಕ್ಕಲಿಗ ಸಮುದಾಯ ಸಿಡಿದೆದ್ದು ನಿಂತರೆ ಮತ್ತೊಂದೆಡೆ ಲಿಂಗಾಯತ ಸಮುದಾಯದವರು ನಾಳೆಯ ಸಂಪುಟ ಸಭೆಯ ನಿರ್ಧಾರದ ಮೇಲೆ ತಮ್ಮ ಮುಂದಿನ ನಡೆ ಏನು ಅನ್ನೋದನ್ನು ತೀರ್ಮಾನ ತೆಗೆದುಕೊಳ್ಳಲಿದ್ದಾರೆ. ಈ ಬಗ್ಗೆ ಗದಗದ ತೋಂಟದಾರ್ಯ ಮಠದ ಡಾ.ಸಿದ್ದರಾಮ ಶ್ರೀಗಳು ಮಾತನಾಡಿದ್ದು, ಈ ಜಾತಿಗಣತಿ ವರದಿಯು ದೋಷಪೂರಿತವಾಗಿದೆ. ವರದಿಯಲ್ಲಿ ಲಿಂಗಾಯತರಿಗೆ ಅನ್ಯಾಯವಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಸರ್ಕಾರ ಇನ್ನೊಮ್ಮೆ ಸಮೀಕ್ಷೆ ನಡೆಸಿ ಮತ್ತೊಮ್ಮೆ ಜಾತಿ ಗಣತಿ ವರದಿ ಸಿದ್ಧ ಪಡಿಸಬೇಕು. ಈಗಾಗಲೇ ಕರ್ನಾಟಕ ಸರ್ಕಾರವು ಇತ್ತೀಚೆಗೆ ಜಾತಿಗಣತಿ ವರದಿಯನ್ನು ಸ್ವೀಕರಿಸಿದೆ. ಸಚಿವ ಸಂಪುಟದ ಸಭೆಯಲ್ಲಿ ಜಾತಿ ಗಣತಿ ಬಗ್ಗೆ ಚರ್ಚೆ ನಡೆಸಿದ್ದಾರೆ. 17 ನೇ ತಾರೀಖಿನಂದು ಜಾತಿ ಗಣತಿ ವಿಚಾರವಾಗಿ ವಿಶೇಷ ಸಭೆಯನ್ನ ಕರೆದಿದ್ದಾರೆ. ಈ ವರದಿ ಬಗ್ಗೆ ಸಾರ್ವಜನಿಕರಲ್ಲಿ ಸಂದೇಹ ಹುಟ್ಟುಹಾಕಿದೆ. ಇದು ಸುಮಾರು ಏಳೆಂಟು ವರ್ಷಗಳ ಹಿಂದೆ ಸಿದ್ಧ ಪಡಿಸಿದ ವರದಿಯಾಗಿದೆ. ಹಾಗಾಗಿ ಆ ಜಾತಿ ಗಣತಿ ವರದಿ ಸಮರ್ಪಕವಾಗಿ ಇಲ್ಲ. ಆ ವರದಿಯನ್ನ ಸಿದ್ಧಪಡಿಸಿದ ವ್ಯಕ್ತಿಗಳು ಕರ್ನಾಟಕ ಪ್ರತಿಯೊಬ್ಬ ವ್ಯಕ್ತಿಯನ್ನ ಸಂಪರ್ಕಿಸಿಲ್ಲವೆಂಬ ಆರೋಪವಿದೆ ಎಂದು ಶ್ರೀಗಳು ಹೇಳಿದ್ದಾರೆ.

1. ಸಭೆಯ ನಿರ್ಣಯವನ್ನು ಸಿಎಂಗೆ ಮನವರಿಕೆ ಮಾಡಿಕೊಡಲು ನಿರ್ಧಾರ
2. ಕೃಷ್ಣ ಬೈರೇಗೌಡ, ಚಲುವರಾಯಸ್ವಾಮಿ, ರಾಮಲಿಂಗಾರೆಡ್ಡಿಗೆ ಹೊಣೆ
3. ಸರಕಾರ ಮತ್ತು ಸಮುದಾಯ ಎರಡಕ್ಕೂ ಬದ್ಧತೆ ಸಂದೇಶ
4. ಸಭೆಯಲ್ಲಿ ಪಾಲ್ಗೊಂಡು ಕುತೂಹಲ ಮೂಡಿಸಿದ ಜಯಪ್ರಕಾಶ್ ಹೆಗ್ಡೆ

# ಸಿಎಂ ತವರಲ್ಲಿ ಕೈಗಾರಿಕಾಭಿವೃದ್ಧಿ: ಉದ್ಯೋಗಸ್ಥರ ಸಂಖ್ಯೆ ದುಪ್ಪಟ್ಟು

• ಉದಯವಾಹಿನಿ, ಮೈಸೂರು

**ಮೈಸೂರಿನ ಜನರಲ್ಲಿ ಸಂತಸ**



**38 ಸಾವಿರಕ್ಕೂ ಹೆಚ್ಚು ಕೈಗಾರಿಕೆಗಳು ಸ್ಥಾಪನೆ**

ಇದುವರೆಗೂ ಸಿಎಂ ತವರು ಕ್ಷೇತ್ರದಲ್ಲಿ 17 ಸಾವಿರ ಕೋಟಿ ರೂ. ಬಂಡವಾಳ ಹೂಡಿಕೆಯಾಗಿದ್ದ, 3 ಲಕ್ಷಕ್ಕೂ ಅಧಿಕ ಮಂದಿ ನೇರವಾಗಿ ಉದ್ಯೋಗ ಪಡೆದಿದ್ದಾರೆ. ಸಣ್ಣ, ಮಧ್ಯಮ ಮತ್ತು ಬೃಹತ್ ಸೇರಿ 38 ಸಾವಿರಕ್ಕೂ ಹೆಚ್ಚು ಕೈಗಾರಿಕೆಗಳು ಸ್ಥಾಪನೆಯಾಗಿವೆ. ಜಿಲ್ಲೆಯ ಹೆಬ್ಬಾಳು, ಹೂಟಗಳ್ಳಿ, ಬೆಳಗೊಳ, ಬೆಳವಾಡಿ, ನಂಜನಗೂಡು, ತಾಂಡವಪುರ, ಕೂರ್ಗಳ್ಳಿ, ಕಡಕೊಳ, ಯಾದವಗಿರಿ, ಮೇಟಗಳ್ಳಿ, ನಂಜನಗೂಡು, ಹುಣಸೂರು, ಹಿನಕಲ್ ಪ್ರದೇಶಗಳಲ್ಲಿ ಕೈಗಾರಿಕೆಗಳು ಇದ್ದರೆ, ಆರು ಕಡೆಗಳಲ್ಲಿ ಕೈಗಾರಿಕಾ ಎಸ್ಟೇಟ್‌ಗಳು ಕೂಡ ಇವೆ. ಆಟೋಮೊಬೈಲ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್, ಕೆಮಿಕಲ್ಸ್, ಆಹಾರ ವಸ್ತುಗಳು, ಚರ್ಮ, ಕಾಗದ ಮತ್ತು ಮುದ್ರಣ, ರಬ್ಬರ್ ಮತ್ತು ಪ್ಲಾಸ್ಟಿಕ್, ಟೆಕ್ಸ್‌ಟೈಲ್ಸ್, ಮರ ಸೇರಿದಂತೆ ಇತರೇ ವಲಯಗಳಲ್ಲಿನ ಉದ್ದಿಮೆಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದೆ.

ರಾಜ್ಯ ರಾಜಧಾನಿಯಿಂದ ಮುಖ್ಯಮಂತ್ರಿ ತವರು ಜಿಲ್ಲೆಯತ್ತ ಕೈಗಾರಿಕೋದ್ಯಮಿಗಳು ಮುಖ ಮಾಡಿದ್ದಾರೆ. ಕೈಗಾರಿಕಾಭಿವೃದ್ಧಿಗೆ ಮೈಸೂರಿನಲ್ಲಿನ ಪೂರಕ ವಾತಾವರಣ ಉದ್ದಿಮೆದಾರರನ್ನು ಸೆಳೆಯುವಲ್ಲಿ ಯಶಸ್ವಿಯಾಗಿದೆ.

ಪ್ರತಿ ವರ್ಷ ಮೈಸೂರಿನಲ್ಲಿ ಹೂಡಿಕೆಯಾಗುತ್ತಿರುವ ಬಂಡವಾಳದೊಂದಿಗೆ ಸ್ಥಾಪನೆಯಾಗುತ್ತಿರುವ ಕೈಗಾರಿಕೆಗಳ ಸಂಖ್ಯೆಯಲ್ಲಿ ಗಣನೀಯ ಹೆಚ್ಚಳವಾಗುತ್ತಿದೆ. ಪರಿಣಾಮ ಉದ್ಯೋಗ ಸೃಷ್ಟಿ ಹೆಚ್ಚಾಗುತ್ತಿರುವುದು ಮೈಸೂರಿನ ಜನರಲ್ಲಿ ಸಂತಸ ತಂದಿದ್ದು, ಉದ್ಯೋಗಕ್ಕೆ ಬೇರೆ ರಾಜಧಾನಿ ಸೇರಿದಂತೆ ಬೇರೆ ರಾಜ್ಯಗಳತ್ತ ಮುಖ ಮಾಡುವುದು ತಪ್ಪಿದೆ.

ಕಳೆದ ಮೂರು ವರ್ಷಗಳಲ್ಲಿ ಸಿಎಂ ತವರು ಜಿಲ್ಲೆಯಲ್ಲಿ 1800 ಕೋಟಿ ರೂ. ಬಂಡವಾಳ ಹೂಡಿಕೆಯಾಗಿದ್ದು, 11,471 ಕೈಗಾರಿಕೆಗಳು ಸ್ಥಾಪನೆಯಾಗಿದೆ. ಪರಿಣಾಮ 27 ಸಾವಿರ ಮಂದಿ ನೇರವಾಗಿ ಉದ್ಯೋಗ ಸಿಕ್ಕಿದ್ದು, ಲಕ್ಷಕ್ಕೂ ಅದಿಕ ಮಂದಿಗೆ ಪರೋಕ್ಷವಾಗಿ ನಾನಾ ರೂಪದಲ್ಲಿ ಉದ್ಯೋಗ ಲಭಿಸಿದ್ದು, ಮೈಸೂರು ಪ್ರವಾಸೋದ್ಯಮ ಕ್ಷೇತ್ರವಾಗಿರುವ ಜತೆಗೆ ಕೈಗಾರಿಕಾ ಕ್ಷೇತ್ರ ವಾಗಿಯೂ ಬೆಳವಣಿಗೆಯಾಗುತ್ತಿದೆ ಎನ್ನುತ್ತಾರೆ ಮೈಸೂರು ಜಿಲ್ಲಾ ಕೈಗಾರಿಕಾ ಸಂಘದ ಜಂಟಿ ನಿರ್ದೇಶಕ ಶಿವಲಿಂಗಯ್ಯ. ಕೇಂದ್ರ ಸರಕಾರ ಜಾರಿಗೆ ತಂದಿರುವ ಪಿಎಂ ವಿಶ್ವಕರ್ಮ, ಪಿಎಂಇಜಿಪಿ ಯೋಜನೆಯು ಸಣ್ಣ ಸಣ್ಣ ಕೈಗಾರಿಕೆಗಳ ಆರಂಭಕ್ಕೆ ಬೆನ್ನುಲುಬಾಗಿ ನಿಂತಿದೆ.

ಮೈಸೂರು ಜಿಲ್ಲೆಯಲ್ಲಿ ಪಿಎಂ ವಿಶ್ವಕರ್ಮ ಯೋಜನೆಯಡಿ 1.80 ಲಕ್ಷ ಜನರು ನೋಂದಣಿ ಮಾಡಿಸಿಕೊಂಡಿದ್ದರೆ, ಪ್ರಧಾನಮಂತ್ರಿ ಉದ್ಯೋಗ ಸೃಜನ ಯೋಜನೆಯಡಿ 20ಸಾವಿರ ಮಂದಿ ನೋಂದಣಿ ಮಾಡಿಸಿಕೊಂಡಿದ್ದಾರೆ. ಪಿಎಂ ವಿಶ್ವಕರ್ಮ ಯೋಜನೆಯಡಿ ಗ್ರಾಮೀಣ ಪ್ರದೇಶದಲ್ಲಿ 18 ಕರಕುಶಲತೆಗಳನ್ನು ಗುರುತಿಸಿದ್ದು, ಟೈಲರಿಂಗ್, ಮರದ ಕೆತ್ತನೆ ಕೆಲಸ, ಲ್ಯಾಂಡ್ರಿ ಅಂಡ್ ವಾಷಿಂಗ್, ಗಾರೆ ಕೆಲಸ ಮೊದಲಾದ ಕೆಲಸಗಳಲ್ಲಿ ಅನುಭವ ಹೊಂದಿರುವವರು ನೋಂದಣಿ ಮಾಡಿಸಿಕೊಳ್ಳುತ್ತಿದ್ದಾರೆ.

# ಹುಷಾರು: ತವರೂರಿಗೆ ಕರೆದು ಸಿದ್ದರಾಮಯ್ಯ ಡಿಕೆಶಿಗೆ ಎಚ್ಚರಿಕೆ ಕೊಟ್ಟ ಖರ್ಗೆ

■ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಬೀಳಿಸಲು ಪ್ರಧಾನಿ ಮೋದಿ – ಅಮಿತ್ ಶಾ ಪ್ಲಾನ್ ■ ಹುಷಾರಾಗಿ, ಒಗ್ಗಟ್ಟಾಗಿರಿ ಎಂದು ಸೂಚನೆ

• ಉದಯವಾಹಿನಿ, ಕಲಬುರಗಿ

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಬೀಳಿಸಲು ಪ್ರಧಾನಿ ಮೋದಿ – ಅಮಿತ್ ಶಾ ಪ್ಲಾನ್ ಮಾಡ್ತಿದ್ದಾರೆ. ಹುಷಾರಾಗಿ, ಒಗ್ಗಟ್ಟಾಗಿರಿ ಎಂದು ಸಿದ್ದರಾಮಯ್ಯ, ಡಿಕೆ ಶಿವಕುಮಾರ್‌ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಹತ್ವದ ಎಚ್ಚರಿಕೆ ಕೊಟ್ಟು ಕಳಿಸಿದ್ದಾರೆ.

**ಕಾಂಗ್ರೆಸ್ ನಾಯಕರನ್ನು ಹೆದರಿಸುವ ಕೆಲಸ**

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ತವರು ಜಿಲ್ಲೆ ಕಲಬುರಗಿಯಲ್ಲಿ ಗುಲ್ಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ 216.53 ಕೋಟಿ ವೆಚ್ಚದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ 6.20 ಕೋಟಿ ವೆಚ್ಚದ ವಿಕಿರಣ ಚಿಕಿತ್ಸೆ ಘಟಕವನ್ನು ಉದ್ಘಾಟನೆ ಹಾಗೂ 12 ಬೃಹತ್ ಮೊತ್ತದ ವಿವಿಧ ಕಾಮಗಾರಿಗಳಿಗೆ ಅಡಿಗಲ್ಲು ಹಾಕುವ ಕಾರ್ಯಕ್ರಮವಿತ್ತು. ಈ ಕಾರ್ಯಕ್ರಮಕ್ಕೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ತೆರಳಿದ್ದರು. ಈ ವೇಳೆ ಮಲ್ಲಿಕಾರ್ಜುನ ಖರ್ಗೆ ಬಹಿರಂಗ ಎಚ್ಚರಿಕೆ ನೀಡಿದ್ದಾರೆ.



ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿಕೊಂಡು ಕರ್ನಾಕದಲ್ಲಿ ಕಾಂಗ್ರೆಸ್ ಸರ್ಕಾರ ಬೀಳಿಸುವ ಪ್ರಯತ್ನವನ್ನು ಮಾಡುತ್ತಿದ್ದಾರೆ. ನೀವು ಒಗ್ಗಟ್ಟಾಗಿರಬೇಕು. ನಿಮ್ಮನ್ನು ನಂಬಿ ಜನರು ನಿಮಗೆ ಅಧಿಕಾರ ನೀಡಿದ್ದಾರೆ. ಆ ನಂಬಿಕೆಯನ್ನು ಉಳಿಸಿಕೊಳ್ಳಿ ನಿಮ್ಮಲ್ಲಿ ಏನೇ ಮನಸ್ತಾಪ ಇದ್ದರೂ, ನೀವು ಒಂದಾಗಿರಬೇಕು, ನೀವು ಹುಷಾರಾಗಿರಬೇಕು ಎಂದು ಖರ್ಗೆ ಹೇಳಿದ್ದಾರೆ.

**ಬಿಜೆಪಿ ಕಣ್ಣಿಗೆ ಮಾತ್ರ ಕಾಣುತ್ತಿಲ್ಲ**

ಪ್ರಣಾಳಿಕೆಯಲ್ಲಿ, ಬಜೆಟ್‌ನಲ್ಲಿ ಘೋಷಿಸಿದ ಕಾರ್ಯಕ್ರಮಗಳೆಲ್ಲಾ ಜಾರಿ ಆಗುತ್ತಿರುವುದು ಜನರ ಕಣ್ಣಿಗೆ ಕಾಣುತ್ತಿದೆ, ಬಿಜೆಪಿ ಕಣ್ಣಿಗೆ ಮಾತ್ರ ಕಾಣುತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು. ಪ್ರತೀ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು, ಟ್ರಾಮಾ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ ಇರಲೇಬೇಕು ಎನ್ನುವುದು ನಮ್ಮ ಸರ್ಕಾರದ ಗುರಿ. ಬಡವರಿಗೂ ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ಸಿಗಬೇಕು ಎನ್ನುವ ಉದ್ದೇಶದಿಂದ ಈ ಘೋಷಣೆ ಮಾಡಿದ್ದು ಒಂದೊಂದೇ ಜಿಲ್ಲೆಯಲ್ಲಿ ಇವೆಲ್ಲವೂ ನೆರವೇರುತ್ತಿವೆ ಎಂದರು.

**ದೇಶದಾದ್ಯಂತ ಕಾಂಗ್ರೆಸ್ ಸರ್ಕಾರ ಬೀಳಿಸುವ ಪ್ಲಾನ್:** ಇಡಿ, ಸಿಬಿಐನಿಂದ ಕಾಂಗ್ರೆಸ್ ನಾಯಕರನ್ನು ಹೆದರಿಸುವ ಕೆಲಸವನ್ನು ಮಾಡುತ್ತಿದ್ದಾರೆ. ದೇಶದಲ್ಲಿರುವ ಎಲ್ಲಾ ಕಾಂಗ್ರೆಸ್ ಸರ್ಕಾರಗಳನ್ನು ಬೀಳಿಸಬೇಕು. ಅಧಿಕಾರ ಹಿಡಿಯಬೇಕು ಎಂದು ಪ್ಲಾನ್ ನಡೆಯುತ್ತಿದೆ. ಇದು ಕರ್ನಾಟಕದಲ್ಲಿಯೂ ನಡೆಯುತ್ತಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದರು. ಅಭಿವೃದ್ಧಿಗೆ ಸರ್ಕಾರದ ಬಳಿ ಹಣ ಇಲ್ಲ ಎನ್ನುವ ಬಿಜೆಪಿಯವರು ಕಲಬುರಗಿಗೆ ಬಂದು ಕಣ್ಣು ತೆರೆದು ನೋಡಿದರೆ ಅಭಿವೃದ್ಧಿಯ ಮಹಾಪೂರ ಕಾಣಿಸುತ್ತದೆ. ಮಲ್ಲಿಕಾರ್ಜುನ ಖರ್ಗೆ ಅವರು, ಪ್ರಿಯಾಂಕ್ ಖರ್ಗೆ ಅವರು ಮತ್ತು ಶರಣ ಪ್ರಕಾಶ್ ಪಾಟೀಲ್ ಅವರು ಯಾವ ಮಟ್ಟದ ಅಭಿವೃದ್ಧಿ ಮಾಡುತ್ತಿದ್ದಾರೆ ಎನ್ನುವುದನ್ನು ಗುಲ್ಬರ್ಗಕ್ಕೆ ಬಂದು ನೋಡಲಿ.

ಸರ್ಕಾರದ ಘೋಷಿಸಿದ್ದ, ಬಜೆಟ್ ನಲ್ಲಿ ತಿಳಿಸಿದ್ದ ಎಲ್ಲಾವೂ ಈ ಜಿಲ್ಲೆಯಲ್ಲಿ ಜಾರಿ ಆಗುತ್ತಿದೆ ಎಂದು ಒಂದೊಂದಾಗಿ ಎಲ್ಲಾ ಯೋಜನೆಗಳನ್ನೂ ಉಲ್ಲೇಖಿಸಿ ಮಾತನಾಡಿದರು.


ಅಭಿವೃದ್ಧಿಗೆ ನಮ್ಮ ಸರ್ಕಾರದಲ್ಲಿ ಹಣಕ್ಕೆ ಕೊರತೆ ಇಲ್ಲ. ಎಲ್ಲಾ ವರ್ಗದ ಜನರಿಗೆ, ಅವಕಾಶಗಳಿಂದ ವಂಚಿತರಾದ ಜನರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸಲು ನಮ್ಮ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ ಎಂದು ತಿಳಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.99 ₹/L ಬಂಗಾರ: ₹9,617/Gram24ct ₹8,815/Gram22ct ಬೆಳ್ಳಿ: ₹100.00/Gram

### ನಮ್ಮ ಮೆಟ್ರೋ ದುರಂತ: ಆಟೋ ಚಾಲಕನ ಸಾವಿಗೆ ಪರಿಹಾರ ಧನ ಬಿಡುಗಡೆ: ಅಪಘಾತಕ್ಕೆ ಕಾರಣ ತಿಳಿಸಿದ ಬಿಎಂಆರ್‌ಸಿಎಲ್

# ಮೆಟ್ರೋ ಸಂಸ್ಥೆಯ ಯಡವಟ್ಟಿಗೆ ಅಮಾಯಕ ಜೀವವೊಂದು ಬಲಿ

• ಉದಯವಾಹಿನಿ, ಬೆಂಗಳೂರು





ಉದಯವಾಹಿನಿ ಚಿತ್ರ

ಏರ್‌ಪೋರ್ಟ್ ಮಾರ್ಗದ ಮೆಟ್ರೋ ಕಾಮಗಾರಿಗೆ ಸಾಗುತ್ತಿದ್ದ ಸಿಮೆಂಟ್ ಗೋಡೆ ಗಿರ್ಡರ್ ಕುಸಿದು ಆಟೋ ಚಾಲಕ ಸಾವನ್ನಪ್ಪಿರುವ ಘಟನೆಗೆ ಬಿಎಂಆರ್‌ಸಿಎಲ್ ಸಂಸ್ಥೆ ವಿಷಾದ ವ್ಯಕ್ತಪಡಿಸಿದೆ.

**ಬಿಎಂಆರ್‌ಸಿಎಲ್ ಹೇಳಿದ್ದೇನು?:** ರಾತ್ರಿ 12:00 ಗಂಟೆ ಸುಮಾರಿಗೆ ನಡೆದ ದುರದೃಷ್ಟಕರ ಘಟನೆಯಲ್ಲಿ ಆಟೋ ಚಾಲಕನೊಬ್ಬ ಸಾವನ್ನಪ್ಪಿದ ವಿಷಯ ತಿಳಿಸಲು ಬಿಎಂಆರ್‌ಸಿಎಲ್ ವಿಷಾದಿಸುತ್ತಿದೆ. ಯಲಹಂಕ ಕೋಗಿಲು ಜಂಕ್ಷನ್‌ನಲ್ಲಿ ಈ ಅಪಘಾತ ಸಂಭವಿಸಿದೆ. ಒಡೆಯರ್‌ಪುರ ಕಾಸ್ಟಿಂಗ್ ಯಾರ್ಡ್‌ನಿಂದ ಕ್ಯಾರಿಯರ್ ಟ್ರಕ್ ಸಿಮೆಂಟ್ ಗೋಡೆಯನ್ನು ಸಾಗಿಸುತ್ತಿತ್ತು. ಟ್ರಕ್ ತಿರುವು ಪಡೆಯುವಾಗ, ಟ್ರೇಲರ್ ಮುಂದೆ ನುಗ್ಗಿದ ವಾಹನವನ್ನು ತಪ್ಪಿಸಲು ಹಠಾತ್ ಬ್ರೇಕ್ ಹಾಕಿದ್ದರಿಂದ ಗಿರ್ಡರ್ ಆಟೋರಿಕ್ಷಾದ ಮೇಲೆ ಬಿದ್ದು ಚಾಲಕನ ಸಾವಿಗೆ ಕಾರಣವಾಯಿತು. ಕ್ರೇನ್ ಮೂಲಕ ಸಿಮೆಂಟ್ ಗೋಡೆಯನ್ನು, ಚಾಲಕನಿಗೆ ವೈದ್ಯಕೀಯ ಚಿಕಿತ್ಸೆ ಕೊಡಿಸಿದರೂ ಆತನನ್ನು ಬದುಕಿಸಲು ಸಾಧ್ಯವಾಗಿಲ್ಲ. ಅವರ ಕುಟುಂಬಕ್ಕೆ ತೀವ್ರ ಸಂತಾಪವನ್ನು ವ್ಯಕ್ತಪಡಿಸುತ್ತೇವೆ. ಪೊಲೀಸರು, ಅಪಘಾತದ ಬಗ್ಗೆ ಹೆಚ್ಚಿನ ತನಿಖೆ ನಡೆಸುತ್ತಿದ್ದು, ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ. ಜೀವ ಹೋದ ಈ ಘಟನೆಗೆ ಬಿಎಂಆರ್‌ಸಿಎಲ್ ತೀವ್ರ ಬೇಸರ ವ್ಯಕ್ತಪಡಿಸುತ್ತದೆ. ಹಾಗೂ ಕುಟುಂಬಕ್ಕೆ ನಿಗದಿತ ಪರಹಾರ ಧನವನ್ನು ಕೊಡುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಇನ್ನು ಮುಂದೆ ಬಿಎಂಆರ್‌ಸಿಎಲ್ ಕಾರ್ಯಾಚರಣೆಯಲ್ಲಿ ರ‍್ಯಾಲಿ ಅಥವಾ ನಿರ್ಮಾಣದಲ್ಲಿರಲಿ, ಮತ್ತು ಭವಿಷ್ಯದಲ್ಲಿ ಅಂತಹ ಘಟನೆಗಳನ್ನು ತಪ್ಪಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ನಾವು ಖಚಿತಪಡಿಸಿಕೊಳ್ಳುತ್ತೇವೆ. ಎಂದು ಸಂಸ್ಥೆ ಸ್ಪಷ್ಟನೆ ನೀಡಿದೆ.

**ನಾಗವಾರದಲ್ಲಿಯೂ ನಡೆದಿತ್ತು ದುರ್ಘಟನೆ:** ಈ ಹಿಂದೆ 2023ರಲ್ಲಿ ನಾಗವಾರದ ಮುಖ್ಯರಸ್ತೆಯಲ್ಲಿ ಕಾಮಗಾರಿಯಲ್ಲಿದ್ದ ಮೆಟ್ರೋ ಪಿಲ್ಲರ್ ಏಕಾಏಕಿ ಮುರಿದು ಬೈಕ್ ಮೇಲೆ ಬಿದ್ದು, ಬೈಕ್‌ನಲ್ಲಿದ್ದ ತಾಯಿ ಮಗ ಸಾವನ್ನಪ್ಪಿದ ಘಟನೆ ನಡೆದಿತ್ತು. ಇದೇ ರೀತಿ ಮೆಟ್ರೋ ಕಾಮಗಾರಿ ವೇಳೆ ಪದೇ ಪದೇ ದುರ್ಘಟನೆಗಳು ಮರುಕಳಿಸುತ್ತಿದೆ. ಸಾರ್ವಜನಿಕರು ಮೆಟ್ರೋ ಕಾಮಗಾರಿ ಸ್ಥಳದಲ್ಲಿ ಭೀತಿಯಿಂದ ಓಡಾಡುವಂತಾಗಿದೆ.

**ಏರ್‌ಪೋರ್ಟ್ ರಸ್ತೆ ಕಾಮಗಾರಿಗೆ ಸಿಮೆಂಟ್ ವಾಲ್ ತೆಗೆದುಕೊಂಡು ಹೋಗುತ್ತಿದ್ದ ಟ್ರಕ್ ಸಡನ್ ಬ್ರೇಕ್ ಹಾಕಿದ ಪರಿಣಾಮ ಆಟೋ ಚಾಲಕ ಮೃತಪಟ್ಟ ಘಟನೆಗೆ ಬಿಎಂಆರ್‌ಸಿಎಲ್ ಸಂತಾಪ ಸೂಚಿಸಿದೆ. ಪರಿಹಾರ ನೀಡುವುದಾಗಿ ಘೋಷಿಸಿದೆ. ಅಲ್ಲದೆ ಮುಂದಿನ ಕಾರ್ಯಾಚರಣೆ ವೇಳೆ ಯಾವುದೇ ದುರ್ಘಟನೆ ನಡೆಯದಂತೆ ಎಚ್ಚರ ವಹಿಸುವುದಾಗಿ ತಿಳಿಸಿದೆ.**

**ಆಟೋ ಚಾಲಕ ಸ್ಥಳದಲ್ಲೇ ಸಾವು**

**ಖಾಸಿಂ ಸಾಬ್ ಹೆಗಡೆನಗರದ ನಿವಾಸಿಯಾಗಿದ್ದು, ಪ್ಯಾಸೆಂಜರ್ ಪಿಕ್ ಮಾಡಿಕೊಂಡು ನಾಗವಾರದ ಕಡೆ ಹೋಗುತ್ತಿದ್ದಾಗ ದುರ್ಘಟನೆ ಸಂಭವಿಸಿದೆ. ತಡರಾತ್ರಿ 12.05 ಗಂಟೆಗೆ ಈ ಘಟನೆಯಾಗಿದೆ. ಯಲಹಂಕ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಪ್ಯಾಸೆಂಜರ್ ತಕ್ಷಣವೇ ರಿಕ್ಷಾದಿಂದ ಇಳಿದು ಓಡಿಹೋಗಿ ಬಚಾವ್ ಆಗಿದ್ದಾನೆ. ಆದರೆ ಚಾಲಕ ತಪ್ಪಿಸಿಕೊಳ್ಳುವಷ್ಟರಲ್ಲಿ ಯಮನಂತೆ ಬಂದೆರಗಿದ ಮೆಟ್ರೋ ವಾಲ್ ಎಂಬ ಮೃತ್ಯುವಿನ ಬಾಯಿಗೆ ಸಿಲುಕಿದ್ದಾನೆ.**

## ಎರಡನೇ ದಿನಕ್ಕೆ ಕಾಲಿಟ್ಟ ಲಾರಿ ಮುಷ್ಕರ


• ಉದಯವಾಹಿನಿ, ಬೆಂಗಳೂರು

ಲಾರಿ ಚಾಲಕರ ಮುಷ್ಕರ ಎರಡನೇ ದಿನಕ್ಕೆ ಕಾಲಿಟ್ಟಿದೆ. ಸಾರಿಗೆ ಸಚಿವರು ಹಾಗೂ ಸಿಎಂ ಜೊತೆ ನಡೆದ ಸಭೆ ವಿಫಲವಾದ ಹಿನ್ನೆಲೆಯಲ್ಲಿ ಮುಷ್ಕರ ಮುಂದುವರೆಸಲು ಲಾರಿ ಮಾಲೀಕರು ತೀರ್ಮಾನಿಸಿದ್ದಾರೆ. ನಿನ್ನೆ ನಡೆದ ಸಭೆಯಲ್ಲಿ ಸಾರಿಗೆ ಸಚಿವರು ಆರ್‌ಟಿಒ ಚೆಕ್ ಪೋಸ್ಟ್ ಬಗ್ಗೆ ಮಹಾರಾಷ್ಟ್ರ ಸೇರಿದಂತೆ ಬೇರೆ ರಾಜ್ಯಗಳ ಬಗ್ಗೆ ಅಧ್ಯಯನ ಮಾಡ್ತವೆ ಅಂದಿದ್ದರು. ಸಿಎಂ ಜೊತೆ ಸಭೆಯಲ್ಲಿ ಡೀಸೆಲ್ ಹಾಗೂ ಟೋಲ್ ಬಗ್ಗೆ ಮನವಿ ಮಾಡಿದ್ದರೂ ಅವರು ಯಾವುದೇ ಭರವಸೆ ನೀಡದ ಹಿನ್ನೆಲೆಯಲ್ಲಿ ಮುಷ್ಕರ ಮುಂದುವರೆಸಲು ತೀರ್ಮಾನಿಸಿದ್ದೇವೆ ಎಂದು ಲಾರಿ ಅಸೋಸಿಯೇಷನ್ ಅಧ್ಯಕ್ಷ ಷಣ್ಮುಖಪ್ಪ ತಿಳಿಸಿದ್ದಾರೆ. ನಾವು ಹೋರಾಟದಿಂದ ಹಿಂದೆ ಹೋಗಲ್ಲ, ನಮ್ಮ ಹೋರಾಟ ಮುಂದುವರೆಯುತ್ತದೆ. ಆಯೋಜಿಸಲಾಗಿರುವ ಲಾರಿ ಮಾಲೀಕರಿಗೆ ಬಾಡಿಗೆ ದರ ಫಿಕ್ಸ್ ಮಾಡಿ. ಡೀಸೆಲ್ ದರ ಎಷ್ಟಾದ್ರೂ ಏರಿಸಿ ಎಂದು ಷಣ್ಮುಖಪ್ಪ ಸರ್ಕಾರಕ್ಕೆ ಬೇಡಿಕೆ ಇಟ್ಟಿದ್ದಾರೆ.

ಚಾಲಕರ ಈ ಪಟ್ಟಿನಿಂದ ಪೆಟ್ರೋಲ್, ಡೀಸೆಲ್ ಟ್ಯಾಂಕರ್‌ಗಳ ಸಂಚಾರ ಸ್ಥಗಿತವಾಗುವ ಸಾಧ್ಯತೆಗಳಿವೆ. ಹೊರ ರಾಜ್ಯಗಳಿಂದ ತರಕಾರಿ, ಸೊಪ್ಪು ಸೇರಿದಂತೆ ಅನೇಕ ದಿನನಿತ್ಯ ಬಳಕೆ ಪದಾರ್ಥಗಳು ಬರುವುದು ನಿಂತಿದೆ. ಇತ್ತ ಪೆಟ್ರೋಲ್ ಬಂಕ್‌ಗಳಲ್ಲಿ ಇಂದಿನಿಂದ ಪೆಟ್ರೋಲ್ ಸಿಗೋದು ಡೌಟಾಗಿದೆ. ಇನ್ನೂ ರೈತರು ಬೆಳೆದ ತರಕಾರಿಗಳು, ಹಣ್ಣು, ಹೂಗಳು ಸರಕು ಸಾಗಣೆ ವಾಹನ ಇಲ್ಲೆ ಹಳ್ಳಿಗಳಲ್ಲಿ ಕೊಳಿತ್ತಿದೆ. ಈಗಾಗಲೇ ಅಕಾಲಿಕ ಮಳೆ ಇದರಿಂದ ತರಕಾರಿ, ಹೂ, ಹಣ್ಣುಗಳ ಬೆಳೆ ನಾಶವಾಗುತ್ತಿದೆ. ಇತ್ತ ಬೆಳೆದ ಬೆಳೆ ಮಾರಾಟ ಮಾಡಲು ಟ್ರಾನ್ಸ್‌ಪೋರ್ಟ್ ಮುಷ್ಕರ ಮುಂದು ವರೆದಿರುವುದು ರೈತರನ್ನು ಕಂಗೆಡಿಸಿದೆ.

## ರಾಯರ ಮಠದಲ್ಲಿ ಶ್ರೀಶ್ರೀ ಸುಶಮೀಂದ್ರ ತೀರ್ಥರ ಆರಾಧನಾ ಮಹೋತ್ಸವ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಶೇಷಾದ್ರಿಪುರದ ಪ್ಲಾಟ್ ಫಾರ್ಮ್ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ ಶ್ರೀ 108 ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಏ.15ರಂದು ಶ್ರೀ ಸುಶಮೀಂದ್ರತೀರ್ಥ ಶ್ರೀಪಾದಂಗಳವರ ಆರಾಧನಾ ಮಹೋತ್ಸವದ ಪ್ರಯುಕ್ತ ಬೆಳಗ್ಗೆ ಶ್ರೀ ರಾಘವೇಂದ್ರ ಸ್ವಾಮಿಗಳ ಬೃಂದಾವನಕ್ಕೆ, ಶ್ರೀ ಸುಶಮೀಂದ್ರತೀರ್ಥ ಶ್ರೀಪಾದಂಗಳವರ ಬೃಂದಾವನಕ್ಕೆ ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ, ಶ್ರೀ ಸುಶೀಲೇಂದ್ರಾಚಾರ್ ಗೊಗ್ಗಿಯವರಿಂದ ಶ್ರೀ ಸುಶಮೀಂದ್ರತೀರ್ಥರ ಜೀವನ, ಸಾಧನೆ ವಿಷಯವಾಗಿ ಪ್ರವಚನ, ಶೇಷಾದ್ರಿಪುರದ ಶ್ರೀ ಸುಶಮೀಂದ್ರ ಭಜನಾ ಮಂಡಳಿಯ ಸದಸ್ಯರಿಂದ, ಸುಧೀಂದ್ರನಗರದ ಶ್ರೀ ವಿಜಯವಿಠ್ಠಲ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ರಥೋತ್ಸವ, ಮಹಾಮಂಗಳಾರತಿ, ಅಲಂಕಾರ ಪಂಕ್ತಿ ಸೇವಾ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು ಎಂದು ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಸುಬ್ಬು ನರಸಿಂಹ ಅವರು ತಿಳಿಸಿದರು.

## ಕು. ದಿಯಾ ಉದಯ್ ನೃತ್ಯ ಪ್ರದರ್ಶನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಶ್ರೀ ವಿದ್ಯಾಗಣಪತಿ ದೇವಸ್ಥಾನದ ನವೀಕರಣದ ಪುನಃ ಪ್ರತಿಷ್ಠಾಪನೆ ಪ್ರಯುಕ್ತ ಏಪ್ರಿಲ್ 18, ಶುಕ್ರವಾರ ಸಂಜೆ 7-45ಕ್ಕೆ 'ಕೆಂಪೇಗೌಡ ಪ್ರಶಸ್ತಿ' ಪುರಸ್ಕೃತೆ ಕು. ದಿಯಾ ಉದಯ್ ಇವರಿಂದ ನೃತ್ಯ ಪ್ರದರ್ಶನ ಏರ್ಪಡಿಸಿದೆ. ಸ್ಥಳ : ಶ್ರೀ ವಿದ್ಯಾ ಗಣಪತಿ ದೇವಸ್ಥಾನ, ವೆಸ್ಟ್ ಪಾರ್ಕ್ ರಸ್ತೆ, 17ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560055

## ಟೀ ಅಂಗಡಿ ತೆರೆಯಲು ಚಿನ್ನ ಕಳ್ಳತನ ಮೂವರು ಆರೋಪಿಗಳ ಬಂಧನ

• ಉದಯವಾಹಿನಿ, ಬೆಂಗಳೂರು

ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಗಮನಿಸಿ ಕಳ್ಳತನ ಮಾಡುತ್ತಿದ್ದ ಫುಡ್ ಡೆಲಿವರಿ ಬಾಯ್ ಸೇರಿ ಮೂವರು ಆರೋಪಿಗಳನ್ನು ಬೆಳ್ಳಂದೂರು ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಕೊಡತಿ ಗೇಟ್‌ನ ದೀಕ್ಷಿತ್, ಕ್ಲಿಂಟನ್, ಆಭರಣ ಅಂಗಡಿ ಮಾಲೀಕ ಮೋತಿಲಾಲ್ ಬಂಧಿತರು. ಬಂಧಿತರಿಂದ 70ಗ್ರಾಂ. ಚಿನ್ನ, ಕೃತ್ಯಕ್ಕೆ ಬಳಸಿದ್ದ ಎರಡು ದ್ವಿಚಕ್ರ ವಾಹನ ವಶಕ್ಕೆ ಪಡೆದುಕೊಳ್ಳಲಾಗಿದೆ. ಬೆಳ್ಳಂದೂರಿನ ನಿವಾಸಿ ಸುಧಾಕರ್ ಅವರು ನೀಡಿದ ದೂರು ಆಧರಿಸಿ ಆರೋಪಿಗಳನ್ನು ಬಂಧಿಸಲಾಯಿತು ಎಂದು ಪೊಲೀಸರು ಹೇಳಿದರು.

ಮೂವರು ಆರೋಪಿಗಳನ್ನೂ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದ್ದು, ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಕಳುಹಿಸಲಾಗಿದೆ ಎಂದು ಪೊಲೀಸರು ಹೇಳಿದರು. ಡೆಲಿವರಿ ಬಾಯ್ ಆಗಿ ದೀಕ್ಷಿತ್ ಕೆಲಸ ಮಾಡುತ್ತಿದ್ದ. ಹೆಚ್ಚಿನ ಹಣ ಸಂಪಾದನೆಗಾಗಿ ಕಳ್ಳತನ ಮಾಡಲು ಮುಂದಾಗಿದ್ದ. ಮಾರ್ಚ್ 2ರಂದು ಬೆಳ್ಳಂದೂರಿನ ಶುಭಾ ಎನ್‌ಕ್ಲೇವ್ ಲೇಔಟ್ ಬಳಿ ಫುಡ್ ಡೆಲಿವರಿ ಮಾಡಲು ಬಂದಿದ್ದ. ಈ ವೇಳೆ ದೂರುದಾರರ ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಗಮನಿಸಿ, ತನ್ನ ಸ್ನೇಹಿತ ಕ್ಲಿಂಟನ್‌ನನ್ನು ಸ್ಥಳಕ್ಕೆ ಕರೆಸಿಕೊಂಡಿದ್ದ. ಇಬ್ಬರೂ ಸೇರಿಕೊಂಡು ಮನೆಯಲ್ಲಿದ್ದ 210 ಗ್ರಾಂ. ಚಿನ್ನ, 50 ಸಾವಿರ ನಗದು ಕಳ್ಳತನ ಮಾಡಿ ಪರಾರಿ ಆಗಿದ್ದರು. ಕದ್ದ ಚಿನ್ನವನ್ನು ಚಿನ್ನದ ವ್ಯಾಪಾರಿ ಮೋತಿಲಾಲ್ ಬಳಿ ಅಡಮಾನ ಇಟ್ಟಿದ್ದರು ಎಂದು ಪೊಲೀಸರು ತಿಳಿಸಿದರು. ಆರೋಪಿಗಳು ಚಿನ್ನವನ್ನು ಮಾರಾಟ ಮಾಡಿ ಅದರಿಂದ ಬಂದ ಹಣದಿಂದ ಟೀ ಅಂಗಡಿ ತೆರೆಯಲು ನಿರ್ಧರಿಸಿದ್ದರು ಎಂದು ಪೊಲೀಸರು ಹೇಳಿದರು.

## ಸರಗಳ್ಳತನ: ಅಂತರರಾಜ್ಯ ಕಳ್ಳರ ಬಂಧನ

• ಉದಯವಾಹಿನಿ, ಬೆಂಗಳೂರು

ಮಹಾರಾಷ್ಟ್ರದಿಂದ ನಗರಕ್ಕೆ ಬಂದು ಸರಗಳ್ಳತನ ಮಾಡುತ್ತಿದ್ದ ನಾಲ್ವರು ಅಂತರ ರಾಜ್ಯ ಕಳ್ಳರನ್ನು ಜೆ.ಸಿ. ನಗರ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಶಾಹಿದ್ ಅಲಿ(34), ಶಬ್ಬಿರ್ ಅಲಿ (39), ತನ್ವೀರ್ ಹುಸೇನ್ (37), ಅಲಿನಕ್ಕಿ (21) ಬಂಧಿತರು. ಬಂಧಿತರಿಂದ 87 ಗ್ರಾಂ. ಚಿನ್ನಾಭರಣವನ್ನು ಜಪ್ತಿ ಮಾಡಿಕೊಳ್ಳಲಾಗಿದೆ. ಇದರ ಮೌಲ್ಯ 6 ಲಕ್ಷ ಎಂದು ಅಂದಾಜಿಸಲಾಗಿದೆ.



ಠಾಣಾ ವ್ಯಾಪ್ತಿಯ ಜಯಮಹಲ್ ರಸ್ತೆಯ ನಿವಾಸಿ ಖುರ್ಷಿದಾ ಬಾನು ಅವರು ನೀಡಿದ ದೂರು ಆಧರಿಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿ, ಆರೋಪಿಗಳನ್ನು ಬಂಧಿಸಲಾಯಿತು ಎಂದು ಪೊಲೀಸರು ತಿಳಿಸಿದರು.

ಖುರ್ಷಿದಾ ಬಾನು ಅವರು ಮನೆಯ ಎದುರಿನ ರಸ್ತೆಯಲ್ಲಿ ವಾಯು ವಿಹಾರಕ್ಕೆ ತೆರಳಿದ್ದರು. ಹೆಲ್ಮೆಟ್ ಹಾಕಿಕೊಂಡು ಬೈಕ್‌ನಲ್ಲಿ ಬಂದಿದ್ದ ಇಬ್ಬರು ಆರೋಪಿಗಳು, ದೂರುದಾರರ ಕೊರಳಿನಲ್ಲಿದ್ದ 15 ಗ್ರಾಂ. ತೂಕದ ಚಿನ್ನದ ಸರವನ್ನು ಕಸಿದುಕೊಂಡು ಪರಾರಿ ಆಗಿದ್ದರು. ಇಬ್ಬರು ಆರೋಪಿಗಳನ್ನು ಮೈಸೂರಿನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ವಶಕ್ಕೆ ಪಡೆದುಕೊಳ್ಳಲಾಯಿತು. ಅವರು ನೀಡಿದ ಮಾಹಿತಿ ಆಧರಿಸಿ ಬೆಂಗಳೂರಿನಲ್ಲಿ ಮತ್ತಿಬ್ಬರನ್ನು ವಶಕ್ಕೆ ಪಡೆದು ಬಂಧಿಸಲಾಯಿತು ಎಂದು ಪೊಲೀಸರು ಹೇಳಿದರು.

ನಾಲ್ವರು ಆರೋಪಿಗಳನ್ನು 14 ದಿನ ಕಸ್ಟಡಿಗೆ ಪಡೆದುಕೊಂಡು ವಿಚಾರಣೆ ನಡೆಸಲಾಗುತ್ತಿದೆ. ಮಹಾರಾಷ್ಟ್ರದ ನಾಗಪುರದಲ್ಲಿನ ಚಿನ್ನಾಭರಣ ಅಂಗಡಿಗೆ ಮಾರಾಟ ಮಾಡಿದ್ದ 87 ಗ್ರಾಂ. ಚಿನ್ನಾಭರಣವನ್ನು ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದರು. ಆರೋಪಿಗಳ ಬಂಧನದಿಂದ ಅಶೋಕನಗರ, ಸದಾಶಿವನಗರ, ಜೆ.ಸಿ.ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಸರ ಕಳ್ಳತನ ಪ್ರಕರಣಗಳು ಪತ್ತೆಯಾಗಿವೆ. ಮೊದಲ ಆರೋಪಿ ಶಾಹಿದ್ ವಿರುದ್ಧ ಮಹಾರಾಷ್ಟ್ರದ ವಿವಿಧ ಠಾಣೆಗಳಲ್ಲಿ ಎಂಟು ಪ್ರಕರಣಗಳು ದಾಖಲಾಗಿವೆ' ಎಂದು ಪೊಲೀಸರು ಹೇಳಿದರು.

## ಲೇಖಕಿ ವೈ.ಕೆ.ಸಂಧ್ಯಾ ಶರ್ಮರಿಗೆ 'ಕಲಾ ಪ್ರವೀಣ' ಪ್ರಶಸ್ತಿ- 2025

• ಉದಯವಾಹಿನಿ, ಬೆಂಗಳೂರು



ಉಡುಪಿಯ ರಾಗ ಧನ ಸಂಸ್ಥೆಯು ಖ್ಯಾತ ಪತ್ರ ಕರ್ತರು-ಸಂಪಾದಕರೂ ಆಗಿದ್ದ ಕಲಾವಿಹಾರಿ ಎ. ಈಶ್ವರಯ್ಯ ಅವರ ಸಂಸ್ಮರಣೆಗಾಗಿ ಕೊಡಮಾಡುವ ರಾಗ ಧನ ''ಕಲಾ ಪ್ರವೀಣ'' ಪ್ರಶಸ್ತಿಯನ್ನು ಈ ಬಾರಿ ಪ್ರಖ್ಯಾತ ಲೇಖಕಿ -ಹಿರಿಯ ಸಾಹಿತಿ, ರಂಗಕರ್ಮಿ, ಅಂಕಣಕಾರ್ತಿ, ನೃತ್ಯ-ನಾಟಕಗಳ ಖ್ಯಾತ ವಿಮರ್ಶಕಿಯಾದ ಶ್ರೀಮತಿ ವೈ.ಕೆ.ಸಂಧ್ಯಾ ಶರ್ಮ ಅವರಿಗೆ ದಿ. ಇದೇ ತಿಂಗಳ 19 ರಂದು ಉಡುಪಿಯಲ್ಲಿ ಪ್ರದಾನ ಮಾಡಲಾಗುತ್ತದೆ. ಈ ಪ್ರಶಸ್ತಿಯು ರೂ. 10,000 ನಗದು ಹಾಗೂ ಇತರ ಗೌರವಗಳೊಂದಿಗೆ ಕೊಡಲಾಗುತ್ತದೆ.

ಶ್ರೀಮತಿ ವೈ.ಕೆ.ಸಂಧ್ಯಾ ಶರ್ಮ ಅವರು, ಕಳೆದ ಐದೂವರೆ ದಶಕಗಳಿಂದ ನಾಡಿನ ಜನಪ್ರಿಯ ಹಾಗೂ ಪ್ರಮುಖ ಪತ್ರಿಕೆಗಳಲ್ಲಿ ನೂರಾರು ಸಣ್ಣಕಥೆ, ಲೇಖನ, ಕವಿತೆ- ಕಾದಂಬರಿಗಳು ಮತ್ತು ಹಾಸ್ಯಬರಹಗಳನ್ನು ಇಂದಿನವರೆಗೂ ನಿರಂತರ ಬರೆಯುತ್ತಲೇ ಬಂದಿದ್ದಾರೆ. ಕರ್ನಾಟಕ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಹಿರಿಯ ಅಧಿಕಾರಿಗಳಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಕಳೆದ ಒಂದು ದಶಕದಿಂದ ರಂಗಭೂಮಿಯ, ನಾಟಕಗಳ ಮೌಲಿಕ ವಿಮರ್ಶೆ, ಪ್ರಬುದ್ಧ ನೃತ್ಯ ವಿಮರ್ಶಾ ಬರಹಗಳನ್ನು ಸತತವಾಗಿ ಬರೆಯುತ್ತ ಸಾಹಿತ್ಯ- ಕಲಾಲೋಕದಲ್ಲಿ ಕ್ರಿಯಾಶೀಲರಾಗಿದ್ದಾರೆ.

ಇವರ ಕಲಾ ವಿಮರ್ಶೆಯ ಸೇವೆಯನ್ನು ಪರಿಗಣಿಸಿ ಇವರಿಗೆ ಕಲಾ ಪ್ರವೀಣ ಎಂಬ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತಿದೆ. ಶ್ರೀಮತಿ ವೈ. ಕೆ.ಸಂಧ್ಯಾ ಶರ್ಮ ಆಕಾಶವಾಣಿ, ದೂರದರ್ಶನಗಳಲ್ಲಿ ಮಾನ್ಯತೆ ಪಡೆದ ಕಲಾವಿದೆಯೂ ಕೂಡ. ಕಳೆದ 47 ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವ ತಮ್ಮದೇ ಆದ 'ಸಂಧ್ಯಾ ಕಲಾವಿದರು' ಹವ್ಯಾಸೀ ನಾಟಕ ತಂಡದ ಅಧ್ಯಕ್ಷೆ. 'ಸಂಧ್ಯಾ ಪತ್ರಿಕೆ' ಎಂಬ ಅಂತರ್ಜಾಲದ ಸಾಂಸ್ಕೃತಿಕ ಪತ್ರಿಕೆಯ ಪ್ರಧಾನ ಸಂಪಾದಕಿ. ಇವರ ಸಾಹಿತ್ಯ ಸಾಧನೆಗೆ ಬಂದಿರುವ ಪ್ರಶಸ್ತಿಗಳು ಅನೇಕಾನೇಕ. 2016-ರಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪ್ರಪ್ರಥಮ ಮಹಿಳಾ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಪದವಿ ವಹಿಸಿದ ಗೌರವ ಇವರದಾಗಿದೆ. ದೂರದರ್ಶನದ ನೃತ್ಯ ಕಲಾವಿದರ ಆಯ್ಕೆಯ ಆಡಿಶನ್ ಕಮಿಟಿಯ ಸದಸ್ಯರೂ ಆಗಿದ್ದಾರೆ.

## ಬಿಗಿ ಕ್ರಮಗಳ ನಡುವೆ ಸಿಇಟಿ ಆರಂಭ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸುವ 2025ನೇ ಸಾಲಿನ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಬಿಗಿ ಕ್ರಮಗಳ ನಡುವೆ ನಡೆಯಲಿದೆ. ಹೊರನಾಡು, ಗಡಿನಾಡು ಕನ್ನಡಿಗರಿಗೆ ನಿನ್ನೆ ಕನ್ನಡ ಭಾಷಾ ಪರೀಕ್ಷೆ ಬೆಂಗಳೂರು, ಮಂಗಳೂರು, ವಿಜಯಪುರ ಮತ್ತು ಬೆಳಗಾವಿ ನಗರಗಳ ಒಟ್ಟು ಐದು ಕೇಂದ್ರಗಳಲ್ಲಿ ನಡೆಯಿತು.

ಭೌತ ವಿಜ್ಞಾನ ಮತ್ತು ರಸಾಯನ ವಿಜ್ಞಾನ, ಗಣಿತ, ಜೀವ ವಿಜ್ಞಾನ ವಿಷಯಗಳ ಪರೀಕ್ಷೆಗಳು ನಡೆಯಲಿದ್ದು, ಹಿಂದೆಂದಿಗಿಂತ ಹೆಚ್ಚು ಬಿಗಿ ಬಂದೋಬಸ್ತ್ ಮಾಡಲಾಗಿದೆ ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ. ಪರೀಕ್ಷಾ ಅಕ್ರಮಗಳನ್ನು ತಡೆಯುವ ಉದ್ದೇಶದಿಂದ ಸ್ಪರ್ಧಾತ್ಮಕ ನೇಮಕಾತಿ ಪರೀಕ್ಷೆ ಮಾದರಿಯಲ್ಲೇ ಸಿಇಟಿಗೂ ಕ್ಯಾಮರಾ ಕಣ್ಣಾವಲು ಇಡಲಾಗಿದೆ.

ವೆಬ್ ಕಾಸ್ಟಿಂಗ್ ಮೂಲಕ ಎಲ್ಲ 775 ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡುವ ವ್ಯವಸ್ಥೆ ಮಾಡಲಾಗಿದೆ. ಯಾವುದೇ ಅಕ್ರಮಗಳು ನಡೆಯದಂತೆ ಕಟ್ಟೆಚ್ಚರ ವಹಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮೇಲುಸ್ತುವಾರಿ ನಡೆಸಲಿದ್ದಾರೆ ಎಂದು ವಿವರಿಸಿದ್ದಾರೆ.

ಪೊಲೀಸ್, ಗೃಹ ರಕ್ಷಕ ದಳದ ಸಿಬ್ಬಂದಿ ಅಭ್ಯರ್ಥಿಗಳನ್ನು ತೀವ್ರ ತಪಾಸಣೆ ಮಾಡಿಯೇ ಪರೀಕ್ಷಾ ಕೇಂದ್ರದೊಳಗೆ ಬಿಡಲಿದ್ದಾರೆ. ಹೀಗಾಗಿ ಕನಿಷ್ಠ ಒಂದೂವರೆ ಗಂಟೆ ಮುಂಚೆಯೇ ಪರೀಕ್ಷಾ ಕೇಂದ್ರಕ್ಕೆ ಅಭ್ಯರ್ಥಿಗಳು ಬಂದು ತಪಾಸಣೆಗೆ ಒಳಗಾಗಬೇಕು. ಅಭ್ಯರ್ಥಿಯ ಮುಖ ಚಹರೆ, ಕ್ಯೂಆರ್ ಕೋಡ್ ವ್ಯವಸ್ಥೆ ಮೂಲಕ ಅಭ್ಯರ್ಥಿಯ ನೈಜತೆ ಪರಿಶೀಲನೆ ಮಾಡಲಾಗುತ್ತದೆ. ಯಾರದೋ ಪರೀಕ್ಷೆಯನ್ನು ಇನ್ಯಾರೊ ಬರೆಯುವುದನ್ನು ತಡೆ ಯುವ ಉದ್ದೇಶದಿಂದ ಈ ವ್ಯವಸ್ಥೆ ಜಾರಿ ಮಾಡಲಾಗಿದೆ. ಸೀಟು ಹಂಚಿಕೆಯಾಗಿ ಕಾಲೇಜುಗಳಿಗೆ ಪ್ರವೇಶ ಆಗುವ ಸಂದರ್ಭದಲ್ಲಿ ಕೂಡ ಅಭ್ಯರ್ಥಿಯ ಭಾವಚಿತ್ರವನ್ನು ಹೋಲಿಕೆ ಮಾಡಿಯೇ ಪ್ರವೇಶ ನೀಡುವ ವ್ಯವಸ್ಥೆ ಮಾಡಿದ್ದು, ನಕಲಿ ಅಭ್ಯರ್ಥಿಗಳಿಗೆ ಸಂಪೂರ್ಣ ಕಡಿವಾಣ ಹಾಕಲಾಗಿದೆ ಎಂದು ಪ್ರಸನ್ನ ತಿಳಿಸಿದ್ದಾರೆ. ಕಷ್ಟಪಟ್ಟು ಓದಿದ ಅಭ್ಯರ್ಥಿಗಳಿಗೆ ಯಾವುದೇ ರೀತಿ ಮೋಸ ಆಗಲು ಬಿಡುವುದಿಲ್ಲ. ಅತ್ಯಂತ ಪಾರದರ್ಶಕವಾಗಿ ಪರೀಕ್ಷೆ ನಡೆಸಲು ಎಲ್ಲಾ ರೀತಿಯ ತಯಾರಿ ಮಾಡಿಕೊಳ್ಳಲಾಗಿದೆ. ನಿಶ್ಚಿತೆಯಿಂದ ಪರೀಕ್ಷೆ ಬರೆಯಬಹುದು ಎಂದು ಅವರು ಅಭಯ ನೀಡಿದ್ದಾರೆ.

**ವಸ್ತ್ರಸಂಹಿತೆ**

**ಪುರುಷ, ಮಹಿಳಾ ಅಭ್ಯರ್ಥಿಗಳಿಗೆ ಪ್ರತ್ಯೇಕ ವಸ್ತ್ರಸಂಹಿತೆ ಮಾಡಿದ್ದು, ಕಡ್ಡಾಯವಾಗಿ ಎಲ್ಲರೂ ಪಾಲಿಸಬೇಕು. ಪುರುಷ, ಮಹಿಳಾ ಅಭ್ಯರ್ಥಿಗಳು ಅರ್ಧ ತೋಳಿನ ಬಟ್ಟೆ ಧರಿಸಬೇಕು. ಸಾಧ್ಯವಾದಷ್ಟು ಕಾಲರ್ ಇಲ್ಲದಿರುವುದನ್ನು ಹಾಕಿಕೊಂಡು ಬಂದರೆ ಉತ್ತಮ. ಪುರುಷರು, ಜೇಬು ಇಲ್ಲದ, ಕಡಿಮೆ ಜೇಬುಗಳಿರುವ ಸರಳ ಪ್ಯಾಂಟ್ ಧರಿಸಬೇಕು. ಕುರ್ತಾ ಪೈಜಾಮ, ಜೀನ್ಸ್ ಪ್ಯಾಂಟ್‌ಗೆ ಅವಕಾಶ ಇರುವುದಿಲ್ಲ. ಶೂ ಕೂಡ ನಿಷೇಧಿಸಲಾಗಿದೆ.**

## ಹಿಂದುಳಿದ ವರ್ಗಗಳ ಆಯೋಗದ ವರದಿಗೆ ಸಂಪೂರ್ಣ ಅನುಮತಿಯಿದೆ : ದಿನೇಶ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷಾ ವರದಿಗೆ ನನ್ನ ಸಂಪೂರ್ಣ ಅನುಮೋದನೆಯಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಹೇಳಿದ್ದಾರೆ. ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸಚಿವ ಸಂಪುಟದಲ್ಲಿ ಈ ಸಮೀಕ್ಷಾ ವರದಿ ಮಂಡನೆಯಾಗಲಿದೆ. ಸಚಿವ ಸಂಪುಟವು ಈ ಸಮೀಕ್ಷಾ ವರದಿಯನ್ನು ಅಂಗೀಕರಿಸಿದ ಬಳಿಕ ವರದಿಯ ನ್ಯೂನತೆಗಳು, ಪರಿಣಾಮಕಾರಿ ಅನುಷ್ಠಾನದ ಕುರಿತು ಮುಕ್ತ, ನ್ಯಾಯಯುತವಾದ ಚರ್ಚೆಗೆ ನಾಂದಿ ಹಾಡಬಹುದು ಎಂದಿದ್ದಾರೆ.



ಜಯಪ್ರಕಾಶ್ ಹೆಗ್ಡೆ ನೇತೃತ್ವದ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಆಧಾರದಲ್ಲಿ ಸಲ್ಲಿಸಿರುವ ಸಮೀಕ್ಷಾ ವರದಿಯನ್ನು ಪರಿಶೀಲಿಸಿದ್ದೇನೆ. ಸಾಮಾಜಿಕ ನ್ಯಾಯ, ಸಮಾನ ಬದುಕಿನ ಮೇಲೆ ನಮಗೆ ನಂಬಿಕೆಯಿದ್ದರೆ, ಆ ತತ್ವಕ್ಕೆ ನಾವು ಬದ್ಧರಾಗಿದ್ದರೆ, ಈ ಸಮೀಕ್ಷಾ ವರದಿಯನ್ನು ವೈಜ್ಞಾನಿಕವಾಗಿ ವಿಶ್ಲೇಷಣೆ ಮಾಡುವುದು ಸೂಕ್ತ ಎಂಬುದು ನನ್ನ ವೈಯಕ್ತಿಕ ಅಭಿಪ್ರಾಯ. ಜೊತೆಗೆ ಈ ವರದಿಯು ತಾರ್ಕಿಕ ಅಂಶಗಳನ್ನು ಒಳಗೊಂಡಿದೆ ಎಂಬುದನ್ನು ಒತ್ತಿ ಹೇಳಲು ಬಯಸುತ್ತೇನೆ ಎಂದು ಅವರು ತಿಳಿಸಿದ್ದಾರೆ. ಆಯೋಗ ಶಿಫಾರಸ್ಸು ಮಾಡಿರುವ ಕೆಲ ಅಂಶಗಳನ್ನು ನಾನು ಗಮನಿಸಿದ್ದೇನೆ. ಈ ಅಂಶಗಳಿಂದ ಯಾವುದೇ ಸಮುದಾಯ ಅಸಮಾಧಾನಗೊಳ್ಳುವ ಅಗತ್ಯವಿಲ್ಲ. ಈ ಅಂಶಗಳು ಯಾವುದೇ ಸಮುದಾಯವನ್ನು ಕಡೆಗಣಿಸಿಲ್ಲ ಎಂಬುದು ನನ್ನ ಭಾವನೆ. ಕೆಲವರು ವರದಿಯನ್ನು ಓದದೆ ಜನರನ್ನು ತಪ್ಪುದಾರಿಗೆ ಎಳೆಯುವ ಯತ್ನ ಮಾಡುತ್ತಿದ್ದಾರೆ. ಹಾಗಾಗಿ ನಾನು ಜನರಲ್ಲಿ ಮನವಿ ಮಾಡಿಕೊಳ್ಳುವುದೇನೆಂದರೆ, ವರದಿಯ ಕುರಿತು ಈಗಲೇ ಅಂತಿಮ ತೀರ್ಮಾನಕ್ಕೆ ಬರುವುದು ಬೇಡ.


ಅನಗತ್ಯ ಗೊಂದಲಗಳಿಗೆ ಆಸ್ಪದ ಕೊಡುವುದು ಬೇಡ. ಮೊದಲು ವರದಿಯನ್ನು ಓದೋಣ. ನಂತರ ಚರ್ಚೆಗೆ ನಮ್ಮ ಮನಸ್ಸನ್ನು ಮುಕ್ತವಾಗಿರಿಸಿಕೊಳ್ಳೋಣ. ವರದಿಯನ್ನು ಸಂಪೂರ್ಣವಾಗಿ ಓದದೆ ಅವೈಜ್ಞಾನಿಕ ಎನ್ನುವುದು ಆತುರದ ನಿರ್ಧಾರವಾಗುತ್ತದೆ ಎಂದು ಅವರು ಹೇಳಿದ್ದಾರೆ.

## 1ನೇ ತರಗತಿ ಮಕ್ಕಳ ದಾಖಲಾತಿ ವಯೋಮಿತಿ ಗೊಂದಲಕ್ಕೆ ತೆರೆ

• ಉದಯವಾಹಿನಿ, ಬೆಂಗಳೂರು

ಒಂದನೇ ತರಗತಿಗೆ ಪ್ರವೇಶ ಪಡೆಯುವ ಮಕ್ಕಳ ವಯೋಮಿತಿ ಸಡಿಲಗೊಳಿಸುವ ಕುರಿತ ಶಿಫಾರಸು ಒಳಗೊಂಡ ತಾತ್ಕಾಲಿಕ ವರದಿಯನ್ನು ರಾಜ್ಯ ಶಿಕ್ಷಣ ನೀತಿ ಆಯೋಗ ಸಲ್ಲಿಸಿದ್ದು, ಈ ಕುರಿತು ಶಾಲಾ ಶಿಕ್ಷಣ ಇಲಾಖೆ ನಿರ್ಧಾರ ಪ್ರಕಟಿಸಿದೆ.

ಅದರ ಪ್ರಕಾರ 5 ವರ್ಷ 5 ತಿಂಗಳಾಗಿರುವ ಮಕ್ಕಳಿಗೆ ಇನ್ನು 1ನೇ ತರಗತಿಗೆ ದಾಖಲಾತಿ ಮಾಡಲು ಸಾಧ್ಯವಾಗಲಿದೆ. ಇದಕ್ಕೂ ಮುನ್ನ ರಾಜ್ಯ ಪಠ್ಯಕ್ರಮದಲ್ಲಿ 1ನೇ ತರಗತಿಗೆ ಮಕ್ಕಳನ್ನು ದಾಖಲಾತಿ ಮಾಡಿಕೊಳ್ಳಲು 6 ವರ್ಷ ಆಗಿರಬೇಕಾಗಿರುವುದು ಕಡ್ಡಾಯ ವಾಗಿತ್ತು. ಎಲ್‌ಕೆಜಿ, ಯುಕೆಜಿ ಆಗಿದ್ದರೆ ಮಾತ್ರ ಒಂದನೇ ತರಗತಿಗೆ ಪ್ರವೇಶ. ಮಕ್ಕಳಿಗೆ 5 ವರ್ಷ 5 ತಿಂಗಳಾಗಿರಬೇಕು. ಪೋಷಕರ ಒತ್ತಾಯದ ಮೇರೆಗೆ ಇದೊಂದು ವರ್ಷ ಮಾತ್ರ ಅವಕಾಶ.



ಮುಂದಿನ ಶೈಕ್ಷಣಿಕ ವರ್ಷದಿಂದ ಕಡ್ಡಾಯವಾಗಿ 6 ವರ್ಷ ಆಗಿರಬೇಕು ಎಂದು ಮಧು ಬಂಗಾರಪ್ಪ ಸ್ಪಷ್ಟಪಡಿಸಿದರು. ಶಾಲಾ ಶಿಕ್ಷಣ ಇಲಾಖೆ 2022ರ ನವೆಂಬರ್‌ನಲ್ಲಿ ಹೊರಡಿಸಿದ ಆದೇಶದ ಪ್ರಕಾರ, ಜೂ. 1, 2025ರ ಒಳಗೆ ಆರು ವರ್ಷಗಳನ್ನು ಪೂರ್ಣಗೊಳಿಸಿದ ಮಕ್ಕಳು 2025-26 ಶೈಕ್ಷಣಿಕ ವರ್ಷಕ್ಕೆ ಒಂದನೇ ತರ ಗತಿಗೆ ಪ್ರವೇಶ ಪಡೆಯಲು ಅರ್ಹರಾಗಿರುತ್ತಾರೆ. ಇದರಿಂದ ಸಾವಿರಾರು ಮಕ್ಕಳ ಪ್ರವೇಶಕ್ಕೆ ಅಡ್ಡಿಯಾಗಿದೆ. ಮೊದಲು ಇದ್ದಂತೆ ಪೋಷಕರ ಇಚ್ಛೆಗೆ ಅನುಗುಣವಾಗಿ ಶಾಲೆಗೆ ಸೇರಿಸಲು ವಯೋಮಿತಿ ಸಡಿಲಿಕೆಯ ಅವಕಾಶ ನೀಡಬೇಕು ಎಂದು ಹಲವು ಪೋಷಕರು ಮನವಿ ಮಾಡಿದ್ದರು.


**ಅಂದ್ರೆ 5 ವರ್ಷ 5 ತಿಂಗಳು ಇರುವ ಮಕ್ಕಳಿಗೆ ಈ ವರ್ಷ 1ನೇ ತರಗತಿ ನೋಂದಣಿಗೆ ಅವಕಾಶ ಮಾಡಲಾಗುತ್ತಿದೆ. 1ನೇ ತರಗತಿಯ ಅಡ್ಮಿಷನ್ ಜೊತೆಗೆ ಎಲ್‌ಕೆಜಿ ಪ್ರವೇಶ ಪಡೆಯುವ ಮಕ್ಕಳಿಗೆ 4 ವರ್ಷ ವಯೋಮಿತಿ ನಿಗದಿಪಡಿಸಲಾಗುತ್ತಿದೆ. ಇದು ಕೇವಲ ರಾಜ್ಯಪಠ್ಯ ಕ್ರಮಕ್ಕೆ ಮಾತ್ರ ಅನ್ವಯ. ಐಸಿಎಸ್‌ಸಿ, ಸಿಬಿಎಸ್‌ಇ ಬೋರ್ಡ್ ಬಗ್ಗೆ ನಾವು ನಿರ್ಧಾರ ಮಾಡಲು ಆಗೊಲ್ಲ**

**- ಮಧು ಬಂಗಾರಪ್ಪ, ಶಿಕ್ಷಣ ಸಚಿವ**

## ಸಿದ್ದರಾಮಯ್ಯ, ಅವರ ಪತ್ನಿಗೆ ಹೈಕೋರ್ಟ್ ನೋಟಿಸ್

• ಉದಯವಾಹಿನಿ, ಬೆಂಗಳೂರು





ಮುಡಾ ನಿವೇಶನ ಹಂಚಿಕೆ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸಲು ನಿರ್ದೇಶನ ಕೋರಿ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ಹೈಕೋರ್ಟ್ ವಿಭಾಗೀಯ ಪೀಠ, ಬುಧವಾರ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ, ಇತರರಿಗೆ ನೋಟಿಸ್ ಜಾರಿ ಮಾಡಿದೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಸಿಎಂ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಬಿ.ಎಂ ಅವರಿಗೆ 14 ನಿವೇಶನಗಳನ್ನು ಅಕ್ರಮ ಹಂಚಿಕೆ ಬಗ್ಗೆ ತನಿಖೆ ನಡೆಸಿದ ಲೋಕಾಯುಕ್ತ ಪೊಲೀಸರು ಈಗಾಗಲೇ ಬಿ ರಿಪೋರ್ಟ್ ಸಲ್ಲಿಸಿದ್ದಾರೆ. ಆದರೆ ಲೋಕಾಯುಕ್ತ ಪಾರದರ್ಶಕ ತನಿಖೆ ನಡೆಸಿಲ್ಲ ಎಂದು ಆರೋಪಿಸಿದ ಸ್ನೇಹಮಯಿ ಕೃಷ್ಣ ಅವರು, ಪ್ರಕರಣವನ್ನು ಕೇಂದ್ರ ತನಿಖಾ ಸಂಸ್ಥೆ(ಸಿಬಿಐ)ಗೆ ವರ್ಗಾಯಿಸಬೇಕೆಂಬ ಮನವಿಯನ್ನು ಹೈಕೋರ್ಟ್ ಏಕಸದಸ್ಯ ಪೀಠ ಫೆಬ್ರವರಿ 7 ರಂದು ತಿರಸ್ಕರಿಸಿತ್ತು. ಈ ಆದೇಶ ಪ್ರಶ್ನಿಸಿ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಲಾಗಿದೆ.

ಬುಧವಾರ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎನ್ ವಿ ಅಂಜಾರಿಯಾ ನ್ಯಾಯಮೂರ್ತಿ ಕೆ ವಿ ಅರವಿಂದ್ ಅವರನ್ನೊಳಗೊಂಡ ವಿಭಾಗೀಯ ಪೀಠ, ಸಿಎಂ ಸಿದ್ದರಾಮಯ್ಯ, ಪತ್ನಿ ಪಾರ್ವತಿ, ಇತರರಿಗೆ ನೋಟಿಸ್ ನೀಡಿದ್ದು, ಏಪ್ರಿಲ್ 28ರೊಳಗೆ ಪ್ರತಿಕ್ರಿಯೆ ಸಲ್ಲಿಸುವಂತೆ ಸೂಚಿಸಲಾಗಿದೆ.

ಲೋಕಾಯುಕ್ತ ಪೊಲೀಸರು ರಾಜ್ಯ ಸರ್ಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಮತ್ತು ಆರೋಪಿಗಳ ಪರವಾಗಿ ವರದಿ ಪಡೆಯಲು ಸಿಎಂ ಸಿದ್ದರಾಮಯ್ಯ ಲೋಕಾಯುಕ್ತ ಸಂಸ್ಥೆಯ ಮೇಲೆ ಪ್ರಭಾವ ಬೀರಿದ್ದಾರೆ ಎಂದು ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ.


# ಧರ್ಮ ಒಡೆಯುವ ಕೆಲಸ ಮಾಡಬೇಡಿ ಬಿವೈವಿ ಎಚ್ಚರಿಕೆ

### ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡಲು ಬಾಬಾ ಸಾಹೇಬ್ ಅಂಬೇಡ್ಕರ್ ರಚಿಸಿರುವ ಸಂವಿಧಾನದಲ್ಲಿ ಅವಕಾಶವಿಲ್ಲ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯನವರೇ ನಿಮ್ಮ ಕುರ್ಚಿಯನ್ನು ಭದ್ರಪಡಿಸಿಕೊಳ್ಳಲು ಜಾತಿ, ಜಾತಿಗಳ ನಡುವೆ ಧರ್ಮ, ಧರ್ಮಗಳ ನಡುವೆ ಬಿರುಕು ಮೂಡಿಸುವ ಕೆಲಸವನ್ನು ಇನ್ನಾದರೂ ಕೈ ಬಿಡಿ. ಇಲ್ಲವಾದರೆ ಇಷ್ಟರಲ್ಲೇ ಎಂಬುದನ್ನು ನೀವು ಮರೆಯದಿರಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಎಚ್ಚರಿಕೆ ಕೊಟ್ಟಿದ್ದಾರೆ.

ಕರ್ನಾಟಕದಲ್ಲಿ ಮುಸ್ಲಿಂ ಮೀಸಲಾತಿಯ ಹೆಸರಿನಲ್ಲಿ ಪರಿಶಿಷ್ಟರೂ ಸೇರಿದಂತೆ ಇತರ ಶೋಷಿತರು, ಬಡವರ ಹಕ್ಕು ಕಸಿಯಲಾಗುತ್ತಿದೆ ಎಂದು ಪ್ರಧಾನಿಗಳು ಹೇಳಿದ್ದಾರೆ. ಮೀಸಲಾತಿ ಪ್ರಮಾಣ ವನ್ನು ಪರಿಶಿಷ್ಟರಿಗೆ ಶೇ.15ರಿಂದ ಶೇ.17 ಕ್ಕೆ, ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3 ರಿಂದ ಶೇ.7 ಕ್ಕೆ ಹೆಚ್ಚಿಸಿದ್ದು ನಮ್ಮ ಬಿಜೆಪಿ ಸರ್ಕಾರದ ಆಡಳಿತ ಅವಧಿಯಲ್ಲಿಯೇ ಹೊರತು. ನಿಮ್ಮ ಆಡಳಿತ ಅವಧಿಯಲ್ಲಿ ಅಲ್ಲ ಎನ್ನುವುದು ನಿಮಗೆ ನೆನಪಿರಲಿ ಎಂದು



ಎಚ್ಚರಿಕೆ ಕೊಟ್ಟಿದ್ದಾರೆ. ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡಲು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನದಲ್ಲಿ ಅವಕಾಶವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ. ಕರ್ನಾಟಕದಲ್ಲಿ ಮುಸ್ಲಿಂಮರ ಕಲ್ಯಾಣಕ್ಕಿಂತ ಅವರ ಮತಬ್ಯಾಂಕ್ ಕೇಂದ್ರೀಕರಿಸಿ ನೀವು ರೂಪಿಸುತ್ತಿರುವ ನಿಯಮ, ಯೋಜನೆಗಳನ್ನು ಪ್ರಧಾನಿಗಳು ಟೀಕಿಸಿದ್ದಾರೆ. ವಾಸ್ತವದಲ್ಲಿ ರಾಜ್ಯದಲ್ಲಿ ಧರ್ಮಗಳ ನಡುವೆ ಬಿರುಕು ಮೂಡಿಸಿ ದ್ವೇಷ ಬಿತ್ತುವ ಕೆಲಸಕ್ಕೆ ಮುಂದಾಗಿರುವುದು ನೀವು ಎಂದು ಅವರುಆರೋಪಿಸಿದ್ದಾರೆ.

ರಾಷ್ಟ್ರಕವಿ ಕುವೆಂಪು ಅವರ ಕಲ್ಪನೆಯ ಸರ್ವ ಜನಾಂಗದ ಶಾಂತಿಯ ತೋಟಕ್ಕೆ ಬೆಂಕಿ ಹಚ್ಚುತ್ತಿದ್ದೀರಿ. ಇದನ್ನೇ ಪ್ರಧಾನಮಂತ್ರಿಗಳು ಹೇಳಿದ್ದಾರೆ. ನೀವೊಬ್ಬ ವಕೀಲರೂ ಹೌದು ಸಂವಿಧಾನವನ್ನು ನೀವು ಓದಿಕೊಂಡಿರಬಹುದು ಎಂದು ನಾವು ಭಾವಿಸಿದ್ದೆವು. ಆದರೆ ಧರ್ಮದ ಆಧಾರದ ಮೇಲೆ ಮೀಸಲಾತಿ ನೀಡುವ ಕುರಿತು ನೀವು ಹೇಳಿರುವ ಮಾತುಗಳು ಆಶ್ಚರ್ಯವೆನಿಸಿದೆ ಎಂದು ಅವರು ವ್ಯಂಗ್ಯವಾಡಿದ್ದಾರೆ. ಸಂವಿಧಾನದ ಆರ್ಟಿಕಲ್ 15(1) ಏನು ಹೇಳುತ್ತದೆ ಎನ್ನುವುದನ್ನು ಬಹುಶಃ ನೀವು ಓದಿಕೊಂಡಂತೆ ಕಾಣುತ್ತಿಲ್ಲ. ಧರ್ಮದ ಆಧಾರದ ಮೇಲೆ ಮೀಸಲಾತಿ ಕಲ್ಪಿಸಿ ತಾರ ತಮ್ಯ ಮಾಡಲು ಎಲ್ಲಿಯೂ ಅವ ಕಾಶವಿಲ್ಲ ಎಂದು ಸ್ಪಷ್ಟವಾಗಿ ಹೇಳಲಾಗಿದೆ. ಇದನ್ನೇ ಮೋದಿ ಜೀ ಉಲ್ಲೇಖಿಸಿದ್ದಾರೆ.

ಇದರಿಂದ ವಿಚಲಿತರಾಗಿರುವ ನೀವು ಮುಸ್ಲಿಂ ಓಲೈಕೆಗಾಗಿ ಭಂಡತನದ ಸಮರ್ಥನೆಗಿಳಿದಿದ್ದೀರಿ ಎಂದು ವಿಜಯೇಂದ್ರ ವಾಗ್ದಾಳಿ ನಡೆಸಿದ್ದಾರೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾಷಣವನ್ನು ನೆನಪಿಸಿಕೊಂಡಿದ್ದೀರಿ. ಅಲ್ಲೆಲ್ಲೂ ಧರ್ಮಾಧಾರಿತ ಮೀಸಲಾತಿ ಬೇಡ, ಇಲ್ಲವೇ ಬೇಕು ಎನ್ನುವ ಅಭಿಪ್ರಾಯ ಅಂಬೇಡ್ಕರ್ ಅವರು ಉಲ್ಲೇಖಿಸಿರುವುದಿಲ್ಲ. ಎಂದು ಜಾಣ ತೋರಲು ಹೊರಟಿದ್ದೀರಿ.

ಆದರೆ ಸರ್ವಶ್ರೇಷ್ಠ ಸಂವಿಧಾನದ ಆರ್ಟಿಕಲ್ 15 (1) ಏನು ಹೇಳುತ್ತದೆ ಎನ್ನುವುದನ್ನು ನೀವೇಕೆ ಓದಿಕೊಂಡಿಲ್ಲ? ಎಂದು ಪ್ರಶ್ನಿಸಿದ್ದಾರೆ. ಕರ್ನಾಟಕದಲ್ಲಿ ಮುಸ್ಲಿಮರಿಗೆ ನೀವು ಮೀಸಲಾತಿ ನೀಡುತ್ತಿರುವುದು ಧರ್ಮಾಧಾರಿತವಾಗಿಯೇ ಹೊರತು, ಜಾತಿ ಆಧಾರಿತವಾಗಿ ಅಲ್ಲವೇ ಅಲ್ಲ. ಆಂಧ್ರ ಪ್ರದೇಶದಲ್ಲಿ ಈ ಹಿಂದೆ ಚಂದ್ರಬಾಬು ನಾಯ್ಡು ಅವರ ಸರ್ಕಾರ ಮುಸ್ಲಿಂ ಮೀಸಲಾತಿಯನ್ನು ರೂಪಿಸಿರುವುದು ಅತೀ ಹಿಂದುಳಿದ ಮುಸ್ಲಿಂ ಪಂಗಡಗಳಿಗೇ ಹೊರತು ಇಡಿಯಾಗಿ ಮುಸ್ಲಿಂ ಧರ್ಮೀಯರಿಗಲ್ಲ, ಆದಾಗ್ಯೂ ಇದನ್ನು ಅಲ್ಲಿನ ಉಚ್ಛನ್ಯಾಯಾಲಯ ರದ್ದುಪಡಿಸಿದೆ ಎಂದಿದ್ದಾರೆ.

**ಯಾವುದೇ ನೈತಿಕ ಹಕ್ಕು ಇಲ್ಲ**

**ಈ ಕುರಿತು ತಮ್ಮ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಸುದೀರ್ಘ ಪೋಸ್ಟ್ ಮಾಡಿರುವ ಅವರು, ಕರ್ನಾಟಕ ರಾಜ್ಯದ ಒಟ್ಟು ಜನ ಕಲ್ಯಾಣದ ಬಗ್ಗೆ ಚಿಂತಿಸುವ ಬದಲು ಮತ ಬ್ಯಾಂಕನ್ನು ಕೇಂದ್ರೀಕರಿಸಿ, ಅಲುಗಾಡುತ್ತಿರುವ ನಿಮ್ಮ ಕುರ್ಚಿ ಉಳಿಸಿಕೊಳ್ಳಲು ಜಾತಿಗಣತಿಯ ಹೆಸರಿನಲ್ಲಿ ಗೊಂದಲಗಳನ್ನು ಸೃಷ್ಟಿಸಿ ಸಮಾಜವನ್ನು ಛಿದ್ರ ಮಾಡಲು ಹೊರಟಿರುವ ನಿಮಗೆ, ಪ್ರಧಾನಿಗಳನ್ನು ಕುರಿತು ಟೀಕಿಸುವ ಯಾವುದೇ ನೈತಿಕ ಹಕ್ಕು ಇಲ್ಲ ಎಂದು ತಿರಗೇಟು ನೀಡಿದ್ದಾರೆ.**

**ಈ ಸಂಬಂಧ ಸರ್ವೋಚ್ಚ ನ್ಯಾಯಾಲಯದಲ್ಲಿ ವಿಚಾರಣೆ ಮುಂದುವರೆದಿದೆ. ಸಂವಿಧಾನದ ಆಶಯದ ಪ್ರಕಾರ ಹಿಂದೂಗಳಿಗೆ ಧರ್ಮಾಧಾರಿತವಾಗಿ ಮೀಸಲಾತಿ ಕಲ್ಪಿಸಲಾಗಿಲ್ಲ. ಹಿಂದೂ ಧರ್ಮದ ಜಾತಿಗಳ ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿ ಆಧಾರಿಸಿ ಮೀಸಲಾತಿ ಕಲ್ಪಿಸಲಾಗುತ್ತಿದೆ. ಇದೇ ಮಾನದಂಡ ಮುಸ್ಲಿಂಮರಿಗೆ ನೀಡಲಾಗಿರುವ ಮೀಸಲಾತಿಗೆ ಏಕೆ ಅನ್ವಯವಾಗಿಲ್ಲ ಎನ್ನುವುದೇ ನಮ್ಮ ಪ್ರಶ್ನೆಯಾಗಿದೆ**

**- ಬಿ.ವೈ ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ**

# ಪದೇ ಪದೇ ವಿದ್ಯುತ್ ಸಂಪರ್ಕ ಕಡಿತ: ಬೇಸತ್ತ ಗ್ರಾಹಕರು

• ಉದಯವಾಹಿನಿ, ಹನೂರು

ಪದೇ ಪದೇ ವಿದ್ಯುತ್ ಸಂಪರ್ಕ ಕಡಿತ ಮಾಡುತ್ತಿರುವ ಬಗ್ಗೆ ಬೇಸತ್ತ ಕಾಮಗೆರೆ ಗ್ರಾಮದ ಗ್ರಾಹಕರು ಮುಖಂಡರು ದೊಡ್ಡಿಂದುವಾಡಿ ಚೆಸ್ಕಾಂ ಕಚೇರಿಗೆ ತೆರಳಿ ಸಹಾಯಕ ಅಭಿಯಂತರರು ರವಿಕುಮಾರ್ ಅವರನ್ನು ತರಾಟೆಗೆ ತೆಗೆದುಕೊಂಡ ಪ್ರಸಂಗ ಜರುಗಿತು.

ಕೊಳ್ಳೇಗಾಲ ತಾಲ್ಲೂಕಿನ ದೊಡ್ಡಿಂದುವಾಡಿ ಚೆಸ್ಕಾಂ ಕಚೇರಿಗೆ ತೆರಳಿದ ಕೊಂಗರಹಳ್ಳಿ ಕಾಮಗೆರೆ ಗ್ರಾಮದ ಗ್ರಾಹಕರು ಮುಖಂಡರುಗಳು ಚೆಸ್ಕಾಂ ಇಲಾಖೆ ಅಧಿಕಾರಿ ಸಿಬ್ಬಂದಿಗಳನ್ನು ತರಾಟೆಗೆ ತೆಗೆದುಕೊಂಡು ವಿದ್ಯುತ್ ಸಂಪರ್ಕ ಕಡಿತಗೊಳಿಸುವ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಉದಯವಾಹಿನಿ ಚಿತ್ರ

ದೊಡ್ಡಿಂದುವಾಡಿ ಚೆಸ್ಕಾಂ ವ್ಯಾಪ್ತಿಯಲ್ಲಿ ಬರುವ ಕಾಮಗೆರೆ ಕೊಂಗರಹಳ್ಳಿ ಸಿಂಗಾನಲ್ಲೂರು ದೊಡಿಂದು ವಾಡಿ ಸೇರಿದಂತೆ ಇನ್ನಿತರ ಗ್ರಾಮಗಳಲ್ಲಿ ಬಹುತೇಕ ಬೇಕರಿ ಅಂಗಡಿ ಮಳಿಗೆಗಳು ಹಾಲು ಉತ್ಪನ್ನ ಮಾರಾಟ ಅಂಗಡಿಗಳು. ಮೆಡಿಕಲ್ ಕ್ಲಿನಿಕ್, ಹೋಟೇಲ್ ಗಳು ವಿದ್ಯುತ್ ಬಳಕೆಗೆ ಅವಲಂಬಿತವಾಗಿದೆ. ದಿನನಿತ್ಯ ಹೆಚ್ಚಿನ ಸಮಯ ವಿದ್ಯುತ್ ಸಂಪರ್ಕ ಕಡಿತಗೊಳಿಸುವುದರಿಂದ ಗ್ರಾಹಕರಿಗೆ ತೊಂದರೆಯಾಗುತ್ತಿದೆ. ತಿಂಗಳಾಗುತ್ತಿದ್ದಂತೆ ವಿದ್ಯುತ್ ಬಳಕೆಯ ಬಿಲ್ ಪಾವತಿಸುವಂತೆ ಚೆಸ್ಕಾಂ ಇಲಾಖೆ ಅಧಿಕಾರಿ ಸಿಬ್ಬಂದಿಗಳು ಪಟ್ಟು ಹಿಡಿಯುತ್ತಾರೆ. ಬಿಲ್ ಪಾವತಿ ಮಾಡದಿದ್ದರೆ ವಿದ್ಯುತ್ ಸಂಪರ್ಕ ಕಟ್ ಮಾಡುತ್ತಾರೆ. ಆದರೆ ಸರಿಯಾದ ಸಮರ್ಪಕವಾದ ರೀತಿ ವಿದ್ಯುತ್ ಪೂರೈಕೆ ಮಾಡುತ್ತಿಲ್ಲ. ಪದೇ ಪದೇ ವಿದ್ಯುತ್ ಸಂಪರ್ಕ ಕಟ್ ಮಾಡುವುದರಿಂದ ಹಾಲಿನ ಉತ್ಪನ್ನಗಳು ಬೇಕರಿ ತಿಂಡಿ ತಿನಿಸುಗಳು ಹಾಳಾಗುತ್ತವೆ ಎಂದು ಅಸಮಾಧಾನ ವ್ಯಕ್ತಪಡಿಸಿ ಇನ್ನಾದರೂ ಸರಿಯಾದ ರೀತಿಯಲ್ಲಿ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಆಗ್ರಹಿಸಿದರು.

> ಸಹಾಯಕ ಕಿರಿಯ ಅಭಿಯಂತರ ರವಿಕುಮಾರ್ ಅವರು ಪ್ರತಿಕ್ರಿಯಿಸಿ ತಾಂತ್ರಿಕ ದೋಷಗಳಿಂದ ವಿದ್ಯುತ್ ಸಂಪರ್ಕ ಕಡಿತಗೊಳ್ಳುತ್ತದೆ. ಮುಂದಿನ ದಿನಗಳಲ್ಲಿ ಇಂತಹ ಯಾವುದೇ ರೀತಿ ಸಮಸ್ಯೆಗಳು ಬಾರದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

ಈ ವೇಳೆ ಕಾಮಗೆರೆ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರವಿ ಬೇಕರಿ, ಹಾಲು ಉತ್ಪನ್ನಗಳ ಮಾರಾಟಗಾರರು ಕೆ.ಬಿ ಮಧು, ಕೊಂಗರಹಳ್ಳಿ ಪ್ರದೀಪ್ ಕುಮಾರ್, ಶಿವಕುಮಾರ್, ರಾಜೇಶ್, ಆಟೋ ರಾಜು, ಹೋಟೆಲ್ ನಾಗೇಶ್ ಇನ್ನಿತರರಿದ್ದರು.



## ಮಿನಿ ನ್ಯೂಸ್

### ಬಿಜೆಪಿ ವಿರೋಧಕ್ಕೆ ಬೆಲೆ ಕೊಡಲ್ಲ: ಜಾತಿಗಣತಿ ಪರ ಯತೀಂದ್ರ ಸಿದ್ದು ಬ್ಯಾಟಿಂಗ್

• ಉದಯವಾಹಿನಿ, ಮೈಸೂರು

ಬಿಜೆಪಿಯವರು ಯಾವತ್ತೂ ಮೀಸಲಾತಿ ವಿರೋಧಿಗಳು. ಹಿಂದುಳಿದ ವರ್ಗಕ್ಕೆ ಮೀಸಲಾತಿ ಹೆಚ್ಚಾಗುತ್ತೆ ಎಂಬ ಆತಂಕ ಅವರಿಗಿದೆ. ಅದ್ದರಿಂದ ಬಿಜೆಪಿ ವಿರೋಧಕ್ಕೆ ಬೆಲೆ ಕೊಡುವುದಿಲ್ಲ ಎಂದು ಎಂಎಲ್‌ಸಿ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು. ನಂಜನಗೂಡಿನಲ್ಲಿ ಮಾತನಾಡಿದ ಯತೀಂದ್ರ ಸಿದ್ದರಾಮಯ್ಯ ಜಾತಿಗಣತಿಯನ್ನ ಈಗಾಗಲೇ ಸಚಿವ ಸಂಪುಟದಲ್ಲಿ ಮಂಡಿಸಲಾಗಿದೆ. ನಾಳೆ ಸಚಿವರ ಜೊತೆ ಚರ್ಚಿಸಿ ಸ್ವೀಕಾರ ಮಾಡುವ ಬಗ್ಗೆ ತೀರ್ಮಾನ ಕೈಗೊಳ್ಳುವುದಾಗಿ ತಿಳಿಸಿದರು.

ಕಾಂತರಾಜು ಆಯೋಗದ ವರದಿ ಶಿಫಾರಸಿನಂತೆ ಹಿಂದುಳಿದ ವರ್ಗಕ್ಕೆ ಮೀಸಲಾತಿಯನ್ನ 38 ರಿಂದ 57% ಗೆ ಹೆಚ್ಚಿಸಬೇಕೆಂದು ಹೇಳಿದೆ. ಪ್ರಮಾಣ ಹೆಚ್ಚಿಸಿದ್ರೆ ಹಿಂದುಳಿದ ವರ್ಗಕ್ಕೆ ಹೆಚ್ಚು ಮೀಸಲಾತಿ ಸಿಗುತ್ತಲ್ಲ ಎಂಬ ಕಾರಣಕ್ಕೆ ವಿರೋಧಿಸುತ್ತಿದ್ದಾರೆ. ನಮ್ಮ ಪ್ರಣಾಳಿಕೆಯಲ್ಲಿ ಜಾತಿಗಣತಿಯನ್ನ ಸ್ವೀಕಾರ ಮಾಡಿ ಜಾರಿಗೆ ತರಲು ಕೇಂದ್ರಕ್ಕೆ ಶಿಫಾರಸ್ಸು ಕಳುಹಿಸುತ್ತೇವೆ ಎಂದು ಸ್ಪಷ್ಟಪಡಿಸಿದರು. ಇದೇ ವೇಳೆ ಮೇ ತಿಂಗಳಲ್ಲಿ ಜಿಲ್ಲಾ, ತಾಲ್ಲೂಕು ಪಂಚಾಯ್ತಿ ಚುನಾವಣೆ ನಡೆಸುವ ಬಗ್ಗೆ ಖಚಿತಪಡಿಸಿದರು.

### ಬೈಕ್‌ಗೆ ಕಾರು ಡಿಕ್ಕಿ: ಮಹಿಳೆ ಸಾವು

• ಉದಯವಾಹಿನಿ, ಮಾಗಡಿ

ಬೆಂಗಳೂರು-ಮೈಸೂರು ರಸ್ತೆಯ ಪಿಇಎಸ್ ಕಾಲೇಜು ಬಳಿ ಬುಧವಾರ ಬೈಕ್‌ಗೆ ಕಾರು ಡಿಕ್ಕಿ ಹೊಡೆದು ಬೈಕ್‌ನಲ್ಲಿದ್ದ ಶಿಕ್ಷಣ ಇಲಾಖೆಯ ಮಹಿಳಾ ಸಿಬ್ಬಂದಿಯೊಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮಾಗಡಿ ಕ್ಷೇತ್ರ ಶಿಕ್ಷಣ ಅಧಿಕಾರಿ ಕಚೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕಿ ರಕ್ಷಿತ (26) ಅಪಘಾತದಲ್ಲಿ ಮೃತಪಟ್ಟಿದ್ದಾರೆ. ರಕ್ಷಿತ ಮೂಲತಃ ಹಾಸನ ಜಿಲ್ಲೆಯ ಚನ್ನರಾಯಪಟ್ಟಣದವರು. ಬೆಂಗಳೂರಿನ ಬಸವನಗುಡಿ ವಿದ್ಯಾಪೀಠದ ಬಳಿ ಸಹೋದರನೊಂದಿಗೆ ಬಾಡಿಗೆ ಮನೆಯಲ್ಲಿ ವಾಸವಾಗಿದ್ದರು.ಕೆಲಸಕ್ಕಾಗಿ ಪ್ರತಿದಿನ ಬೆಂಗಳೂರಿನಿಂದ ಮಾಗಡಿಗೆ ಬಂದು ಹೋಗುತ್ತಿದ್ದರು.

ಮಾಗಡಿ ರಂಗನಾಥ ಜಾತ್ರೆ ಅಂಗವಾಗಿ ಶಾಲಾ ಶಿಕ್ಷಣ ಇಲಾಖೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಮತ್ತು ತಾಲ್ಲೂಕು ಸರ್ಕಾರಿ ನೌಕರರ ಸಂಘದ ಸಹಯೋಗದಲ್ಲಿ ನಡೆದ ಚಿತ್ರಮಂಟಪ ಉತ್ಸವದಲ್ಲಿ ಭಾಗ ವಹಿಸಿ ದೇವಾಲಯದ ಮುಂಭಾಗ ಶಿಕ್ಷಕಿಯರೊಂದಿಗೆ ನರ್ತಿಸಿ ಎಲ್ಲರ ಗಮನ ಸೆಳೆದಿದ್ದರು. ಮಾಗಡಿಯಿಂದ ಬೆಂಗಳೂರಿಗೆ ಹೊರಟಿದ್ದ ಅವರು ಬಸ್‌ನಲ್ಲಿ ಗೊಲ್ಲರಹಟ್ಟಿಗೆ ಬಂದಿದ್ದು, ಅಲ್ಲಿಂದ ತಮ್ಮ ಬೈಕ್‌ನಲ್ಲಿ ವಿದ್ಯಾಪೀಠದತ್ತ ತೆರಳುವಾಗ ಈಗ ಘಟನೆ ನಡೆದಿದೆ.ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ಸೇರಿದಂತೆ ತಾಲ್ಲೂಕು ಶಿಕ್ಷಣ ಇಲಾಖೆ ಮೃತರಿಗೆ ಶ್ರದ್ಧಾಂಜಲಿ ಕೋರಿದ್ದಾರೆ.

### ತಡೆಗೋಡೆ ಉರುಳಿ ಬಿದ್ದು ಆಟೊ ಚಾಲಕ ಸಾವು

• ಉದಯವಾಹಿನಿ, ಶಿಡ್ಲಘಟ್ಟ

ಮೆಟ್ರೋ ಕಾಮಗಾರಿಗೆ ಲಾರಿಯಲ್ಲಿ ಸಾಗಿಸುತ್ತಿದ್ದ ವಯಾಡಕ್ಟ್ (ಬೃಹದಾಕಾರದ ತಡೆಗೋಡೆ) ಉರುಳಿ ಬಿದ್ದು ಮಂಗಳವಾರ ರಾತ್ರಿ ಶಿಡ್ಲಘಟ್ಟ ಮೂಲದ ಆಟೊ ಚಾಲಕ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಬೆಂಗಳೂರಿನ ಯಲಹಂಕ ಬಳಿಯ ಕೋಗಿಲು ಕ್ರಾಸ್‌ನಲ್ಲಿ ನಮ್ಮ ಮೆಟ್ರೋ ಕಾಮಗಾರಿಗೆಂದು ಲಾರಿಯಲ್ಲಿ ತರಲಾಗುತ್ತಿದ್ದ ವಯಾಡೆಕ್ಟ್ ರಸ್ತೆಯಲ್ಲಿ ಹೋಗುತ್ತಿದ್ದ ಆಟೊ ಮೇಲೆ ಬಿದ್ದು, ಚಾಲಕ ಸಾವನಪ್ಪಿದ್ದಾನೆ.

ಶಿಡ್ಲಘಟ್ಟದ ರಹಮತ್ ನಗರದ ಖಾಸಿಂ ಸಾಬ್ (40) ಮೃತರು. ಖಾಸಿಂ ಸಾಲ ಮಾಡಿ ಹೊಸ ಆಟೊ ಖರೀದಿಸಿ 20 ದಿನವಾಗಿತ್ತು. ಶಿಡ್ಲಘಟ್ಟದಿಂದ ಬೆಂಗಳೂರಿಗೆ ಪ್ರಯಾಣಿಕರನ್ನು ಕರೆದೊಯ್ದು ನಂತರ, ಶಿಡ್ಲಘಟ್ಟಕ್ಕೆ ವಾಪಸ್ ಆಗುತ್ತಿದ್ದಾಗ ಕೋಗಿಲು ಕ್ರಾಸ್ ಬಳಿ ಘಟನೆ ನಡೆದಿದೆ. ಲಾರಿ ತಿರುವು ಪಡೆಯುವಾಗ ಈ ದುರಂತ ಸಂಭವಿಸಿದೆ. ಅವಘಡದ ಮುನ್ಸೂಚನೆ ಸಿಗುತ್ತಿದ್ದಂತೆ ಆಟೊದಲ್ಲಿದ್ದ ಪ್ರಯಾಣಿಕರು ಆಟೊದಿಂದ ಇಳಿದು ಓಡಿ ಅಪಾಯದಿಂದ ಪಾರಾಗಿದ್ದಾರೆ. ಘಟನೆ ಸ್ಥಳದಲ್ಲೇ ಲಾರಿ ಬಿಟ್ಟು ಚಾಲಕ ಪರಾರಿ ಆಗಿದ್ದಾನೆ. ಮೆಟ್ರೊ ಕಾಮಗಾರಿ ವೇಳೆ ಮುನ್ನೆಚ್ಚರಿಕಾ ಕ್ರಮಕೈಗೊಂಡಿಲ್ಲ ಎಂದು ಸ್ಥಳೀಯರು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.ಮೃತರಿಗೆ ಮೂರು ಮಕ್ಕಳಿದ್ದು ಇಬ್ಬರು ಗಂಡು, ಒಂದು ಹೆಣ್ಣು ಮಗು ಇದೆ.

### ರೇಷ್ಮೆ ಮಾರುಕಟ್ಟೆ: ಸರ್ವರ್ ಸಮಸ್ಯೆ ಬಗೆಹರಿಸಲು ಆಗ್ರಹ

• ಉದಯವಾಹಿನಿ, ಚಿಂತಾಮಣಿ

ನಗರದ ಸರ್ಕಾರಿ ರೇಷ್ಮೆಗೂಡಿನ ಮಾರುಕಟ್ಟೆಯಲ್ಲಿ ರೈತರಿಗೆ ಗೂಡಿನ ಮೊತ್ತವನ್ನು ಆನ್‌ಲೈನ್, ವೈ.ಫೈ ಪೇಮಂಟ್ ಮಾಡಲು ಅವಕಾಶ ಮಾಡಿಕೊಡಬೇಕು ಎಂದು ಮಾರುಕಟ್ಟೆಯ ರೀಲರ್ಸ್ ಸಂಘವು ಬುಧವಾರ ರೇಷ್ಮೆ ಸಹಾಯಕ ನಿರ್ದೇಶಕರಿಗೆ ಮನವಿ ಸಲ್ಲಿಸಿದೆ. ನಗರದ ಸರ್ಕಾರಿ ರೇಷ್ಮೆಗೂಡಿನ ಮಾರುಕಟ್ಟೆಯಲ್ಲಿ 2 ತಿಂಗಳ ಹಿಂದೆ ಸರ್ವರ್ ಮೂಲಕ ರೈತರ ಗೂಡಿನ ಮಾರಾಟದ ಮೊತ್ತವನ್ನು ನೇರವಾಗಿ ಅವರ ಉಳಿತಾಯ ಖಾತೆಗಳಿಗೆ ಜಮಾ ಮಾಡಲಾಗುತ್ತಿತ್ತು. ಇತ್ತೀಚೆಗೆ ಸರ್ವರ್ ಪದೇ ಪದೇ ಕೈಕೊಡುತ್ತಿರುವ ಕಾರಣ ರೀಲರ್ಸ್ ಮತ್ತು ರೈತರಿಗೂ ತೊಂದರೆ ಆಗುತ್ತಿದೆ ಎಂದು ಮನವಿಯಲ್ಲಿ ತಿಳಿಸಿದೆ.

ನಗರದ ರೇಷ್ಮೆಗೂಡಿನ ಮಾರುಕಟ್ಟೆಗೆ ಇತ್ತೀಚೆಗೆ ಹೆಚ್ಚಿನ ಲಾಟ್‌ಗಳು ಮಾರಾಟಕ್ಕೆ ಬರುತ್ತವೆ. ಶಿಡ್ಲಘಟ್ಟ ರೇಷ್ಮೆಗೂಡಿನ ಮಾರುಕಟ್ಟೆಯಲ್ಲಿ ಇರುವ ಎಲ್ಲ ಸೌಲಭ್ಯಗಳನ್ನು ಇಲ್ಲಿಯೂ ಒದಗಿಸಬೇಕು. ರೈತರ ಖಾತೆಗಳಿಗೆ ನೇರ ಪಾವತಿ ಮಾಡಿದರೆ ರೀಲರ್ಸ್, ರೈತರಿಗೂ ಅನುಕೂಲವಾಗುತ್ತದೆ. ಒಂದು ತಿಂಗಳ ಹಿಂದೆಯೇ ಈ ಬಗ್ಗೆ ಮನವಿ ಸಲ್ಲಿಸಿದ್ದರೂ ಕ್ರಮಕೈಗೊಂಡಿಲ್ಲ. ಆದಷ್ಟು ಬೇಗ ನ್ಯೂನತೆ ಸರಿಪಡಿಸಬೇಕು ಮತ್ತು ನ್ಯಾಯವಾದ ಬೇಡಿಕೆಗಳನ್ನು ಈಡೇರಿಸಬೇಕು. ಇಲ್ಲದಿದ್ದರೆ ಹೋರಾಟದ ಮಾರ್ಗ ಅನಿವಾರ್ಯವಾಗುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

### ಬೆಲೆ ಏರಿಕೆ ಖಂಡಿಸಿ ಕೈ ಪ್ರತಿಭಟನೆ

• ಉದಯವಾಹಿನಿ, ಗುಡಿಬಂಡೆ

ಕೇಂದ್ರ ಸರ್ಕಾರ ಗ್ಯಾಸ್, ಪೆಟ್ರೋಲ್ ಬೆಲೆ ಏರಿಕೆ ಮೂಲಕ ಜನ ಸಾಮಾನ್ಯರ ಬದುಕಿಗೆ ಹೊರೆಯಾಗುವಂತೆ ಮಾಡಿದೆ ಎಂದು ಆರೋಪಿಸಿ ಯುವ ಕಾಂಗ್ರೆಸ್ ಕಾರ್ಯಕರ್ತರು, ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಪಟ್ಟಣದ ತಾಲ್ಲೂಕು ಕಚೇರಿಯ ಎದುರು ಜಮಾಯಿಸಿದ ಕಾರ್ಯಕರ್ತರು, ಕೆಲಕಾಲ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೇಶವರೆಡ್ಡಿ ಮಾತನಾಡಿ, ಕೇಂದ್ರ ಸರ್ಕಾರ ಬಡವರ ಬದುಕಿನ ಮೇಲೆ ಚೆಲ್ಲಾಟವಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಶಿಸ್ತು, ಸ್ವಚ್ಛತೆ ಕಾಪಾಡಲು, ರೋಗಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಇದನ್ನು ಪಾಯೋಗಿಕವಾಗಿ ಜಾರಿ

# ಜಿಲ್ಲಾಉಸ್ತುವಾರಿ ಸಚಿವರಿಂದ ಪ್ರಾಯೋಗಿಕ ಚಾಲನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಸರಕಾರಿ ಆಸ್ಪತ್ರೆ ಎಂದರೆ ಮೂಗು ಮುರಿಯುವವರೇ ಹೆಚ್ಚು. ಅದರಲ್ಲೂ ಬಹುತೇಕ ಆಸ್ಪತ್ರೆಗಳಲ್ಲಿ ಶಿಸ್ತು, ಸ್ವಚ್ಛತೆ ಮರೀಚಿಕೆ ಎಂಬುದು ಎಲ್ಲರಿಗೂ ಗೊತ್ತು. ಹೀಗಾಗಿ ಸರಕಾರಿ ಆಸ್ಪತ್ರೆಗಳಲ್ಲೂ ಸ್ವಚ್ಛತೆ, ಶಿಸ್ತು, ರೋಗಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಆಸ್ಪತ್ರೆ ಸಿಬ್ಬಂದಿಗೆ ಸಮವಸ್ತ್ರ ಕಡ್ಡಾಯ ಮಾಡಲಾಗಿದೆ. ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಸರಕಾರಿ ಆಸ್ಪತ್ರೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರ ಸಹಕಾರದೊಂದಿಗೆ ಪ್ರಾಯೋಗಿಕವಾಗಿ ಆಸ್ಪತ್ರೆಯ ಎಲ್ಲಾ ಸಿಬ್ಬಂದಿಗೆ ಸಮವಸ್ತ್ರ ನೀಡಲಾಗಿದೆ. ವೈದ್ಯರು, ದಾದಿಯರು, ಪ್ರಯೋಗಾಲಯ ಸಿಬ್ಬಂದಿ, ಸ್ವಚ್ಛತಾ ಸಿಬ್ಬಂದಿ ಹೀಗೆ ಎಲ್ಲರಿಗೂ ಪ್ರತ್ಯೇಕ ಬಣ್ಣಗಳ ಸಮವಸ್ತ್ರ ನೀಡಲಾಗಿದ್ದು, ಕಡ್ಡಾಯವಾಗಿ ಧರಿಸಿ ಆಸ್ಪತ್ರೆಗೆ ಬರಲು ಸೂಚನೆ ನೀಡಲಾಗಿದೆ.

**ಸಚಿವರ ಕೊಡುಗೆ:** ಇತ್ತೀಚೆಗೆ ತಾಲ್ಲೂಕು ಸರಕಾರಿ ಆಸ್ಪತ್ರೆಯಲ್ಲಿ ನಡೆದ ಸಭೆಯಲ್ಲಿಈ ಕುರಿತು ಚರ್ಚೆಯಾಗಿದ್ದು, ಜಿಲ್ಲಾಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಾನೇ ಸಮವಸ್ತ್ರ ಕೊಡಿಸುವ ಭರವಸೆ ನೀಡಿದ್ದು ಅದರಂತೆ ಎಲ್ಲಾ ಸಿಬ್ಬಂದಿಗೂ ನೀಡಲಾಗಿದೆ. ಈಗ ಆಸ್ಪತ್ರೆಗೆ ಪ್ರತ್ಯೇಕ ಬಣ್ಣದ ಸಮವಸ್ತ್ರ ತೊಟ್ಟು ಸಿಬ್ಬಂದಿ ಆಗಮಿಸುತ್ತಿದ್ದು,



ಉದಯವಾಹಿನಿ ಚಿತ್ರ

ವಿಸ್ತರಿಸುವ ಸಾಧ್ಯತೆಯೂ ಇದೆ

ಆಸ್ಪತ್ರೆಯಲ್ಲಿ ಹೊಸತನದಿಂದ ಕೂಡಿದೆ. ಈ ಮೂಲಕ ಶಿಸ್ತು, ಸ್ವಚ್ಛತೆ, ರೋಗಿಗಳಿಗೂ ಸಾಕಷ್ಟು ಅನುಕೂಲವಾಗುತ್ತಿದೆ.

**ಏಕ ಸಮವಸ್ತ್ರ:** ಸಾಮಾನ್ಯವಾಗಿ ಸರಕಾರಿ ಆಸ್ಪತ್ರೆಯಲ್ಲಿ ಯಾವುದೇ ಸಮವಸ್ತ್ರ ಇರಲ್ಲ. ಹೀಗಾಗಿ ಯಾರು ವೈದ್ಯ, ಯಾರು ನರ್ಸ್, ಸ್ವಚ್ಛತಾ ಸಿಬ್ಬಂದಿ.. ಈಗ ಗೊಂದಲ ಇದ್ದಿದ್ದೆ. ಆದರೆ ಖಾಸಗಿ ಆಸ್ಪತ್ರೆಗಳಲ್ಲಿ ಎಲ್ಲವೂ ಕಟ್ಟುನಿಟ್ಟಾಗಿರುತ್ತದೆ. ಸ್ವಚ್ಛತೆ, ಶಿಸ್ತಿಗೆ ಪ್ರಾಮುಖ್ಯತೆ ನೀಡಲಾಗುತ್ತಿದೆ. ಹೀಗಾಗಿ ಆಸ್ಪತ್ರೆಗಳು ಕೂಡಾ ರೋಗಿಗಳ ಸ್ನೇಹಿಯಾಗಿವೆ. ಆದರೆ ಸರಕಾರಿ ಆಸ್ಪತ್ರೆಗಳಲ್ಲಿ ಇದ್ಯಾವುದಕ್ಕೂ ಅವಕಾಶವಿಲ್ಲ. ಹೀಗಾಗಿ ಸಾಕಷ್ಟು ಗೊಂದಲಗಳು

> ಸರಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆ ಇಲ್ಲ, ಶಿಸ್ತಿಲ್ಲ ಎಂಬ ಅಪವಾದ ಇದೆ. ಆದರೆ ನಮ್ಮ ಸರಕಾರಿ ಆಸ್ಪತ್ರೆಗಳಲ್ಲೂ ಶಿಸ್ತು, ಸ್ವಚ್ಛತೆ ಕಾಪಾಡಬೇಕು ಎಂಬ ದೃಷ್ಟಿಯಿಂದ ನಮ್ಮ ತಾಲ್ಲೂಕಿನ ಸರಕಾರಿ ಆಸ್ಪತ್ರೆಯ ಎಲ್ಲಾ ಸಿಬ್ಬಂದಿಗೂ ಪ್ರತ್ಯೇಕವಾಗಿ ಸಮವಸ್ತ್ರಗಳನ್ನು ವಿತರಿಸಲಾಗಿದೆ. ಖಾಸಗಿ ಆಸ್ಪತ್ರೆಗಳಂತೆ ನಮ್ಮ ಸರಕಾರಿ ಆಸ್ಪತ್ರೆಗಳಲ್ಲೂ ಶಿಸ್ತು, ಸ್ವಚ್ಛತೆ ಹಾಗೂ ರೋಗಿಗಳಿಗೆ ಅನುಕೂಲವಾಗಬೇಕು ಎಂಬ ಉದ್ದೇಶದಿಂದ ಎಲ್ಲರಿಗೂ ಸಮವಸ್ತ್ರಗಳನ್ನು ಕೊಡಲಾಗಿದೆ. ಮುಂದಿನ ದಿನಗಳಲ್ಲಿಎಲ್ಲೆಡೆ ಜಾರಿಗೆ ತಂದರೆ ಅನುಕೂಲ
>
> -ಡಾ.ಎಂ.ಸಿ.ಸುಧಾಕರ್, ಜಿಲ್ಲಾಉಸ್ತುವಾರಿ ಸಚಿವ

ಇವೆ. ಸರಕಾರಿ ಆಸ್ಪತ್ರೆಯ ಎಲ್ಲಾ ಸಿಬ್ಬಂದಿಗೂ 3 ಜತೆ ಸಮವಸ್ತ್ರಗಳನ್ನು ವಿತರಿಸಲಾಗಿದೆ. ಸಾಮಾನ್ಯವಾಗಿ ಆಸ್ಪತ್ರೆಗಳಲ್ಲಿ ಸೋಂಕಿನ ಪ್ರಮಾಣ ಹೆಚ್ಚಿರುತ್ತದೆ. ಹೀಗಾಗಿ ಆಸ್ಪತ್ರೆ ಸಿಬ್ಬಂದಿ ಪ್ರತ್ಯೇಕವಾಗಿ ಸಮವಸ್ತ್ರ ಧರಿಸಿ ಸ್ವಚ್ಛಗೊಳಿಸಿಕೊಂಡರೆ ಸೋಂಕು ತಟ್ಟುವ ಅಪಾಯವೂ ಇರಲ್ಲ. ಇನ್ನೊಂದೆಡೆ ಆಸ್ಪತ್ರೆಯಲ್ಲಿನ ರೋಗಿಗಳು ಕೂಡಾ ಸಮವಸ್ತ್ರ ಆಧರಿಸಿ ಯಾರಿವರು ಎಂಬುದನ್ನು ಗುರುತು ಹಿಡಿಯಲು ಸಾಧ್ಯ

> ಚಿಂತಾಮಣಿ ಸರಕಾರಿ ಆಸ್ಪತ್ರೆಯ ಸಭೆಯಲ್ಲಿ ಚರ್ಚೆಯಾದಂತೆ ಜಿಲ್ಲಾಉಸ್ತುವಾರಿ ಸಚಿವರೇ ವೈದ್ಯರು, ದಾದಿಯರು ಹಾಗೂ ಎಲ್ಲಾ ಸಿಬ್ಬಂದಿಗೂ ಪ್ರತ್ಯೇಕ 3 ಜೊತೆ ಸಮವಸ್ತ್ರಗಳನ್ನು ವಿತರಿಸಿದ್ದಾರೆ. ಶಿಸ್ತು, ಸ್ವಚ್ಛತೆ ಕಾಪಾಡಲು, ರೋಗಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಇದನ್ನು ಪಾಯೋಗಿಕವಾಗಿ ಜಾರಿ ಮಾಡಲಾಗಿದೆ
>
> - ಡಾ.ಮಹೇಶ್‌ಕುಮಾರ್, ಜಿಲ್ಲಾಆರೋಗ್ಯಾಧಿಕಾರಿ

ವಾಗುತ್ತದೆ. ಈ ಎಲ್ಲಾ ಗೊಂದಲಗಳಿಗೆ ಮುಕ್ತಿ ಹಾಡಲೆಂದೇ ಸರಕಾರಿ ಆಸ್ಪತ್ರೆಗಳಲ್ಲಿ ಸಮವಸ್ತ್ರ ಪರಿಚಯಿಸುವ ಯತ್ನಕ್ಕೆ ಚಿಂತಾಮಣಿ ತಾಲ್ಲೂಕಿನಲ್ಲಿ ಪ್ರಾಯೋಗಿಕವಾಗಿ ಎಲ್ಲರಿಗೂ ಸಮವಸ್ತ್ರ ನೀಡಲಾಗಿದ್ದು, ಕಡ್ಡಾಯವಾಗಿ ಪಾಲಿಸಲು ಸೂಚನೆ ನೀಡಲಾಗಿದೆ. ಸ್ವತಃ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರ ಸಮ್ಮುಖದಲ್ಲಿ ಈ ವಿನೂತನ ಪ್ರಯೋಗಕ್ಕೆ ಚಿಂತಾಮಣಿ ಸರಕಾರಿ ಆಸ್ಪತ್ರೆಯಲ್ಲಿ ಚಾಲನೆ ನೀಡಲಾಗಿದೆ. ಜಿಲ್ಲಾಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ಇದೇ ರೀತಿ ಎಲ್ಲಾ ಸರಕಾರಿ ಆಸ್ಪತ್ರೆಗಳಲ್ಲಿ ಜಾರಿಗೆ ತರುವಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಮನವಿ ಮಾಡಿದ್ದು, ಪರಿಶೀಲಿಸುವ ಭರವಸೆ ನೀಡಿದ್ದಾರೆ. ಸದ್ಯ ಚಿಂತಾಮಣಿ ಸರಕಾರಿ ಆಸ್ಪತ್ರೆಯಲ್ಲಿ ಈ ಪ್ರಾಯೋಗಿಕ ಕ್ರಮವನ್ನು ಜಾರಿಗೆ ತರಲಾಗಿದ್ದು, ಮುಂದಿನ ದಿನಗಳಲ್ಲಿ ವಿಸ್ತರಿಸುವ ಸಾಧ್ಯತೆಯೂ ಇದೆ.

## ಬೇಸಿಗೆ ರಜೆಗಳು ಮಕ್ಕಳಿಗೆ ಒಂದು ಮನಸ್ಸಿಗೆ ಮುದ ನೀಡುವ ವೇದಿಕೆಯಾಗಲಿ

• ಉದಯವಾಹಿನಿ, ಚಾಮರಾಜನಗರ

ಬೇಸಿಗೆ ರಜೆಗಳು ಮಕ್ಕಳಿಗೆ ಒಂದು ಮನಸ್ಸಿಗೆ ಮುದ ನೀಡುವ ವೇದಿಕೆಯಾಗಬೇಕು ಮನೋಬಲ ವಿಚಾರಶಕ್ತಿ ಕಲಿಯುವ ಆಸಕ್ತಿಯನ್ನು ಹೆಚ್ಚಿಸಿಕೊಳ್ಳಲು ಬೇಸಿಗೆ ರಜೆಗಳು ಪೂರಕ ಎಂದು ಮನೋಬಲ ತರಬೇತುದಾರರಾದ ಬ್ರಹ್ಮಾಕುಮಾರಿ ದಾನೇಶ್ವರೀಜೀ ಅಭಿಪ್ರಾಯಪಟ್ಟರು. ಅವರು ಅಂತರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಪ್ರಕಾಶ ಭವನದಲ್ಲಿ ಏರ್ಪಡಿಸಿದ್ದ ಮೂರು ದಿನಗಳ ಬೇಸಿಗೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡುತ್ತಿದ್ದರು. ಭಗವಂತನ ಸೃಷ್ಟಿಯಲ್ಲಿ ಅತ್ಯಂತ ಸುಂದರವಾದ ಹೂಗಳು ಎಂದರೆ ಮಕ್ಕಳು. ಮಕ್ಕಳ ಜೀವನ ಬಹಳ ಸುಂದರ. ಮಕ್ಕಳೆಂದರೆ ಭಗವಂತ ಸಮಾನ ಅವರ ಮನಸ್ಸು ಅಷ್ಟು ಶುದ್ಧವಾಗಿರುತ್ತೆ ನಿರ್ಮಲವಾಗಿರುತ್ತದೆ ಪ್ರತಿಯೊಂದು ಮಗುವಿನಲ್ಲಿ ಪ್ರತಿಭೆ ಇರುತ್ತದೆ ಪ್ರತಿಭೆ ಎನ್ನುವುದು ಅನರ್ಘ್ಯ ರತ್ನ.ಆ ಪ್ರತಿಭೆಗೆ ಒಂದು ವೇದಿಕೆ ಬೇಕು ಆವಾಗ ಮಾತ್ರ ಅವರು ಮುಂದೆ ಬರಲು ಸಾಧ್ಯ ಎಂದರು.

ಪರಿಸರ ಪ್ರೇಮಿ ಸಿ.ಎಂ. ವೆಂಕಟೇಶ್



ಉದಯವಾಹಿನಿ ಚಿತ್ರ

ಮಾತನಾಡಿ ಮಕ್ಕಳು ಎಲ್ಲಿ ಸೇರುತ್ತಾರೋ ಅಲ್ಲಿ ಮರ-ಗಿಡಗಳ ಪರಿಚಯ ಕೊಡುವುದು ನನ್ನ ಹವ್ಯಾಸ ಮರ ಗಿಡಗಳನ್ನು ಬೆಳೆಸಿರಿ ಜೀವ ಸಂಕುಲವನ್ನು ಉಳಿಸಿರಿ ಇದು ಪ್ರತಿಯೊಬ್ಬರ ಧ್ಯೇಯವಾಕ್ಯವಾಗಬೇಕು ಎಂದು ತಿಳಿಸಿದರು.

ಇಂದಿನ ಮಕ್ಕಳೇ ನಾಳಿನ ಭವ್ಯ ಭಾರತದ ಶಿಲ್ಪಿಗಳಾದ್ದರಿಂದ ಮಕ್ಕಳು ಹೊಸ ವಿಚಾರಗಳನ್ನು ಕಲಿತು, ಸಾಧನೆ ಮಾಡಲು ಸಹಾಯವಾಗಲಿದೆ. ಮಕ್ಕಳಲ್ಲಿ ರಾಷ್ಟ್ರಭಕ್ತಿಯನ್ನು ತುಂಬುವ ವಿಚಾರಗಳು, ಪರೋಪಕಾರದ ಗುಣಗಳು, ತಂದೆ- ತಾಯಿಗಳಿಗೆ, ಗುರು-ಹಿರಿಯರೊಂದಿಗೆ ಯಾವ ರೀತಿ ಗೌರವ ಕೊಡಬೇಕು. ದೇಶಕ್ಕಾಗಿ, ಸಮಾಜಕ್ಕಾಗಿ ಏನು ಮಾಡಬೇಕು ಎಂಬ ವಿಚಾರಗಳನ್ನು ಶಿಬಿರಗಳು ತಿಳಿಸಿಕೊಡುತ್ತದೆ ಎಂದರು.

> ಮಕ್ಕಳು ತಮ್ಮಲ್ಲಿ ಸುಪ್ತವಾಗಿರುವ ಪ್ರತಿಭೆಯನ್ನು ಹೊರಚೆಲ್ಲಲು ಶಿಬಿರವು ಸಹಕಾರಿಯಾಗಿರುವ ಕಾರಣ ಮಕ್ಕಳು ಮುಕ್ತವಾಗಿ ತಮ್ಮಲ್ಲಿ ಅಡಗಿರುವ ಪ್ರತಿಭೆಯನ್ನು ಈ ಶಿಬಿರದಲ್ಲಿ ಹೊರ ತರಲು ಪ್ರಯತ್ನಿಸಬೇಕು. ಮೊಗ್ಗಿನಂತಿರುವ ಮಕ್ಕಳ ಮನಸ್ಸು ಹೂವಿನಂತೆ ಅರಳುವಂತೆ ಮಾಡಲು ಬೇಸಿಗೆ ಶಿಬಿರವು ನೆರವಾಗಲಿದೆ
>
> -ಟಿ.ಜೆ. ಸುರೇಶ್
>
> ಜಿಲ್ಲಾ ತರಬೇತಿ ಸಂಯೋಜಕ

ಅರಣ್ಯ ಇಲಾಖೆಯ ನಿವೃತ್ತ ಅಧಿಕಾರಿ ಪುಟ್ಟಶೇಖರಮೂರ್ತಿ ಮಾತನಾಡಿ ಮಕ್ಕಳು ಕಾಡಿನ ಬಗ್ಗೆ ನಿಕಟ ಸಂಬಂದ ಹೊಂದಿ ಅದರ ಪೂರ್ಣ ಮಾಹಿತಿ ಅರ್ಥಮಾಡಿಕೊಳ್ಳುವುದು ಬಹಳ ಒಳಿತು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಓಂ ಶಾಂತಿ ನ್ಯೂಸ್ ಸರ್ವಿಸ್‌ನ ಬಿಕೆ ಆರಾಧ್ಯ, ನ್ಯಾಯಾಂಗ ಇಲಾಖೆ ಶ್ರೀನಿವಾಸ್, ಟೀಚರ್ ನಾಗರಾಜ್, ಶೋಭಾ, ಶಿವಕಮಲ, ಜಯಲಕ್ಷ್ಮಿ, ಕಮಲಮ್ಮ ಹಾಜರಿದ್ದರು.

## ಲಾರಿ ಮುಷ್ಕರ: ಸಿಗದ ಪೂರ್ಣ ಬಲ

• ಉದಯವಾಹಿನಿ, ತುಮಕೂರು

ಡೀಸೆಲ್ ಬೆಲೆ ಏರಿಕೆ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮಧ್ಯರಾತ್ರಿಯಿಂದ ಜಿಲ್ಲೆಯಲ್ಲಿ ಲಾರಿ ಮುಷ್ಕರ ಆರಂಭವಾಗಿದೆ. ಒಂದು ಸಂಘ ಮುಷ್ಕರಕ್ಕೆ ಬೆಂಬಲ ನೀಡಿದ್ದರೆ, ಮತ್ತೊಂದು ಸಂಘ ಹೋರಾಟದಲ್ಲಿ ಭಾಗವಹಿಸಿಲ್ಲ. ಹಾಗಾಗಿ ಜಿಲ್ಲೆಯಲ್ಲಿರುವ ಲಾರಿಗಳಲ್ಲಿ ಅರ್ಧದಷ್ಟು ಸಂಖ್ಯೆಯ ಲಾರಿ ಮಾಲೀಕರಷ್ಟೇ ಮುಷ್ಕರದಲ್ಲಿ ಭಾಗವಹಿಸಿದ್ದಾರೆ. ಜಿ.ಆರ್.ಷಣ್ಮುಖಪ್ಪ ನೇತೃತ್ವದ ರಾಜ್ಯ ಲಾರಿ ಮಾಲೀಕರು ಹಾಗೂ ಏಜೆಂಟರ ಸಂಘ ಪ್ರತಿಭಟನೆಯಲ್ಲಿ ಭಾಗವಹಿಸಿದೆ. ಬಿ.ಚನ್ನಾರೆಡ್ಡಿ ನೇತೃತ್ವದ ಕರ್ನಾಟಕ ಲಾರಿ ಮಾಲೀಕರ ಸಂಘಗಳ ಒಕ್ಕೂಟ ಲಾರಿ ಮುಷ್ಕರದಿಂದ ದೂರ ಉಳಿದಿದೆ.

ಡೀಸೆಲ್ ಮೇಲಿನ ಸೆಸ್ ಕಡಿತ ಮಾಡಬೇಕು, ಅಂತರರಾಜ್ಯ ಚೆಕ್ ಪೋಸ್ಟ್ ರದ್ದುಪಡಿಸಬೇಕು, ರಾಜ್ಯ ಹೆದ್ದಾರಿಗಳಲ್ಲಿರುವ ಟೋಲ್ ಪ್ಲಾಜಾ ಮುಚ್ಚುವಂತೆ ಆಗ್ರಹಿಸಿ ಲಾರಿ ಮಾಲೀಕರು ಮುಷ್ಕರಕ್ಕೆ ಇಳಿದಿದ್ದಾರೆ. ಗೂಡ್‌ಶೆಡ್‌ನಿಂದ ಸರಕು ಸಾಗಣೆ, ಹಾಲು, ಹಣ್ಣು, ತರಕಾರಿ ಸಾಗಣೆಗೆ ಸದ್ಯಕ್ಕೆ ಯಾವುದೇ ವ್ಯತ್ಯಯವಾಗಿಲ್ಲ.

ಒಂದು ಬಣದ ಲಾರಿ ಮಾಲೀಕರು ಮುಷ್ಕರದಲ್ಲಿ ಪಾಲ್ಗೊಂಡಿದ್ದರಿಂದ ಸಾಕಷ್ಟು ಸಂಖ್ಯೆಯ ಲಾರಿಗಳು ರಸ್ತೆಗೆ



ಉದಯವಾಹಿನಿ ಚಿತ್ರ

ಇಳಿಯಲಿಲ್ಲ. ನಗರದ ಹೊರ ವಲಯದ ರಿಂಗ್ ರಸ್ತೆ, ಲಾರಿ ನಿಲ್ದಾಣಗಳಲ್ಲಿ ನಿಂತಿದ್ದು ಮಂಗಳವಾರ ಕಂಡು ಬಂತು. ಹೋರಾಟ ತೀವ್ರಗೊಂಡರೆ ಬುಧವಾರದಿಂದ ಸ್ವಲ್ಪ ಮಟ್ಟಿಗೆ ಸಮಸ್ಯೆ ತೀವ್ರ ಸ್ವರೂಪ ಪಡೆದುಕೊಳ್ಳಬಹುದು ಎನ್ನಲಾಗಿದೆ. ನಮ್ಮ ಸಂಘ ಮುಷ್ಕರದಲ್ಲಿ ಭಾಗವಹಿಸಿಲ್ಲ. ನಮ್ಮ ಸಂಘದ ಸದಸ್ಯರ ಲಾರಿಗಳು ಎಂದಿನಂತೆ ಸಂಚರಿಸುತ್ತಿವೆ ಎಂದು ಲಾರಿ ಮಾಲೀಕರ ಸಂಘಗಳ ಒಕ್ಕೂಟ ಜಿಲ್ಲಾ ಘಟಕದ ಅಧ್ಯಕ್ಷ ಪ್ರಸನ್ನ ಕುಮಾರ್ ಸ್ಪಷ್ಟಪಡಿಸಿದರು.

**ಸಹಾಯವಾಣಿ:** ಲಾರಿ ಮುಷ್ಕರದ ಹಿನ್ನೆಲೆಯಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿಯಲ್ಲಿ ಸಹಾಯವಾಣಿ ಆರಂಭಿಸಿದ್ದು ದೂರವಾಣಿ 0816-2278473 ಸಂಪರ್ಕಿಸಬಹುದು. ಹಾಲು ಆಮ್ಲಜನಕ ಸಿಲಿಂಡರ್ ಮತ್ತಿತರ ಅಗತ್ಯ ವಸ್ತುಗಳ ಪೂರೈಕೆಯಲ್ಲಿ ತೊಂದರೆಯಾದರೆ ಸಂಪರ್ಕಿಸಬಹುದು. ಇದು ದಿನದ 24 ಗಂಟೆ ಕಾರ್ಯ ನಿರ್ವಹಿಸಲಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಎ.ವಿ.ಪ್ರಸಾದ್ ತಿಳಿಸಿದ್ದಾರೆ.

## 21ರಿಂದ ಹದಿನಾಲ್ಕು ಕೂಟ ದೇವರುಗಳ ಜಾತ್ರಾ ಮಹೋತ್ಸವ

• ಉದಯವಾಹಿನಿ, ನಾಗಮಂಗಲ

ತಾಲ್ಲೂಕಿನ ಬಿಂಡಿಗನವಿಲೆ ಹೋಬಳಿಯ ದೊಡ್ಡಾಬಾಲ ಗ್ರಾಮದಲ್ಲಿ 39 ವರ್ಷಗಳ ನಂತರ ಹುಚ್ಚಪ್ಪಸ್ವಾಮಿ ದೇವರ ಮತ್ತು ಹದಿನಾಲ್ಕು ಕೂಟದ ಬೀರೇ ದೇವರುಗಳ ಜಾತ್ರಾ ಮಹೋತ್ಸವವು 21ರಿಂದ ಪ್ರಾರಂಭವಾಗಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಜಾತ್ರಾ ಮಹೋತ್ಸವದ ಅಂಗವಾಗಿ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ದೊರೆ ದೊಡ್ಡಯ್ಯಸ್ವಾಮಿ, ಕಾಟಣ್ಣ ಸ್ವಾಮಿ, ದಳವಾಯಿ ದೊಡ್ಡಯ್ಯಸ್ವಾಮಿ, ಮಂತ್ರಿ ಹುಚ್ಚಪ್ಪ ಸ್ವಾಮಿ, ಮುಂಗೊಂಡ ಮುಂದಲಾರತಿ ಚಿಕ್ಕಯ್ಯಸ್ವಾಮಿ, ಗಾಳಿಗಂಡ ಹುಚ್ಚಪ್ಪಸ್ವಾಮಿ, ನೇರಲಕೆರಮ್ಮ ದೇವಿ, ಹೊಂಗನೂರಮ್ಮದೇವಿ, ಸಿದ್ದರಾಮೇಶ್ವರಸ್ವಾಮಿ, ಕದಬಳ್ಳರಾಯ ಸ್ವಾಮಿ, ಕರಿಯಾಳರಾಯಸ್ವಾಮಿ, ಮಲ್ಲೇಶ್ವರ ಸ್ವಾಮಿ, ಬೋರೇದೇವರು ಸೇರಿದಂತೆ ರಾಮದೇವರ ಉತ್ಸವ ಮೂರ್ತಿಗಳು ಹದಿನಾಲ್ಕು ಕೂಟದ ದೇವರುಗಳ ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಲಿವೆ.

ಏ.21ರಂದು ಜರುಗುವ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆಗೆ ಕೃಷಿ ಸಚಿವ ಎನ್. ಚಲುವರಾಯಸ್ವಾಮಿ, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ವಿಧಾನಪರಿಷತ್ ಸದಸ್ಯರಾದ ಎಚ್. ವಿಶ್ವನಾಥ್, ಯತೀಂದ್ರ ಸಿದ್ದರಾಮಯ್ಯ, ಮಾಜಿ ಸಚಿವ ಎಚ್.ಎಂ. ರೇವಣ್ಣ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ. ಅಂದು ಹದಿನಾಲ್ಕು ಕೂಟದ ದೇವರುಗಳ ಧೂಪ-ಆರತಿಯನ್ನು ವಾದ್ಯಗೋಷ್ಠಿಯೊಂದಿಗೆ ಗ್ರಾಮಕ್ಕೆ ಅದ್ದೂರಿಯಾಗಿ ಸ್ವಾಗತಿಸಲಾಗುವುದು. ಬಳಿಕ ಅನ್ನ ಸಂತರ್ಪಣೆ ಮಾಡಲಾಗುವುದು. ರಾತ್ರಿ 1ರಿಂದ ಬೆಳಿಗ್ಗೆ 4 ಗಂಟೆಯವರೆಗೆ ಬಾಯಿಬೀಗ ಸೇವೆ ಜರುತ್ತದೆ. ಅಲ್ಲದೇ ಊರಿನ ಪ್ರಮುಖ ಬೀದಿಗಳಲ್ಲಿ ದೇವರುಗಳ ಮೆರವಣಿಗೆ,



ಉದಯವಾಹಿನಿ ಚಿತ್ರ

ನಂದಿಧ್ವಜ ಕುಣಿತ, ಹಲಗೆ ಕುಣಿತ, ಮದ್ದುಗುಂಡು ಬಾಣ ಬಿರುಸಿನೊಂದಿಗೆ ಬೆಳಿಗ್ಗೆ ಜಾವ 4 ಗಂಟೆಗೆ ಗಂಗಾಸ್ನಾನ, ಹೂವು ಹೊಂಬಾಳೆಧಾರಣೆ ಮಾಡಲಾಗುವುದು. 5ಕ್ಕೆ ಕೊಂಡ ಹಾಯುವ ಕಾರ್ಯಕ್ರಮದೊಂದಿಗೆ ದೊಡ್ಡಾಬಾಲದ ಮಂತ್ರಿ ಹುಚ್ಚಪ್ಪಸ್ವಾಮಿಯ ಬೇಡಿಕೆ ಉತ್ಸವವನ್ನು (ರಾಶಿಪೂಜೆ) ಏರ್ಪಡಿಸಲಾಗಿದೆ.

22ರಂದು ಮೂಲ ವಿಗ್ರಹಕ್ಕೆ ಅಭಿಷೇಕ, ಮಹಾ ಮಂಗಳಾರತಿ, ಮುಡಿಸೇವೆ, ಅನ್ನ ಸಂತರ್ಪಣೆಯ ವ್ಯವಸ್ಥೆ ಮಾಡಲಾಗಿರುತ್ತದೆ. ಸಂಜೆ 14 ದೇವರುಗಳ ಗಂಗಾಸ್ನಾನ, ಮಹಾಮಂಗಳಾರತಿ ಇರುತ್ತದೆ. ನಂತರ ಬೀಡಿಕೆಯವರ ಮತ್ತು ಭಕ್ತ ಆರತಿ ಸೇವೆ, ದೇವರುಗಳ ಉತ್ಸವ ಜರುಗುತ್ತದೆ. 23ರಂದು ಹುಚ್ಚಪ್ಪಸ್ವಾಮಿ ದೇವಸ್ಥಾನದಿಂದ 14 ದೇವರುಗಳ ಉತ್ಸವ ಹೊರಟು ಬನ್ನಿಮಂಟಪದಲ್ಲಿ ಸೇರುವ ಜೊತೆಗೆ ಹಣ್ಣುತುಪ್ಪ ಸೇವೆಯೊಂದಿಗೆ ಶಿವಪೂಜೆ ನಂತರ ಗ್ರಾಮದ ಕಲ್ಯಾಣಿ ಮುಂದೆ ಪಾನಕ ಸೇವೆ, ಎದುರಾರತಿ, ಮೆರವಣಿಗೆ ಜರುತ್ತದೆ. ನಂತರ ಮಧ್ಯಾಹ್ನ 1ಗಂಟೆಗೆ ಅನ್ನ ಸಂತರ್ಪಣೆ, 3 ಗಂಟೆಗೆ 14 ದೇವರುಗಳ ಬೀಳ್ಕೊಡುವ ಕಾರ್ಯಕ್ರಮದೊಂದಿಗೆ ಜಾತ್ರೆ ತೆರೆ ಬೀಳುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಶಿಥಿಲಗೊಂಡ ರಸ್ತೆಯಲ್ಲಿ ಸಂಚಾರ

• ಉದಯವಾಹಿನಿ, ಹುಳಿಯಾರು

ಹೋಬಳಿಯ ನುಲೇನೂರು ಗ್ರಾಮವನ್ನು ದಸೂಡಿ ಮುಖ್ಯರಸ್ತೆಯಿಂದ ಸಂಪರ್ಕಿಸುವ ರಸ್ತೆ ಸಂಪೂರ್ಣ ಶಿಥಿಲಗೊಂಡಿದ್ದು ಸಂಚಾರಕ್ಕೆ ತೊಂದರೆಯಾಗಿದೆ ಎಂದು ಗ್ರಾಮಸ್ಥರು ದೂರಿದ್ದಾರೆ. ತುಮಕೂರು ಜಿಲ್ಲೆಯ ಗಡಿಭಾಗವೆಂದೇ ಗುರ್ತಿಸಲ್ಪಟ್ಟಿರುವ ನುಲೇನೂರು ಗ್ರಾಮದ ಸುತ್ತ ಗುಡ್ಡಗಳು ಸುತ್ತುವರೆದಿವೆ. ಗ್ರಾಮಕ್ಕೆ ಮೂಲ ಸೌಕರ್ಯಗಳು ಮರೀಚಿಕೆಯಾಗುತ್ತಿದೆ ಎಂಬ ಆರೋಪಗಳ ನಡುವೆ ಗ್ರಾಮಕ್ಕೆ ಸಂದಿಸುವ ರಸ್ತೆ ಸಂಪೂರ್ಣ ಹಾಳಾಗಿದೆ. ದಸೂಡಿ-ಸೋಮನಹಳ್ಳಿ ಗೇಟ್ ಮುಖ್ಯರಸ್ತೆಯಿಂದ ರಂಗನಗುಡ್ಡದ ಪಕ್ಕದ ಕಟ್ಟೆಯಿಂದ ಗ್ರಾಮಕ್ಕೆ ರಸ್ತೆಯಿದೆ. ಈ ರಸ್ತೆ ಇಂದಿಗೂ ಜಲ್ಲಿ ಕಂಡಿಲ್ಲ. ಎರಡು ವರ್ಷದ ಹಿಂದೆ ಗುತ್ತಿಗೆದಾರರೊಬ್ಬರು ಸುಮಾರು ಅರ್ಧ ಕಿ.ಮೀ ಕಳಪೆ ಕಾಮಗಾರಿ ಮಾಡಿದ್ದರು. ಗ್ರಾಮ



ಉದಯವಾಹಿನಿ ಚಿತ್ರ

ತಲುಪುವ ಉಳಿದ 2 ಕಿ.ಮೀ ಸಂಪೂರ್ಣ ಹಾಳಾಗಿದೆ. ಇದುವರೆಗೂ ಜಲ್ಲಿ ಕಾಣದ ಕಾರಣ ರಸ್ತೆಯಲ್ಲಿ ಕಲ್ಲುಗಳು ತುಂಬಿ ಹೋಗಿದೆ ಎಂದರು.

ದ್ವಿಚಕ್ರ ವಾಹನ ಸೇರಿದಂತೆ ಯಾವುದೇ ವಾಹನಗಳು ಸಂಚರಿಸಲು ಸಾಧ್ಯವಾಗುವುದಿಲ್ಲ. ಇದೇ ರಸ್ತೆಯಲ್ಲಿ ಗ್ರಾಮದ ಜನರು ತಮ್ಮ ಜಮೀನುಗಳಿಗೆ ಪ್ರತಿನಿತ್ಯ ಸಂಚರಿಸುತ್ತಾರೆ. ಅಲ್ಲದೆ ರಂಗನಗುಡ್ಡದ ಬಳಿಯ ಗೋಕಟ್ಟೆಯಿಂದ ನುಲೇನೂರು, ಕಲ್ಲೇನಹಳ್ಳಿ ಮಾರ್ಗವಾಗಿ ಹೆದ್ದಾರಿ ಭಾಗವಾಗಿರುವ ಶಿರಾ-ಹುಳಿಯಾರು ಮಧ್ಯೆ ಹೊಯ್ಸಳಕಟ್ಟೆ ಸೇರಲು ಹತ್ತಿರದ ಮಾರ್ಗವಾಗಿದೆ. ಈ ರಸ್ತೆ ಜಿಲ್ಲಾ ಪಂಚಾಯಿತಿಗೆ ಸೇರಿದ್ದು ಹಣ ವಿನಿಯೋಗಿಸಲು ನಮ್ಮಲ್ಲಿ ಹಣವಿಲ್ಲ ಎಂದು ಅಧಿಕಾರಿಗಳು ಕೈ ತೊಳೆದಿಕೊಳ್ಳುತ್ತಾರೆ. ಇತ್ತ ಲೋಕೋಪಯೋಗಿ ಇಲಾಖೆಯಿಂದ ಅಭಿವೃದ್ಧಿಪಡಿಸಲು ಕಾನೂನು ತೊಡಕು ಎದುರಾಗುತ್ತದೆ ಎಂದು ಅಧಿಕಾರಿಗಳು ಹೇಳುತ್ತಾರೆ. ಎರಡು ಇಲಾಖೆಗಳ ಮಧ್ಯೆ ಜನರು ಸಂಕಷ್ಟ ಎದುರಿಸುವಂತಾಗಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಕೂಡಲೇ ಸ್ಥಳೀಯ ಶಾಸಕರು ಅನುದಾನ ನೀಡಿ ರಸ್ತೆ ಕಾಮಗಾರಿ ಮಾಡಲು ಅನುವು ಮಾಡಿಕೊಡುವಂತೆ ಒತ್ತಾಯಿಸಿದ್ದಾರೆ.

## ಅಕ್ರಮವಾಗಿ ಸಂಗ್ರಹಿಸಿದ್ದ 700 ಗ್ರಾಂ ಒಣ ಗಾಂಜಾ ಜಪ್ತಿ

• ಉದಯವಾಹಿನಿ, ಮಾಲೂರು

ಅಕ್ರಮವಾಗಿ ಸಂಗ್ರಹಣೆ ಮಾಡಿದ್ದ 700 ಗ್ರಾಂ ತೆನೆ, ಹೂ, ಬೀಜ ಮಿಶ್ರಿತ ಒಣ ಗಾಂಜಾವನ್ನು ಮಾಲೂರು ಅಬಕಾರಿ ಇಲಾಖೆ ಅಧಿಕಾರಿಗಳು ಬುಧವಾರ ಜಪ್ತಿ ಮಾಡಿದ್ದಾರೆ. ತಾಲ್ಲೂಕಿನ ನೊಸಗೆರೆ ಗ್ರಾಮದ 3ನೇ ಹಂತ, ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶದ ಬಳಿ ಅಕ್ರಮವಾಗಿ ಮಾರಾಟ ಮಾಡಲು ಸಂಗ್ರಹಿಸಲಾಗಿದ್ದ ಗಾಂಜಾ ಜಪ್ತಿ ಮಾಡಿದ ಪೊಲೀಸರು ಆರೋಪಿಗಳಾದ ಒರಿಸ್ಸಾದ ಜಮಾದನ್ ಸಮಾಲ್ (38), ಉತ್ತರ ಪ್ರದೇಶದ ವಿಶಾಲ್ ಚೌವ್ಹಾಣ್ (20) ಬಂಧಿಸಿದ್ದು, ಕೃತ್ಯಕ್ಕೆ ಬಳಸಿದ ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ. ವಾಹನ ಸೇರಿ



ಉದಯವಾಹಿನಿ ಚಿತ್ರ

ಒಟ್ಟು 57 ಸಾವಿರ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ ಎಂದು ಅಬಕಾರಿ ಇಲಾಖೆಯ ನಿರೀಕ್ಷಕ ಜಿ. ಬಾಲಕೃಷ್ಣ ತಿಳಿಸಿದ್ದಾರೆ.

ದಾಳಿಯಲ್ಲಿ ಅಬಕಾರಿ ಉಪ ಅಧೀಕ್ಷಕ ಶ್ರೀನಿವಾಸಮೂರ್ತಿ, ಕೋಲಾರ ಉಪ ವಿಭಾಗ ಅಧಿಕಾರಿ ಪಿ.ಕೆ. ಶಶಿಕಲಾ, ಮಾಲೂರು ವಲಯದ ಅಬಕಾರಿ ನಿರೀಕ್ಷಕ ಜಿ. ಬಾಲಕೃಷ್ಣ, ಉಪ ನಿರೀಕ್ಷಕ ವಿ. ಗಜೇಂದ್ರ ಕುಮಾರ್, ಮುಖ್ಯ ಪೇದೆಗಳಾದ ವೀರೇಶ್, ಗಿರಿಜಾಪತಿ, ರಜನಿಕಾಂತ್ ಪಾಲ್ಗೊಂಡಿದ್ದರು.

# ಎಚ್‌ಡಿಕೆ ವಿರುದ್ಧ ಸರ್ಕಾರಿ ಜಮೀನು ಒತ್ತುವರಿ ಆರೋಪ

## ಇಡೀ ದಿನ ಮೂಲ ದಾಖಲೆ ಪರಿಶೀಲನೆ; ಹೇಳಿಕೆ ದಾಖಲು

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಬಿಡದಿ ಹೋಬಳಿಯ ಕೇತಗಾನಹಳ್ಳಿಯ ಸರ್ಕಾರಿ ಜಮೀನು ಒತ್ತುವರಿಗೆ ಸಂಬಂಧಿಸಿದಂತೆ ರಾಮನಗರ ತಹಶೀಲ್ದಾರ್ ಕಚೇರಿಯಲ್ಲಿ ಜಮೀನುಗಳ ಮೂಲ ಮಂಜೂರು ದಾಖಲೆಗಳ ಪರಿಶೀಲನೆ ನಡೆಯಿತು. ಸರ್ವೆ ನಂ.7,8,9,10,16,17, 79 ಸೇರಿದಂತೆ ಒಟ್ಟು ಏಳು ಸರ್ವೆ ನಂಬರ್‌ಗಳಲ್ಲಿ 80 ಮಂದಿ ಹೊಂದಿರುವ ಜಮೀನಿನ ಹಕ್ಕಿಗೆ ಸಂಬಂಧಿಸಿದ ಮೂಲ ದಾಖಲೆಗಳನ್ನು ತಹಶೀಲ್ದಾರ್ ತೇಜಸ್ವಿನಿ ತಮ್ಮ ಕಚೇರಿಯಲ್ಲಿ ಪರಿಶೀಲಿಸಿದರು. ಅಷ್ಟೂ ಸರ್ವೆ ನಂಬರ್ ಜಮೀನುಗಳ ಖಾತೆದಾರರು ಹೊಂದಿರುವ ಮೂಲ ದಾಖಲೆ ಪರಿಶೀಲನೆ ಬಳಿಕ ಮಾಲೀಕರು ಹಾಜರುಪಡಿಸಿದ ಎಲ್ಲಾ ದಾಖಲೆಗಳನ್ನು ಸ್ಕ್ಯಾನ್ ಮಾಡಿಕೊಂಡರು. ಜಮೀನು ಮಂಜೂರು ಕುರಿತು ಪ್ರತಿಯೊಬ್ಬ ಖಾತೆದಾರರ ಹೇಳಿಕೆ ದಾಖಲಿಸಿಕೊಂಡರು.

ಮಧ್ಯಾಹ್ನ ಊಟದ ಬಿಡುವೂ ಪಡೆಯದೆ ಬೆಳಗ್ಗೆಯಿಂದ ಸಂಜೆವರೆಗೆ ನಿರಂತರವಾಗಿ ದಾಖಲೆ ಪರಿಶೀಲಿಸಿ, ಹೇಳಿಕೆ ಪಡೆಯುವ ಪ್ರಕ್ರಿಯೆ ನಡೆಯಿತು. ಇಡೀ ಪ್ರಕ್ರಿಯೆಯ ವಿಡಿಯೋ ಚಿತ್ರೀಕರಣ ಮಾಡಲಾಯಿತು. ನೋಟಿಸ್ ಪಡೆದವರ ಪೈಕಿ ಸುಮಾರು 45 ಖಾತೆದಾರರು ಇಲ್ಲವೇ ಅವರ ಪ್ರತಿನಿಧಿಗಳು ಕಚೇರಿಗೆ ಬಂದಿದ್ದರು. ಕೆಲ ನೋಟಿಸ್‌ಗಳು ಕಚೇರಿಗೆ ವಾಪಸ್



ಉದಯವಾಹಿನಿ ಚಿತ್ರ

ಪ್ರತಿನಿಧಿ ಮೂಲಕ ಹಾಜರಾಗಬೇಕು

ಬಂದಿವೆ. ಕೆಲವರು ವಕೀಲರೊಂದಿಗೆ ಕಚೇರಿಗೆ ಬಂದು ದಾಖಲೆ ಸಲ್ಲಿಸಲು ಬೇರೆ ದಿನಾಂಕ ಪಡೆದು ಹೋದರು ಎಂದು ಮೂಲಗಳು ತಿಳಿಸಿವೆ. ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗುವುದಕ್ಕೆ ಸಂಬಂಧಿಸಿದಂತೆ ತಹಶೀಲ್ದಾರ್, ಕರ್ನಾಟಕ ಭೂ ಕಂದಾಯ ಅಧಿನಿಯಮ-1964ರ ಕಲಂ 28ರಡಿ ಏಳು ಸರ್ವೆ ನಂಬರ್‌ಗಳ ಜಮೀನುಗಳ ಖಾತೆದಾರರಿಗೆ ಏ. 5ರಂದು ನೋಟಿಸ್ ಜಾರಿಗೊಳಿಸಿದ್ದರು.

### ದಾಖಲೆ ಒದಗಿಸಲು ಸೂಚಿಸಿದ್ದ ಕೋರ್ಟ್

**ಕೇತಗಾನಹಳ್ಳಿಯಲ್ಲಿ ಸರ್ಕಾರಿ ಜಮೀನುಗಳ ಒತ್ತುವರಿ ತೆರವು ಕಾರ್ಯಾಚರಣೆಗಾಗಿ ತಹಶೀಲ್ದಾರ್, ಎಚ್.ಡಿ. ಕುಮಾರಸ್ವಾಮಿ ಅವರಿಗೆ ಮಾ. 18ರಂದು ನೋಟಿಸ್ ನೀಡಿದ್ದರು. ಈ ಸಂಬಂಧ ಕುಮಾರಸ್ವಾಮಿ ಅವರು ಸಲ್ಲಿಸಿದ್ದರಿಟ್ ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್, ನೋಟಿಸ್ ಅನುಸಾರ ಯಾವುದೇ ಬಲವಂತದ ಕ್ರಮಕ್ಕೆ ಮುಂದಾಗಬಾರದು ಎಂದು ಆದೇಶಿಸಿತ್ತು.**

ಇದೇ ತಿಂಗಳ 8ರಂದು ಅರ್ಜಿಯ ವಿಚಾರಣೆ ನಡೆಸಿದ್ದ ಹೈಕೋರ್ಟ್, ಸರ್ಕಾರಿ ಜಮೀನುಗಳ ಒತ್ತುವರಿ ಆರೋಪಕ್ಕೆ ಸಂಬಂಧಿಸಿದಂತೆ ತಹಶೀಲ್ದಾರ್ ತಮ್ಮ ಬಳಿ ಹೊಂದಿರುವ ಭೂ ದಾಖಲೆಗಳನ್ನು ಅರ್ಜಿದಾರ ಎಚ್.ಡಿ ಕುಮಾರಸ್ವಾಮಿ ಅವರಿಗೆ ಒಂದು ವಾರದಲ್ಲಿ ಒದಗಿಸಬೇಕು. ದಾಖಲೆ ಪಡೆದ ಎರಡು ವಾರಗಳಲ್ಲಿ ಕುಮಾರಸ್ವಾಮಿ ಅವರು ತಹಶೀಲ್ದಾರ್ ಅವರಿಗೆ ಪ್ರತ್ಯುತ್ತರ ನೀಡಬೇಕು ಎಂದು ಆದೇಶ ನೀಡಿತ್ತು.

**ನೋಟಿಸ್‌ನಲ್ಲಿ ಏನಿದೆ?:** ಕೇತಗಾನಹಳ್ಳಿಯ ಸರ್ಕಾರಿ ಜಮೀನು

> ಗ್ರಾಮದ ಉದ್ದೇಶಿತ ಸರ್ವೆ ನಂಬರ್‌ನ ಸರ್ಕಾರಿ ಗೋಮಾಳದ ಜಮೀನಿನಲ್ಲಿ ನಿಮಗೆ ಹಕ್ಕು ಹರಿದು ಬಂದಿರುವ ಬಗ್ಗೆ ತನಿಖೆ ಮಾಡಬೇಕಿದೆ. ಹಾಗಾಗಿ ಜಮೀನಿನ ಹಕ್ಕು ಪಡೆದಿರುವ ಬಗ್ಗೆ ಮೂಲ ಮಂಜೂರಿಗೆ ಸಂಬಂಧಿಸಿದ ದಾಖಲೆ ಹಾಜರುಪಡಿಸಲು, ಮೂಲ ಮಂಜೂರಿಗೆ ಸಂಬಂಧಿಸಿದಂತೆ ಹೇಳಿಕೆ ನೀಡಲು ಏ. 15ರಂದು ಬೆಳಗ್ಗೆ ತಾಲ್ಲೂಕು ಕಚೇರಿ ನ್ಯಾಯಾಂಗ ಸಭಾಂಗಣಕ್ಕೆ ಖುದ್ದಾಗಿ ಅಥವಾ ಪ್ರತಿನಿಧಿ ಮೂಲಕ ಹಾಜರಾಗಬೇಕು ಎಂದು ತಹಶೀಲ್ದಾರ್ ನೋಟಿಸ್‌ನಲ್ಲಿ ತಿಳಿಸಿದ್ದರು.

ಗಳಲ್ಲಿ ಒತ್ತುವರಿಗೆ ಸಂಬಂಧಿಸಿದಂತೆ ಹೈಕೋರ್ಟ್‌ನಲ್ಲಿ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಾಗಿದೆ. ಈ ಸಂಬಂಧ ಸರ್ಕಾರ ದಿಂದ ವಿಶೇಷ ತನಿಖಾ ತಂಡ ರಚಿಸಲಾಗಿದೆ. ತಂಡದ ತನಿಖೆ ಪ್ರಗತಿಯಲ್ಲಿರುವುದರಿಂದ ಪ್ರಸ್ತಾಪಿತ ಸರ್ವೆ ನಂಬರ್‌ಗಳಲ್ಲಿ ನಡೆದಿರುವ ವಹಿವಾಟಿಗೆ ಸಂಬಂಧಿಸಿದ ದಾಸ್ತಾವೇಜುಗಳು, ಸಾಕ್ಷಾಧಾರಗಳ ಪರಿಶೀಲನೆಗಾಗಿ ಖಾತೆದಾರರಿಗೆ ಸಮನ್ಸ್ ನೀಡುವ ಅಗತ್ಯವಿರುತ್ತದೆ.

ಅಂತರಾಳದಿಂದ..
EDITORIAL

# ವಕ್ಫ್ ವಿಚಾರವಾಗಿ ಹಿಂಸಾಚಾರ ಕೋಮುವಾದದ ಹುಲಿ ಸವಾರಿ



ಉದಯವಾಹಿನಿ ಚಿತ್ರ

ವಕ್ಫ್ ತಿದ್ದುಪಡಿ ಕಾಯ್ದೆಯನ್ನು ವಿರೋಧಿಸಿ ಪಶ್ಚಿಮ ಬಂಗಾಳದ ಮುರ್ಶಿದಾಬಾದ್ ಜಿಲ್ಲೆಯಲ್ಲಿ ನಡೆದ ಪ್ರತಿಭಟನೆಗಳು ಕೋಮು ಹಿಂಸಾಚಾರದ ರೂಪ ಪಡೆದು, ಮೂವರ ಸಾವಿಗೆ ಕಾರಣವಾಗಿವೆ. ಹಿಂಸಾಚಾರದ ಪರಿಣಾಮವಾಗಿ ಹಲವರು ತಮ್ಮ ಊರು ತೊರೆದಿದ್ದಾರೆ. ಇತರ ಕೆಲವೆಡೆಗಳಲ್ಲಿಯೂ ಸಮಸ್ಯೆ ಸೃಷ್ಟಿಯಾಗಿದೆ. ಹಲವೆಡೆ ಪ್ರತಿಭಟನಕಾರರು ಪೊಲೀಸರ ಜೊತೆ ಸಂಘರ್ಷಕ್ಕೆ ಇಳಿದಿದ್ದಾರೆ, ಹಲವರ ಬಂಧನ ಆಗಿದೆ. ಪಶ್ಚಿಮ ಬಂಗಾಳದಲ್ಲಿ ಸಮುದಾಯಗಳ ನೆಲೆಯಲ್ಲಿ ಇರುವ ಒಡಕನ್ನು ಎಲ್ಲಾ ರಾಜಕೀಯ ಪಕ್ಷಗಳು ದುರ್ಬಳಕೆ ಮಾಡಿಕೊಂಡಿವೆ, ಈ ಬಾರಿಯೂ ಅದು ಮುಂದುವರಿದಿದೆ. ಪಶ್ಚಿಮ ಬಂಗಾಳದ ಆಡಳಿತಾರೂಢ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷವು ಮುಸ್ಲಿಂ ಸಮುದಾಯದ ಬೆಂಬಲ ಹೊಂದಿದೆ. ಈ ಪಕ್ಷವು ವಕ್ಫ್ ಕಾಯ್ದೆ ವಿರೋಧಿಸಿ ಪ್ರತಿಭಟನೆ ನಡೆಸಿದವರಿಗೆ ಬೆಂಬಲ ನೀಡಿದೆ. ಈ ಕಾಯ್ದೆಯ ವಿಚಾರವಾಗಿ ಮುಸ್ಲಿಂ ಸಮುದಾಯದಲ್ಲಿ ಬಹಳಷ್ಟು ಆತಂಕಗಳು ಇವೆ. ಈ ಕಾಯ್ದೆಯ ಮೂಲಕ ವಕ್ಫ್ ಆಸ್ತಿಗಳನ್ನು ಸರ್ಕಾರವು ತನ್ನ ನಿಯಂತ್ರಣಕ್ಕೆ ಪಡೆಯಬಹುದು ಎಂಬುದು ಅವರಲ್ಲಿನ ಒಂದು ಆತಂಕ. ಮುಸ್ಲಿಮರ ಹಿತಾಸಕ್ತಿಗಳನ್ನು ರಕ್ಷಿಸಲಾಗುತ್ತದೆ ಎಂಬ ಭರವಸೆಯನ್ನು ಅಲ್ಲಿನ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತೆ ಮತ್ತೆ ನೀಡಿದ್ದಾರೆ. ಆದರೆ, ಕಾಯ್ದೆಯನ್ನು ಪಶ್ಚಿಮ ಬಂಗಾಳದಲ್ಲಿ ಜಾರಿಗೆ ತರುವುದಿಲ್ಲ ಎಂದು ಅವರು ಘೋಷಿಸಿದ್ದುದು ತಪ್ಪು.

ಪಶ್ಚಿಮ ಬಂಗಾಳದ ಪ್ರಮುಖ ವಿರೋಧ ಪಕ್ಷವಾದ ಬಿಜೆಪಿಯು ಬಹುಸಂಖ್ಯಾತ ಹಿಂದೂಗಳ ಭಾವನೆಗಳನ್ನು ರಾಜಕೀಯಕ್ಕೆ ಬಳಸಿಕೊಳ್ಳಲು ಮುಂದಾಗಿದೆ. ರಾಜ್ಯದಲ್ಲಿ ಈಚೆಗೆ ನಡೆದ ರಾಮನವಮಿ ಮೆರವಣಿಗೆಗೆ ಕೋಮು ಬಣ್ಣ ಇತ್ತು, ಅದಕ್ಕೆ ಬಿಜೆಪಿಯ ಬೆಂಬಲ ಇತ್ತು. 25 ಸಾವಿರ ಮಂದಿ ಶಾಲಾ ಶಿಕ್ಷಕರ ನೇಮಕಾತಿಯನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿದ ಪರಿಣಾಮವಾಗಿ ಮಮತಾ ಬ್ಯಾನರ್ಜಿ ನೇತೃತ್ವದ ಸರ್ಕಾರಕ್ಕೆ ಉಂಟಾಗಿರುವ ಹಿನ್ನಡೆಯಿಂದ ಸಾರ್ವಜನಿಕರ ಗಮನವನ್ನು ಬೇರೆಡೆ ತಿರುಗಿಸಲು ಟಿಎಂಸಿಯು ಕೋಮು ಆಧಾರದಲ್ಲಿ ಒಡಕು ಸೃಷ್ಟಿಸು ತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ರಾಜ್ಯದಲ್ಲಿ ಹಿಂಸಾಚಾರವನ್ನು ತಡೆಯುವಲ್ಲಿ ಪೊಲೀಸರು ಆರಂಭದಿಂದಲೂ ವಿಫಲರಾಗಿದ್ದಾರೆ. ಪರಿಸ್ಥಿತಿಯನ್ನು ನಿಯಂತ್ರಣದಲ್ಲಿ ಇರಿಸಲು ಸರ್ಕಾರವು ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡಿದ್ದರೆ ಜೀವಹಾನಿ, ಆಸ್ತಿ ನಷ್ಟ ತಡೆಯಬಹುದಿತ್ತು ಮತ್ತು ಜನ ಜೀವಭಯದಿಂದ ತಮ್ಮ ಊರು ತೊರೆದು ಬೇರೆಡೆಗಳಿಗೆ ಓಡಿ ಹೋಗಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತಿರಲಿಲ್ಲ. ಪರಿಸ್ಥಿತಿ ಕೈಮೀರುತ್ತಿದೆ ಎಂಬುದನ್ನು ಅರಿತುಕೊಳ್ಳುವಲ್ಲಿ ಅಲ್ಲಿ ಗುಪ್ತಚರ ವ್ಯವಸ್ಥೆ ಕೂಡ ವಿಫಲವಾಗಿದೆ.

ಹಿಂಸಾಚಾರಕ್ಕೆ ತುತ್ತಾಗಿರುವ ಪ್ರದೇಶಗಳಲ್ಲಿ ಈಗ ಕೇಂದ್ರದ ಪಡೆಗಳನ್ನು ನಿಯೋಜಿಸಲಾಗಿದೆ. ಕೋಮು ಹಿಂಸಾಚಾರವು ಕಾನೂನು ಮತ್ತು ಸುವ್ಯವಸ್ಥೆಗೆ ಸಂಬಂಧಿಸಿದ ಸಮಸ್ಯೆಯಷ್ಟೇ ಅಲ್ಲ. ಇಂತಹ ಹಿಂಸಾಚಾರಗಳ ಹಿಂದೆ ಹಲವು ಸಂದರ್ಭಗಳಲ್ಲಿ ರಾಜಕೀಯ ಉದ್ದೇಶವಿರುತ್ತದೆ. ಕೋಮು ಹಿಂಸಾಚಾರ ನಡೆದಂತಹ ಸಂದರ್ಭಗಳಲ್ಲಿ 'ಪರಿಸ್ಥಿತಿಯು ಇದ್ದಕ್ಕಿದ್ದಂತೆ ಕೈಮೀರಿತು' ಎಂದು ಪ್ರತಿ ಸಲವೂ ಹೇಳಲಾಗದು. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಮತ್ತು ಟಿಎಂಸಿ ಪರಸ್ಪರ ದೂಷಣೆಯಲ್ಲಿ ತೊಡಗಿವೆ. ಹಿಂಸಾಚಾರವನ್ನು ಸೃಷ್ಟಿ ಮಾಡಿದವರು ಕೆಲವರಾದರೂ, ಅದಕ್ಕೆ ಸಮುದಾಯಗಳನ್ನು ಹೊಣೆ ಮಾಡಲಾಗುತ್ತಿದೆ. ಹಿಂಸಾಚಾರದಿಂದ ನಲುಗಿರುವ ಪ್ರದೇಶಗಳಲ್ಲಿ ಸಶಸ್ತ್ರ ಪಡೆಗಳ ವಿಶೇಷ ಅಧಿಕಾರ ಕಾಯ್ದೆಯ (ಎಎಫ್‌ಎಸ್‌ಪಿಎ) ಅಡಿಯಲ್ಲಿ ವಿಶೇಷ ಕ್ರಮಗಳನ್ನು ಜಾರಿಗೆ ತರಬೇಕು ಎಂದು ಬಿಜೆಪಿ ಆಗ್ರಹಿಸಿದೆ. ಸಮಸ್ಯೆ ಸೃಷ್ಟಿಸಲು ಬಿಜೆಪಿಯು ಹಿಂಸಾಚಾರದ ನಕಲಿ ಚಿತ್ರಗಳನ್ನು ಸಾಮಾಜಿಕ ಜಾಲತಾಣಗಳ ಮೂಲಕ ಹರಿಯಬಿಡುತ್ತಿದೆ ಎಂದು ಟಿಎಂಸಿ ಆರೋಪಿಸಿದೆ. ಎರಡೂ ಪಕ್ಷಗಳು ಮುಂದಿನ ವರ್ಷ ನಡೆಯಲಿರುವ ವಿಧಾನಸಭಾ ಚುನಾವಣೆಯ ಮೇಲೆ ಕಣ್ಣಿಟ್ಟಿವೆ. ಆದರೆ, ಕೋಮುವಾದದ ಹುಲಿ ಸವಾರಿಯು ಸಮಾಜಕ್ಕೂ ತಮಗೂ ಹಾನಿಯನ್ನೇ ಉಂಟುಮಾಡುತ್ತದೆ ಎಂಬ ಪಾಠವನ್ನು ಎರಡೂ ಪಕ್ಷಗಳು ಉಪೇಕ್ಷಿಸಿವೆ.

# ರಾಮಾಯಣ



## ಕೌಸಲ್ಯಾದೇವಿಯು ಸೀತಾದೇವಿಗೆ ಬಂದ್ದಿ ಹೇಳಿದ್ದು

• ಹಿಂದಿನ ಸಂಚಿಕೆಯಿಂದ 78ನೆಯ ಅಧ್ಯಾಯ


ಪತಿವ್ರತಾಸ್ತ್ರೀಯರಿಗೆ ಸದ್ವರ್ತನ ಶಾಂತಗುಣ ಮಾನ ಮೊದಲಾದ ಸದ್ಗುಣಗಳಿರಬೇಕು. ಪತಿವ್ರತಾಸ್ತ್ರೀಯರಿಗೆ ತಮ್ಮ ಪುರುಷನೊಬ್ಬನೇ ಪರಮಾತ್ಮ ಸ್ವರೂಪನು. ನನ್ನ ಮಗನಾದ ಶ್ರೀರಾಮನೂ ನೀನೂ ವನವನ್ನೆದಿದಾಗ ಆತನನ್ನು ಆಗೌರವಿಸ ಬೇಡ. ಪತಿವ್ರತಾಸ್ತ್ರೀಯರಿಗೆ ತಮ್ಮ ಪುರುಷನು ಧನಿಕನಾದರೂ ದರಿದ್ರನಾದರೂ ದೇವತಾ ಸ್ವರೂಪನು ಎಂದು ಬುದ್ಧಿಹೇಳಿದಳು. ಧರ್ಮಾರ್ಥಸಾಧನವಾದ ಆ ಮಾತನ್ನು ಕೇಳಿ ಸೀತಾದೇವಿಯು ತನ್ನ ಅತ್ತೆಯಾದ ಕೌಸಲ್ಯಾದೇವಿಯ ಸಮೀಪದಲ್ಲಿ ಕೈಮುಗಿದುಕೊಂಡು ಆ ದೇವಿಯನ್ನು ಕುರಿತು ಹೀಗೆ ನುಡಿದಳು ದೇವಿ, ನೀನು ಆಜ್ಞಾಪಿಸಿದಹಾಗೆಯೇ ನಡೆಯುತ್ತೇನೆ. ಲೋಕದಲ್ಲಿ ಪತಿವ್ರತೆಯಾದವಳು ತನ್ನ ಪತಿ ಹೇಳಿದಂತೆ ಕೇಳಿಕೊಂಡಿರಬೇಕೆಂಬ ವೃತ್ತಾಂತವನ್ನು ಕೇಳಿದ್ದೇನೆ. ನಾನು ಯಾವಾಗಲಾದರೂ ದುರ್ಜನರಾದ ಸ್ತ್ರಿಯರೊಡನೆ ಕೂಡಿದ್ದವಳಲ್ಲ. ಚಂದ್ರನ ಕಾಂತಿ ಚಂದ್ರನನ್ನು ಬಿಡದಂತೆ ನಾನು ಧರ್ಮಮಾರ್ಗವನ್ನು ಬಿಡುವವಳಲ್ಲ. ನೂರುಮಂದಿ ಮಕ್ಕಳ ತಾಯಿಯಾದರೂ, ತಂತಿಯಿಲ್ಲದ ವೀಣೆಯು ಧ್ವನಿಗೈಯದಂತೆ, ಗಾಲಿಯಿಲ್ಲದ ರಥವು ನಡೆಯದಂತೆ ಪತಿಯಿಲ್ಲದ ಸ್ತ್ರೀಯು ಯಾವ ಸುಖವನ್ನೂ ಪಡೆಯಲಾರಳು. ಲೋಕದಲ್ಲಿ ಸ್ತ್ರೀಯರಿಗೆ ತಂದೆಯು ಮಿತವಾಗಿ ಕೊಡುವನು. ತಾಯಿ ಮಿತವಾಗಿ ಕೊಡುವಳು. ಮಗನು ಕಟ್ಟಳೆ ಮಾಡಿದಷ್ಟನ್ನೇ ಕೊಡುವನು. ಆದರೆ ಪತಿಯು ಮಿತಿಯಿಲ್ಲದೆ ಕೊಡುವನು. ಆದಕಾರಣ ಸ್ತ್ರೀಯಾದವಳು ಅಪರಿಮಿತವಾದ ವಸ್ತುಗಳನ್ನು ಕೊಡುವ ಪತಿಯನ್ನು ಪೂಜೆಮಾಡಬೇಕು ಎಂಬ ಪತಿವ್ರತಾಧರ್ಮವನ್ನು ಕೇಳಿದ್ದೇನೆ. ಲೋಕದಲ್ಲಿ ಸ್ತ್ರೀಯರಿಗೆ ಪತಿಯೇ ದೇವತಾಸ್ವರೂಪನು. ಈ ಅರ್ಥವನ್ನು ಬಲ್ಲ ನಾನು ನನ್ನ ಇಷ್ಟದೇವತಾ ಸ್ವರೂಪನಾದ ಪತಿಯನ್ನು ಏಕೆ ಅವಮನ್ನಣೆ ಮಾಡುವೆನು! ಎಂದು ನುಡಿದಳು.

ಆ ಮಾತನ್ನು ಕೇಳಿ ಕೌಸಲ್ಯಾದೇವಿಯು ಮನಸ್ಸಿನಲ್ಲಿ ಹರ್ಷಪಟ್ಟಳು. ಅವಳು ಶುದ್ಧಾಂತಃಕರಣವುಳ್ಳ ಸೀತಾದೇವಿಯೂ ಶ್ರೀರಾಮನೂ ವನಕ್ಕೆ ತೆರಳುವುದನ್ನು ನೋಡಿ ಬಹುದುಃಖದಿಂದಲೂ ಸೀತಾದೇವಿಯ ಧರ್ಮವಚತನದಿಂದ ಉಂಟಾದ ಸಂತೋಷದಿಂದಲೂ ಕಣ್ಣೀರು ಹರಿಸುತ್ತಿರುವ ಸಮಯದಲ್ಲಿ ಶ್ರೀರಾಮನು ಕೌಸಲ್ಯಾದೇವಿಯ ಸಮೀಪಕ್ಕೆ ಬಂದು ಕೈಮುಗಿದುಕೊಂಡು ಅಮ್ಮ, ನೀನು ದುಃಖಾಕ್ರಾಂತೆಯಾಗಿದ್ದರೂ ನನ್ನ ತಂದೆಯಾದ ದಶರಥರಾಯನನ್ನು ಸತ್ಕರಿಸು. ನೀನು ಮಲಗಿದ್ದಹಾಗೆಯೇ ಸ್ವಪ್ನವನ್ನು ಕಂಡಂತೆ ಹದಿನಾಲ್ಕು ವರುಷಗಳು ಕಳೆದು ಹೋಗುವುವು ಮತ್ತು ಸೀತಾಲಕ್ಷ್ಮಣಸಮೇತನಾಗಿ ತಿರುಗಿ ಬರುವ ನನ್ನನ್ನು ಶೀಘ್ರದಲ್ಲಿಯೇ ಕಾಣುವೆ ಎಂದು ಹೇಳಿದನು. ಆಮೇಲೆ ದಶರಥರಾಯನ ಹೆಂಡತಿಯರೂ ತನಗೆ ತಾಯಂದಿರೂ ಆದ ನಾನೂರ ಐವತ್ತು ಮಂದಿಗೂ ನಮಸ್ಕಾರವನ್ನು ಮಾಡಿ ತಾಯಿಗಳಿರಾ, ನಾನು ಅಜ್ಞಾನದಿಂದ ನಿಮಗೆ ಏನಾದರೂ ಅಪರಾಧವನ್ನು ಮಾಡಿದ್ದರೆ ಕ್ಷಮಿಸಬೇಕು. ನನಗೆ ಆಶೀರ್ವಾದಗಳನ್ನು ಮಾಡಿ ಕಳುಹಿಸಿ ಎಂದು ನುಡಿದನು.

ಆ ಮಾತನ್ನು ಕೇಳಿ ದಶರಥರಾಯನ ಸಕಲ ಅಂತಃಪುರಸ್ತ್ರೀಯರೂ ಶೋಕಸಂತಾಪದಿಂದ ಜೈ ತನ್ಯಗುಂದಿದವರಾಗಿ ಶ್ರೀರಾಮ, ನೀನು ವನದಲ್ಲಿ ಸುಖವಾಗಿ ಹದಿನಾಲ್ಕುವರುಷಗಳನ್ನು ಕಳೆದು ಅಯೋಧ್ಯಾಪಟ್ಟಣಕ್ಕೆ ತಿರುಗಿ ಬಂದು ರಾಜ್ಯಪರಿಪಾಲನವನ್ನು ಮಾಡು'' ಎಂದು ನುಡಿದರು. ಆ ಸಮಯದಲ್ಲಿ ಮೊದಲು ಪಟಹ ನಿಸ್ಸಾಳ ಭೇರಿ ಮುರಜ ಮೊದಲಾದ ವಾದ್ಯಧ್ವನಿಗಳಿಂದ ಭೋರಿಡುತ್ತಿದ್ದ ದಶರಥರಾಯನೆ ಅರಮನೆಯು, ಶ್ರೀರಾಮನು ವನಕ್ಕೆ ಹೋಗುವನೆಂಬ 2 ಖಾತಿಶಯದಿಂದ ಗೋಳಿಡುತ್ತಿದ್ದ ಜನರ ರೋದನಧ್ವನಿಯಿಂದ ತುಂಬಿಹೋಯಿತು.

ಮುಂದುವರಿಯುವುದು...

# ಮಳೆ ಬಂದಂಗೆ ಛತ್ರಿ ಹಿಡಿ ಸಮಯಕ್ಕೆ ತಕ್ಕ ದಾರಿಹಿಡಿ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

1998ರಲ್ಲಿ, ಕೊಡಾಕ್‌ನಲ್ಲಿ 1,70,000 ಉದ್ಯೋಗಿಗಳು ಕೆಲಸ ಮಾಡುತ್ತಿದ್ದರು, ಅವರು ವಿಶ್ವದ 85% ಫೋಟೋ ಫಿಲಂಗಳನ್ನು ಮಾರಾಟ ಮಾಡುತ್ತಿದ್ದರು. ಕೆಲವೇ ವರ್ಷಗಳಲ್ಲಿ, ಡಿಜಿಟಲ್ ಫೋಟೋಗ್ರಫಿ ಅವರನ್ನು ಮಾರುಕಟ್ಟೆಯಿಂದ ಹೊರಹಾಕಿತು. ಕೊಡಾಕ್ ದಿವಾಳಿಯಾಯಿತು, ಅದರ ಎಲ್ಲಾ ಉದ್ಯೋಗಿಗಳು ರಸ್ತೆಗೆ ಬಂದರು.

**ಎಲ್ಲವನ್ನೂ ಸ್ವಿಕರಿಸುವವಳು ಅವಳೊಬ್ಬಳೇ**

ಸ್ನೇಹಿತರೇ, ಈ ಎಲ್ಲಾದರ ಗುಣಮಟ್ಟದಲ್ಲಿ ಯಾವುದೇ ಕೊರತೆ ಇರಲಿಲ್ಲ, ಆದರೂ ಅವು ಮಾರುಕಟ್ಟೆಯಿಂದ ಹೊರಬಿದ್ದವು ಕಾರಣ? ಕಾಲಕ್ಕೆ ತಕ್ಕಂತೆ ಅವು ಬದಲಾಗಲಿಲ್ಲ. ಮುಂಬರುವ 10 ವರ್ಷಗಳಲ್ಲಿ ಪ್ರಪಂಚವು ಸಂಪೂರ್ಣವಾಗಿ ಬದಲಾಗುತ್ತದೆ ಮತ್ತು ಇಂದು ನಡೆಯುತ್ತಿರುವ 70% ರಿಂದ 90% ಕೈಗಾರಿಕೆಗಳು ಸ್ಥಗಿತಗೊಳ್ಳುತ್ತವೆ. ಉಬರ್ ಕೇವಲ ಸಾಫ್ಟ್‌ವೇರ್ ಆಗಿದೆ. ತನ್ನದೇ ಆದ ಒಂದು ಕಾರು ಹೊಂದಿಲ್ಲದಿದ್ದರೂ, ಅವರು ವಿಶ್ವದ ಅತಿದೊಡ್ಡ ಟ್ಯಾಕ್ಸಿ ಕಂಪನಿ. ಏರ್‌ಬ್ನ್ಬಿ ತಮ್ಮದೇ ಆದ ಹೋಟೆಲ್ ಹೊಂದಿಲ್ಲದಿದ್ದರೂ ವಿಶ್ವದ ಅತಿದೊಡ್ಡ ಹೋಟೆಲ್ ಕಂಪನಿಯಾಗಿದೆ. Paytm, ola cabs, oyo ಕೊಠಡಿಗಳಂತಹ ಅನೇಕ ಉದಾಹರಣೆಗಳಿವೆ.

- HMT (ವಾಚ್)
- ಬಜಾಜ್ (ಸ್ಕೂಟರ್)
- ಡೈನೋರಾ (ಟಿವಿ)
- ಮರ್ಫಿ (ರೇಡಿಯೋ)
- ನೋಕಿಯಾ (ಮೊಬೈಲ್)
- ರಾಜ್‌ದೂತ್ (ಬೈಕ್)
- ಅಂಬಾಸಿಡರ್ (ಕಾರು)
- ದಿನೇಶ್ (ಬಟ್ಟೆ)

ಯುಎಸ್ ನಲ್ಲಿ ವಕೀಲರಿಗೆ ಈಗ ಯಾವುದೇ ಕೆಲಸ ಉಳಿದಿಲ್ಲ, ಏಕೆಂದರೆ ಐಬಿಎಂ ವ್ಯಾಟ್ಸನ್ ಸಾಫ್ಟ್‌ವೇರ್ ಒಂದು ಕ್ಷಣದಲ್ಲಿ ಉತ್ತಮ ಕಾನೂನು ಸಲಹೆಯನ್ನು ನೀಡುತ್ತದೆ. ಮುಂದಿನ 10 ವರ್ಷಗಳಲ್ಲಿ, 90% ಯುಎಸ್ ವಕೀಲರು ನಿರುದ್ಯೋಗಿಗಳಾಗುತ್ತಾರೆ ..10% ಉಳಿದಿರುವವರು ... ಸೂಪರ್ ಸ್ಪೆಷಲಿಸ್ಟ್ ಆಗುತ್ತಾರೆ. ವ್ಯಾಟ್ಸನ್ ಹೆಸರಿನ ಸಾಫ್ಟ್‌ವೇರ್ ಮಾನವರಿಗಿಂತ 4 ಪಟ್ಟು ಹೆಚ್ಚು ನಿಖರವಾಗಿ ಕ್ಯಾನ್ಸರ್ ರೋಗನಿರ್ಣಯವನ್ನು ಮಾಡುತ್ತದೆ. 2030 ರ ವೇಳೆಗೆ ಕಂಪ್ಯೂಟರ್‌ಗಳು ಮನುಷ್ಯರಿಗಿಂತ ಹೆಚ್ಚು ಬುದ್ಧಿವಂತವಾಗಿರುತ್ತವೆ. ಮುಂದಿನ 10 ವರ್ಷಗಳಲ್ಲಿ, 90% ಕಾರುಗಳು ಪ್ರಪಂಚದಾದ್ಯಂತದ ರಸ್ತೆಗಳಿಂದ ಕಣ್ಮರೆಯಾಗುತ್ತವೆ ಉಳಿದಿರುವುವು ಎಲೆಕ್ಟ್ರಿಕ್ ಕಾರುಗಳು ಅಥವಾ ಹೈಬ್ರಿಡ್ ಆಗಿರುತ್ತವೆ ರಸ್ತೆಗಳು ಖಾಲಿಯಾಗುತ್ತವೆ, ಪೆಟ್ರೋಲ್ ಬಳಕೆ 90% ರಷ್ಟು ಕಡಿಮೆಯಾಗುತ್ತದೆ, ಎಲ್ಲಾ ಅರಬ್ ರಾಷ್ಟ್ರಗಳು ದಿವಾಳಿಯಾಗುತ್ತವೆ.


ಉದಯವಾಹಿನಿ ಚಿತ್ರ

ನೀವು ಉಬರ್‌ನಂತಹ ಸಾಫ್ಟ್‌ವೇರ್‌ನಿಂದ ಕಾರನ್ನು ಪಡೆಯುತ್ತೀರಿ ಮತ್ತು ಕೆಲವೇ ಕ್ಷಣಗಳಲ್ಲಿ ಚಾಲಕರಹಿತ ಕಾರು ನಿಮ್ಮ ಬಾಗಿಲಲ್ಲಿ ನಿಲ್ಲುತ್ತದೆ ... ನೀವು ಅದನ್ನು ಯಾರೊಂದಿಗಾದರೂ ಹಂಚಿಕೊಂಡರೆ, ಆ ಸವಾರಿ ನಿಮ್ಮ ಬೈಕ್‌ಗಿಂತ ಅಗ್ಗವಾಗಿರುತ್ತದೆ. ಕಾರುಗಳು ಚಾಲಕರಹಿತವಾಗಿರುವುದರಿಂದ 99% ಅಪಘಾತಗಳು ನಿಂತುಹೋಗುತ್ತವೆ..

ಇದು ಕಾರ್ ವಿಮೆ ಎಂಬ ವ್ಯವಹಾರವನ್ನು ನಿಲ್ಲಿಸುತ್ತದೆ. ಚಾಲಕನಿಗೆ ಯಾವುದೇ ಉದ್ಯೋಗ ಇರುವುದಿಲ್ಲ. ನಗರಗಳು ಮತ್ತು ರಸ್ತೆಗಳಿಂದ 90% ಕಾರುಗಳು ಕಣ್ಮರೆಯಾದಾಗ, ಟ್ರಾಫಿಕ್ ಮತ್ತು ಪಾರ್ಕಿಂಗ್‌ನಂತಹ ಸಮಸ್ಯೆಗಳು ಸ್ವಯಂಚಾಲಿತವಾಗಿ ಕಣ್ಮರೆಯಾಗುತ್ತವೆ ... ಏಕೆಂದರೆ ಒಂದು ಕಾರು ಇಂದು 20 ಕಾರುಗಳಿಗೆ ಸಮಾನವಾಗಿರುತ್ತದೆ. 5 ಅಥವಾ 10 ವರ್ಷಗಳ ಹಿಂದೆ, ಪಿಸಿಒ ಇಲ್ಲದಂತಹ ಸ್ಥಳ ಇರಲಿಲ್ಲ. ನಂತರ ಎಲ್ಲರ ಜೇಬಿನಲ್ಲಿ ಮೊಬೈಲ್ ಫೋನ್ ಬಂದಾಗ, ನಂತರ ಪಿಸಿಒ ಸ್ಥಗಿತಗೊಳ್ಳಲು ಪ್ರಾರಂಭಿಸಿತು .. ನಂತರ ಆ ಎಲ್ಲಾ ಪಿಸಿಒ ಜನರು ಫೋನ್ ರೀಚಾರ್ಜ್ ಮಾರಾಟ ಮಾಡಲು ಪ್ರಾರಂಭಿಸಿದರು. ಈಗ ಆನ್‌ಲೈನ್‌ನಲ್ಲಿ ರೀಚಾರ್ಜ್ ಕೂಡ ಪ್ರಾರಂಭಿಸಲಾಗಿದೆ.

**ನೀವು ಎಂದಾದರೂ ಗಮನಿಸಿದ್ದೀರಾ ..?:** ಇತ್ತೀಚಿನ ದಿನಗಳಲ್ಲಿ, ಮಾರುಕಟ್ಟೆಯಲ್ಲಿನ ಪ್ರತಿ ಮೂರು ಅಂಗಡಿಗಳಲ್ಲಿ ಒಂದು ಅಂಗಡಿಯಲ್ಲಿ ಮೊಬೈಲ್ ಫೋನ್ ಮಾರಾಟ, ಸೇವೆ, ರೀಚಾರ್ಜ್, ಪರಿಕರಗಳು, ದುರಸ್ತಿ, ನಿರ್ವಹಣೆ ಮಾಡಲಾಗುತ್ತಿದೆ. ಈಗ ಎಲ್ಲವನ್ನೂ ಪೇಟಿಎಂ ಮೂಲಕ ಮಾಡಲಾಗುತ್ತದೆ .. ಈಗ ಜನರು ತಮ್ಮ ಫೋನ್‌ಗಳಿಂದಲೂ ರೈಲ್ವೆ ಟಿಕೆಟ್‌ಗಳನ್ನು ಕಾಯ್ದಿರಿಸುತ್ತಿದ್ದಾರೆ .. ಈಗ ಹಣದ ವಹಿವಾಟುಗಳು ಸಹ ಬದಲಾಗುತ್ತಿವೆ .. ಕರೆನ್ಸಿ ನೋಟ್ ಅನ್ನು ಮೊದಲು ಪ್ಲಾಸ್ಟಿಕ್ ಮನಿ ಮೂಲಕ ಬದಲಾಯಿಸಲಾಗಿತ್ತು.ಈಗ ಅದು ಡಿಜಿಟಲ್ ಆಗಿ ಮಾರ್ಪಟ್ಟಿದೆ.


ಜಗತ್ತು ಬಹಳ ವೇಗವಾಗಿ ಬದಲಾಗುತ್ತಿದೆ .. ಕಣ್ಣು ಮತ್ತು ಕಿವಿಗಳನ್ನು ತೆರೆದಿಡಿ, ಇಲ್ಲದಿದ್ದರೆ ನೀವು ಹಿಂದೆ ಉಳಿಯುತ್ತೀರಿ?. ಆದ್ದರಿಂದ ... ಒಬ್ಬ ವ್ಯಕ್ತಿಯು ಸಮಯಕ್ಕೆ ತಕ್ಕಂತೆ ತನ್ನ ವ್ಯವಹಾರ ಮತ್ತು ಸ್ವಭಾವವನ್ನು ಬದಲಾಯಿಸುತ್ತಲೇ ಇರಬೇಕು. ಸಮಯದೊಂದಿಗೆ ಸಾಗಿ, ಯಶಸ್ಸನ್ನು ಸಾಧಿಸಿ. ಉದ್ಯೋಗಕ್ಕೆ ಜನ ಏನು ಮಾಡುತ್ತಾರೆ ? ಅವರೆಲ್ಲರೂ ಭೂಮಿ ತಾಯಿಯ ಬಳಿ ಬರುತ್ತಾರೆ. ಏಕೆಂದರೆ ಎಲ್ಲರನ್ನೂ ಎಲ್ಲವನ್ನೂ ಸ್ವಿಕರಿಸುವವಳು ಅವಳೊಬ್ಬಳೇ. ಇದು ಸತ್ಯ.

# ಮಕ್ಕಳ ಶಿಕ್ಷಣಕ್ಕೆ 100ಕೋಟಿ ರೂಪಾಯಿ ದತ್ತಿನಿಧಿ ಯೋಜನೆಗೆ ಚಾಲನೆ, ಪ್ರಥಮದಿನದಲ್ಲಿ 35ಲಕ್ಷಕ್ಕೂ ಹೆಚ್ಚು ದೇಣಿಗೆ ಸಂಗ್ರಹ ಅಧ್ಯಕ್ಷರಾಗಿ ಎಸ್.ರಘುನಾಥ್‌ರವರ ಪದಗ್ರಹಣ

• ಉದಯವಾಹಿನಿ, ಬೆಂಗಳೂರು

ಗಾಯಿತ್ರಿ ಭವನದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾದ ಎಸ್.ರಘುನಾಥ್ ರವರ ಪದಗ್ರಹಣ ಸಮಾರಂಭ. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಅಧ್ಯಕ್ಷರಾಗಿ ಎಸ್.ರಘುನಾಥ್ ರವರು ವಿಶೇಷಪೂಜೆ ಸಲ್ಲಿಸಿ, ಪದಗ್ರಹಣ ಮಾಡಿದರು, ಹಿರಿಯ ಉಪಾಧ್ಯಕ್ಷರಾಗಿ ಆರ್.ಲಕ್ಷ್ಮಿಕಾಂತ್ ರವರು, ಖಜಾಂಚಿಯಾಗಿ ಸುಬ್ಬನರಸಿಂಹ(ಸುಬ್ಬಣ್ಣ)ರವರನ್ನು ಈಸಂದರ್ಭದಲ್ಲಿ ನೇಮಕ ಮಾಡಲಾಯಿತು. ಎಸ್.ರಘುನಾಥ್ ರವರು ಮಾತನಾಡಿ ವಿಪ್ರರು ಬುದ್ದಿವಂತರು, ವಿದ್ಯಾವಂತರು ಇಡಿ ವಿಶ್ವಕ್ಕೆ ಗೊತ್ತು, ಅದರು ನಮ್ಮಲ್ಲಿ ಆರ್ಥಿಕವಾಗಿ ಹಿಂದುಳಿದವರು ಇದ್ದಾರೆ ಮತ್ತು ವಿಪ್ರ ಸಮುದಾಯದ ಮಕ್ಕಳು ವಿದ್ಯಾಭ್ಯಾಸ ಪೂರೈಸಲು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಬ್ರಾಹ್ಮಣ ಸಮುದಾಯದ ಮಕ್ಕಳಿಗೆ ಶಿಕ್ಷಣಕ್ಕೆ, ಪ್ರಥಮ ಹಂತವಾಗಿ ಶಿಕ್ಷಣಕ್ಕೆ ಆದ್ಯತೆ ನೀಡಿ ಪ್ರೈಮರಿ ಶಾಲೆಯಿಂದ ಕಾಲೇಜಿನವರಗೆ ವಿದ್ಯಾಭ್ಯಾಸ ಮಾಡಲು ಕಟ್ಟಡ ಸ್ಥಾಪನೆ.

ವಿಪ್ರರಿಗೆ ಆರ್ಥಿಕವಾಗಿ ಚೈತನ್ಯ ಶಕ್ತಿ ತುಂಬಬೇಕು ಈ ನಿಟ್ಟಿನಲ್ಲಿ ಹಲವಾರು ಯೋಜನೆಗಳು ರೂಪಿಸಲಾಗಿದೆ. ಚುನಾವಣೆ ಪೂರ್ವದಲ್ಲಿ ನೀಡಿದ ಭರವಸೆಗಳು ಈಡೇರಿಸಲು ಕಟಿಬದ್ದವಾಗಿ ಶ್ರಮಿಸುತ್ತೇನೆ, ನುಡಿದಂತೆ ನಡೆ, ನಡೆದಂತೆ ನುಡಿಯುತ್ತೇನೆ .ರಾಜ್ಯದಲ್ಲಿರುವ ಎಲ್ಲಾ ವಿಪ್ರ ಭಾಂದವರು ಸಹಕಾರ, ಬೆಂಬಲ ನೀಡಬೇಕು. ಶಾಸಕರುಗಳಾದ ರವಿಸುಬ್ರಮಣ್ಯ, ಸಿ.ಕೆ.ರಾಮಮೂರ್ತಿ, ಮಾಜಿ ಅಧ್ಯಕ್ಷರಾದ ಎಂ. ಆರ್.ವಿ.ಪ್ರಸಾದ್, ಪಾವಗಡ ಪ್ರಕಾಶ್ ರಾವ್, ಜಿಲ್ಲಾ ಪ್ರತಿನಿಧಿಗಳಾದ ರಾಮಚಂದ್ರ, ಪಿ.ಎಸ್.ಪ್ರಕಾಶ್, ಜಿ.ಎಸ್.ನಾಗೇಶ್, ದಿಲೀಪ್, ಸತೀಶ್ ಉರಾಳ್, ರಾಜಶೇಖರ್ ಜಿ.ರಾವ್, ಕೆ.ಎನ್.ರವಿಕುಮಾರ್, ಅಂಬಿಕಾ ರಾಮಚಂದ್ರ, ಎಸ್.ಎಸ್.ಪ್ರಸಾದ್, ಶ್ರೀನಿವಾಸ್ ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**100ಕೋಟಿ ರೂಪಾಯಿ ದೇಣಿಗೆ ದತ್ತಿ ನಿಧಿ ಯೋಜನೆಗೆ ಚಾಲನೆ ನೀಡಲಾಗಿದೆ 35ಲಕ್ಷಕ್ಕೂ ಹೆಚ್ಚು ಹಣ ದೇಣಿಗೆ ರೂಪದಲ್ಲಿ ಒಂದೇ ದಿನದಲ್ಲಿ ಬಂದಿದೆ, ಬ್ಯಾಂಕ್ ಡಿಪಾಸಿಟ್ ಮಾಡಲಾಗುವುದು ಎಂದು ಹೇಳಿದರು. ಆರ್. ಲಕ್ಷ್ಮಿಕಾಂತ್ ರವರು ಮಾತನಾಡಿ ಬ್ರಾಹ್ಮಣ ಎಂದರೆ ಎಲ್ಲರು ಒಂದೇ ನಮ್ಮಲ್ಲಿ ತಂಡಗಳು ಇಲ್ಲ, ಎಲ್ಲರು ಒಟ್ಟಾಗಿ ಒಂದು ತಂಡವಾಗಿ ವಿಪ್ರ ಶ್ರೇಯೋಭಿವೃದ್ದಿಗೆ ಶ್ರಮಿಸಲಾಗುವುದು. 100ಕೋಟಿ ದೇಣಿಗೆ ಸಂಗ್ರಹ ಮಾಡುವ ಕಾರ್ಯ ಆರಂಭವಾಗಿದೆ, ದಾನಿಗಳಿಂದ ಹಣ ವಿಪ್ರರ ಮಕ್ಕಳ ಶಿಕ್ಷಣ ಕ್ಷೇತ್ರಕ್ಕೆ ಸದಪಯೋಗವಾಗಲಿದೆ ಎಂದು ಹೇಳಿದರು.**

# ಹಣ್ಣು ನೋಡಿದ ತಕ್ಷಣ ತಿಳಿಯ ಬಹುದಂತೆ ಅವು ಸಿಹಿಯಾಗಿದ್ಯಾ ಇಲ್ವಾ ಎಂದು

ಹಣ್ಣುಗಳ ಸೇವನೆಯು ಆರೋಗ್ಯಕ್ಕೆ ಬಹಳ ಒಳ್ಳೆಯದು. ಅದರಲ್ಲೂ ಬೇಸಿಗೆಯಲ್ಲಿ ಅನ್ನ ತಿನ್ನೋದಕ್ಕಿಂತ ಬರೀ ಹಣ್ಣುಗಳನ್ನು, ತಂಪು ಪಾನೀಯಗಳನ್ನು ಕುಡಿಯೋಣ ಅನಿಸೋದು ಸಹಜ. ಅದರಲ್ಲೂ ಬೇಸಿಗೆ ಹಣ್ಣುಗಳಿಗೆ ಈಗ ಸಿಕ್ಕಾಪಟ್ಟೆ ಬೇಡಿಕೆ ಇದೆ. ಅಂತಹ ಹಣ್ಣುಗಳಲ್ಲಿ ಕಲ್ಲಂಗಡಿ, ಖರ್ಬೂಜ ಹಣ್ಣು ಕೂಡಾ ಸೇರಿದೆ. ಕೆಲವೊಂದು ಹಣ್ಣುಗಳನ್ನು ಕೊಳ್ಳುವಾಗ ನಾವು ಮೋಸ ಹೋಗುತ್ತೇವೆ. ಅದು ಹಣ್ಣಾಗಿದೆಯೇ ಇಲ್ಲವೋ, ಸಿಹಿಯಾಗಿದೆಯೋ ಇಲ್ಲವೋ ಎನ್ನುವುದನ್ನು ಗಮನಿಸದರೆ ಖರೀದಿಸುತ್ತೇವೆ.

**ಖರೀದಿಸುವಾಗ ಮಾಡುವ ತಪ್ಪುಗಳು:** ಕೆಲವರು ಹಣ್ಣುಗಳನ್ನು ಖರೀದಿಸುವಾಗ ತಪ್ಪುಗಳನ್ನು ಮಾಡುತ್ತಾರೆ. ಮನೆಗೆ ಬಂದು ಹಣ್ಣು ಕತ್ತರಿಸಿದ ನಂತರ, ಅದು ಹಸಿಯಾಗಿದೆ ಅಥವಾ ಕಡಿಮೆ ರುಚಿಯನ್ನು ಹೊಂದಿದೆ ಎಂದು ತಿಳಿದಾಗ ಬೇಸರವಾಗುತ್ತದೆ. ನಿಮಗೂ ಕೂಡಾ ಹಣ್ಣುಗಳನ್ನು ಯಾವ ರೀತಿ ಕೊಳ್ಳಬೇಕೆಂಬ ಸರಿಯಾದ ಮಾಹಿತಿ ಇಲ್ಲದಿದ್ದರೆ ಕಂಟೆಂಟ್ ಕ್ರಿಯೇಟರ್ ಒಬ್ಬರು ಹಣ್ಣುಗಳನ್ನು ಖರೀದಿಸುವಾಗ ಗಮನದಲ್ಲಿಟ್ಟುಕೊಳ್ಳಬೇಕಾದ ವಿಷ್ಯಗಳು ಹಾಗೂ ಅವು ಸಿಹಿಯಾಗಿದೆಯೇ ಎನ್ನುವುದನ್ನು ಗುರುತಿಸುವ ವಿಧಾನವನ್ನು ವಿಡಿಯೋವೊಂದರಲ್ಲಿ ತಿಳಿಸಿದ್ದಾರೆ.


**ದಾಳಿಂಬೆ:** ದಾಳಿಂಬೆ ತಿನ್ನುವುದರಿಂದ ಹಲವಾರು ಆರೋಗ್ಯ ಪ್ರಯೋಜನಗಳಿವೆ. ಆದರೆ ಹಣ್ಣುಗಳಲ್ಲಿ ದಾಳಿಂಬೆಗೆ ಉತ್ತಮ ಬೇಡಿಕೆಯಿದೆ. ಈಗ ನೀವು ದಾಳಿಂಬೆ ಖರೀದಿಸುತ್ತಿದ್ದರೆ ಮೊದಲು ಅದರ ಬಾಯಿಯನ್ನು ನೋಡಿ, ಅದು ತೆರೆದಿದ್ದರೆ ದಾಳಿಂಬೆ ಸಿಹಿಯಾಗಿರುತ್ತದೆ ಎಂದು ಅರ್ಥಮಾಡಿಕೊಳ್ಳಿ. ಆದರೆ ಅದರ ಬಾಯಿ ಮುಚ್ಚಿದ್ದರೆ ಅದು ಕಡಿಮೆ ಸಿಹಿಯಾಗಿರುತ್ತದೆ.

**ಖರ್ಬೂಜ:** ಬೂರ್ಜ ಕೂಡ ಬೇಸಿಗೆಯಲ್ಲಿ ಆರೋಗ್ಯಕ್ಕೆ ಪ್ರಯೋಜನಕಾರಿ. ಇದು ದೇಹದಲ್ಲಿನ ನೀರಿನ ಕೊರತೆಯನ್ನು ನೀಗಿಸುತ್ತದೆ.

ಖರ್ಬೂಜ ಖರೀದಿಸುವಾಗ ತಪ್ಪು ಮಾಡದಂತೆ ಎಚ್ಚರಿಕೆಯಿಂದ ನೋಡಿ. ಖರ್ಬೂಜದಲ್ಲಿ ಪಟ್ಟೆಗಳಿದ್ದು, ಅದು ಉದ್ದವಾಗಿದ್ದರೆ, ಅದು ಸಿಹಿಯಾಗಿರುತ್ತದೆ ಎಂದು ಅರ್ಥಮಾಡಿಕೊಳ್ಳಿ. ಇದು ಪಟ್ಟೆಗಳಿಲ್ಲದ ಖರ್ಬೂಜ ಸ್ವಲ್ಪ ಹಸಿಯಾಗಿರಬಹುದು.

**ಕಿತ್ತಳೆ:** ಸಿಹಿ ಮತ್ತು ಹುಳಿ ಕಿತ್ತಳೆ ಹಣ್ಣನ್ನು ಖರೀದಿಸಲು, ನೀವು ದಾಳಿಂಬೆಯಂತೆ ಅದರ ಮುಖವನ್ನು ನೋಡಬೇಕಾಗುತ್ತದೆ. ಅದನ್ನು ಒಳಮುಖವಾಗಿ ಒತ್ತಿದರೆ ಮತ್ತು ಬಣ್ಣವು ಗಾಢವಾಗಿದ್ದರೆ ಅದು ಸಿಹಿ ಮತ್ತು ಹುಳಿಯಿಂದ ಕೂಡಿರುತ್ತದೆ ಎಂದು ಅರ್ಥಮಾಡಿಕೊಳ್ಳಿ. ಆದರೆ ತಿಳಿ ಬಣ್ಣ ಮತ್ತು ಎದ್ದು ಕಾಣುವ ಬಾಯಿ ಹೊಂದಿರುವ ಕಿತ್ತಳೆ ಹಣ್ಣುಗಳು ಕಡಿಮೆ ಪರಿಮಳವನ್ನು ಹೊಂದಿರಬಹುದು.

**ಡ್ರ್ಯಾಗನ್ ಹಣ್ಣುಗಳು:** ಮಾರುಕಟ್ಟೆಯಲ್ಲಿ ಹೆಚ್ಚಿನ ಬೆಲೆಗೆ ಮಾರಾಟವಾಗುವ ಡ್ರ್ಯಾಗನ್ ಹಣ್ಣು ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ. ಆದರೆ ಈಗ ದುಬಾರಿ ಬೆಲೆಯದನ್ನು ಖರೀದಿಸುವುದರಲ್ಲಿ ಯಾವುದೇ ತಪ್ಪಿಲ್ಲ, ಆದ್ದರಿಂದ, ಖರೀದಿಸುವಾಗ ಅದರ ಮುಖವನ್ನು ನೋಡಿ. ಅದು ತಾಜಾವಾಗಿದ್ದು ಹಸಿರು ಎಲೆಗಳನ್ನು ಹೊಂದಿದ್ದರೆ ಅದು ಸಿಹಿಯಾಗಿರುತ್ತದೆ ಎಂದರ್ಥ. ಆದರೆ ಅದು ಒಣಗಿದ್ದರೆ ರುಚಿ ಕಡಿಮೆಯಾಗಿರುತ್ತದೆ ಎಂದು ಅರ್ಥಮಾಡಿಕೊಳ್ಳಿ.



# ನರಹುಲಿಯನ್ನು ಮನೆಮದ್ದಿನಿಂದ ನಿವಾರಿಸಿ



ನೀವು ಅನೇಕ ಜನರ ದೇಹದ ಮೇಲೆ ನರಹುಲಿಗಳನ್ನು ನೋಡಿರಬೇಕು. ಇದು ಒಂದು ರೀತಿಯ ನೋವು ರಹಿತ ಚರ್ಮದ ಬೆಳವಣಿಗೆಯಾಗಿದ್ದು, ಹ್ಯೂಮನ್ ಪ್ಯಾಪಿಲೋಮವೈರಸ್ ಎಂಬ ವೈರಸ್‌ನಿಂದ ಉಂಟಾಗುತ್ತವೆ. ಇದರಿಂದ ಯಾವುದೇ ತೊಂದರೆಗಳು ಉಂಟಾಗುವುದಿಲ್ಲ. ಆದರೆ ಇವು ಜೀವಿತಾವಧಿಯವರೆಗೆ ದೇಹದಲ್ಲಿ ಇರುತ್ತವೆ.

**ಕುತ್ತಿಗೆ, ಮುಖದಲ್ಲಿ:** ಬಹಳಷ್ಟು ಜನರು ಕುತ್ತಿಗೆಯ , ಕಂಕುಳ ಭಾಗದಲ್ಲಿ, ಮುಖದ ಮೇಲೆ ನರಹುಲಿಗಳನ್ನು ಹೊಂದಿರುವುದನ್ನು ನೀವು ಗಮನಿಸಿರಬಹುದು. ಮುಖ ಮತ್ತು ಕುತ್ತಿಗೆಯ ಮೇಲಿನ ನರಹುಲಿಗಳು ನಿಮ್ಮ ಲುಕ್‌ನ್ನು ಹಾಳುಮಾಡಬಹುದು. ಹಾಗಿರುವಾಗ ಅನೇಕ ಜನರು ನರಹುಲಿಯನ್ನು ತೆಗೆದುಹಾಕಲು ಬಯಸುತ್ತಾರೆ. ಈ ನರಹುಲಿಗಳನ್ನು ತೆಗೆದುಹಾಕಬಹುದು ಎನ್ನುವುದು ನಿಮಗೆ ಗೊತ್ತಾ? ನರಹುಲಿಯನ್ನು ತೆಗೆದು ಹಾಕುವ ಬಗ್ಗೆ ರಾಜೌರಿ ಗಾರ್ಡನ್‌ನ ಕಾಸ್ಮೆಟಿಕ್ ಸ್ಕಿನ್ ಮತ್ತು ಹೋಮಿಯೋ ಕ್ಲಿನಿಕ್‌ನ ಸೌಂದರ್ಯಶಾಸ್ತ್ರಜ್ಞೆ ಮತ್ತು ಕಾಸ್ಮೆಟಾಲಜಿಸ್ಟ್ ಡಾ. ಕರುಣಾ ಮಲ್ಹೋತ್ರಾ, ಅವರು ಓನ್ಲಿಮೈ ಹೆಲ್ತ್‌ಗೆ ತಿಳಿಸಿದ್ದಾರೆ.

**ನರಹುಲಿ ನಿವಾರಣೆಗೆ ಆಪಲ್ ಸೈಡರ್ ವಿನೆಗರ್:** ನರಹುಲಿಗಳನ್ನು ತೆಗೆದುಹಾಕಲು ಆಪಲ್ ಸೈಡರ್ ವಿನೆಗರ್ ಅತ್ಯಂತ ಪರಿಣಾಮಕಾರಿ ಮನೆಮದ್ದು ಎಂದು ಪರಿಗಣಿಸಲಾಗಿದೆ. ಆಪಲ್ ಸೈಡರ್ ವಿನೆಗರ್ ಸ್ಯಾಲಿಸಿಲಿಕ್ ಆಮ್ಲದಂತೆ ಕೆಲಸ ಮಾಡುತ್ತದೆ. ಇದು ಜನಪ್ರಿಯ ನರಹುಲಿ ತೆಗೆಯುವ ಚಿಕಿತ್ಸೆಯಾಗಿದೆ. ಆಪಲ್ ಸೈಡರ್ ನೈಸರ್ಗಿಕ ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳನ್ನು ಸಹ ಹೊಂದಿದೆ, ಇದು ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ನರಹುಲಿಗಳ ಮೇಲೆ ಆಪಲ್ ಸೈಡರ್ ಹಚ್ಚಲು, ಒಂದು ಚಮಚ ನೀರು ಮತ್ತು ಎರಡು ಚಮಚ ಆಪಲ್ ಸೈಡರ್ ತೆಗೆದುಕೊಳ್ಳಿ. ಅವುಗಳನ್ನು ಚೆನ್ನಾಗಿ ಮಿಶ್ರಣ ಮಾಡಿ. ಈಗ ಈ ಮಿಶ್ರಣವನ್ನು ಹತ್ತಿಯ ಸಹಾಯದಿಂದ ನಿಮ್ಮ ನರಹುಲಿ ಮೇಲೆ ಹಚ್ಚಿ. ಈಗ ಈ ಹತ್ತಿ ಉಂಡೆಯನ್ನು ನರಹುಲಿಯ ಮೇಲೆ ಬ್ಯಾಂಡೇಜ್ ನಿಂದ 3 ರಿಂದ 4 ಗಂಟೆಗಳ ಕಾಲ ಕಟ್ಟಿಕೊಳ್ಳಿ. ಆಪಲ್ ಸೈಡರ್ ಬಳಸುವುದರಿಂದ ಕಿರಿಕಿರಿ ಮತ್ತು ತುರಿಕೆ ಉಂಟಾಗುತ್ತದೆ ಆದ್ದರಿಂದ, ನಿಮಗೆ ಅಲರ್ಜಿ ಇದ್ದರೆ ಈ ಆಯ್ಕೆಯನ್ನು ಕೈ ಬಿಡುವುದು ಉತ್ತಮ.

ಈಗ ಅದರಿಂದ ಹೊರಬರುವ ಜಿಗುಟಾದ ವಸ್ತುವನ್ನು ನೇರವಾಗಿ ನಿಮ್ಮ ನರಹುಲಿ ಮೇಲೆ ಹಚ್ಚಿ. ಈ ಪ್ರಕ್ರಿಯೆಯನ್ನು ದಿನಕ್ಕೆ ಮೂರರಿಂದ ನಾಲ್ಕು ಬಾರಿ ಪುನರಾವರ್ತಿಸಿ. ನರಹುಲಿ ಕೆಲವೇ ದಿನಗಳಲ್ಲಿ ಕ್ರಮೇಣ ಮಾಯವಾಗುತ್ತದೆ. ಈ ಪ್ರಕ್ರಿಯೆಯನ್ನು ಪ್ರತಿದಿನ ಎರಡು ಮೂರು ವಾರಗಳವರೆಗೆ ಪುನರಾವರ್ತಿಸಬೇಕು.

# ಅವಿಸ್ಮರಣೀಯ ಅನುಭವ ನೀಡುವ ಎನ್‌ಎಸ್‌ಎಸ್ ಶಿಬಿರ



ಪ್ರೀತಿ ಬಿ.ಎಸ್.
• ಉದಯವಾಹಿನಿ, ವಿಶೇಷ

ಶಿವಮೊಗ್ಗದ ಕುವೆಂಪು ಶತಮಾನೋತ್ಸವ ಶಿಕ್ಷಣ ಮಹಾವಿದ್ಯಾಲಯವು ಮಾ. 4ರಿಂದ 10ರವರೆಗೆ ತೀರ್ಥಹಳ್ಳಿ ತಾಲ್ಲೂಕಿನ ಬಾಳಗಾರು ಗ್ರಾಮದಲ್ಲಿ ಎನ್‌ಎಸ್‌ಎಸ್ ಶಿಬಿರ ಹಮ್ಮಿಕೊಂಡಿತ್ತು. ಈ ಶಿಬಿರದ ಶಿಬಿರಾರ್ಥಿಯು ತನ್ನ ಅನುಭವವನ್ನು ಇಲ್ಲಿ ಹಂಚಿಕೊಂಡಿದ್ದಾರೆ. ಬೆಳಕು ಜ್ಞಾನದ ಸಂಕೇತ. ಕತ್ತಲೆ ಅಜ್ಞಾನದ ಕುರುಹು. ಈ ಜ್ಞಾನವೆಂಬ ಬೆಳಕಿನ ಬಲದಿಂದ ಅಜ್ಞಾನವೆಂಬ ಕತ್ತಲನ್ನು ಹೋಗಲಾಡಿಸಬಹುದು. ಜ್ಞಾನದ ಬೆಳಕಿನಲ್ಲಿ ವಿವೇಕ ಅರಳುತ್ತದೆ. ಸತ್ಯದ ಬಲದಿಂದ ಅಸತ್ಯ ಅಳಿಯುತ್ತದೆ.

**ಜ್ಞಾನದ ಬಲದಿಂದ ಅಜ್ಞಾನದ ಕೇಡು ನೋಡಯ್ಯ,**
**ಜ್ಯೋತಿಯ ಬಲದಿಂದ ತಮಂದದ ಕೇಡು ನೋಡಯ್ಯ,**
**ಸತ್ಯದ ಬಲದಿಂದ ಅಸತ್ಯದ ಕೇಡು ನೋಡಯ್ಯ,**
**ಪರುಷದ ಬಲದಿಂದ ಅವಲೋಹದ ಕೇಡು ನೋಡಯ್ಯ,**
**ಕೂಡಲ ಸಂಗನ ಶರಣರ ಅನುಭಾವದ ಬಲದಿಂದ**
**ಎನ್ನ ಭವದ ಕೇಡು ನೋಡಯ್ಯ !!!! -ಬಸವಣ್ಣನವರು**

ಅಮೂಲ್ಯವಾದ ಸ್ಪರ್ಶ ಮಣಿಯ ಸೋಂಕಿನ ಬಲದಿಂದ ಕಬ್ಬಿಣ ಮುಂತಾದ ಅವಲೋಹಗಳು ರೂಪಾಂತರ ಪಡೆಯುತ್ತವೆ. ನೀರಿನಲ್ಲಿ ತೋಯ್ದ ಕಬ್ಬಿಣವು ಬಲು ಬೇಗ ತುಕ್ಕು ಹಿಡಿದು ಪ್ರಯೋಜನಕ್ಕೆ ಬಾರದ ವಸ್ತುವಾಗುತ್ತದೆ. ಅದಕ್ಕೆ ಪುರುಷ ಮಣಿಯ ಸ್ಪರ್ಶದಿಂದ ಕಬ್ಬಿಣವು ಭಿನ್ನರೂಪ ತಾಳುತ್ತದೆ. ಅಂತೆಯೇ ಶರಣರ ಒಡನಾಟ ಮತ್ತು ಅವರ ಅನುಭಾವದ ನುಡಿಗಳ ಸತ್ಸಂಗದಿಂದ ಅಜ್ಞಾನ ಅಡಗಿ ಭವದ ಭಾವಗಳು ಇಲ್ಲದಂತಾಗುತ್ತದೆ. ಸಜ್ಜನರ ಸಂಗವ ಮಾಡುವುದು ದುರ್ಜನರ ಸಂಗ ಬೇಡವಯ್ಯ ಎಂಬ ನುಡಿಮುತ್ತು ಕೂಡ ಬಸವಣ್ಣನವರದ್ದೇ...

ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದಲ್ಲಿ ನಡೆಯುವ ಒಂದು ಅದ್ಭುತವಾದ ಕಾರ್ಯಕ್ರಮವೆಂದರೆ ದೀಪೋತ್ಸವ. ಈ ಕಾರ್ಯಕ್ರಮವು ಶಿಬಿರದ 6ನೇ ದಿನದಂದು ನಡೆಯುತ್ತದೆ. ಶಿಬಿರದಲ್ಲಿ ನೆರೆದಿರುವಂತಹ ಎಲ್ಲಾ ಶಿಬಿರಾರ್ಥಿಗಳು, ಕಾಲೇಜಿನ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು, ಪ್ರಾಂಶುಪಾಲರು, ಊರಿನ ಗ್ರಾಮಸ್ಥರು ಭಾರತಾಂಬೆಯ ಮಡಿಲಿಗೆ ದೀಪ ಸಮರ್ಪಣೆ ಮತ್ತು ಗೀತೆ ಸಮರ್ಪಣೆಯನ್ನು ಮಾಡುವ ಮೂಲಕ ಶಿಬಿರದ ಒಂದು ವಾರದ ಸವಿನೆನಪನ್ನು ಮೆಲಕು ಹಾಕುವ ಒಂದು ಅದ್ಭುತವಾದ ಕಾರ್ಯಕ್ರಮವಾಗಿದೆ. ಜನನಿ ಜನ್ಮಭೂಮಿಶ್ಚ ಸ್ವರ್ಗಾದಪಿ ಗರೀಯಸಿ ( ಹೆತ್ತ ತಾಯಿ, ನಮ್ಮನ್ನು ಹೊತ್ತಿರುವ ಭೂಮಿ ತಾಯಿ ಸ್ವರ್ಗಕ್ಕಿಂತಲೂ ಮಿಗಿಲು) ಎಂಬಂತೆ ಪ್ರತಿಫಲ ಬಯಸದೆ ಸೇವೆಯನ್ನು ಮಾಡುತ್ತಾ ಖುಷಿಯಿಂದ ಕಳೆದ ಆ ಆರು ದಿನಗಳ ಪ್ರತಿಯೊಂದು ಕ್ಷಣವೂ ಅವಿಸ್ಮರಣೀಯ. ಅದರಲ್ಲಿ ಶಿಬಿರದ ಕೊನೆಯ ದಿನ ಮರೆಯಲಾಗದ ನೆನಪನ್ನು ನೀಡುವ ಒಂದು ಅದ್ಭುತ ದಿನ. ಅದುವೇ ದೀಪೋತ್ಸವ ಕಾರ್ಯಕ್ರಮ. ಎಲ್ಲಾ ಶಿಬಿರಾರ್ಥಿಗಳು ಸಾಂಸ್ಕೃತಿಕ ಉಡುಗೆ ತೊಟ್ಟು ಭಾರತದ ನಕ್ಷೆಯ ಸುತ್ತ ದೀಪವನ್ನಿಟ್ಟು ಭಾರತಾಂಬೆಯ ಮಡಿಲಿಗೆ ದೀಪ ಸಮರ್ಪಣೆ, ಗೀತೆ ಸಮರ್ಪಣೆ ಮಾಡುವ ಮೂಲಕ ಭಾರತಾಂಬೆಗೆ ಒಂದು ನಮನವನ್ನು ಸಲ್ಲಿಸುವ ಒಂದು ಅದ್ಭುತ ದಿನ. ದೀಪದ ಬೆಳಕಿನ ಮುಂದೆ ಕುಳಿತು ಶಿಬಿರದ ಎಲ್ಲಾ ನೆನಪನ್ನು ಮೇಲಕು ಹಾಕುತ್ತಾ ಭಾರತಾಂಬೆಗೆ ಒಂದು ನಮನ ಸಲ್ಲಿಸುವ ಅದ್ಭುತ ದಿನವದು. ಅಲ್ಲದೆ ಶಿಬಿರಾರ್ಥಿಗಳ ಜೀವನದ ಮರೆಯಲಾಗದ ದಿನಗಳಲ್ಲಿ ಒಂದು. ಹಲವಾರು ಸಹೋದರ ಸಹೋದರಿಯರನ್ನು, ಒಳ್ಳೆಯ ಸ್ನೇಹಿತರನ್ನು ಕೊಟ್ಟ, ನನ್ನ ಜೀವನದ ಕೊನೆಯವರೆಗೂ ಮರೆಯಲಾಗದ ಅನುಭವವನ್ನು ಕೊಟ್ಟ ಶಿವಮೊಗ್ಗದ ಕುವೆಂಪು ಶತಮಾನೋತ್ಸವ ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಮಾರ್ಚ್ 4ರಿಂದ 10ರವರೆಗೆ ತೀರ್ಥಹಳ್ಳಿ ತಾಲ್ಲೂಕಿನ ಬಾಳಗಾರು ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಎನ್‌ಎಸ್‌ಎಸ್ ಶಿಬಿರಕ್ಕೆ ಎಂದೆಂದಿಗೂ ನಾ ಚಿರಋಣಿ.


ಉದಯವಾಹಿನಿ ಚಿತ್ರ

# ಬೆಳೆವಿಮೆಗೆ ರಾಜ್ಯ ಸರ್ಕಾರದ ಸ್ಪಂದನೆ ಇಲ್ಲ: ಸಂಸದ ವಿಶ್ವೇಶ್ವರ ಕಾಗೇರಿ

• ಉದಯವಾಹಿನಿ ಶಿರಸಿ

ರೈತರಿಗೆ ಹವಾಮಾನಾಧಾರಿತ ಬೆಳೆ ವಿಮೆ ಮೊತ್ತ ಕೊಡಿಸಲು ರಾಜ್ಯ ಸರ್ಕಾರದ ಸ್ಪಂದನೆಯೇ ಇಲ್ಲ. ಆದರೂ ಸಂಸದನಾಗಿ ಬೆಳೆ ವಿಮಾ ಪರಿಹಾರ ಕೊಡಿಸಲು ನಿರಂತರ ಪ್ರಯತ್ನ ಮಾಡುತ್ತಿರುವೆ' ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ತರ ಕನ್ನಡ ಜಿಲ್ಲೆಯ ರೈತರಿಗೆ ಹವಾಮಾನಾಧಾರಿತ ಬೆಳೆ ವಿಮಾ ಪರಿಹಾರ ಮೊತ್ತ ಈವರೆಗೂ ಕೈಸೇರಿಲ್ಲ. ಕೇಂದ್ರ ಸರ್ಕಾರದಿಂದ ಮೂರು ಬಾರಿ ವಿಮಾ ಕಂಪನಿಗೆ ಸೂಚನೆ ನೀಡಿದಾಗಲೂ ಮಳೆ ಮಾಪನದ ಕಾರಣ ಹೇಳಿ ವಿಮಾ ಕಂಪನಿ ಮೊತ್ತ ನೀಡಲು ವಿಳಂಬ ಮಾಡುತ್ತಿದೆ. ರಾಜ್ಯದಲ್ಲಿ ಮಳೆ ಮಾಪನ ಕೇಂದ್ರಗಳ ನಿರ್ವಹಣೆ ರಾಜ್ಯ ಸರ್ಕಾರದಿಂದ ಸಮರ್ಪಕವಾಗಿದ್ದರೆ ಇಂದು ರೈತರಿಗೆ ಇಂಥ ಸ್ಥಿತಿ ಬರುತ್ತಿರಲಿಲ್ಲ. ಇನ್ನಾದರೂ ಮಳೆ ಮಾಪನ ಘಟಕಗಳನ್ನು ದುರಸ್ತಿ ಮಾಡಿಸಬೇಕು' ಎಂದರು.


ಉದಯವಾಹಿನಿ ಚಿತ್ರ

ಲೋಕಸಭಾ ಅಧಿವೇಶನದಲ್ಲಿ ಸುದೀರ್ಘ ಚರ್ಚೆಗೆ ಒಳಪಡಿಸಿ ವಕ್ಫ್ ಕಾಯಿದೆ ತಿದ್ದುಪಡಿ ಅಂಗೀಕರಿಸಲಾಗಿದೆ. ಇದರಿಂದ ಕಾಂಗ್ರೆಸ್ ಅಲ್ಪ ಸಂಖ್ಯಾತ ಓಲೈಕೆ ರಾಜಕಾರಣದ ನಿಯಂತ್ರಣ ಸಾಧ್ಯವಾಗಿದೆ. ವಕ್ಫ್ ಮಂಡಳಿಗೆ ಸಂದಾಯವಾಗುವ ನ್ಯಾಯಯುತ ಹಣದಿಂದ ಮುಸ್ಲಿಂ ಸಮುದಾಯದ ಅಭಿವೃದ್ಧಿಗೆ ಅನುಕೂಲ ಆಗಲಿದೆ ಜತೆಗೆ ವಕ್ಫ್ ಆಸ್ತಿಗಳ ದಾಖಲೀಕರಣ ಆಗಲಿದೆ. ಈ ಬಗ್ಗೆ ಮುಸ್ಲಿಂ ಜನಾಂಗದಲ್ಲಿ ಗೊಂದಲ ಮೂಡಿಸುವ ಪ್ರಯತ್ನ ಕಾಂಗ್ರೆಸ್ ಕೈಬಿಡಬೇಕು' ಎಂದರು. ಹುರಿದ ಅಡಿಕೆಗೆ ತೆರಿಗೆ ಹೆಚ್ಚಿಸಿದ ಕಾರಣ ದೇಸಿಯ ಅಡಿಕೆಗೆ ಹೆಚ್ಚಿನ ಬೇಡಿಕೆ ಸೃಷ್ಟಿಯಾಗುತ್ತಿದೆ. ಅಡಿಕೆ ಬೆಳೆಗಾರರ ಹಿತ ಕಾಪಾಡಲು ಕೇಂದ್ರ ಸರ್ಕಾರ ಬದ್ಧವಾಗಿದೆ. ಜನಸಾಮಾನ್ಯರ ಆರ್ಥಿಕ ಶಕ್ತಿ ವೃದ್ಧಿಸಲು ಸಹಕಾರ ಕ್ಷೇತ್ರದ ಕೊಡುಗೆ ಅಪಾರ. ಈ ಹಿನ್ನೆಲೆಯಲ್ಲಿ ಗುಜರಾತ್‌ನಲ್ಲಿ ತ್ರಿಭುವನ್ ಸಹಕಾರ ರಾಷ್ಟ್ರೀಯ ವಿಶ್ವವಿದ್ಯಾಲಯ ನಿರ್ಮಿಸಲು ನಿರ್ಣಯ ಕೈಗೊಳ್ಳಲಾಗಿದೆ. ಇದರಿಂದ ಭವಿಷ್ಯದಲ್ಲಿ ಉತ್ತರ ಕನ್ನಡ ಜಿಲ್ಲೆಯ ಸಹಕಾರ ಕ್ಷೇತ್ರದ ಉದ್ಯೋಗಾಕಾಂಕ್ಷಿಗಳಿಗೆ ಹೆಚ್ಚಿನ ಅನುಕೂಲ ಆಗಲಿದೆ' ಎಂದು ಹೇಳಿದರು.

**ಅಲ್ಪ ಸಂಖ್ಯಾತರ ಓಲೈಕೆ**

ಪಕ್ಷದ ಪ್ರಮುಖರಾದ ಸದಾನಂದ ಭಟ್, ಶರ್ಮಿಳಾ ಮಾದನಗೇರಿ, ಉಷಾ ಹೆಗಡೆ, ನಾಗರಾಜ ನಾಯ್ಕ, ರಮಾಕಾಂತ ಭಟ್, ನವೀನ ಶೆಟ್ಟಿ, ನಾಗರಾಜ ಶೆಟ್ಟಿ, ಆರ್.ಡಿ.ಹೆಗಡೆ ಇದ್ದರು.

## ಡಾ.ಬಿ.ಆರ್.ಅಂಬೇಡ್ಕರ ಅವರ ಆದರ್ಶ ಮೌಲ್ಯಗಳೇ ದಾರಿದೀಪ


ಉದಯವಾಹಿನಿ ಚಿತ್ರ

• ದಯವಾಹಿನಿ ಬಾಗಲಕೋಟೆ

ಸಂವಿಧಾನ ಶಿಲ್ಪಿ, ಕಠಿಣ ಪರಿಶ್ರಮದ ಶ್ರೇಷ್ಠ ಅರ್ಥಶಾಸ್ತ್ರಜ್ಞ, ಶಿಕ್ಷಣದ ತಜ್ಞ ಮತ್ತು ಆದರ್ಶ ರಾಜಕಾರಣಿ ಇವೆಲ್ಲದರ ಜೊತೆಗೆ ಅವರೊಬ್ಬ ಅಪ್ಪಟ ದೇಶಭಕ್ತರಾಗಿದ್ದರು. ಅವರ ಆದರ್ಶ ಮತ್ತು ಮೌಲ್ಯಗಳು ನಮಗೆ ದಾರಿದೀಪವಾಗಿವೆ ಎಂದು ಭಾರತೀಯ ಜೀವ ವಿಮಾ ನಿಗಮದ ಅಭಿವೃದ್ಧಿ ಅಧಿಕಾರಿಯದ ಅನಿಲ್ ನಾಯಕ ಹೇಳಿದರು.

ನಗರದ ಬಿ.ವಿ.ವಿ ಸಂಘದ ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಘಟಕ 1 ಮತ್ತು 2 ರವತಿಯಿಂದ ಮಹಾವಿದ್ಯಾಲಯದಲ್ಲಿ ನಡೆದ 134ನೆ ಡಾ. ಬಿ. ಆರ್. ಅಂಬೇಡ್ಕರ್ ಅವರ ಜಯಂತೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು ಅಂಬೇಡ್ಕರ್ ಅವರು ಸಮಾಜ ಮತ್ತು ಧರ್ಮದ ಕುರಿತು ಶ್ರೇಷ್ಠವಾಗಿ ಯೋಚಿಸಿ ನಿರ್ಧರಿಸಿದ ಫಲವಾಗಿಯೇ ಅವರು ಜಗತ್ತಿಗೆ ಮನೆ ಮಾತಾಗಿದ್ದಾರೆ ಎಂದರು.

ಪ್ರಾಚಾರ್ಯರಾದ ಎಸ್ ಆರ್ ಸಬರದ ಮಾತನಾಡಿ ಜನರ ಆಲೋಚನೆ ಮತ್ತು ವಿಚಾರಗಳಲ್ಲಿ ಬದಲಾದರೆ ಎಲ್ಲವೂ ಅಂದುಕೊಂಡಂತೆ ದೇಶವು ಅಭಿವೃದ್ಧಿ ಹೊಂದಿದ ರಾಷ್ಟ್ರಗಳಲ್ಲಿ ಭಾರತ ಹೊಂದಾಗುವುದೆಂದು ಹೇಳಿದರು.

## ಜಿಲ್ಲೆಯನ್ನು ಮೆಡಿಕಲ್ ಹಬ್ ಮಾಡುವ ನಿಟ್ಟಿನಲ್ಲಿ ಡಾ.ಶರಣಪ್ರಕಾಶ ಪಾಟೀಲ ಅವರ ಕಾರ್ಯಕ್ಕೆ ಸಿ.ಎಂ.ಮೆಚ್ಚುಗೆ

# 644 ಕೋಟಿ ರೂ. ಮೊತ್ತದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ

• ಉದಯವಾಹಿನಿ ಕಲಬುರಗಿ

ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರದ ಬಳಿ ಹಣ ಇಲ್ಲ ಎಂದು ವಿನಾಕಾರಣ ವಿರೋಧ ಪಕ್ಷಗಳು ಟೀಕೆ ಮಾಡುವ ಬದಲು ಕಲಬುರಗಿಗೆ ಬಂದು ನೋಡಿದರೆ ಅಭಿವೃದ್ಧಿ ಕಾರ್ಯ ಕಣ್ಣಿಗೆ ಕಾಣುತ್ತವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಕಲಬುರಗಿ ನಗರದ ಜಿಮ್ಸ್ ಆಸ್ಪತ್ರೆ ಆವರಣದಲ್ಲಿ 216.53 ಕೊಟಿ ರೂ. ವೆಚ್ಚದಲ್ಲಿ ನಿರ್ಮಿಸಲಾದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಲೋಕಾರ್ಪಣೆ ಮತ್ತು 6.20 ಕೋಟಿ ರೂ. ವೆಚ್ಚದಲ್ಲಿ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಬ್ರಾಕಿಥೆರಪಿ ವಿಕೀರಣ ಚಿಕಿತ್ಸೆ ಘಟಕ ಉದ್ಘಾಟನೆ ಹಾಗೂ 421.31 ಕೋಟಿ ರೂ. ಮೊತ್ತದ ವಿವಿಧ 8 ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

**3 ಕಡೆ ಮೆಡಿಕಲ್ ಕಾಲೇಜು:** ಪ್ರಸ್ತುತ ರಾಜ್ಯದ 9 ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜು ಇಲ್ಲ. ಇದರಲ್ಲಿ ಇತ್ತೀಚೆಗೆ ಮಂಡಿಸಿದ ಆಯವ್ಯಯದಲ್ಲಿ ಬಾಗಲಕೋಟೆ, ಮಂಗಳೂರು, ಕೋಲಾರನಲ್ಲಿ ಈ ವರ್ಷ ಮೆಡಿಕಲ್ ಕಾಲೇಜು ಸ್ಥಾಪನೆಗೆ ಘೋಷಣೆ ಮಾಡಲಾಗಿದ್ದು, ಅದನ್ನು ಅನುಷ್ಠಾನಕ್ಕೆ ತರಲಾಗುವುದು ಎಂದರು.

**ರಾಜ್ಯಕ್ಕೆ ಏಮ್ಸ್ ಕೊಡಿ:** ರಾಜ್ಯಸಭೆಯ ವಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಏಮ್ಸ್ ಆಸ್ಪತ್ರೆ ಸ್ಥಾಪಿಸಬೇಕೆಂಬ ಕೂಗಿಗೆ ಕೇಂದ್ರ ಸರ್ಕಾರದ ಸ್ಪಂದಿಸುತ್ತಿಲ್ಲ. ಮುಖ್ಯಮಂತ್ರಿಗಳು ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗೆ ಕೇಂದ್ರಕ್ಕೆ ಈಗಾಗಲೆ ಪತ್ರ ಬರೆದಿದ್ದಾರೆ. ಈ ಭಾಗದಲ್ಲಿ ಏಮ್ಸ್ ಸ್ಥಾಪನೆಯಾದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಜೊತೆಗೆ ಪಕ್ಕದ ಮಹರಾಷ್ಟ್ರದ ಸೋಲಾಪೂರ ಭಾಗದ ಜನರಿಗೂ ಅನುಕೂಲವಾಗಲಿದೆ ಎಂದರು. ನನ್ನ ಕ್ಷೇತ್ರದಲ್ಲಿ ವೈದ್ಯಕೀಯ ಕಾಲೇಜು ಆರಂಭಿಸಲು ಬಜೆಟ್‌ನಲ್ಲಿ ಸೇರಿಸಲಾಗಿತ್ತು. ಯಡಿಯೂರಪ್ಪನವರ ಸರ್ಕಾರ ಅದನ್ನು ವಾಪಸ್ ಪಡೆದಿತ್ತು. ಸಿದ್ದರಾಮಯ್ಯ ಅವರು ಮತ್ತೇ ಬಜೆಟ್‌ನಲ್ಲಿ ಸೇರಿಸಿದ್ದು, ಇನ್ನು ಹಣ ಬಿಡುಗಡೆ ಮಾಡಿಲ್ಲ. ಹೀಗಾಗಿ ನಮ್ಮ ಪ್ರದೇಶದಲ್ಲಿ ಯಾವುದೇ ಕೆಲಸ ಮಾಡುತ್ತಿಲ್ಲ, ಎಲ್ಲವನ್ನು ಕಲ್ಯಾಣ ಕರ್ನಾಟಕ ಹಾಗೂ ಕಲಬುರಗಿಗೆ ತೆಗೆದುಕೊಂಡು ಬರುತ್ತಿದ್ದೀರಿ ಎಂದು ನಾನು ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ಡಾ. ಶರಣಪ್ರಕಾಶ್ ಪಾಟೀಲ್ ಅವರಿಗೆ ರೇಗಿಸುತ್ತಿದ್ದೆ. ಅವರು ಈ ವರ್ಷ ನಿಮ್ಮ ಪ್ರದೇಶದಲ್ಲೂ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ ಎಂದರು.

ಮಾತು ಕೊಡುವುದು ಮುಖ್ಯವಲ್ಲ. ಯಾವುದೇ ಸಂದರ್ಭ ಬಂದರೂ ಕೊಟ್ಟ ಮಾತನ್ನು ಉಳಿಸಿಕೊಳ್ಳುವುದು ಬಹಳ ಮುಖ್ಯ. ನಮ್ಮ ಪ್ರಣಾಳಿಕೆಯಲ್ಲಿ ನಾವು ಕೊಟ್ಟ ಮಾತನ್ನು ಉಳಿಸಿಕೊಳ್ಳುತ್ತಿದ್ದೇವೆ. ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಎಲ್ಲಾ ಕ್ಷೇತ್ರಗಳಲ್ಲೂ ಕಾರ್ಯಕ್ರಮ ರೂಪಿಸುತ್ತಿದ್ದು ಈ ಕ್ಷೇತ್ರಗಳನ್ನು ಅಭಿವೃದ್ಧಿಯ ಪಥಕ್ಕೆ ಸೇರಿಸಿಕೊಳ್ಳಲಾಗಿದೆ. ಆ ಮೂಲಕ ಈ ಭಾಗದ ಐದಾರು ಜಿಲ್ಲೆಗಳ ಜನರ ಋಣ ತೀರಿಸುವ ಕೆಲಸ ಮಾಡಲಾಗುತ್ತಿದೆ. ಈ ಭಾಗದಲ್ಲಿ ದೊಡ್ಡ ದೊಡ್ಡ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆ ಎಂದರು. ನೆಹರೂ ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಕ. ಕರ್ನಾಟಕವನ್ನು ಹೈದರಾಬಾದ್ ನಿಜಾಮರಿಂದ ವಿಮೋಚನೆ ನೀಡಿದರು. ಆದರೆ ಡಾ.ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ನಮ್ಮ ಸರ್ಕಾರ ಈ ಭಾಗವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುತ್ತಿದ್ದೇವೆ. ಈ ಭಾಗಕ್ಕೆ 371ಜೆ ನೀಡುವ ಮೂಲಕ ಅಂದಿನ ಯು.ಪಿ.ಎ. ಮುಖ್ಯಸ್ಥೆ ಸೋನಿಯಾ ಗಾಂಧಿ, ಮನಮೋಹನ್ ಸಿಂಗ್, ಮಲ್ಲಿಕಾರ್ಜುನ ಖರ್ಗೆ ಅವರು ಅಭಿವೃದ್ಧಿಯ ಮುನ್ನುಡಿ ಬರೆದಿದ್ದಾರೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ಗುಣಮಟ್ಟದ ಆರೋಗ್ಯ ಸೇವೆ**

ಪ್ರತೀ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು, ಟ್ರಾಮಾ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ ಇರಲೇಬೇಕು ಎನ್ನುವುದು ನಮ್ಮ ಸರ್ಕಾರದ ಗುರಿ. ಬಡತನದಿಂದ ಬೆಂದ ಜನರಿಗೆ ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ಸಿಗಬೇಕು ಎನ್ನುವ ಉದ್ದೇಶದಿಂದ ಈ ಘೋಷಣೆ ಮಾಡಿದ್ದು, ಒಂದೊಂದೇ ಕಲಬುರಗಿ ಜಿಲ್ಲೆಗಳಲ್ಲಿ ಇವೆಲ್ಲವೂ ನೆರವೇರುತ್ತಿವೆ. ಒಟ್ಟಾರೆಯಾಗಿ ಕಲಬುರಗಿಯನ್ನು ಮೆಡಿಕಲ್ ಹಬ್ ಮಾಡುವ ನಿಟ್ಟನಲ್ಲಿ ಡಾ.ಶರಣಪ್ರಕಾಶ ಪಾಟೀಲ ಅವರ ಕಾರ್ಯಕ್ಕೆ ಸಿ.ಎಂ.ಮೆಚ್ಚುಗೆ ವ್ಯಕ್ತಪಡಿಸಿದರು.

**ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಜೊತೆಗೆ ಆಯವ್ಯಯದಲ್ಲಿ ಘೋಷಿಸಿದ ಯೋಜನೆಗಳನ್ನು ಜಿಲ್ಲೆಗಳಲ್ಲಿ ಒಂದೊಂದಾಗಿ ಜಾರಿಗೆ ತರುತ್ತಿದ್ದೇವೆ. 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಇಂದು ಕಲಬುರಗಿಯಲ್ಲಿ 644 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಇದು ಅಭಿವೃದ್ಧಿ ಅಲ್ಲವೆ ಎಂದು ಪ್ರಶ್ನಿಸಿದ ಮುಖ್ಯಮಂತ್ರಿಗಳು, ಅಭಿವೃದ್ಧಿಗೆ ನಮ್ಮ ಸರ್ಕಾರದಲ್ಲಿ ಹಣಕ್ಕೆ ಕೊರತೆ ಇಲ್ಲ. ಎಲ್ಲಾ ವರ್ಗದ ಜನರಿಗೆ, ಅವಕಾಶಗಳಿಂದ ವಂಚಿತರಾದ ಜನರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸಲು ನಮ್ಮ ಸರ್ಕಾರ ನಿರಂತರವಾಗಿ ಶ್ರಮಿಸುತ್ತಿದೆ**

**-ಮುಖ್ಯಮಂತ್ರಿ ಸಿದ್ದರಾಮಯ್ಯ**

**ಆರೋಗ್ಯ ಕ್ಷೇತ್ರದಲ್ಲಿ ದೊಡ್ಡ ಸಾಧನೆ**

**ಕಲಬುರಗಿ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅತ್ಯುತ್ತಮ ಆಸ್ಪತ್ರೆಗಳನ್ನು ನಿರ್ಮಾಣ ಮಾಡುವ ಮೂಲಕ ಆರೋಗ್ಯ ಕ್ಷೇತ್ರದಲ್ಲಿ ದೊಡ್ಡ ಸಾಧನೆ ಮಾಡಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.**

## ಸ್ಟಾರ್ಟಪ್‌ಗಳಿಗೆ ಉತ್ತೇಜಿಸಲು ಉಸ್ತುವಾರಿ ಕಾರ್ಯದರ್ಶಿಗಳ ಸೂಚನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮಂಗಳೂರು

ಉದ್ಯಮ ಕ್ಷೇತ್ರದಲ್ಲಿ ನಾವೀನ್ಯತೆ ತರಲು ಸ್ಟಾರ್ಟಪ್‌ಗಳಿಗೆ ಹಣಕಾಸು ಬೆಂಬಲ ನೀಡುವ ವಿವಿಧ ಯೋಜನೆಗಳನ್ನು ಸರಕಾರ ಜಾರಿಗೆ ತಂದಿದ್ದು, ಜಿಲ್ಲೆಯಲ್ಲಿ ಇವುಗಳಿಗೆ ಹೆಚ್ಚು ಮಂದಿಯನ್ನು ಆಕರ್ಷಿಸಲು ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ತುಳಸಿ ಮದ್ದಿನೇನಿ ಅವರು ಸೂಚಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಂಜಿನಿಯರಿಂಗ್, ವೈದ್ಯಕೀಯ ಸೇರಿದಂತೆ ಸಾಕಷ್ಟು ವೃತ್ತಿಪರ ಶಿಕ್ಷಣ ಸಂಸ್ಥೆಗಳಿವೆ. ಆದರೂ, ಸ್ಟಾರ್ಟಪ್ ಯೋಜನೆಗಳಿಗೆ ಹೆಚ್ಚಿನ ಬೇಡಿಕೆ ಜಿಲ್ಲೆಯಲ್ಲಿ ಕಂಡು ಬಂದಿಲ್ಲ. ಈ ನಿಟ್ಟಿನಲ್ಲಿ ಜಿಲ್ಲೆಯ ವೃತ್ತಿಪರ ಶಿಕ್ಷಣ ಸಂಸ್ಥೆಗಳೊಂದಿಗೆ ಸಂಯೋಜಿಸಿ ಸ್ಟಾರ್ಟಪ್ ಯೋಜನೆಗಳ ಬಗ್ಗೆ ಜಾಗೃತಿ ಕಾರ್ಯಕ್ರಮ ನಡೆಸುವಂತೆ ಅವರು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್ ಎಂ.ಪಿ. ಅವರು ಮಾತನಾಡಿ, ವೃತ್ತಿಪರ ಶಿಕ್ಷಣ ಮುಗಿಸಿದ ವಿದ್ಯಾರ್ಥಿಗಳಿಗೆ ಸ್ಟಾರ್ಟಪ್ ಉದ್ಯಮಗಳಿಗೆ ಉತ್ತೇಜಿಸಲು ಈಗಾಗಲೇ ಇಂಜಿನಿಯರಿಂಗ್ ಕಾಲೇಜುಗಳೊಂದಿಗೆ ಕಾರ್ಯಕ್ರಮ ನಡೆಸಲಾಗುತ್ತಿದೆ. ಈ ನಿಟ್ಟಿನಲ್ಲಿ ಎನ್.ಐ.ಟಿ.ಕೆ. ಸಂಸ್ಥೆಯೊಂದಿಗೆ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿ, ಎನ್.ಐ.ಟಿ.ಕೆ.ಯನ್ನು ನೋಡಲ್ ಆಗಿ ನೇಮಿಸಲಾಗಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಹೆಚ್ಚಿನ ಸ್ಟಾರ್ಟಪ್‌ಗಳು ಬರುವ ಸಾಧ್ಯತೆ ಇದೆ ಎಂದು ತಿಳಿಸಿದರು.

**ನ್ಯಾಯಾಲಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ**

**ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಗಳಲ್ಲಿ ದಾಖಲಾಗಿರುವ ದಾವೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದ ಆದೇಶವನ್ನು ಪಾಲಿಸಲು ತ್ವರಿತವಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಹಲವಾರು ಪ್ರಕರಣಗಳಲ್ಲಿ ನ್ಯಾಯಾಲಯಗಳ ಆದೇಶವನ್ನು ಪಾಲಿಸದಿರುವುದರಿಂದ ಸರಕಾರವು ನ್ಯಾಯಾಂಗ ನಿಂದನೆ ಪ್ರಕರಣಗಳನ್ನು ಎದುರಿಸಬೇಕಾದ ಪ್ರಸಂಗಗಳು ಉಂಟಾಗಿವೆ. ಈ ನಿಟ್ಟಿನಲ್ಲಿ ನ್ಯಾಯಾಲಯ ಪ್ರಕರಣಗಳ ಮೇಲ್ವಿಚಾರಣೆ ವ್ಯವಸ್ಥೆ ಬಗ್ಗೆ ಅಧಿಕಾರಿಗಳಿಗೆ ಸೂಕ್ತ ತರಬೇತಿ ನೀಡುವಂತೆ ಉಸ್ತುವಾರಿ ಕಾರ್ಯದರ್ಶಿಗಳು ಸೂಚಿಸಿದರು.**

## ಕುಡುವ ನೀರಿನ ಸಮಸ್ಯೆ : ಬೇಸಿಗೆಯಲ್ಲಿ ಕೊಳವೆ ಬಾವಿಗಳೇ ಆಸರೆ

• ಉದಯವಾಹಿನಿ ಬೈಂದೂರು

ಬೈಂದೂರು ತಾಲ್ಲೂಕಿನಲ್ಲಿ ಪ್ರತಿ ವರ್ಷ ಫೆಬ್ರುವರಿಯಿಂದ ಮಳೆಗಾಲದವರೆಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿದೆ. ಆದರೆ ಈ ಬಾರಿ ಇದುವರೆಗೆ ಸಮಸ್ಯೆ ಕಾಡದಿರುವುದು ಜನರಲ್ಲಿ ನೆಮ್ಮದಿ ಮೂಡಿಸಿದೆ.

ಬೈಂದೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ 24,753 ಜನ ಸಂಖ್ಯೆಯಲ್ಲಿ ಪಡುವರಿ ಗ್ರಾಮದಲ್ಲಿ 1,308 ಕುಟುಂಬಗಳು, ಯಡ್ತರೆ ಗ್ರಾಮದಲ್ಲಿ 1,463 ಕುಟುಂಬಗಳು, ಬೈಂದೂರು ಹಾಗೂ ತಗ್ಗರ್ಸೆ ಗ್ರಾಮಗಳಲ್ಲಿ 1,070 ಕುಟುಂಬಗಳು ಸೇರಿದಂತೆ ಒಟ್ಟು 3,841 ಕುಟುಂಬಗಳು ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿವೆ. ಆದರೆ ಈ ಬಾರಿ ನಾಲ್ಕೈದು ಬಾರಿ ಮಳೆ ಬಂದ ಕಾರಣ ನೀರಿನ ಸಮಸ್ಯೆ ಉಂಟಾಗದು ಎಂಬ ವಿಶ್ವಾಸದಲ್ಲಿವೆ ಈ ಕುಟುಂಬಗಳು. ಈಗಾಗಲೇ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 16 ಕೊಳವೆ ಬಾವಿ, 19 ಸಾಮಾನ್ಯ ಬಾವಿ ಹಾಗೂ 9 ಓವರ್‌ಹೆಡ್ ಟ್ಯಾಂಕ್ ಇದ್ದರೂ 4 ಬಾವಿ ಹಾಗೂ 3 ಕೊಳವೆಬಾವಿಯ ನೀರಿನ ಮೂಲವನ್ನಷ್ಟೇ ಪಟ್ಟಣ ಪಂಚಾಯಿತಿ ನೆಚ್ಚಿಕೊಂಡಿದೆ. ಸುಮಾರು 1,250ಕ್ಕೂ ಅಧಿಕ ನಲ್ಲಿ ಸಂಪರ್ಕ ಇದ್ದು ಎರಡು ದಿನಕ್ಕೊಮ್ಮೆ ನೀರು ಸರಬರಾಜು ಮಾಡಲಾಗುತ್ತಿದೆ.


ಉದಯವಾಹಿನಿ ಚಿತ್ರ

ಸರ್ಕಾರಿ ಆಸ್ಪತ್ರೆ ಮತ್ತು ಪೊಲೀಸ್ ನಿವಾಸಗಳಿಗೆ ನೀರಿನ ಸಮಸ್ಯೆ ಇದ್ದು ವತ್ತಿನೆಣೆಯಲ್ಲಿ 6 ಲಕ್ಷ ಅಂದಾಜು ಮೊತ್ತದ ಓವರ್‌ಹೆಡ್ ಟ್ಯಾಂಕ್ ನಿರ್ಮಿಸಲಾಗಿದ್ದು, ಪೈಪ್ ಜೋಡಣೆ ಕಾರ್ಯ ನಡೆಯುತ್ತಿದೆ. ಕೊಳವೆ ಬಾವಿಯ ಮೂಲಕ ನೀರು ಸಂಗ್ರಹಿಸಿ ಎರಡು ಹಂತವಾಗಿ ಪಡುವರಿ ಭಾಗಕ್ಕೆ ಹಾಗೂ ಸರ್ಕಾರಿ ಆಸ್ಪತ್ರೆ ಮತ್ತು ಪೊಲೀಸ್ ನಿವಾಸಗಳಿಗೆ ನೀರು ಪೂರೈಸಲು ಸಿದ್ಧವಾಗಿದೆ. ಹೊಸ ಯೋಜನೆ ರೂಪಿಸಲು ಪಟ್ಟಣ ಪಂಚಾಯಿತಿ ಸಮಿತಿ ರಚನೆಯಾಗದ ಕಾರಣ ಅನುದಾನ ಬಿಡುಗಡೆಗೊಳ್ಳುತ್ತಿಲ್ಲ. ಮುಂದಿನ ದಿನಗಳಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ ವಾರಾಹಿಯಿಂದ ನಾಲ್ಕು ಓವರ್‌ಹೆಡ್ ಟ್ಯಾಂಕ್‌ಗಳಿಗೆ ನೀರು ಸರಬರಾಜು ಆಗುವ ಭರವಸೆ ಇದೆ ಎನ್ನುತ್ತವೆ ಮೂಲಗಳು.

**ಸರ್ಕಾರಕ್ಕೆ ಪ್ರಸ್ತಾವ ಕಳುಹಿಸಲಾಗಿದೆ**

**ಈಗಾಗಲೇ ಗಂಟಿಹೊಳೆಯಲ್ಲಿ ನದಿಗೆ ಅಣೆಕಟ್ಟೆ ನಿರ್ಮಿಸಿ ಅಲ್ಲಿಂದ ಓವರ್ ಹೆಡ್ ಟ್ಯಾಂಕಿಗೆ ನೀರು ಹರಿಸಲು ಸಮಗ್ರವಾದ ವಿಸ್ತೃತ ವರದಿ ತಯಾರಿಸಿ ಯೋಜನೆ ರೂಪಿಸಿ ಸರ್ಕಾರಕ್ಕೆ ಕಳುಹಿಸಲಾಗಿದೆ. ಸರ್ಕಾರದಿಂದ ಅನುದಾನ ಬಂದಲ್ಲಿ ಮುಂದಿನ ದಿನಗಳಲ್ಲಿ ಬೈಂದೂರು ಭಾಗಕ್ಕೆ ನೀರಿನ ಸಮಸ್ಯೆ ಎದುರಾಗದು ಎಂದು ಬೈಂದೂರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಅಜಯ್ ಭಂಡಾರ್‌ಕರ್ ತಿಳಿಸಿದ್ದಾರೆ.**

## ಡಿವೈಡರ್‌ಗೆ ಢಿಕ್ಕಿಯಾದ ಕೆಎಸ್‌ಆರ್ ಟಿಸಿ ಬಸ್ಸು: ಮೂವರು ಗಂಭೀರ

• ಉದಯವಾಹಿನಿ ಉಪ್ಪಿನಂಗಡಿ

ಧರ್ಮಸ್ಥಳದಿಂದ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಡಿವೈಡರ್‌ಗೆ ಢಿಕ್ಕಿಯಾದ ಘಟನೆ ಮಂಗಳೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 75ರ ಶಿರಾಡಿ ಗ್ರಾಮದ ಅಡ್ಡಹೊಳೆ ಹೆಚ್‌ಪಿ ಪೆಟ್ರೋಲ್ ಪಂಪ್‌ನ ಮುಂಭಾಗದಲ್ಲಿ ಸಂಭವಿಸಿದೆ.

ಅವಘಡದಲ್ಲಿ ಬಸ್ಸಿನಲ್ಲಿದ್ದ ದಂಪತಿ ಸಹಿತ ಮೂವರು ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಉಜಿರೆಯ ಖಾಸಗಿ ಆಸ್ಪತ್ರೆಯಲ್ಲಿ ದಾಖಲಿಸಲಾಗಿದೆ. ಉಳಿದಂತೆ ಬಸ್ಸಿನ ಚಾಲಕ ಸಹಿತ 10 ಮಂದಿ ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ನೆಲ್ಯಾಡಿಯ ಆಸ್ಪತ್ರೆಯೊಂದರಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದಾರೆ. ಕುಂದಾಪುರ ಡಿಪೋಗೆ ಸೇರಿದ ಕೆಎಸ್‌ಆರ್‌ಟಿಸಿ ಬಸ್ಸು ಧರ್ಮಸ್ಥಳದಿಂದ ಬೆಂಗಳೂರಿಗೆ ತೆರಳುತ್ತಿತ್ತು. ಈ ವೇಳೆ ಬಸ್ಸಿನ ಟಯರ್ ಸ್ಫೋಟಗೊಂಡಿದ್ದು, ಬಸ್ಸು ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್‌ಗೆ ಢಿಕ್ಕಿ ಹೊಡೆದಿದೆ.

## ಕಾರುಗಳ ಡಿಕ್ಕಿ: ಮಹಿಳೆ ಸಾವು

• ಉದಯವಾಹಿನಿ ಶಿಕಾರಿಪುರ

ಪಟ್ಟಣದ ಕುಮದ್ವತಿ ನದಿ ಸೇತುವೆ ಸಮೀಪ ಬುಧವಾರ ಎರಡು ಕಾರುಗಳ ಮಧ್ಯೆ ಡಿಕ್ಕಿ ಸಂಭವಿಸಿದ ಪರಿಣಾಮ ಮಹಿಳೆಯೊಬ್ಬರು ಮೃತಪಟ್ಟಿದ್ದು, ಹಲವರಿಗೆ ಗಾಯಗಳಾಗಿವೆ.ಚನ್ನಗಿರಿ ತಾಲ್ಲೂಕಿನ ಕಾಕನೂರು ಗ್ರಾಮದ ರೂಪ (40) ಮೃತರು. ರೂಪ ತಮ್ಮ ಪತಿ ಕಾಂತರಾಜ್ ಹಾಗೂ ಸಹೋದರಿ ರೇಖಾ ಜೊತೆ ಕಾರಿನಲ್ಲಿ ಸೊರಬ ತಾಲ್ಲೂಕಿನ ಆನವಟ್ಟಿಗೆ ತೆರಳುತ್ತಿದ್ದರು. ಕಾಂತರಾಜ್ ಹಾಗೂ ರೇಖಾ ಅವರಿಗೆ ತೀವ್ರ ಗಾಯಗಳಾಗಿದ್ದು, ಶಿವಮೊಗ್ಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇನ್ನೊಂದು ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಕಾಳಿಯಪ್ಪನ್, ಸೋಮಶೇಖರ್, ಸುರೇಶ್ ಕುಮಾರ್ ಹಾಗೂ ಯಮುನಪ್ಪ ಅವರಿಗೆ ಗಾಯಗಳಾಗಿದ್ದು ಶಿವಮೊಗ್ಗ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ಸರ್ಕಾರಿ ನೌಕರನ ಮೇಲೆ ಹಲ್ಲೆ: ಖಂಡನೆ

• ಉದಯವಾಹಿನಿ ರಟ್ಟಿಹಳ್ಳಿ

ಇಲ್ಲಿನ ತಹಶೀಲ್ದಾರ ಕಾರ್ಯಾಲಯದ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದವರಿಗೆ ಕಠಿಣ ಶಿಕ್ಷೆ ನೀಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ತಹಶೀಲ್ದಾರ್ ಶ್ವೇತಾ ಅಮರಾವತಿ ಅವರಿಗೆ ಬುಧವಾರ ಮನವಿ ಸಲ್ಲಿಸಲಾಯಿತು.

ಮಲ್ಲೇಶ ಕರಿಗಾರ ಮಾತನಾಡಿ, ದ್ವಿತೀಯ ದರ್ಜೆ ಸಹಾಯಕ ಲಿಂಗರಾಜ ಮೂಲಮನಿ ಅವರು ಕರ್ತವ್ಯದಲ್ಲಿರುವಾಗ ಶಂಕರ ಗೌಡ ಚನ್ನಗೌಡ್ರ, ಪ್ರಕಾಶ ಹಾಗೂ ಬಸವರಾಜ ಗಬ್ಬರ ಎಂಬುವರು ಮಂಗಳವಾರ ಹಲ್ಲೆ ನಡೆಸಿದ್ದಾರೆ. ಸರ್ಕಾರಿ ನೌಕರರ ಮೇಲೆ ಹಲ್ಲೆ ಖಂಡನೀಯ. ನ್ಯಾಯ ಸಿಗುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು. ಸ್ಥಳಕ್ಕೆ ಆಗಮಿಸಿದ ಸಿಪಿಐ ಮೇಘರಾಜ ಎಂ.ವಿ. ಅವರು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು' ಎಂದು ಭರವಸೆ ನೀಡಿದರು.

## ಸಮರ್ಪಕ ವಿದ್ಯುತ್ ಪೂರೈಕೆಗೆ ಸೂಚನೆ

• ಉದಯವಾಹಿನಿ ಚಿಕ್ಕಮಗಳೂರು

ಗೃಹಜ್ಯೋತಿ ಯೋಜನೆಯಡಿ ಯಾವ ಫಲಾನುಭವಿಗೂ ಅನ್ಯಾಯವಾಗದಂತೆ ಪ್ರತಿ ಕುಟುಂಬಕ್ಕೂ ಸಮರ್ಪಕ ವಿದ್ಯುತ್ ಪೂರೈಕೆ ಆಗಬೇಕೆಂದು ಮೆಸ್ಕಾಂ ಅಧಿಕಾರಿಗಳಿಗೆ ಗ್ಯಾರಂಟಿ ಪ್ರಾಧಿಕಾರದ ತಾಲ್ಲೂಕು ಘಟಕದ ಅಧ್ಯಕ್ಷ ಮಲ್ಲೇಶ್ ಸ್ವಾಮಿ ಸೂಚಿಸಿದರು.

ನಗರದ ಮೆಸ್ಕಾಂ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಮೆಸ್ಕಾಂ ಜನಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು, ಈ ಯೋಜನೆಯು ಪ್ರತಿಯೊಬ್ಬ ಮಧ್ಯಮ ವರ್ಗದ, ಕೆಳವರ್ಗದ ಜನರ ಸಂಜೀವಿನಿಯಾಗಿದ್ದು, ನಮ್ಮ ಸರ್ಕಾರವು ಸದುದ್ದೇಶದಿಂದ ಸಾರ್ವಜನಿಕರ ಬಳಕೆಗೆ ಈ ಯೋಜನೆ ರೂಪಿಸಿದೆ. ಆದ್ದರಿಂದ ಮೆಸ್ಕಾಂ ಅಧಿಕಾರಿಗಳು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಗೃಹಜ್ಯೋತಿ ಯೋಜನೆಯಡಿ ಈವರೆಗೂ ತಾಲ್ಲೂಕು ಉತ್ತಮ ಪ್ರಗತಿ ಕಂಡಿದ್ದು, ಮುಂದಿನ ದಿನಗಳಲ್ಲಿ ಈ ಯೋಜನೆ ವ್ಯಾಪ್ತಿಗೆ ಒಳಪಡದ ಫಲಾನುಭವಿಗಳನ್ನು ಯೋಜನೆಗೆ ಸೇರಿಸುವ ಕೆಲಸ ಮಾಡಲಾಗುವುದು ಎಂದರು. ಅಲ್ಲದೆ ತಾಲ್ಲೂಕಿನ ಪ್ರತಿ ಗ್ರಾಮಕ್ಕೆ ವಿದ್ಯುತ್ ಪೂರೈಕೆ, ಬೀದಿ ದೀಪ ಅಳವಡಿಕೆ, ವಿದ್ಯುತ್ ಬಲ್ಬ್ ಅಳವಡಿಕೆ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು ಆದಷ್ಟು ಬೇಗ ಈ ಸಮಸ್ಯೆ ಬಗೆಹರಿಸಲಾಗುವುದು ಎಂಬ ಭರವಸೆ ನೀಡಿದರು.


ಉದಯವಾಹಿನಿ ಚಿತ್ರ

ತಾಲ್ಲೂಕಿನ ವ್ಯಾಪ್ತಿಗೆ ಸೇರುವ ಹಲವು ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಸವಿದ್ದು, ಅಧಿಕಾರಿಗಳು ಈ ಬಗ್ಗೆ ಗಮನಹರಿಸಿ ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಸಾರ್ವಜನಿಕರು ಆಗ್ರಹಿಸಿದರು.

ತಾಲ್ಲೂಕು ಗ್ಯಾರಂಟಿ ಯೋಜನೆಯ ಪ್ರಾಧಿಕಾರದ ಉಪಾಧ್ಯಕ್ಷ ಅನ್ಸರ್ ಅಲಿಖಾನ್, 'ಸಮರ್ಪಕ ವಿದ್ಯುತ್ ಪೂರೈಕೆಗೆ ಅಧಿಕಾರಿಗಳಿಗೆ ಸೂಚಿಸಲಾಗಿದ್ದು, ಮುಂದಿನ ದಿನಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ಲೋಪವಾಗದಂತೆ ಕ್ರಮ ವಹಿಸಲಾಗುವುದು ಎಂದು ಸಾರ್ವಜನಿಕರಿಗೆ ಭರವಸೆ ನೀಡಿದರು.

## ಸಿಇಟಿ: ಮೊದಲ ದಿನ ಸುಗಮ

• ಉದಯವಾಹಿನಿ ಬೆಳಗಾವಿ

ಎಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಜಿಲ್ಲೆಯಲ್ಲಿ 49 ಕೇಂದ್ರಗಳಲ್ಲಿ ಭೌತವಿಜ್ಞಾನ ಮತ್ತು ರಸಾಯನ ವಿಜ್ಞಾನ ವಿಷಯಗಳ ಸಾಮಾನ್ಯ ಪ್ರವೇಶ ಪರೀಕ್ಷೆ ಸುಗಮವಾಗಿ ನಡೆಯಿತು.

ಬೆಳಗಾವಿ ಶೈಕ್ಷಣಿಕ ಜಿಲ್ಲೆಯಲ್ಲಿ 7,939 ವಿದ್ಯಾರ್ಥಿಗಳು 2 ವಿಷಯಗಳ ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದರು. ಈ ಪೈಕಿ ಬೆಳಿಗ್ಗೆ 10.30ರಿಂದ 11.50ರವರೆಗೆ ನಡೆದ ಭೌತ ವಿಜ್ಞಾನ ವಿಷಯದ ಪರೀಕ್ಷೆಗೆ 7,436 ವಿದ್ಯಾರ್ಥಿಗಳು ಹಾಜರಾದರು. 503 ವಿದ್ಯಾರ್ಥಿಗಳು ಗೈರಾಗಿದ್ದರು. ಮಧ್ಯಾಹ್ನ 2.30ರಿಂದ 3.50 ರವರೆಗೆ ನಡೆದ ರಸಾಯನ ವಿಜ್ಞಾನ ವಿಷಯದ ಪರೀಕ್ಷೆಗೆ 7,430 ವಿದ್ಯಾರ್ಥಿಗಳು ಹಾಜರಾದರೆ, 509 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿಲ್ಲ. ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯಲ್ಲಿ 10,597 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದರು. ಈ ಪೈಕಿ ಭೌತ ವಿಜ್ಞಾನ ವಿಷಯದ ಪರೀಕ್ಷೆಗೆ 10,153 ವಿದ್ಯಾರ್ಥಿಗಳು ಹಾಜರಾದರೆ, 444 ವಿದ್ಯಾರ್ಥಿಗಳು ಗೈರು ಹಾಜರಾದರು. ರಸಾಯನ ವಿಜ್ಞಾನ ವಿಷಯದ ಪರೀಕ್ಷೆಗೆ 10,152 ವಿದ್ಯಾರ್ಥಿಗಳು ಹಾಜರಾದರೆ, 445 ವಿದ್ಯಾರ್ಥಿಗಳು ಗೈರಾಗಿದ್ದರು.

ಏಪ್ರಿಲ್ 17ರಂದು ಬೆಳಿಗ್ಗೆ ಗಣಿತ ಮತ್ತು ಮಧ್ಯಾಹ್ನ ಜೀವ ವಿಜ್ಞಾನ ವಿಷಯದ ಪರೀಕ್ಷೆ ನಡೆಯಲಿದೆ.

## ಮನೆಗಳ್ಳತನ: ಒಬ್ಬನ ಬಂಧನ

• ಉದಯವಾಹಿನಿ ಮೂಡಿಗೆರೆ

ತಾಲ್ಲೂಕಿನ ಗೋಣಿಬೀಡು ಪೊಲೀಸ್ ಠಾಣೆ ವ್ಯಾಪ್ತಿಯ ಬೆಟ್ಟದಮನೆ ಗ್ರಾಮದ ಕೈಮರದಲ್ಲಿ ನಡೆದಿದ್ದ ಮನೆಗಳ್ಳತನಕ್ಕೆ ಸಂಬಂಧಿಸಿದಂತೆ ಗೋಣಿಬೀಡು ಪೊಲೀಸರು ಸಂಜಯ್ ಅಲಿಯಾಸ್ ಹನುಮಂತ ಎಂಬಾತನನ್ನು ಬಂಧಿಸಿ, ಕಳುವಾಗಿದ್ದ ಚಿನ್ನಾಭರಣ ವಶಕ್ಕೆ ಪಡೆದಿದ್ದಾರೆ.

ಬೆಟ್ಟದಮನೆ ಗ್ರಾಮದ ಕೈಮರದಲ್ಲಿ ಏ. 2ರಂದು ಮನೆಯ ಬಾಗಿಲಿನ ಬೀಗ ಮುರಿದು ಚಿನ್ನಾಭರಣ ಹಾಗೂ ಬೆಳ್ಳಿ ವಸ್ತುಗಳನ್ನು ಕಳವು ಮಾಡಲಾಗಿತ್ತು. ಸಿಸಿ ಟಿ.ವಿ ಕ್ಯಾಮೆರಾದಲ್ಲಿ ದಾಖಲಾಗಿದ್ದ ದೃಶ್ಯಾವಳಿ ಆಧಾರದಲ್ಲಿ ಆರೋಪಿಯನ್ನು ವಶಕ್ಕೆ ಪಡೆದು ತನಿಖೆ ನಡೆಸಿದಾಗ ಕಳವು ಮಾಡಿದ್ದನ್ನು ಒಪ್ಪಿಕೊಂಡಿದ್ದು, ಆತನಿಂದ ವಸ್ತುಗಳನ್ನು ಜಪ್ತಿ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯು ಮೂಲತಃ ದಾವಣಗೆರೆ ಜಿಲ್ಲೆಯ ಚನ್ನಗಿರಿಯವನಾಗಿದ್ದು, ತಾಲ್ಲೂಕಿನ ಹಂಡುಗುಳಿ ಗ್ರಾಮದಲ್ಲಿ ಕೂಲಿ ಕೆಲಸ ಮಾಡಿಕೊಂಡಿದ್ದನು. ಯಾರೂ ಇಲ್ಲದ ಮನೆಗಳನ್ನು ಪತ್ತೆಹಚ್ಚಿ ಬೀಗ ಮುರಿದು ಕಳ್ಳತನ ಮಾಡುತ್ತಿದ್ದನು. ಅದರಂತೆ ಕೈಮರದಲ್ಲಿದ್ದ ಮಹಿಳೆಯೊಬ್ಬರ ಮನೆಯನ್ನು ಗುರುತಿಸಿಕೊಂಡು, ಆ ಮಹಿಳೆ ಮನೆಯಲ್ಲಿಲ್ಲದ ಸಮಯದಲ್ಲಿ ಮನೆ ಬೀಗ ಮುರಿದು ಕಳುವು ಮಾಡಿದ್ದನು.


ಉದಯವಾಹಿನಿ ಚಿತ್ರ

ಕಳವು ಮಾಡಿದ 5.52 ಲಕ್ಷ ಮೌಲ್ಯದ ಚಿನ್ನಾಭರಣವನ್ನು ವಿಜಯನಗರ ಜಿಲ್ಲೆಯ ಹೊಸಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಶಪಡಿಸಿಕೊಳ್ಳಲಾಗಿದ್ದು. ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ಹೊರಗುತ್ತಿಗೆ ನೌಕರರಿಗೆ ಪ್ರತಿ ತಿಂಗಳು ವೇತನ ಪಾವತಿಸುವುದು ಏಜೆನ್ಸಿ ಜವಾಬ್ದಾರಿ, ನೆಪಗಳನ್ನು ಹೇಳುವಂತಿಲ್ಲ

# ಬಡ್ಡಿ ಸಹಿತ ಬಾಕಿ ವೇತನ ಪಾವತಿಸಿ: ನಾಗಲಕ್ಷ್ಮಿ ಚೌಧರಿ ತಾಕೀತು

• ಉದಯವಾಹಿನಿ ದಾವಣಗೆರೆ

ಹೊರಗುತ್ತಿಗೆ ನೌಕರರಿಗೆ ಪ್ರತಿ ತಿಂಗಳು ವೇತನ ಪಾವತಿಸುವುದು ಏಜೆನ್ಸಿ ಜವಾಬ್ದಾರಿ. ನೆಪಗಳನ್ನು ಹೇಳಿ ವೇತನ ತಡೆಹಿಡಿಯುವುದನ್ನು ಸಹಿಸಲು ಸಾಧ್ಯವಿಲ್ಲ. ಬಾಕಿ ಉಳಿಸಿಕೊಂಡ ವೇತನವನ್ನು ಬಡ್ಡಿ ಸಹಿತ ಪಾವತಿಸಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ತಾಕೀತು ಮಾಡಿದರು. ಜಿಲ್ಲಾಧಿಕರಿ ಕಚೇರಿಯಲ್ಲಿ ಮಹಿಳಾ ಸಬಲೀಕರಣಕ್ಕೆ ಸಂಬಂಧಿಸಿದಂತೆ ಬುಧವಾರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಕಾರ್ಮಿಕ ಇಲಾಖೆ ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡರು.

'ಜಗಳೂರು ತಾಲ್ಲೂಕು ಆಸ್ಪತ್ರೆಯ ಹೊರಗುತ್ತಿಗೆ ನೌಕರರಿಗೆ ಮೂರು ತಿಂಗಳಿಂದ ವೇತನ ಸಿಕ್ಕಿಲ್ಲ. ಬಾಕಿ ವೇತನಕ್ಕೆ ಏಜೆನ್ಸಿ ಲಂಚಕ್ಕ ಬೇಡಿಕೆ ಇಟ್ಟಿದೆ. ವೇತನ ಇಲ್ಲದೇ ಮಹಿಳೆಯರು ಕಣ್ಣೀರು ಹಾಕುತ್ತಿದ್ದಾರೆ. ಅಧಿಕಾರಿಗಳು ಕೂಡ ನಿರ್ಲಕ್ಷ್ಯ ವಹಿಸಿದ್ದಾರೆ. ಇದು ಎಂಥ ವ್ಯವಸ್ಥೆ ಎಂದು ಪ್ರಶ್ನಿಸಿದರು. 'ಪ್ರತಿ ನೌಕರರಿಗೆ ಸರ್ಕಾರ 18,000 ಕನಿಷ್ಠ ವೇತನ ಪಾವತಿಸುತ್ತಿದೆ. ಈ ಹಣದಲ್ಲಿ ಬಹುಪಾಲನ್ನು ಏಜೆನ್ಸಿಗಳು ಕಬಳಿಸುತ್ತಿರುವಂತೆ ಕಾಣುತ್ತಿದೆ. ನೌಕರರಿಗೆ 6,000ದಿಂದ 8,000 ಮಾತ್ರ ನೀಡುತ್ತಿವೆ. ಜಿಲ್ಲೆಯ ಎಲ್ಲಾ ಆಸ್ಪತ್ರೆಯಲ್ಲಿ ಇಂತಹ ವ್ಯವಸ್ಥೆ ಇರುವ ಬಗ್ಗೆ ದೂರುಗಳು ಬಂದಿವೆ. ಇದನ್ನು ಗಂಭೀರವಾಗಿ ಪರಿಗಣಿಸಬೇಕು' ಎಂದರು.

**ಬಸ್ ಸೌಲಭ್ಯಕ್ಕೆ ಸೂಚನೆ:** ಜಗಳೂರು ತಾಲ್ಲೂಕಿನ ಹನುಮಂತಾಪುರ ಗೊಲ್ಲರಹಟ್ಟಿ ಮೂಲಸೌಲಭ್ಯದಿಂದ ಬಳಲುತ್ತಿದೆ. ಕಡಿತಗೊಂಡ ವಿದ್ಯುತ್ ಸಂಪರ್ಕ ಎರಡು ದಿನಗಳಾದರೂ ಬರುವುದಿಲ್ಲ. ಸಾರಿಗೆ ಸೌಲಭ್ಯ ಇಲ್ಲದೇ ಮಕ್ಕಳು ಶಾಲೆಯಿಂದ ಹೊರಗೆ ಉಳಿಯುವ ಅಪಾಯವಿದೆ.

ಗ್ರಾಮಕ್ಕೆ ಬಸ್ ಸೌಲಭ್ಯ ಕಲ್ಪಿಸಲು ಏನು ಸಮಸ್ಯೆ' ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ (ಕೆಎಸ್ ಆರ್‌ಟಿಸಿ) ಅಧಿಕಾರಿಗಳನ್ನು ಪ್ರಶ್ನಿಸಿದರು. ಗ್ರಾಮಕ್ಕೆ ನಾಳೆಯಿಂದಲೇ ಸಾರಿಗೆ ಸೌಲಭ್ಯ ಕಲ್ಪಿಸಲಾಗುವುದು. ವಿದ್ಯುತ್ ಸಂಪರ್ಕಕ್ಕೆ ಅಗತ್ಯ ಪರಿವರ್ತಕ ಅಳವಡಿಸಲು ವ್ಯವಸ್ಥೆ ಮಾಡಲಾಗುವುದು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಸುರೇಶ್ ಬಿ.ಇಟ್ನಾಳ್ ಭರವಸೆ ನೀಡಿದರು.

**19 ಮಹಿಳೆಯರ ಕೊಲೆ:** 2023ರಿಂದ 2025ರವರೆಗೆ ಮೂರು ವರ್ಷಗಳ ಅವಧಿಯಲ್ಲಿ ಜಿಲ್ಲೆಯಲ್ಲಿ 19 ಮಹಿಳೆಯರ ಕೊಲೆ ನಡೆದಿದೆ. 2023ರಲ್ಲಿ 3, 2024ರಲ್ಲಿ 11 ಹಾಗೂ 2025ರಲ್ಲಿ ಈವರೆಗೆ 5 ಮಹಿಳೆಯರು ಕೊಲೆಗೀಡಾಗಿದ್ದಾರೆ. ಕೌಟುಂಬಿಕ ಕಲಹ, ಅನೈತಿಕ ಸಂಬಂಧ. ಮದ್ಯ ವ್ಯಸನ ಸೇರಿ ಹಲವು ಕಾರಣಗಳಿಂದ ಈ ಕೊಲೆಗಳು ನಡೆದಿವೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಸಭೆಗೆ ಮಾಹಿತಿ ನೀಡಿದರು. ಕಣ್ಣೀರು ಹಾಕಿದ ಮಹಿಳೆ 30 ದಿನಗೂಲಿ ಕೊಡುತ್ತಿದ್ದ ಕಾಲದಿಂದಲೂ ಚಿಗಟೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದೆ. 20 ವರ್ಷಕ್ಕೂ ಹೆಚ್ಚು ಸೇವಾ ಅನುಭವ ಇದೆ. ಇತ್ತೀಚಿಗೆ ಕೆಲಸದಿಂದ ತೆಗೆದು ಹಾಕಲಾಗಿದೆ. ಬದುಕಿಗೆ ಆಸರೆಯಾಗಿದ್ದ ಉದ್ಯೋಗ ಕಳೆದುಕೊಂಡು ಕುಟುಂಬ ನಿರ್ವಹಣೆಗೆ ಕಷ್ಟಪಡುತ್ತಿದ್ದೇನೆ ಎಂದ ದುಗ್ಗಮ್ಮ ಕೈಮುಗಿದು ಬಿಕ್ಕಿ ಬಿಕ್ಕಿ ಅತ್ತರು. ಮಹಿಳೆಯನ್ನು ಸಮಾಧಾನಪಡಿಸಿದ ನಾಗಲಕ್ಷ್ಮಿ ಚೌಧರಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಸಿಬ್ಬಂದಿಯನ್ನು ಏಕಾಏಕಿ ತೆಗೆದುಹಾಕುವುದು ಸರಿಯಲ್ಲ. ಏಜೆನ್ಸಿ ಬದಲಾದರೂ ಅನುಭವ ಇರುವವರನ್ನು ಪರಿಗಣಿಸಬೇಕು. ಮಹಿಳೆಯನ್ನು ಮತ್ತೆ ನೇಮಕ ಮಾಡಿಕೊಳ್ಳಿ' ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ನಾಗೇಂದ್ರಪ್ಪ ಅವರಿಗೆ ತಾಕೀತು ಮಾಡಿದರು.

ವಿವಾಹಪೂರ್ವ ಸಮಾಲೋಚನಾ ಕೇಂದ್ರ ಕೌಟುಂಬಿಕ ಕಲಹದ ಪ್ರಕರಣಗಳು ಹೆಚ್ಚಾಗುತ್ತಿವೆ. ವಿವಾಹ ಪೂರ್ವ ಸಮಾಲೋಚನೆ ನಡೆಸಿದರೆ ಅನುಕೂಲ ಎಂಬುದು ರಾಷ್ಟ್ರೀಯ ಮಹಿಳಾ ಆಯೋಗದ ಸಲಹೆ. ಪ್ರತಿ ಜಿಲ್ಲೆಯಲ್ಲಿ ಪ್ರತ್ಯೇಕ ಸಮಾಲೋಚನಾ ಕೇಂದ್ರ ತೆರೆಯಬೇಕಿದೆ. ಇದು ದಾವಣಗೆರೆಯಿಂದಲೇ ಆರಂಭವಾಗಲಿ ಎಂದು ನಾಗಲಕ್ಷ್ಮಿ ಚೌಧರಿ ಸೂಚನೆ ನೀಡಿದರು.

ಮಧುವೆಗೂ ಮುನ್ನ ವಧು-ವರ ಹಾಗೂ ಕುಟುಂಬದ ಸದಸ್ಯರನ್ನು ಸಮಾಲೋಚನೆಗೆ ಒಳಪಡಿಸಬೇಕಿದೆ. ಅತ್ತೆ ಮಾವ ನಾದಿನಿ ಸೇರಿ ಹಲವರಿಗೆ ಅರಿವು ಮೂಡಿಸುವ ಅಗತ್ಯವಿದೆ. ಇದರಿಂದ ಕೌಟುಂಬಿಕ ಕಲಹ ನಿಯಂತ್ರಣ ಸಾಧ್ಯವಿದೆ' ಎಂದು ಹೇಳಿದರು.

**ಕಳೆದ ವರ್ಷ ಜಿಲ್ಲೆಯಲ್ಲಿ 93 ಪೋಕ್ಸೊ ಪ್ರಕರಣಗಳು ದಾಖಲಾಗಿವೆ. ಇದರಲ್ಲಿ ಬಹುತೇಕವು ಪ್ರೀತಿ ಪ್ರೇಮಕ್ಕೆ ಸಂಬಂಧಪಟ್ಟವು. ಶಿಕ್ಷಕರೇ ಮಕ್ಕಳ ಮೇಲೆ ದೌರ್ಜನ್ಯ ನಡೆಸಿದ ಒಂದೆರಡು ಪ್ರಕರಣ ನಡೆದಿವೆ. ಈ ಕುರಿತು ಜಾಗೃತಿ ಮೂಡಿಸಲು ಗಮನ ಹರಿಸುತ್ತೇವೆ -ನಾಗಲಕ್ಷ್ಮಿ ಚೌಧರಿ**


ಉದಯವಾಹಿನಿ ಚಿತ್ರ

**ಅಕ್ರಮ ಮದ್ಯ ಮಾರಾಟ ನಿಯಂತ್ರಿಸಿ**

**'ಜಿಲ್ಲೆಯ ಗ್ರಾಮೀಣ ಪ್ರದೇಶದ ಎಲ್ಲೆಂದರಲ್ಲಿ ಸಿಗುತ್ತಿರುವ ಮದ್ಯ ಅಕ್ರಮ ಮಾರಾಟಕ್ಕೆ ಅಬಕಾರಿ ಹಾಗೂ ಪೊಲೀಸ್ ಇಲಾಖೆ ಕಡಿವಾಣ ಹಾಕಬೇಕು ಎಂದು ನಾಗಲಕ್ಷ್ಮಿ ಚೌಧರಿ ಸೂಚನೆ ನೀಡಿದರು. 'ಕೆಲ ಗ್ರಾಮಗಳಲ್ಲಿ ಚಿಕ್ಕ ಅಂಗಡಿಗಳಲ್ಲಿ ಮದ್ಯ ಸಿಗುತ್ತಿದೆ. ಮದ್ಯ ಸೇವನೆ ಮಾಡುವ ಪುರುಷರಿಂದ ಕೌಟುಂಬಿಕ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿವೆ. ಸುಲಭವಾಗಿ ಮದ್ಯ ಲಭ್ಯ ಆಗುತ್ತಿರುವುದರಿಂದ ಮಕ್ಕಳು ಕೂಡ ದಾರಿತಪ್ಪುವ ಅಪಾಯವಿದೆ. ಮಹಿಳೆಯರ ಸುರಕ್ಷತೆಯ ದೃಷ್ಟಿಯಿಂದ ಮದ್ಯ ಅಕ್ರಮ ಮಾರಾಟ ನಿಯಂತ್ರಿಸುವುದು ಸೂಕ್ತ' ಎಂದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು.

**ವೃಷಭ** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

**ಮಿಥುನ** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ.

**ಕರ್ಕಾಟಕ** ಆರೋಗ್ಯ ಚೆನ್ನಾಗಿಲ್ಲದ ಒಬ್ಬ ಸಂಬಂಧಿಯನ್ನು ಭೇಟಿ ಮಾಡಿ. ಪ್ರಣಯದ ಆಲೋಚನೆಗಳು, ಹಿಂದಿನ ಕನಸುಗಳಲ್ಲಿ ಕಳೆದುಹೋಗುತ್ತೀರಿ. ಕೆಲಸದಲ್ಲಿ ನಿಜವಾಗಿಯೂ ಏನಾದರೂ ಅದ್ಭುತವಾದದ್ದನ್ನು ಮಾಡಬಹುದು.

**ಸಿಂಹ** ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು.

**ಕನ್ಯಾ** ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ಇಂದು ಭೂಮಿಗೆ ಸಂಬಂಧಿಸಿದ ಯಾವುದೇ ವಿಷಯಕ್ಕೆ ಹಣವನ್ನು ಖರ್ಚು ಮಾಡಬೇಕಾಗಬಹುದು.

**ತುಲಾ** ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ಹಿಂದಿನ ಸಾಲವನ್ನು ಇಂದಿನವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಸಾಲ ಕೊಡಬಾರದು.

**ವೃಶ್ಚಿಕ** ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕ ಸ್ಥೈರ್ಯವನ್ನು ಹೆಚ್ಚಿಸುತ್ತದೆ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ.

**ಧನಸ್ಸು** ಒಟ್ಟಾರೆ ಆರೋಗ್ಯ ಉತ್ತಮವಾಗಿದ್ದರೂ ಪ್ರಯಾಣ ಒತ್ತಡಮಯವೂ ಮತ್ತು ಕಷ್ಟಕರವೂ ಆಗಿರುತ್ತದೆ. ಈ ರಾಶಿಚಕ್ರದ ವಿವಾಹಿತ ಜನರಿಗೆ ಅತ್ತೆ ಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ.

**ಮಕರ** ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ. ಸ್ನೇಹಿತರ ಸಮಸ್ಯೆಗಳು ನಿಮಗೆ ಕೆಟ್ಟದೆನಿಸುವಂತೆ ಮಾಡಬಹುದು.

**ಕುಂಭ** ನಿಮ್ಮ ಅನುಮಾನದ ಪ್ರಕೃತಿ ನಿಮಗೆ ಸೋಲಿನ ಮುಖ ತೋರಿಸಬಹುದು. ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು.

**ಮೀನ** ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ.

## ಅಪಘಾತ: ಇಬ್ಬರು ಸ್ಥಳದಲ್ಲಿಯೇ ಸಾವು

• ಉದಯವಾಹಿನಿ, ಬಾದಾಮಿ

ಸಮೀಪದ ಚಿಕ್ಕಮುಚ್ಚಳಗುಡ್ಡ–ಹಿರೇಮುಚ್ಚಳಗುಡ್ಡ ಗ್ರಾಮದ ರಸ್ತೆಯಲ್ಲಿ ಮಂಗಳವಾರ ಎರಡು ಬೈಕ್ ಮಧ್ಯೆ ಸಂಭವಿಸಿದ ಅಪಘಾತದಲ್ಲಿ ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟಿದ್ದು, ಇನ್ನೊಬ್ಬ ಬೈಕ್ ಸವಾರ ಗಾಯಗೊಂಡಿದ್ದಾನೆ.

ಕುಟಕನಕೇರಿ ಗ್ರಾಮದ ನಿಂಗರಾಜ ತಳವಾರ (18) ಮತ್ತು ಶಿವರಾಜ ಮಾದರ (17) ಮೃತರು. ಗಾಯಗೊಂಡ ವ್ಯಕ್ತಿಯು ಕುಟಕನಕೇರಿ ಗ್ರಾಮದವನಾಗಿದ್ದು ಆಸ್ಪತ್ರೆಗೆ ಸೇರಿಸಲಾಗಿದೆ. ಸ್ಥಳಕ್ಕೆ ಸಿಪಿಐ ಕರಿಯಪ್ಪ ಬನ್ನೆ, ಪಿಎಸ್ಐ ವಿಠಲ ನಾಯಕ ಭೇಟಿ ನೀಡಿದರು, ಇಲ್ಲಿನ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೀಚ್‌ನಲ್ಲಿ ನೀರಿನಲ್ಲಿ ಮುಳುಗಿ ಮುಂಬೈ ಯುವಕ ಸಾವು: ಮತ್ತೊಬ್ಬ ನಾಪತ್ತೆ

• ಉದಯವಾಹಿನಿ, ಮಂಗಳೂರು

ಮುಂಬೈನಿಂದ ಬಂದ ಕುಟುಂಬವೊಂದು ಬೀಚ್ ನೀರಿನಲ್ಲಿ ಮುಳುಗಿ ಇಬ್ಬರು ಯುವಕರು ಸಾವನ್ನಪ್ಪಿದ್ದ ದುರಂತ ಘಟನೆ ಬೀಚ್‌ನಲ್ಲಿ ನಡೆದಿದೆ. ಮೃತ ಧ್ಯಾನ್ ಬಂಜನ್ (18) , ವಿವೇಕಾನಂದ ಬಂಜನ್ ಅವರ ಮಗ, ಮುಂಬೈ ನಿವಾಸಿ ಎನ್ನಲಾಗಿದೆ. ಅಪ್ರಾಪ್ತ ವಯಸ್ಕ ಹನೀಶ್ ಕುಲಾಲ್(15) ಎಂದು ಗುರುತಿಸಲಾಗಿದೆ. ಇಬ್ಬರು ಯುವಕರು ಮುಂಬೈನಿಂದ ಬಂದ 10 ಸದಸ್ಯರ ಗುಂಪಿನಲ್ಲಿದ್ದರು. ಪ್ರಾಥಮಿಕ ವರದಿಗಳ ಪ್ರಕಾರ, ಇಬ್ಬರೂ ಹದಿಹರೆಯದವರು ಸಮುದ್ರದಲ್ಲಿ ಈಜುವಾಗ ತೊಂದರೆಗೆ ಸಿಲುಕಿದ್ದರು ಎನ್ನಲಾಗಿದೆ.

ಕ್ಷಿಪ್ರ ಕಾರ್ಯಾಚರಣೆ ನಡೆಸಿದ ಜೀವರಕ್ಷಕ ಪ್ರದೀಪ್ ಆಚಾರ್ಯ ಧ್ಯಾನ್‌ನನ್ನು ನೀರಿನಿಂದ ಹೊರತೆಗೆದು ಪದ್ಮಾವತಿ ಆಸ್ಪತ್ರೆಗೆ ಸಾಗಿಸುವಲ್ಲಿ ಯಶಸ್ವಿಯಾದರು, ಆದರೆ ಅಲ್ಲಿ ವೈದ್ಯರು ಬರುವಷ್ಟರಲ್ಲಿ ಅವರು ಮೃತಪಟ್ಟಿದ್ದಾರೆ ಎಂದು ಘೋಷಿಸಿದರು.

## ಮಕ್ಕಳಲ್ಲಿ ಅತ್ಮಸ್ಥೈರ್ಯ ಮುಖ್ಯ

• ಉದಯವಾಹಿನಿ, ಹೊಸಪೇಟೆ

ಅಗ್ನಿ ಅವಘಡಗಳು ಆಕಸ್ಮಿಕ ದುರಂತಗಳಾಗಿದ್ದು, ಧೈರ್ಯವೇ ಸರ್ವತ್ರ ಸಾಧನವಾಗಿದೆ. ತುರ್ತು ಸೇವೆ ನೀಡಿ ಜೀವ ಸಂರಕ್ಷಣೆಗೆ ಆದ್ಯತೆ ನೀಡುವುದು ಅಗ್ನಿಶಾಮಕ ದಳದ ಕರ್ತವ್ಯವಾಗಿದೆ ಎಂದು ಜಿಲ್ಲಾ ಅಗ್ನಿಶಾಮಕ ಅಧಿಕಾರಿ ವಾಲಿಪ್ರಮೋದ್ ಹೇಳಿದರು.

ನಗರದ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಹಾಗೂ ಡಿಎವಿ ಪಬ್ಲಿಕ್ ಶಾಲೆಯ ಸಹಯೋಗದಲ್ಲಿ ಏರ್ಪಡಿಸಿದ್ದ ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು, ಬೆಂಕಿ ಅವಘಡಗಳಲ್ಲಿ ಧೈರ್ಯ, ತಾಳ್ಮೆಯಿಂದ ಸೇವೆ ನೀಡಲು ಮುಂದಾಗಬೇಕು. ಅಗ್ನಿ ದುರಂತಗಳು ನಡೆದಾಗ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ಅರಿತಿರಬೇಕು ಎಂದರು. ಬಳಿಕ ಫೈಯರ್ ಇಂಜಿನ್ ಸಹಾಯದಿಂದ ದೊಡ್ಡ ಬೆಂಕಿಗಳನ್ನು ಆರಿಸುವ ಪ್ರಾತ್ಯಕ್ಷಿಕೆಯನ್ನು ತೋರಿಸಿದರು. ಕಟ್ಟಡಗಳಿಗೆ ಬೆಂಕಿ ಬಿದ್ದಾಗ ಅಗ್ನಿ ನಿರೋಧಕ ಉಡುಪು ಮತ್ತು ಕೃತಕ ಉಸಿರಾಟ ಸಿಲಿಂಡರ್ನೊಂದಿಗೆ ಅಗ್ನಿಯಲ್ಲಿ ಪ್ರವೇಶಿಸಿ ಪ್ರಾಣರಕ್ಷಣೆ ಮನೆಗಳಲ್ಲಿ ಬಳಸುವ ಎಲ್‌ಪಿಜಿ ಸಿಲಿಂಡರ್ ಸ್ಫೋಟಗೊಂಡಾಗ ಮಾಡಬೇಕಾದ ಮುಂಜಾಗೃತ ಕ್ರಮಗಳನ್ನು ಅಗ್ನಿಶಾಮಕ ಉಪಕರಣಗಳನ್ನು ತಂದು ಅವುಗಳನ್ನು ಹೇಗೆ ಉಪಯೋಗಿಸಬೇಕು ಬೆಂಕಿಯನ್ನು ಹೇಗೆ ನಂದಿಸಬೇಕು ಎಂಬುದನ್ನು ಸ್ವತಃ ಸ್ಕೌಟ್ಸ್ ಗೈಡ್ಸ್‌ಗಳಿಂದಲೇ ಪ್ರಾತ್ಯಕ್ಷಿಕೆ ಮಾಡಿಸಿ ಮಕ್ಕಳಲ್ಲಿ ಧೈರ್ಯ ತುಂಬಿಸಲಾಯಿತು.


ಉದಯವಾಹಿನಿ ಚಿತ್ರ

### ಸ್ಥಳೀಯ ಪ್ರದೇಶದಲ್ಲಿ ಕೈಗೊಳ್ಳಬೇಕಾಗಿರುವ ವಿವಿಧ ಕಾಮಗಾರಿಗಳ ಯೋಜನೆ ಕುರಿತು ಅಧಿಕಾರಿಗಳೊಂದಿಗೆ ಸಭೆ


# ಮಹಾಯೋಜನೆ ಸಿದ್ಧಪಡಿಸಲು ಮಾಹಿತಿ ಒದಗಿಸುವಂತೆ ಡಿಸಿ ಸೂಚನೆ

• ಉದಯವಾಹಿನಿ, ವಿಜಯಪುರ

ವಿಜಯಪುರ ನಗರಕ್ಕೆ ಮಹಾಯೋಜನೆ ಸಿದ್ಧಪಡಿಸಲು ಸರ್ಕಾರದಿಂದ ಅನುಮೋದನೆಯಾಗಿದೆ. ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅಮೃತ ಯೋಜನೆಯಡಿ ಜಿಐಎಸ್ ಆಧಾರಿತ ಮಹಾಯೋಜನೆ ಸಿದ್ಧಪಡಿಸಲು ರುದ್ರಾಭಿಷೇಕ್ ಎಂಟರ್‌ಪ್ರೈಸಸ್ ನವದೆಹಲಿ ಇವರಿಗೆ ಕಾರ್ಯಾದೇಶ ನೀಡಲಾಗಿದ್ದು, ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಈ ಸಂಸ್ಥೆಯೊಂದಿಗೆ ಸಮನ್ವಯತೆ ಸಾಧಿಸಿಕೊಂಡು ಸಮಗ್ರ ಮಾಹಿತಿ ಒದಗಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಜಯಪುರ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅಮೃತ ಯೋಜನೆಯಡಿ ಜಿಐಎಸ್ ಆಧಾರಿತ ಮಹಾಯೋಜನೆ ಸಿದ್ಧಪಡಿಸುವ ಕುರಿತು ಹಾಗೂ ವಿಜಯಪುರ ನಗರ ಸ್ಥಳೀಯ ಪ್ರದೇಶದಲ್ಲಿ ಕೈಗೊಳ್ಳಬೇಕಾಗಿರುವ ವಿವಿಧ ಕಾಮಗಾರಿಗಳ ಯೋಜನೆ ತಯಾರಿಸುವ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಭಾರತದ ಸರ್ಕಾರದ ಅಮೃತ ಯೋಜನೆಯಡಿ ಮೂಲಭೂತ ಸೌಕರ್ಯಗಳಾದ ನೀರು ಸರಬರಾಜು, ಒಳಚರಂಡಿ, ನಗರ ಸಾರಿಗೆ, ಉದ್ಯಾನವನ, ನಾಗರಿಕರಿಗೆ ಉತ್ತಮ ಯೋಜನೆ ಹಾಗೂ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ದೇಶದ 500 ನಗರಗಳನ್ನು ಗುರುತಿಸಲಾಗಿದೆ. ರಾಜ್ಯದ 26 ನಗರಗಳಲ್ಲಿ ವಿಜಯಪುರ ನಗರವನ್ನು ಅಮೃತ ಯೋಜನೆಯಡಿ ಗುರುತಿಸಿ, ಎರಡನೇ ಹಂತದ ಪ್ಯಾಕೇಜ್ 5ರಲ್ಲಿ ಸೇರ್ಪಡೆಗೊಳಿಸಲಾಗಿದ್ದು, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶದ ವಿಸ್ತೀರ್ಣ 525 ಚ.ಕಿ.ಮೀ. ಇದ್ದು, ವಿಜಯಪುರ ಮಹಾನಗರ ಪಾಲಿಕೆ ಹಾಗೂ ಗ್ರಾಮ ಪಂಚಾಯತ್ ವ್ಯಾಪ್ತಿಯನ್ನು ಪ್ರಾಧಿಕಾರ ಹೊಂದಿದೆ. ಸಂಬಂಧಿಸಿದ ಇಲಾಖೆ ಅಧಿಕಾರಿಗಳು, ಈ ಸಂಸ್ಥೆ ಕೋರಿದ ಮಾಹಿತಿಯನ್ನು ಪರಿಶೀಲಿಸಿ, ಒದಗಿಸುವ ಮೂಲಕ ಸಂಸ್ಥೆಯೊಂದಿಗೆ ಸಮನ್ವಯತೆ ಸಾಧಿಸಬೇಕು. ಯಾವುದೇ ಮಾಹಿತಿ ಕೈಬಿಟ್ಟು ಹೋಗದಂತೆ ನೋಡಿಕೊಂಡು ಸಮಗ್ರ ಮಾಹಿತಿಯನ್ನು ಒದಗಿಸಬೇಕು ಎಂದು ಅವರು ಹೇಳಿದರು.

> ಪಾರಂಪರಿಕ ಪ್ರದೇಶದ ಸಂರಕ್ಷಣಾ ಸಮಿತಿ ಕಾರ್ಯ ನಿರ್ವಹಿಸಲು ಅನುಕೂಲವಾಗುವಂತೆ ಜಿಲ್ಲೆಯ ಐತಿಹಾಸಿಕ ಸ್ಮಾರಕಗಳ ಅರಿವು-ಜ್ಞಾನ ಹೊಂದಿರುವ ವಿವಿಧ ಪರಿಣಿತರನ್ನೊಳಗೊಂಡ ಉಪ ಸಮಿತಿಯೊಂದನ್ನು ರಚಿಸಿ ಕಾರ್ಯ ನಿರ್ವಹಿಸುವಂತೆ ಅವರು ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

ಮಹಾನಗರ ಪಾಲಿಕೆ, ಹೆಸ್ಕಾಂ, ಜಲಮಂಡಳಿ ಸೇರಿದಂತೆ ಸಂಬಂಧಿಸಿದ ಇಲಾಖೆಗಳು ಹಾಲಿ ಪ್ರಸ್ತುತ ಜಾರಿಯಲ್ಲಿರುವ ಯೋಜನೆಗಳು ಸಹ ಜಿಐಎಸ್‌ನಲ್ಲಿ ಅಳವಡಿಸಿಕೊಳ್ಳುತ್ತಿರುವ ಕುರಿತು ಖಚಿತಪಡಿಸಿಕೊಳ್ಳಬೇಕು. ಜಿಐಎಸ್ ಆಧಾರಿತ ಮಹಾಯೋಜನೆ ಸಿದ್ಧಪಡಿಸಲು ನಿಯೋಜಿತ ಸಂಸ್ಥೆ ಸಂಬಂಧಿಸಿದ ಇಲಾಖೆಗಳೊಂದಿಗೆ ದತ್ತಾಂಶ ಸಂಗ್ರಹಿಸಿಕೊಂಡಿದೆ. ಪ್ರಸ್ತುತ ಚಾಲ್ತಿಯಲ್ಲಿರುವ ವಿವಿಧ ಯೋಜನೆಗಳು, ಅಭಿವೃದ್ಧಿ ಕಾರ್ಯಗಳಾದ ಕುಡಿಯುವ ನೀರು, ಒಳಚರಂಡಿ, ವಿದ್ಯುತ್, ಸರ್ಕಾರಿ ಕಟ್ಟಡ, ಜಾಗ, ಪ್ರವಾಸೋದ್ಯಮ ಸ್ಥಳ, ರಾಷ್ಟ್ರೀಯ ಹೆದ್ದಾರಿ ರಸ್ತೆ, ಇತ್ತೀಚಿನ ಮಾಹಿತಿಯನ್ನು ಬೇರೆ ಇಲಾಖೆಯಿಂದ ಪಡೆದುಕೊಂಡು ಪ್ರಸ್ತಾವಿತ ಮಾಹಿತಿಯಲ್ಲಿ ಸೇರ್ಪಡೆಗೊಳಿಸಿ ಒಂದು ತಿಂಗಳೊಳಗಾಗಿ ಕಾಲೋಚಿತಗೊಳಿಸಿದ ವಿವರನ್ನು ಸಲ್ಲಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಹೊಂದಿರುವ ವಿಜಯಪುರ ಮಹಾನಗರ ಪಾಲಿಕೆ ಹಾಗೂ 10 ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಸಭೆಯಲ್ಲಿ ಉದ್ಯಾನವನ, ಬಯಲು ಜಾಗೆ, ರಸ್ತೆ ಹಾಗೂ ನಾಗರಿಕ ಸೌಲಭ್ಯ ಜಾಗಗಳನ್ನು ಸ್ಥಳೀಯ ಸಂಸ್ಥೆಗಳ ಸುರ್ಪದಿಗೆ ಪಡೆಯುವ ದಾಖಲೆಗಳನ್ನು ಕಾಲೋಚಿತಗೊಳಿಸಲು ವಿವಿಧ ಇಲಾಖೆಗಳ ಅಧಿಕಾರಿಗಳು, ಸರ್ಕಾರೇತರ ಸಂಘ–ಸಂಸ್ಥೆಗಳ ಮಾಹಿತಿ, ಸಲಹೆ ಹಾಗೂ ಅಭಿಪ್ರಾಯಗಳನ್ನು ಸಂಗ್ರಹಿಸಲಾಯಿತು. ವಿಜಯಪುರ ನಗರದ ಜಿಐಎಸ್ ಆಧಾರಿತ ಮಹಾ ಯೋಜನೆ 2041 ತಯಾರಿಸುವ ಕುರಿತಾಗಿ ರುದ್ರಾಭಿಷೇಕ ಸಂಸ್ಥೆಯು ಸಂಗ್ರಹಿಸಿದ ಮಾಹಿತಿ ವಿವರವನ್ನು ಪಿಪಿಟಿ ಮೂಲಕ ಇಂದು ನಡೆದ ಸಭೆಯಲ್ಲಿ ವಿವರಿಸಲಾಯಿತು.

**ಆನಂದ ಮಹಲ್ ಸೌಂದರ್ಯೀಕರಣಕ್ಕೆ ಸೂಚನೆ**

ಐತಿಹಾಸಿಕ ಆನಂದ ಮಹಲ್ ಆವರಣದಲ್ಲಿ ಉದ್ಯಾನವನ ಅಭಿವೃದ್ಧಿ, ಪ್ರವಾಸೋದ್ಯಮಕ್ಕೆ ಉತ್ತೇಜನ-ಮಾಹಿತಿಯುಳ್ಳ ಅತ್ಯಾಕರ್ಷಕ ಗೇಟ್ ಹಾಗೂ ಕಂಪೌಂಡ್ ನಿರ್ಮಾಣ ಸೇರಿದಂತೆ ಮೂಲಭೂತ ಸೌಕರ್ಯ ಕಲ್ಪಿಸಲು ಸೂಕ್ತ ಪ್ರಸ್ತಾವನೆಯೊಂದನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

**ಪಾರಂಪರಿಕ ಪ್ರದೇಶದ ಸಂರಕ್ಷಣಾ ಸಮಿತಿ**

ಸರ್ಕಾರದ ಅಧಿಸೂಚನೆಯಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ವಿವಿಧ ಕ್ಷೇತ್ರದಲ್ಲಿ ಪರಿಣಿತ ಹೊಂದಿರುವ ಸದಸ್ಯರನ್ನೊಳಗೊಂಡ ಸಮಿತಿ ರಚನೆ ಮಾಡಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಿ ಪಾರಂಪರಿಕ ಕಟ್ಟಡಗಳು, ಸ್ಮಾರಕಗಳು, ಐತಿಹಾಸಿಕ ವಾಸ್ತುಶಿಲ್ಪಿ, ಸಾಂಸ್ಕೃತಿಕ ಅಥವಾ ಪರಿಸರ ಸಂರಕ್ಷಣೆ ದಿಸೆಯಲ್ಲಿ ಸಮಿತಿ ರಚಿಸುವಂತೆ ಸಂಬಂಧಿಸಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

## ಬೆಳೆಹಾನಿ ಪ್ರದೇಶಗಳಿಗೆ ಭೇಟಿ ನೀಡಿ: ಅಧಿಕಾರಿಗಳಿಗೆ ಟಿ.ವೆಂಕಟೇಶ್ ಸೂಚನೆ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯಲ್ಲಿ ಪೂರ್ವ ಮುಂಗಾರು ಮಳೆಯಿಂದಾಗಿ ಹಾನಿಗೊಳಗಾದ ಬೆಳೆಹಾನಿ ಪ್ರದೇಶಗಳಿಗೆ ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿ ನಿಖರ ವರದಿ ನೀಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಬೆಳೆಹಾನಿ ಹಾಗೂ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೃಷಿ ಮತ್ತು ತೋಟಗಾರಿಕೆ ಅಧಿಕಾರಿಗಳು ಮಳೆ ಹಾನಿ ಪ್ರದೇಶಗಳ ಸ್ಥಳ ಪರಿಶೀಲನೆ ನಡೆಸುತ್ತಿಲ್ಲ ಎಂದು ರೈತರು ದೂರುತ್ತಿದ್ದು, ಬೆಳೆಹಾನಿ ಪ್ರದೇಶಗಳ ಸ್ಥಳ ಪರಿಶೀಲನೆ ನಡೆಸದ ಅಧಿಕಾರಿಗಳ ಅಮಾನತಿಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು. ಹೊಳಲ್ಕೆರೆ ತಾಲ್ಲೂಕಿನಲ್ಲಿ 25 ಎಕರೆ ಅಡಿಕೆ ಬೆಳೆ, 15 ಎಕರೆ ಮಾವು, ಹಾಗೂ 03 ಎಕರೆ ಬಾಳೆ ಬೆಳೆ ಹಾನಿಯಾಗಿವೆ. ಚಳ್ಳಕೆರೆ ತಾಲ್ಲೂಕಿನಲ್ಲಿ 120 ಎಕರೆ ಪಪ್ಪಾಯಿ ಬೆಳೆ ಹಾಗೂ 8.30 ಎಕರೆ ಕೃಷಿ ಬೆಳೆಗಳು ಹಾನಿಯಾಗಿವೆ. ಚಿತ್ರದುರ್ಗ ತಾಲ್ಲೂಕಿನ ವಿ.ಪಾಳ್ಯ, ನಲ್ಲೆಕಟ್ಟೆ ಗ್ರಾಮಗಳಲ್ಲಿ ಅಡಿಕೆ ಬೆಳೆ ಹಾಗೂ ಪಪ್ಪಾಯಿ ಬೆಳೆ ಹಾನಿಯಾಗಿದೆ. ಹಿರಿಯೂರು ತಾಲ್ಲೂಕಿನಲ್ಲಿ ಒಂದು ಜಾನುವಾರು ಮೃತಪಟ್ಟಿದೆ.


ಉದಯವಾಹಿನಿ ಚಿತ್ರ

ತೋಟಗಾರಿಕೆ ಬೆಳೆ ಹಾನಿಯಾಗಿದ್ದು,ಮನೆಯ ಮೇಲ್ಚಾವಣೆಯು ಹಾನಿಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 4.20 ಎಕರೆ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 1 ಹೆಕ್ಟೇರ್ ಕೃಷಿ ಹಾಗೂ 1 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿ ಹಾಗೂ ಒಂದು ಜಾನುವಾರು ಮೃತಪಟ್ಟಿದೆ, 06 ಮನೆಗಳು ಭಾಗಶಃ ಹಾನಿಗೊಳಗಾಗಿವೆ ಎಂದು ತಹಶೀಲ್ದಾರ್‌ಗಳು ಸಭೆಗೆ ಮಾಹಿತಿ ನೀಡಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿ ಯರ್ ಬಸನಗೌಡ ಪಾಟೀಲ್ ಮಾತನಾಡಿ, ಹಿರಿಯೂರು ತಾಲ್ಲೂಕು ವ್ಯಾಪ್ತಿಯಲ್ಲಿ ಪ್ರಸ್ತುತ 7 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿ ಕುಡಿಯುವ ನೀರು ಸಮಸ್ಯೆ ಉದ್ಭವಿಸುವ ಸಮಸ್ಯೆಯಾತ್ಮಕ ಗ್ರಾಮಗಳ ನಿಖರ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನ್ ಖುರೇಷಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಬಸನಗೌಡ ಪಾಟೀಲ್ ಸೇರಿದಂತೆ ತಹಶೀಲ್ದಾರ್‌ಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

> ಬೆಳೆಹಾನಿಗೆ ಸಂಬಂಧಿಸಿದಂತೆ ಎಲ್ಲಾ ವರದಿಯನ್ನು ಸಿದ್ಧತೆ ಮಾಡಿಟ್ಟುಕೊಂಡು, ಪರಿಹಾರ ಸಾಫ್ಟವೇರ್ ಓಪನ್ ಆದ ತಕ್ಷಣ ಎಂಟ್ರಿ ಮಾಡಬೇಕು. ನಿಯಮಾನುಸಾರ ಪರಿಹಾರ ವಿತರಣೆಗೆ ಕ್ರಮವಹಿಸಬೇಕು -ಬಿ.ಟಿ.ಕುಮಾರಸ್ವಾಮಿ, ಅಪರ ಜಿಲ್ಲಾಧಿಕಾರಿ

## ಇಂದು ಚಿಂಚೋಳಿಯಲ್ಲಿ ಜಿಲ್ಲಾಮಟ್ಟದ ಬಸವೇಶ್ವರ ಜಯಂತಿಯ ಪೂರ್ವಭಾವಿ ಸಭೆ

• ಉದಯವಾಹಿನಿ, ಚಿಂಚೋಳಿ

ಕಲಬುರಗಿ ಜಿಲ್ಲಾ ಮಟ್ಟದ ವಿಶ್ವಗುರು ಬಸವಣ್ಣನವರ 892ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸುವ ಕುರಿತು ಜಿಲ್ಲಾ ಜಯಂತ್ಯೋತ್ಸವ ಸ್ವಾಗತ ಸಮಿತಿ ಅಧ್ಯಕ್ಷ ಶಾಸಕ ಎಂ.ವೈ.ಪಾಟೀಲ ನೇತೃತ್ವದಲ್ಲಿ ಪಟ್ಟಣದ ಹಾರಕೂಡ ಚನ್ನಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಪೂರ್ವಭಾವಿ ಸಭೆಯು ಇಂದು ಏ. 17 ಗುರುವಾರ ಹಮ್ಮಿಕೊಳ್ಳಲಾಗಿದೆ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ ತಿಳಿಸಿದ್ದಾರೆ.

ಇದೆ ಏಪ್ರಿಲ್ 29 ರಂದು ಸಾಯಂಕಾಲ ಕಲಬುರ್ಗಿಯ ಶರಣಬಸವೇಶ್ವರ ತೇರ್ ಮೈದಾನದಲ್ಲಿ ಲಕ್ಷಾಂತರ ಸಮಾಜದ ಜನರನ್ನು ಸೇರಿಸಿ ಐತಿಹಾಸಿಕ ಕಾರ್ಯಕ್ರಮ ಆಯೋಜಿಸಲಾಗಿದೆ, ಅದರ ಪ್ರಯುಕ್ತ ಸ್ವಾಗತ ಸಮಿತಿ ಅಧ್ಯಕ್ಷ ಎಂ.ವೈ.ಪಾಟೀಲರು,ವಿಧಾನ ಪರಿಷತ್ ಸದಸ್ಯ ಬಿ.ಜಿ.ಪಾಟೀಲರು,ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಜಿಲ್ಲಾ ಅಧ್ಯಕ್ಷ ಶರಣು ಮೋದಿ,ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ನರಿಬೋಳ ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯ ಅಮರನಾಥ ಪಾಟೀಲ ಹಾಗೂ ಕಲಬುರ್ಗಿ ಜಿಲ್ಲೆಯ ನಮ್ಮ ಸಮಾಜದ ಹಲವಾರು ಪ್ರಮುಖ ಮುಖಂಡರು ಚಿಂಚೋಳಿ ತಾಲ್ಲೂಕಿನ ಸಮಾಜದ ಜನರನ್ನು ಆಹ್ವಾನಿಸಲು ಇದೆ 17 ರಂದು ಬೆಳಿಗ್ಗೆ 10 ಗಂಟೆಗೆ ಹಾರಕೂಡ ಕಲ್ಯಾಣ ಮಂಟಪ ಚಿಂಚೋಳಿಗೆ ಆಗಮಿಸುತ್ತಿದ್ದು, ತಾಲ್ಲೂಕಿನ ಸಮಾಜ ಬಾಂಧವರು ಗ್ರಾಮೀಣ ಭಾಗದ ಹೆಚ್ಚಿನ ಜನಸಂಖ್ಯೆಯಲ್ಲಿ ಆಗಮಿಸಲು ಮನವಿ.


ಉದಯವಾಹಿನಿ ಚಿತ್ರ

## ಕ್ರೀಡೆಯಿಂದ ಮನಸ್ಸಿಗೆ ಉಲ್ಲಾಸ: ಡಿ.ಸುಧಾಕರ್

• ಉದಯವಾಹಿನಿ, ಚಿತ್ರದುರ್ಗ

ಕ್ರೀಡೆಯಿಂದ ಮನಸ್ಸಿಗೆ ಉಲ್ಲಾಸ ದೊರೆಯಲಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ವತಿಯಿಂದ ಆಯೋಜಿಸಲಾದ ಜಿಲ್ಲಾ ಮಟ್ಟದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕ್ರೀಡೆ ಜೀವನದಲ್ಲಿ ಬಹಳ ಮುಖ್ಯ ಪಾತ್ರ ವಹಿಸಲಿದೆ. ಎಲ್ಲಿ ಕ್ರೀಡೆ ಇದೆಯೋ ಅಲ್ಲಿ ಆರೋಗ್ಯವೂ ಇದೆ. ಸರ್ಕಾರಿ ನೌಕರರು ತಮ್ಮ ದೈನಂದಿನ ಒತ್ತಡದ ಕೆಲಸದ ಮಧ್ಯೆಯೂ ಸಹ ಕ್ರೀಡೆಯಲ್ಲಿ ಭಾಗವಹಿಸಿರುವುದು ತುಂಬಾ ಸಂತೋಷದ ವಿಚಾರ.


ಉದಯವಾಹಿನಿ ಚಿತ್ರ

ಕ್ರೀಡೆಯಲ್ಲಿ ಸೋಲು–ಗೆಲವು ಸಹಜ. ಇದಕ್ಕಿಂತ ಮುಖ್ಯವಾಗಿ ಕ್ರೀಡೆಯಲ್ಲಿ ಪಾಲ್ಗೊಳ್ಳುವುದು ಬಹಳ ಮುಖ್ಯ ಎಂದ ಸಚಿವರು, ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡು ದಿನಗಳ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಳ್ಳುವಂತೆ ಕರೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಾಲತೇಶ್ ಮುದಜ್ಜಿ ಸೇರಿದಂತೆ ಮತ್ತಿತರರು ಇದ್ದರು. ಇದೇ ವೇಳೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಖುದ್ದು, ಶಾಟ್ ಪುಟ್ ಎಸೆತದಲ್ಲಿ ಪಾಲ್ಗೊಂಡು, ಸರ್ಕಾರಿ ನೌಕರರನ್ನು ಹುರಿದುಂಬಿಸಿದರು.

## ಹಜ್ ಯಾತ್ರಾತ್ರಿಗಳಿಗೆ ಆರೋಗ್ಯ ತಪಾಸಣೆಯೊಂದಿಗೆ ಲಸಿಕಾಕರಣ

• ಉದಯವಾಹಿನಿ, ಚಿತ್ರದುರ್ಗ

ದಿನಾಂಕ 16–04–2025 ಆರೋಗ್ಯ ಇಲಾಖೆ, ಜಿಲ್ಲಾ ಆಸ್ಪತ್ರೆ ಹಜ್ ಸಮಿತಿ ಸಹಯೋಗದೊಂದಿಗೆ ಎಮ್.ಕೆ.ಪ್ಯಾಲೇಸ್ ಚಿತ್ರದುರ್ಗ ಸಭಾಂಗಣದಲ್ಲಿ ಚಿತ್ರದುರ್ಗ ಜಿಲ್ಲೆಯ ಒಟ್ಟು 99 ಹಜ್ ಯಾತ್ರಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣೆ ವಿವಿಧ ಲಸಿಕೆ ನೀಡುವ ಕಾರ್ಯಕ್ರಮ ಜರುಗಿತು ಜಿಲ್ಲಾ ಆರ್.ಸಿ.ಹೆಚ್.ಅಧಿಕಾರಿ ಯಾತ್ರಾರ್ಥಿಗಳಿಗೆ ಶುಭಕೋರಿ ಮಾತನಾಡಿ ರೋಗಗಳನ್ನು ತಡೆಗಟ್ಟುವಲ್ಲಿ, ಸಾರ್ವಜನಿಕ ಆರೋಗ್ಯವನ್ನು ಕಾಪಾಡುವಲ್ಲಿ ಲಸಿಕೆಗಳ ನಿರ್ಣಾಯಕ ಪಾತ್ರವನ್ನು ಎತ್ತಿ ತೋರಿಸುವ ಇದು ರೋಗನಿರೋಧಕ ಕಾರ್ಯಕ್ರಮಗಳಲ್ಲಿ ಆಗಿರುವ ಪ್ರಗತಿ ಮತ್ತು ಮಾರಕ ಸೋಂಕುಗಳನ್ನು ನಿರ್ಮೂಲನೆ ಮಾಡುವ ಪ್ರಯತ್ನಗಳನ್ನು ಮುಂದುವರೆಸುವ ಅಗತ್ಯವನ್ನು ನೆನಪಿಸುತ್ತದೆ.

ಲಸಿಕೆಗಳು ಪ್ರತಿ ವರ್ಷ ಲಕ್ಷಾಂತರ ಜೀವಗಳನ್ನು ಉಳಿಸುವ ಅತ್ಯಂತ ಅದ್ಭುತವಾದ ವೈದ್ಯಕೀಯ ಪ್ರಗತಿಗಳಲ್ಲಿ ಸೇರಿವೆ., ಸರ್ಕಾರಗಳು, ಆರೋಗ್ಯ ವೃತ್ತಿಪರರು ಮತ್ತು ಸಂಸ್ಥೆಗಳು ಲಸಿಕೆಯ ಪ್ರಯೋಜನಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ವಿಶ್ವಾದ್ಯಂತ ರೋಗ ನಿರೋಧಕ ಪ್ರಯತ್ನಗಳನ್ನು ಪ್ರೋತ್ಸಾಹಿಸಲು ಒಟ್ಟಾಗಿ ಸೇರುತ್ತವೆ. ಈ ನಿಟ್ಟಿನಲ್ಲಿ ಈ ದಿನ ಜಿಲ್ಲೆಯ 99 ಯಾತ್ರಾರ್ಥಿಗಳಿಗೆ ಓರಲ್ ಪೋಲಿಯೋ, QMMV ( Quadrivalent menenjoccocal meningitis vaccine) ಟೀಸ್ ಲಸಿಕೆ ಮತ್ತು 65 ವರ್ಷ ಮೇಲ್ಪಟ್ಟ 24 ಯಾತ್ರಾರ್ಥಿಗಳಿಗೆ ಹೈ ರಿಸ್ಕ್ ಸೀಜನಲ್ ಇನ್ಫ್ಲೂಯಂಜಾ ಲಸಿಕೆ ನೀಡಲಾಯಿತು ಮತ್ತು ಯಾತ್ರಾರ್ಥಿಗಳಿಗೆ ಆರೋಗ್ಯ ರಕ್ಷಣೆ ಬಗ್ಗೆ ಮುಂಜಾಗ್ರತಾ ಕ್ರಮಗಳ ತರಬೇತಿಯನ್ನು ನೀಡಲಾಯಿತು ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ. ರವೀಂದ್ರ ಲಸಿಕೆಗಳ ಮಹತ್ವ ಕುರಿತು ತಿಳಿಸಿದರು ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು, ಜಿಲ್ಲಾ ಹಜ್ ಸಮಿತಿ ವ್ಯವಸ್ಥಾಪಕರಾದ ಹಾಜಿ ದಾದಪೀರ್, ರಾಜ್ಯ ಹಜ್ ಸಮಿತಿ ಸಂಯೋಜಕರು ಸೈಯದ್ ನಾಸಿರ್ ಡಾ.ಸತೀಶ್, ಡಾ.ಶಿಲ್ಪಾ ಡಾ.ಬಿಲಾಲ್ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ,ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮುಗಪ್ಪ, ಜಿಲ್ಲಾ ಲಸಿಕಾ ವ್ಯವಸ್ಥಾಪಕ ವೀರೇಶ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಮ್. ಗಂಗಾಧರ್, ಗುರುಮೂರ್ತಿ ಸಮುದಾಯ ಆರೋಗ್ಯಾಧಿಕಾರಿಗಳು ಫಾರ್ಮಸಿ ಅಧಿಕಾರಿಗಳು ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಉಚಿತ ಆರೋಗ್ಯ ತಪಾಸಣೆ**

## ಕಿತ್ತುಹೋದ ರಸ್ತೆ: ಸಂಕಟದಲ್ಲಿ ರೈತರು

• ಉದಯವಾಹಿನಿ, ಲಕ್ಷ್ಮೇಶ್ವರ

ಎರಡು ವರ್ಷಗಳ ಹಿಂದೆ ಮುಂಗಾರಿನಲ್ಲಿ ಅಬ್ಬರಿಸಿದ್ದ ಮಳೆಗೆ ಯಳವತ್ತಿ ಲಕ್ಷ್ಮೇಶ್ವರ ಮಧ್ಯದ ರಸ್ತೆಯಲ್ಲಿ ಗೊಜನೂರು ಸಮೀಪದ ರಸ್ತೆಯ ಸೇತುವೆ ಮತ್ತು ರಸ್ತೆ ಕಿತ್ತು ಎರಡು ವರ್ಷಗಳ ಗತಿಸಿದ್ದರು ಸಂಬಂಧಪಟ್ಟ ಇಲಾಖೆಯವರು ಅಧಿಕಾರಿಗಳೊಂದಿಗೆ ಶಾಸಕರು ರಸ್ತೆ ವೀಕ್ಷಣೆ ಮಾಡಿ ಹೋದರೆ ವಿನಹ ಈ ರಸ್ತೆಗೆ ನಿರ್ಮಾಣದ ಗ್ಯಾರಂಟಿ ಮಾತ್ರ ಇನ್ನುವರೆಗೂ ಸಿಕ್ಕಿಲ್ಲ. ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಜಿಲ್ಲಾ ಪಂಚಾಯತ ಯೋಜನಾ ವಿಭಾಗದಿಂದ ಕೋಟ್ಯಾಂತರ ರೂಪಾಯಿ ಖರ್ಚು ಮಾಡಿ ನಿರ್ಮಿಸಿದ ರಸ್ತೆ ಒಂದೇ ಮಳೆಗೆ ಸೇತುವೆ ಬುಡ ಸಮೇತ ಕಿತ್ತು ಬಿದ್ದಿದ್ದರೆ ರಸ್ತೆ ಕೊಚ್ಚಿಕೊಂಡು ಹೋಗಿ ಹಳ್ಳ ಹಿಡಿದಿದೆ.

ಈ ಸಂಗತಿ ಜಿಲ್ಲಾ ಆಡಳಿತಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ಗಮನಕ್ಕೆ ಶಾಸಕರ ಗಮನಕ್ಕೆ ಇಲ್ಲವೆಂದೇನಿಲ್ಲ ಎಲ್ಲರೂ ವೀಕ್ಷಣೆ ಮಾಡಿ ಹೋಗಿ ಎರಡು ವರ್ಷ ಗತಿಸಿದ್ದರು ಯಾವುದೇ ಪ್ರಗತಿ ಮಾತ್ರ ಕಂಡುಬಂದಿಲ್ಲ. ಕೇಂದ್ರ ಸರ್ಕಾರದ ಅನುದಾನದೊಂದಿಗೆ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ಯಳವತ್ತಿಯಿಂದ ಲಕ್ಷ್ಮೇಶ್ವರದವರೆಗೆ ನಿರ್ಮಿಸಿರುವ ಈ ರಸ್ತೆಯಿಂದ ಗೊಜನೂರು ಭಾಗದ ರೈತರು ತಮ್ಮ ಸಂಕಷ್ಟ ಪರಿಹಾರವಾಯಿತು ಎಂದು ಹರ್ಷಪಟ್ಟಿದ್ದರು ಆದರೆ 2023 ರಲ್ಲಿ ಸುರಿದ ಅಬ್ಬರದ ಮಳೆಗೆ ರಸ್ತೆ ಸೇತುವೆ ಎಲ್ಲವೂ ಕೊಚ್ಚಿಕೊಂಡು ಹೋಗಿ ರೈತರು ಈಗ ಮತ್ತೆ ಸಂಕಟದಲ್ಲಿದ್ದಾರೆ.


ಉದಯವಾಹಿನಿ ಚಿತ್ರ

ಇಷ್ಟಾದರೂ ರೈತರು ಶ್ರಮದಾನ ಮಾಡಿ ಟ್ರ್ಯಾಕ್ಟರ್ ಮುಖಾಂತರ ಮಣ್ಣು ಹೇರಿ ರಸ್ತೆ ನಿರ್ಮಿಸಿಕೊಂಡಿದ್ದರು ಅದು ತಾತ್ಕಾಲಿಕವಾಗಿದ್ದು ಈಗ ಮತ್ತೆ ಮಳೆಗಾಲ ಆರಂಭವಾಗಿದ್ದು ಈ ರಸ್ತೆಗೆ ದೇವರೆ ದಿಕ್ಕು ಎನ್ನುವಂತಾಗಿದೆ.

### ಎಲ್ಲಾ ವರ್ಗಗಳ ಮುಖಂಡರು, ಸಮಾಜದ ಹಿರಿಯ,ಕಿರಿಯ ಮುಖಂಡರ ಬೆಂಬಲ ಸಹಕಾರ ಅಗತ್ಯ : ಹೊಡೆಬೀರನಳ್ಳಿ

# ಏ. 29ರಂದು ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಜಯಂತ್ಯೋತ್ಸವ

• ಉದಯವಾಹಿನಿ, ಚಿಂಚೋಳಿ

ಪಟ್ಟಣದ ಅಂಬೇಡ್ಕರ್ ಭವನದ ಆವರಣದಲ್ಲಿ ಏ.29ರಂದು ಬಹಿರಂಗ ಸಭೆಯನ್ನು ಸಮಾಜದ ಹಿರಿಯರ ಮಾರ್ಗದರ್ಶನದಂತೆ ಕಿರಿಯರ ಸಲಹೆಯಂತೆ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134ನೇ ಜಯಂತ್ಯೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಣೆ ಮಾಡಲಾಗುತ್ತಿದೆ ಜೋತೆಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ವಿಶ್ವನಾಥ ಹೊಡೆಬೀರನಳ್ಳಿ ಹೇಳಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಅಂಬೇಡ್ಕರ್ ಜಯಂತ್ಯೋತ್ಸವದ ಕರಪತ್ರ ಮತ್ತು ಬ್ಯಾನರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಎಲ್ಲಾ ವರ್ಗಗಳ ಮುಖಂಡರು, ಸಮಾಜದ ಹಿರಿಯ,ಕಿರಿಯ ಮುಖಂಡರ ಬೆಂಬಲ ಸಹಕಾರ ಅವಶ್ಯಕವಾಗಿದೆ ಎಂದರು. ಜಯಂತ್ಯೋತ್ಸವ ಸಮಿತಿಯ ಹಿರಿಯ ಸಲಹೆಗಾರ ಗೌತಮ್ ಬೋಮ್ನಳ್ಳಿ ಮಾತನಾಡಿ ಇದೆ 29ರಂದು ಸಮಾಜದ ಮುಖಂಡರು ಸೇರಿಕೊಂಡು ಖಾಸಗಿಯಾಗಿ ಅತ್ಯಂತ ದೊಡ್ಡ ಪ್ರಮಾಣದಲ್ಲಿ ಅಂಬೇಡ್ಕರ್ ಜಯಂತಿ ಆಚರಣೆ ಮಾಡಲಾಗುತ್ತಿದ್ದು ಕಾರ್ಯಕ್ರಮದಲ್ಲಿ ದಿವ್ಯ ಸಾನ್ನಿಧ್ಯ ಅಣದೂರ ಬುದ್ಧವಿಹಾರದ ಪೂಜ್ಯ ಭಂತೆ ಜ್ಞಾನ ಸಾಗರ ವಹಿಸಲಿದ್ದಾರೆ,

ಉಧ್ಘಾಟಕರಾಗಿ ಕಲಬುರ್ಗಿ ಉಸ್ತುವಾರಿ ಸಚಿವ ಪ್ರೀಯಾಂಕ್ ಖರ್ಗೆ,ದಿಕ್ಸೂಚಿ ಭಾಷಣಕಾರರಾಗಿ ಪುಣೆಯ ದಿವ್ಯಾ ಶಿಂಧೆ,ಉಪಾನ್ಯಾಸಕರಾಗಿ ವಿಠ್ಠಲ ವಗ್ಗನ್,ಜ್ಯೋತಿ ಬೆಳಗಿಸುವವರು ಬೀದರ ಸಂಸದ ಸಾಗರ್ ಖಂಡ್ರೆ, ಭಾವಚಿತ್ರಕ್ಕೆ ಪೂಜೆ ಶಾಸಕ ಡಾ.ಅವಿನಾಶ ಜಾಧವ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ಪುಸ್ತಕ ಬಿಡುಗಡೆ,ಜಯಂತ್ಯೋತ್ಸವ ಸಮಿತಿ ಗೌರವಧ್ಯಕ್ಷ ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್, ಕೆಪಿಸಿಸಿ ಉಪಾಧ್ಯಕ್ಷ ಸುಭಾಷ್ ರಾಠೋಡ್, ಜೆಡಿಎಸ್ ಮುಖಂಡ ಸಂಜೀವನ್ ಯಾಕಾಪೂರ, ಧ್ವಜಾರೋಹಣ ದಲಿತ ಸೇನೆ ರಾಜ್ಯಾಧ್ಯಕ್ಷ ಹಣಮಂತ ಯಳಸಂಗಿ ನೇರವೇರಿಸಲಿದ್ದಾರೆ.


ಉದಯವಾಹಿನಿ ಚಿತ್ರ

**ಏ. 29ಕ್ಕೆ ಬಹಿರಂಗ ಸಭೆ**

**ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಮನವಿ**

**ಈ ವರ್ಷ ಏಪ್ರಿಲ್ 28ರಂದು ಬೆಳಿಗ್ಗೆ 10ರಿಂದ 4ಗಂಟೆಯವರೆಗೆ ಉಚಿತ ಆರೋಗ್ಯ ತಪಾಸಣೆ ಶಿಬಿರ,ರಕ್ತಧಾನ ಶಿಬಿರ,ಕಣ್ಣಿನ ತಪಾಸಣೆ ಹಮ್ಮಿಕೊಳ್ಳಲಾಗಿದೆ,ತಾಲ್ಲೂಕಿನ ಸಾಹಿತಿಗಳಿಂದ ಕವಿಗೋಷ್ಠಿ ಹಮ್ಮಿಕೊಳ್ಳಲಾಗಿದೆ,ಕವಿಗಳಿಂದ ಬಂದಿರುವ ಕವನ ಸಂಕಲಗಳು ಕ್ರೂಡಿಕರಿಸಿ ಪುಸ್ತಕ ರೂಪದಲ್ಲಿ ಬಿಡುಗಡೆಗೊಳಿಸಲಾಗುವುದು,29ರಂದು ಮಧ್ಯಾಹ್ನದಿಂದ 5ಗಂಟೆವರೆಗೆ ಬಸವೇಶ್ವರ ವೃತ್ತದಿಂದ ಅಂಬೇಡ್ಕರ್ ವೃತ್ತದವರೆಗೆ ಅಂಬೇಡ್ಕರ್ ಭಾವಚಿತ್ರವನ್ನು ಬೈಕ್ ರ್‍ಯಾಲಿ ಮೂಲಕ ಮೆರವಣಿಗೆ ನಡೆಸಲಾಗುವುದು ಸುತ್ತಮುತ್ತಲಿನ ಗ್ರಾಮಗಳ ಸಮಾಜದ ಮುಖಂಡರು ಯುವಕರು,ವಿವಿಧ ಸಮಾಜದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.**

ಕಾರ್ಯಕ್ರಮದ ಅಧ್ಯಕ್ಷತೆ ವಿಶ್ವನಾಥ ಬೀರನಳ್ಳಿ ವಹಿಸಲಿದ್ದು,ಹಿರಿಯರಾದ ರಮೇಶ ಯಾಕಾಪೂರ,ಗೋಪಾಲರಾವ ಕಟ್ಟಿಮನಿ,ಭೀಮರಾವ ಟಿಟಿ,ಸೇರಿದಂತೆ ಸ್ಥಳೀಯ ಮುಖಂಡರು ವಿವಿಧ ಸಮಾಜದ ಅಧ್ಯಕ್ಷರು ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

ಕಳೆದ ಎರಡು ವರ್ಷಗಳ ಹಿಂದೆ ಆಚರಿಸಿದ ಅಂಬೇಡ್ಕರ್ ಜಯಂತ್ಯೋತ್ಸವಕ್ಕೂ ಈ ಬಾರಿ ಆಚರಣೆ ವಿಭಿನ್ನವಾಗಿ ಇಚರಣೆ ಮಾಡಲಾಗುತ್ತಿದೆ.

ಪತ್ರಿಕಾಗೋಷ್ಠಿಯಲ್ಲಿ ಮಾರುತಿ ಗಂಜಗಿರಿ, ರಾಜಶೇಖರ ಹೋಸಮನಿ, ವೈಜೀನಾಥ ಮಿತ್ರಾ, ಅಂಬರೀಶ್,ಚೇತನ, ಉದಯಕುಮಾರ, ಸಂಜುಕುಮಾರ, ರಾಜು ಕಳಸ್ಕರ, ಕೆ.ಮಹೇಶ, ಸೇರಿದಂತೆ ಅನೇಕರಿದ್ದರು.

# ಅಮೆರಿಕದ ವಿಮಾನಯಾನ ಕಂಪನಿಗೆ ಡ್ರ್ಯಾಗನ್ ಗುದ್ದು


**ಬೀಜಿಂಗ್ :** ಆರ್ಥಿಕ ಸಂಕಷ್ಟದಲ್ಲಿರೋ ವಿಮಾನಯಾನ ಸಂಸ್ಥೆ ಬೋಯಿಂಗ್ ಅನ್ನು ಮೇಲೆತ್ತಲು ಡೊನಾಲ್ಡ್ ಟ್ರಂಪ್ ದೊಡ್ಡ ಮೊತ್ತದ ಕಾಂಟ್ರ್ಯಾಕ್ಟ್ ಕೊಟ್ಟಿದ್ದಾರೆ. ಆದ್ರೆ, ಅಮೆರಿಕದ ಜೊತೆಗೆ ಸುಂಕದ ಸಂಘರ್ಷದಲ್ಲಿರೋ ಚೀನಾ ಬೋಯಿಂಗ್‌ಗೆ ದೊಡ್ಡ ಶಾಕ್ ಕೊಟ್ಟಿದೆ. ಚೀನಾದಲ್ಲಿನ ವಿಮಾನಯಾನ ಸಂಸ್ಥೆಗಳು ಅಮೆರಿಕದ ಬೋಯಿಂಗ್ ಕಂಪನಿಯಿಂದ ಜೆಟ್‌ಗಳ ಖರೀದಿಯನ್ನು ನಿಲ್ಲಿಸುವಂತೆ ಖಡಕ್ ಸೂಚನೆ ಕೊಟ್ಟಿದೆ. ಈ ಮೂಲಕ ಅಮೆರಿಕ ಮೂಲದ ಕಂಪನಿಗಳಿಗೆ ಪೆಟ್ಟು ಕೊಟ್ಟು ಅಲ್ಲಿನ ಆರ್ಥಿಕತೆಗೆ ಹೊಡೆತ ಕೊಡೋಕೆ ಚೀನಾ ಪ್ಲ್ಯಾನ್ ಮಾಡಿದೆ. ಈಗಾಗ್ಲೇ ಅಮೂಲ್ಯವಾದ ಖನಿಜ ನಿಕ್ಷೇಪಗಳನ್ನು ಅಮೆರಿಕಕ್ಕೆ ರಫ್ತು ಮಾಡುವುದಕ್ಕೆ ನಿರ್ಬಂಧ ಹೇರಿರುವ ಚೀನಾ ವ್ಯಾಪಾರ ಸಮರವನ್ನು ಮತ್ತೊಂದು ಹಂತಕ್ಕೆ ತಗೊಂಡು ಹೋಗ್ತಿದೆ.

ಜಗತ್ತಿನ ಅತಿ ದೊಡ್ಡ ಆರ್ಥಿಕತೆಗಳಾದ ಅಮೆರಿಕ ಮತ್ತು ಚೀನಾ ನಡುವಿನ ವ್ಯಾಪಾರ ಸಮರದಿಂದ ಇಡೀ ಜಗತ್ತಿನಾದ್ಯಂತ ಪೂರೈಕೆ ಮತ್ತು ಉತ್ಪಾದನೆಗಳ ಮೇಲೆ ಪರಿಣಾಮ ಬೀರುತ್ತಿದೆ. ಸುಂಕಕ್ಕೆ ಪ್ರತಿ ಸುಂಕ, ಪ್ರತಿ ಸುಂಕಕ್ಕೆ ಪ್ರತೀಕಾರದ ಸುಂಕ, ಆ ಪ್ರತೀಕಾರಕ್ಕೆ ಪ್ರತಿಷ್ಠೆಯ ಸುಂಕ, ಆ ಪ್ರತಿಷ್ಠೆಗೆ ಅಹಂಮ್ಮಿನ ಸುಂಕ, ಅಹಂಮ್ಮಿಗೆ ಜಿದ್ದಾಜಿದ್ದಿನ ಸುಂಕ, ಹೀಗೆ ಉಭಯ ರಾಷ್ಟ್ರಗಳ ನಡುವೆ ಸುಂಕದ ಕಾದಾಟ ನೂರು ಪರ್ಸೆಂಟ್‌ಗಳನ್ನು ದಾಟಿ ಹೋಗಿದೆ. ಈಗ ಚೀನಾದ ವಿಮಾನ ಯಾನ ಸಂಸ್ಥೆಗ್ಗಳು ಅಮೆರಿಕದ ಬೋಯಿಂಗ್‌ನಿಂದ ವಿಮಾನಗಳನ್ನು ಡೆಲಿವರಿ ಪಡೆಯದಂತೆ ಷಿ ಜಿನ್‌ಪಿಂಗ್ ಆಡಳಿತವು ಆದೇಶ ಕೊಟ್ಟಿರುವುದಾಗಿ ವರದಿಯಾಗಿದೆ.

## ಜಾಸ್ತಿ ಸುಂಕ ಹಾಕೋದು ವೇಸ್ಟ್

ಏಪ್ರಿಲ್ 2ರಂದು ಜಗತ್ತಿನಾದ್ಯಂತ ಎಲ್ಲಾ ರಾಷ್ಟ್ರಗಳ ಮೇಲೂ ಟ್ರಂಪ್ ಸುಂಕ ಘೋಷಣೆ ಮಾಡಿದ್ದರು. ಅದರಲ್ಲಿ ಚೀನಾ ಹೆಸರನ್ನೇ ಮೊದಲಿಗೆ ತಗೊಂಡು ಶೇಕಡ 34ರಷ್ಟು ಪ್ರತಿ ಸುಂಕವನ್ನು ಹಾಕಿದ್ದರು. ಚೀನಾ ಅಮೆರಿಕದ ಮೇಲೆ ಹಾಕ್ತಿರೋ ಸುಂಕಕ್ಕಿಂತ ಅರ್ಧದಷ್ಟು ಟಾರಿಫ್ ಅಷ್ಟೇ ಹಾಕಿರೋದಾಗಿ ಹೇಳಿದ್ದರು. ಆದರೆ, ಅದನ್ನು ಚೀನಾ ತೀವ್ರವಾಗಿ ವಿರೋಧಿಸಿತ್ತು. ಪ್ರತೀಕಾರದ ಸುಂಕ ಹಾಕೋಕೆ ಶುರು ಮಾಡಿತ್ತು. ಕೊನೆಗೆ ಅಮೆರಿಕ ಚೀನಾದ ಮೇಲೆ ಶೇಕಡ 145ರಷ್ಟು ಸುಂಕ ಹಾಕಿ ಸುಮ್ಮನಾಯ್ತು. ಇನ್ನು ಚೀನಾ ಅಮೆರಿಕಕ್ಕೆ 125 ಪರ್ಸೆಂಟ್‌ಗಿಂತ ಜಾಸ್ತಿ ಸುಂಕ ಹಾಕೋದು ವೇಸ್ಟ್ ಅನ್ನೋ ನಿರ್ಧಾರಕ್ಕೆ ಬಂತು. ಆದ್ರೆ, ಸುಂಕ ಇಳಿಸೋದು ಅಥವಾ ಮಾತುಕತೆ ಮಾಡಿ, ಒಂದಷ್ಟು ಒಪ್ಪಂದಗಳಿಗೆ ಬರೋದನ್ನು ಮಾಡ್ತಿಲ್ಲ. ಟ್ರಂಪ್ ಜಗತ್ತಿನಾದ್ಯಂತ ಹಾಕಿರೋ ಪ್ರತಿ ಸುಂಕವನ್ನು ಮೂರು ತಿಂಗಳವರೆಗೂ ಜಾರಿಯಾಗದಂತೆ ವಿನಾಯಿತಿ ಕೊಟ್ಟಿದ್ದಾರೆ. ಆದ್ರೆ, ಚೀನಾವನ್ನು ಮಾತ್ರ ಆ ವಿನಾಯಿತಿಯಿಂದ ಹೊರಗಿಟ್ಟಿದ್ದಾರೆ. ಪ್ರತಿ ಸುಂಕವನ್ನು ಸಂಪೂರ್ಣ ತೆಗೆದು ಹಾಕುವಂತೆ ಡ್ರ್ಯಾಗನ್ ರಾಷ್ಟ್ರವು ಜಗತ್ತಿನ ದೊಡ್ಡಣ್ಣನಿಗೆ ಒತ್ತಾಯ ಮಾಡಿದೆ.

ಪೂರ್ತಿ ಜೆಟ್‌ಗಳ ಖರೀದಿಯನ್ನಷ್ಟೇ ಅಲ್ಲ, ವಿಮಾನಗಳಿಗೆ ಸಂಬಂಧಿಸಿದ ಉಪಕರಣಗಳು ಹಾಗೂ ಬಿಡಿ ಭಾಗಗಳನ್ನೂ ಕೂಡ ಅಮೆರಿಕದ ಕಂಪನಿಗಳಿಂದ ಖರೀದಿ ಮಾಡದಂತೆ ತಾಕೀತು ಮಾಡಿದೆ. ಆದ್ರೆ, ಇಲ್ಲಿ ಗಮನಿಸಬೇಕಾದ ಅಂಶ ಅಂದ್ರೆ, ಅಮೆರಿಕದಿಂದ ಬರೋ ಎಲ್ಲಾ ವಸ್ತುಗಳ ಮೇಲೂ ಚೀನಾ 125 ಪರ್ಸೆಂಟ್ ಸುಂಕವನ್ನು ಫಿಕ್ಸ್ ಮಾಡಿದೆ. ಇಷ್ಟು ದೊಡ್ಡ ಮೊತ್ತದ ಸುಂಕ ಇದ್ದಾಗ, ಅಮೆರಿಕ ಕಂಪನಿಗಳಿಂದ ವಿಮಾನ ಮತ್ತು ಅದಕ್ಕೆ ಸಂಬಂಧಿಸಿದ ಬಿಡಿ ಭಾಗಗಳನ್ನು ಖರೀದಿ ಮಾಡಿದ್ರೆ, ದುಪ್ಪಟ್ಟು ಮೊತ್ತವನ್ನು ಚೀನಾದ ಕಂಪನಿಗಳೇ ತೆರಬೇಕಾಗುತ್ತೆ. ಅದು ಮತ್ತೆ ಚೀನಾಗೆ ಹೊರೆಯಾಗುತ್ತೆ. ಹಾಗಾಗಿ ಚೀನಾ ಅಮೆರಿಕದಿಂದ ದೊಡ್ಡ ಮೊತ್ತದ ಖರೀದಿಯ ಡೀಲ್‌ಗಳನ್ನು ನಿಲ್ಲಿಸೋ ತಂತ್ರ ಹೆಣೆದಂತೆ ಕಾಣ್ತಿದೆ. ವಿಮಾನಗಳ ಸೇಲ್ಸ್ ಜಗತ್ತಿನಾದ್ಯಂತ ಕುಸಿದಿದ್ದು, ಕಂಪನಿಯು ನಷ್ಟಕ್ಕೆ ಒಳಗಾಗಿದೆ.




### 25 ಪರ್ಸೆಂಟ್ ಫ್ಲೈಟ್‌ಗಳು ಚೀನಾಗೆ

ಬೋಯಿಂಗ್ ವಿಮಾನಯಾನ ಸಂಸ್ಥೆಗೆ ಚೀನಾ ಅತಿ ದೊಡ್ಡ ಮಾರುಕಟ್ಟೆಯಾಗಿದೆ. 2018ರಲ್ಲಿ ಬೋಯಿಂಗ್ ಕಂಪನಿಯು ಸಿದ್ಧಪಡಿಸಿದ ಒಟ್ಟು ವಿಮಾನಗಳಲ್ಲಿ ಶೇಕಡ 25ರಷ್ಟು ಜೆಟ್‌ಗಳು ಚೀನಾಗೆ ಡೆಲಿವರಿಯಾಗಿದ್ದವು. ಮುಂದಿನ 20 ವರ್ಷಗಳಲ್ಲಿ ಜಗತ್ತಿನಾದ್ಯಂತ ಸೃಷ್ಟಿಯಾಗೋ ಏರ್‌ಕ್ರಾಫ್ಟ್‌ಗಳ ಡಿಮ್ಯಾಂಡ್‌ನಲ್ಲಿ ಚೀನಾದ ಪಾಲು ಶೇಕಡ 20ರಷ್ಟು ಇರುತ್ತದೆ ಎಂದು ಅಂದಾಜಿಸಲಾಗಿದೆ. ಆದರೆ, 2019ರಲ್ಲಿ ಬೋಯಿಂಗ್‌ನ 737 ಮ್ಯಾಕ್ಸ್ ವಿಮಾನವನ್ನು ಕಾರ್ಯಾಚರಣೆಯಿಂದ ಹೊರಗಿಟ್ಟ ಮೊದಲ ರಾಷ್ಟ್ರ ಚೀನಾ. ಎರಡು ಅತಿ ದೊಡ್ಡ ಅಪಘಾತಗಳು ಸಂಭವಿಸಿದ ಬಳಿಕ ಚೀನಾ ಆ ನಿರ್ಧಾರಕ್ಕೆ ಬಂದಿತ್ತು. ಅಲ್ಲಿಂದ ಏರ್‌ಬಸ್‌ನ ವಿಮಾನಗಳನ್ನು ಚೀನಾ ಖರೀದಿಸುತ್ತಿದೆ, ಬೋಯಿಂಗ್ ಜೊತೆಗೆ ಹೊಸ ಕಾಂಟ್ರ್ಯಾಕ್ಟ್‌ಗಳನ್ನು ಮಾಡಿಕೊಂಡಿಲ್ಲ.


ಉದಯ ವಾಹಿನಿ

ದೇಶ/ವಿದೇಶ

ಗುರುವಾರ 17 ಏಪ್ರಿಲ್ 2025

07


## ಮಿನಿ ನ್ಯೂಸ್

### ಅಫ್ಘಾನಿಸ್ತಾನದಲ್ಲಿ ಭಾರೀ ತೀವ್ರತೆಯ ಭೂಕಂಪ: ನೆರೆ ರಾಷ್ಟ್ರ ಪಾಕಿಸ್ತಾನಕ್ಕೂ ಎಫೆಕ್ಟ್

**ಕಾಬೂಲ್:** ಅಫ್ಘಾನಿಸ್ತಾನದಲ್ಲಿ 6.4 ತೀವ್ರತೆಯ ಭೂಕಂಪ ಸಂಭವಿಸಿದೆ. ಯುರೋಪಿಯನ್-ಮೆಡಿಟರೇನಿಯನ್ ಸೀಸ್ಮಾಲಾಜಿಕಲ್ ಸೆಂಟರ್ ಈ ವಿಷಯ ತಿಳಿಸಿದೆ. ಭೂಮಿಯ ಆಳದಲ್ಲಿ 121 ಕಿಮೀ (75 ಮೈಲಿ) ದೂರದಲ್ಲಿ ಕಂಪನದ ಕೇಂದ್ರವಿತ್ತು. ಭೂಕಂಪದ ತೀವ್ರತೆ 6.4 ಆಗಿತ್ತು. ಭೂಮಿಯ ಒಳಗೆ ಸುಮಾರು 121 ಕಿಲೋಮೀಟರ್ ಆಳದಲ್ಲಿ ಕಂಪನ ಉಂಟಾಗಿದೆ. ಏಪ್ರಿಲ್ 15, 2025 ರಂದು, ಸರಿಸುಮಾರು ರಾತ್ರಿ 11:13 ಕ್ಕೆ ಅಫ್ಘಾನಿಸ್ತಾನದ ಹಿಂದೂ ಕುಶ್ ಪ್ರದೇಶದಲ್ಲಿ 6.1 ರಿಂದ 6.7 ರವರೆಗಿನ ತೀವ್ರತೆಯ ಭೂಕಂಪ ಸಂಭವಿಸಿದೆಪ್ರಾಥಮಿಕ ವರದಿಗಳ ಪ್ರಕಾರ, ಭೂಕಂಪವು 87 ರಿಂದ 121 ಕಿ.ಮೀ ಆಳದಲ್ಲಿ ಸಂಭವಿಸಿದೆ.

ಅಫ್ಘಾನಿಸ್ತಾನ ಮತ್ತು ನೆರೆಯ ಪಾಕಿಸ್ತಾನದ ಕೆಲವು ಭಾಗಗಳ ನಿವಾಸಿಗಳು, ಭೂಕಂಪನದ ತೀವ್ರತೆ ಅನುಭವಿಸಿದ್ದಾರೆ. ಅಫ್ಘಾನಿಸ್ತಾನದ ಪಾರೂನ್‌ನಿಂದ ಸುಮಾರು 69 ಕಿ.ಮೀ ವಾಯುವ್ಯ ದೂರದಲ್ಲಿರುವ ಭೂಕಂಪದ ಕೇಂದ್ರಬಿಂದುವಿನ ಬಳಿ ಬಲವಾದ ಕಂಪನ ಉಂಟಾಗಿದೆ. ಸಾವುನೋವುಗಳು ಅಥವಾ ಪ್ರಮುಖ ಹಾನಿಯ ಬಗ್ಗೆ ತಕ್ಷಣದ ವರದಿಗಳು ಬಂದಿಲ್ಲ, ಆದರೆ ಸ್ಥಳೀಯ ಅಧಿಕಾರಿಗಳು ಪರಿಸ್ಥಿತಿಯನ್ನು ನಿರ್ಣಯಿಸುತ್ತಿದ್ದಾರೆ. ಹಿಂದೂ ಕುಶ್ ಪ್ರದೇಶವು ಟೆಕ್ಟೋನಿಕ್ ಪ್ಲೇಟ್ ಗಡಿಗಳಲ್ಲಿ ಇರುವುದರಿಂದ ಆಗಾಗ್ಗೆ ಭೂಕಂಪನ ನಡೆಯುತ್ತಿರುತ್ತದೆ.

### ಇಬ್ಬರು ಕಟ್ಟಾ ನಕ್ಸಲರ ಹತ್ಯೆ

**ರಾಯ್‌ಪುರ:** ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ ಪೊಲೀಸರಿಗೆ ಬೇಕಾಗಿದ್ದ ಸಿಕ್ಕಿಬಿದ್ದರೆ 13 ಲಕ್ಷ ರೂಪಾಯಿ ಸಾಮೂಹಿಕ ಬಹುಮಾನ ಘೋಷಣೆಯಾಗಿದ್ದ ಇಬ್ಬರು ಕಟ್ಟಾ ನಕ್ಸಲರನ್ನು ಭದ್ರತಾ ಪಡೆಗಳು ನಸುಕಿನ ಜಾವ ಎನ್‌ಕೌಂಟರ್‌ನಲ್ಲಿ ಹತ್ಯೆಗೈದಿದ್ದಾರೆ.

ನಿನ್ನೆ ಸಂಜೆ ಕೊಂಡಗಾಂವ್ ಮತ್ತು ನಾರಾಯಣಪುರ ಜಿಲ್ಲೆಗಳ ಗಡಿಯಲ್ಲಿರುವ ಕಿಲಾಮ್-ಬರ್ಗಮ್ ಗ್ರಾಮಗಳ ಕಾಡಿನಲ್ಲಿ ಭದ್ರತಾ ಸಿಬ್ಬಂದಿಯ ಜಂಟಿ ತಂಡ ನಕ್ಸಲೈಟ್ ವಿರೋಧಿ ಕಾರ್ಯಾಚರಣೆಗೆ ಹೊರಟಿದ್ದಾಗ ಗುಂಡಿನ ಚಕಮಕಿ ನಡೆದಿದೆ ಎಂದು ಬಸ್ತಾರ್ ವಲಯದ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ ಸುಂದರರಾಜ್ ಪಿ ತಿಳಿಸಿದ್ದಾರೆ.

ಕೊಂಡಗಾಂವ್‌ನಿಂದ ರಾಜ್ಯ ಪೊಲೀಸರ ಎರಡೂ ಘಟಕಗಳಾದ ಜಿಲ್ಲಾ ಮೀಸಲು ಪಡೆ ಮತ್ತು ಬಸ್ತಾರ್ ಫೈಟರ್ಸ್‌ಗೆ ಸೇರಿದ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗಿಯಾಗಿದ್ದರು ಎಂದು ಹೇಳಿದರು.

### ಯೂಟ್ಯೂಬರ್ ಜೊತೆ ಅಕ್ರಮ ಸಂಬಂಧ ಪ್ರಶ್ನಿಸಿದ ಪತಿಯನ್ನೇ ಕೊಂದ ಪತ್ನಿ

**ಚಂಡೀಗಢ:** ಮೀರತ್‌ನಲ್ಲಿ ನಡೆದ ಸೌರಭ್ ಕೊಲೆ ಪ್ರಕರಣವನ್ನೇ ನೆನಪಿಸುವ ಮತ್ತೊಂದು ಭೀಕರ ಹತ್ಯೆ ಹರ್ಯಾಣದಲ್ಲಿ ವರದಿಯಾಗಿದ್ದು, ಸಾಮಾಜಿಕ ಜಾಲತಾಣದ ಗೀಳು ಹಚ್ಚಿಸಿಕೊಂಡಿದ್ದ ಪತ್ನಿ ಯೂಟ್ಯೂಬರ್ ಜೊತೆ ಅಕ್ರಮ ಸಂಬಂಧ ಹೊಂದಿ ಅದನ್ನು ಪ್ರಶ್ನಿಸಿದ ಗಂಡನನ್ನೇ ಕೊಂದು ಮುಗಿಸಿದ್ದಾಳೆ. ಹರ್ಯಾಣದ ಭಿವಾನಿಯಲ್ಲಿ ಈ ಕೊಲೆ ಪ್ರಕರಣ ಬೆಳಕಿಗೆ ಬಂದಿದ್ದು, ಪತಿ ಪ್ರವೀಣ್‌ನನ್ನು ಕೊಲೆ ಮಾಡಿದ ಆರೋಪದ ಮೇರೆಗೆ ಆತನ ಪತ್ನಿ ರವೀನಾ ಮತ್ತು ಹರ್ಯಾಣದ ಯೂಟ್ಯೂಬರ್ ಸುರೇಶ್ ಎಂಬುವವರರನ್ನು ಪೊಲೀಸರು ಬಂಧಿಸಿದ್ದಾರೆ. ಈ ಕೊಲೆ ಸ್ಥಳೀಯ ಸಮುದಾಯವನ್ನು ಬೆಚ್ಚಿಬೀಳಿಸಿದ್ದು, ಸಾಮಾಜಿಕ ಮಾಧ್ಯಮದ ಗೀಳು ಮತ್ತು ವಿವಾಹೇತರ ಸಂಬಂಧಗಳ ಕರಾಳ ಮುಖವನ್ನು ಬೆಳಕಿಗೆ ತಂದಿದೆ.

### ವಾಹನಗಳಿಗೆ ಬಸ್ ಢಿಕ್ಕಿ, 4 ಮಂದಿ ಸಾವು

**ರಾಜ್ ಕೋಟ್:** ಗುಜರಾತ್‌ನಲ್ಲಿ ಬೆಳಗ್ಗೆ ಭೀಕರ ಅಪಘಾತವಾಗಿದ್ದು, ವೇಗವಾಗಿ ಬಂದ ಬಸ್ ಸಿಗ್ನಲ್ ನಲ್ಲಿದ್ದ ಹಲವು ವಾಹನಗಳ ಮೇಲೆ ಹರಿದ ಪರಿಣಾಮ ಸ್ಥಳದಲ್ಲೇ ನಾಲ್ಕು ಮಂದಿ ಭೀಕರವಾಗಿ ಸಾವನ್ನಪ್ಪಿರುವ ಘಟನೆ ನಡೆದಿದೆ.

ಗುಜರಾತ್‌ನ ರಾಜ್‌ಕೋಟ್ ನಗರದ ಟ್ರಾಫಿಕ್ ಸಿಗ್ನಲ್‌ನಲ್ಲಿ ಸ್ಥಳೀಯ ಪುರಸಭೆ ನಿರ್ವಹಿಸುತ್ತಿದ್ದ ಎಲೆಕ್ಟ್ರಿಕ್ ಬಸ್ ಚಾಲಕನ ನಿಯಂತ್ರಣ ತಪ್ಪಿ ಹಲವಾರು ವಾಹನಗಳು ಮತ್ತು ಪಾದಚಾರಿಗಳಿಗೆ ಡಿಕ್ಕಿ ಹೊಡೆದಿದ್ದು, ಪರಿಣಾಮ ಸ್ಥಳದಲ್ಲೇ ಕನಿಷ್ಠ 4 ಜನರು ಸಾವನ್ನಪ್ಪಿದ್ದಾರೆ. ಗಾಯಗೊಂಡ ಬಸ್ ಚಾಲಕನನ್ನು ಪ್ರಸ್ತುತ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಾಲಕನ ಅಜಾಗರೂಕ ಚಾಲನೆಯೇ ಅಪಘಾತಕ್ಕೆ ಕಾರಣ ಎಂದು ಆರೋಪಿಸಲಾಗಿದೆ.

ಪೊಲೀಸ್ ಮೂಲಗಳ ಪ್ರಕಾರ ರಾಜ್‌ಕೋಟ್ ನಗರದ ಇಂದಿರಾ ವೃತ್ತದಲ್ಲಿ ಬುಧವಾರ ಬೆಳಿಗ್ಗೆ ಬಸ್ ಚಾಲಕ ಟ್ರಾಫಿಕ್ ಸಿಗ್ನಲ್‌ನಲ್ಲಿ ಬಸ್ ನಿಲ್ಲಿಸಲು ವಿಫಲವಾಗಿದ್ದು, ಬಸ್ ನೋಡ ನೋಡುತ್ತಲೇ ಮುಂದಿದ್ದ ವಾಹನಗಳ ಮೇಲೆ ಹರಿದಿದೆ. ಬಳಿಕ ಮುಂದೆ ಸಾಗಿ ಡಿವೈಡರ್ ಢಿಕ್ಕಿಯಾಗಿ ನಿಂತಿದೆ.

ಅಷ್ಟು ಹೊತ್ತಿಗಾಗಲೇ ಬಸ್ ನಡಿಗೆ ಹಲವಾರು ವಾಹನ ಚಾಲಕರು ಮತ್ತು ಪಾದಾಚಾರಿಗಳು ಸಿಲುಕಿ ಹಾಕಿಕೊಂಡಿದ್ದರು ಎಂದು ಹೇಳಲಾಗಿದೆ.

## ಸೋವಿಯತ್ ಸೈನಿಕರನ್ನು ಕಲ್ಲಾಗಿ ಪರಿವರ್ತಿಸಿದ್ದ ಏಲಿಯನ್ಸ್ ಸಿಐಎ ರಹಸ್ಯ ದಾಖಲೆಯಲ್ಲಿ ಭಯಾನಕ ಫೋಟೋಸ್

**ವಾಷಿಂಗ್ಟನ್ ಡಿಸಿ:** ಶೀತಲ ಸಮರದ ಅವಧಿಯಲ್ಲಿ 1989-90ರ ನಡುವೆ ಉಕ್ರೇನ್‌ನಲ್ಲಿ ಅಂದಿನ ಸೋವಿಯತ್ ಯೂನಿಯನ್ (ಈಗಿನ ರಷ್ಯಾ) ಸೈನಿಕರ ಮೇಲೆ ಪರಗ್ರಹ ಜೀವಿ (ಏಲಿಯನ್)ಗಳು ದಾಳಿ ನಡೆಸಿದ್ದವು ಎಂಬ ಅಮೆರಿಕದ ಸಿಐಎ ರಹಸ್ಯ ದಾಖಲೆಯೊಂದು ಇದೀಗ ಜಾಗತಿಕ ಮಟ್ಟದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಉಕ್ರೇನ್‌ನಲ್ಲಿ 1989-90ರ ನಡುವೆ ಸೋವಿಯತ್ ಸೈನಿಕರು ಮತ್ತು ಏಲಿಯನ್ ವಾಹನ ಹಾರುವ ತಟ್ಟೆ (ಯುಎಫ್‌ಒ) ನಡುವೆ ಭೀಕರ ಕಾಳಗ ನಡೆದಿತ್ತು. ಯುಎಫ್‌ಒ ಮೇಲೆ ಸೋವಿಯತ್ ಸೈನಿಕರು ಗುಂಡು ಹಾರಿಸಿದಾಗ, ಪರಗ್ರಹ ಜೀವಿಗಳು ಪ್ರತಿದಾಳಿ ನಡೆಸಿ 23 ಸೋವಿಯತ್ ಸೈನಿಕರನ್ನು ಕಲ್ಲಿನ ವಿಗ್ರಹಗಳನ್ನಾಗಿ ಪರಿವರ್ತಿಸಿದ್ದವು ಎಂದು ಸಿಐಎ ವರದಿಯಲ್ಲಿ ಉಲ್ಲೇಖಿಸಲಾಗಿದೆ ಎನ್ನಲಾಗಿದೆ.

1991ರಲ್ಲಿ ಸೋವಿಯತ್ ಒಕ್ಕೂಟದ ಪತನದ ನಂತರ, ಸೈನಿಕರ ಮೇಲೆ ಪರಗ್ರಹ ಜೀವಿಗಳ ದಾಳಿಯ ಬಗೆಗಿನ 250 ಪುಟಗಳ ಕೆಜಿಬಿ ವರದಿಯನ್ನು ಸಿಐಎ ಪಡೆದುಕೊಂಡಿತ್ತು.

**ನ್ಯೂಯಾರ್ಕ್ ಪೋಸ್ಟ್ ವರದಿ**

**ವರದಿಯ ಪ್ರಕಾರ, ಸೋವಿಯತ್ ಸೈನಿಕರ ಗುಂಪೊಂದು ಹಾರುವ ತಟ್ಟೆಯ ಮೇಲೆ ಗುಂಡಿನ ದಾಳಿ ನಡೆಸಿತು. ಇದಕ್ಕೆ ಪ್ರತಿಯಾಗಿ ಏಲಿಯನ್‌ಗಳು 23 ಸೋವಿಯತ್ ಸೈನಿಕರನ್ನು ಕಲ್ಲಾಗಿ ಪರಿವರ್ತಿಸಿ ಸ್ಥಳದಿಂದ ಮಾಯವಾದವು ಎಂದು ಸಿಐಎ ದಾಖಲೆಗಳನ್ನು ಉಲ್ಲೇಖಿಸಿ ನ್ಯೂಯಾರ್ಕ್ ಪೋಸ್ಟ್ ವರದಿ ಮಾಡಿದೆ.**



ಈ ವರದಿಯಲ್ಲಿ ಘಟನೆಯ ಪ್ರತ್ಯಕ್ಷದರ್ಶಿಗಳ ಹೇಳಿಕೆಗಳು ಮತ್ತು ದಾಳಿಯ ಭಯಾನಕ ಚಿತ್ರಣಗಳಿವೆ. ಇದೀಗ ಸೋರಿಕೆಯಾಗಿರುವ ಸಿಐಎ ವರದಿಯು ಯುಎಫ್‌ಒಗಳ ಬಗ್ಗೆ ಆಸಕ್ತಿ ಹೊಂದಿರುವವರ ಕುತೂಹಲವನ್ನು ಮತ್ತಷ್ಟು ಕೆರಳಿಸಿದೆ. 2000ರಲ್ಲಿ ಈ ದಾಖಲೆಯನ್ನು ಸಾರ್ವಜನಿಕರಿಗೆ ಬಿಡುಗಡೆ ಮಾಡಲಾಗಿತ್ತು. ಕೆನಡಾದ ವೀಕ್ಲಿ ವರ್ಲ್ಡ್ ನ್ಯೂಸ್ ಮತ್ತು ಉಕ್ರೇನಿಯನ್ ಪತ್ರಿಕೆ ಹೋಲೋಸ್ ಉಕ್ರೇನಿ ಈ ವರದಿಯ ಬಗ್ಗೆ ಮೊದಲು ವರದಿ ಮಾಡಿದ್ದವು. ದಿ ಜೋ ರೋಗನ್ ಎಕ್ಸ್‌ಪೀರಿಯೆನ್ಸ್ ಎಂಬ ಪಾಡ್‌ಕಾಸ್ಟ್ ನಲ್ಲಿಯೂ ಈ ಬಗ್ಗೆ ಚರ್ಚೆ ನಡೆದಿದೆ.

ಸೈನಿಕರ ಮೇಲಿನ ಏಲಿಯನ್ ದಾಳಿಯ ಮಾಹಿತಿಯುಳ್ಳ ಸಿಐಎ ದಾಖಲೆಗಳನ್ನು, ಫ್ರೀಡಂ ಆಫ್ ಇನ್ಫಾರ್ಮೇಷನ್ ಆಕ್ಟ್ ಎಲೆಕ್ಟ್ರಾನಿಕ್ ರೀಡಿಂಗ್ ರೂಮ್‌ನಲ್ಲಿ ನೋಡಬಹುದು. ಎಂದು ನ್ಯೂಯಾರ್ಕ್ ಪೋಸ್ಟ್ ವರದಿಯಲ್ಲಿ ಉಲ್ಲೇಖಿಸಲಾಗಿದೆ.

## ಸಾಮೂಹಿಕ ಅತ್ಯಾಚಾರ ಕೇಸ್‌ನಲ್ಲಿ ಬಿಜೆಪಿ ಮುಖಂಡ

**ಲಖನೌ:** ಉತ್ತರಪ್ರದೇಶದ ಪಶ್ಚಿಮ ಭಾಗದ ಕಸಗಂಜ್ ಜಿಲ್ಲೆಯಲ್ಲಿ ಅಪ್ರಾಪ್ತೆಯ ಮೇಲಿನ ಸಾಮೂಹಿಕ ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಬಿಜೆಪಿ ಮುಖಂಡ ಸೇರಿದಂತೆ 8 ಮಂದಿ ಆರೋಪಿಗಳನನು ಪೊಲೀಸರು ಬಂಧಿಸಿದ್ದಾರೆ.

ಕಸಗಂಜ್ ಶಾಸಕ ದೇವೇಂದ್ರ ರಾಜಪೂತ್ ಅವರ ಆಪ್ತ ವಲಯದಲ್ಲಿ ಬಂಧಿತ ಆರೋಪಿ ಅಖಿಲೇಶ್ ಪ್ರತಾಪ್ ಸಿಂಗ್ ಇದ್ದಾರೆ ಎನ್ನಲಾಗಿದೆ. ಆರೋಪಿ ಅಖಿಲೇಶ್‌ನನ್ನು ಸ್ಥಳೀಯವಾಗಿ 'ಗಬ್ಬರ್' ಎಂದು ಕೂಡ ಕರೆಯಲಾಗುತ್ತದೆ.

ಅಲ್ಲದೇ ಆತನ ವಿರುದ್ಧ ಸ್ಥಳೀಯವಾಗಿ ಅಕ್ರಮ ಗಣಿಗಾರಿಕೆ ನಡೆಸಿದ ಸಂಬಂಧ ಹಲವು ಕೇಸ್‌ಗಳು ದಾಖಲಾಗಿವೆ ಎಂದು ತಿಳಿದುಬಂದಿದೆ. ನಿಶ್ಚಿತಾರ್ಥವಾಗಿದ್ದ 17 ವರ್ಷದ ಯುವತಿಯು ತನ್ನನ್ನು ವರಿಸುವ ಹುಡುಗನ ಜತೆಗೆ ನಾಲೆಯೊಂದರ ಬಳಿಕ ನಡೆದುಕೊಂಡು ಬರುತ್ತಿದ್ದ ವೇಳೆಯಲ್ಲಿ ದುಷ್ಕರ್ಮಿಗಳು ದಾಳಿ ನಡೆಸಿದ್ದರು.

ಪೊದೆಯೊಳಗೆ ಅಪ್ರಾಪ್ತೆಯನ್ನು ಎಳೆದೊಯ್ದು ಸಾಮೂಹಿಕ ಲೈಂಗಿಕ ದೌರ್ಜನ್ಯ ಎಸಗಿದ್ದರು. ರೇಷನ್ ಅಂಗಡಿಯೊಂದರಿಂದ ದಿನಸಿ ಪಡೆದು ಜೋಡಿಯು ಮನೆಗೆ ಮರಳುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.



**ಅಗತ್ಯ ಕ್ರಮಕ್ಕೆ ಪ್ರಧಾನಿ ಸೂಚನೆ:** ವಾರಾಣಸಿಯಲ್ಲಿ ಯುವತಿಯೊಬ್ಬರ, ಸಾಮೂಹಿಕ ಅತ್ಯಾಚಾರ ಎಸಗಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕಾರಿಗಳಿಗೆ ಆದೇಶಿಸಿದರು. ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡುವ ಹಿನ್ನೆಲೆಯಲ್ಲಿ ಮೋದಿ ಅವರು ವಾರಾಣಸಿಗೆ ಆಗಮಿಸಿದ್ದರು. ಈ ವೇಳೆ ಸಾಮೂಹಿಕ ಅತ್ಯಾಚಾರ' ಪ್ರಕರಣದ ಬಗ್ಗೆ ವಾರಾಣಸಿ ವಿಭಾಗೀಯ ಆಯುಕ್ತರು ಹಾಗೂ ಪೊಲೀಸ್ ಆಯುಕ್ತರಿಂದ ಪ್ರಧಾನಿ ಮಾಹಿತಿ ಪಡೆದರು. ಅಪರಾಧಿಗಳನ್ನು ಬಂಧಿಸಿ, ಕಠಿಣ ಶಿಕ್ಷೆ ಆಗುವುದನ್ನು ಖಾತರಿ ಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

19 ವರ್ಷದ ಯುವತಿಯನ್ನು 22 ಮಂದಿ ಅಪಹರಿಸಿ, ಆರು ದಿನಗಳ ಕಾಲ ವಾರಾಣಸಿಯ ವಿವಿಧ ನಗರಗಳಲ್ಲಿ ಅತ್ಯಾಚಾರ ಎಸಗಿರುವ ಆರೋಪದಡಿ ಪ್ರಕರಣ ದಾಖಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಈಗಾಗಲೇ 11 ಮಂದಿ ಆರೋಪಿಗಳನ್ನು ಬಂಧಿಸಿದ್ದು, ಉಳಿದವರಿಗಾಗಿ ಶೋಧ ನಡೆಸುತ್ತಿರುವುದಾಗಿ ಪೊಲೀಸರು ಹೇಳಿದ್ದಾರೆ.

## ಇಡಿಯನ್ನು ಮುಚ್ಚಬೇಕು: ಅಖಿಲೇಶ್ ಯಾದವ್

**ಭುವನೇಶ್ವರ:** ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ವಿರುದ್ಧ ಜಾರಿ ನಿರ್ದೇಶನಾಲಯ(ಇಡಿ) ಚಾರ್ಜ್ ಶೀಟ್ ಸಲ್ಲಿಸಿದ ಬೆನ್ನಲ್ಲೇ ಸಮಾಜವಾದಿ ಪಕ್ಷದ ಅಧ್ಯಕ್ಷ ಮತ್ತು ಉತ್ತರ ಪ್ರದೇಶ ಮಾಜಿ ಮುಖ್ಯಮಂತ್ರಿ ಅಖಿಲೇಶ್ ಯಾದವ್ ಬುಧವಾರ ಇಡಿಯನ್ನು ಮುಚ್ಚಬೇಕು ಎಂದು ಹೇಳಿದ್ದಾರೆ.




ಮಾಜಿ ಕೇಂದ್ರ ಸಚಿವ ಮತ್ತು ಹಿರಿಯ ಕಾಂಗ್ರೆಸ್ ನಾಯಕ ಶ್ರೀಕಾಂತ್ ಜೆನಾ ಅವರೊಂದಿಗೆ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅಖಿಲೇಶ್ ಯಾದವ್ ಅವರು, ಇಡಿ ಕೇಂದ್ರದ ಕೈಗೊಂಬೆಯಾಗಿದ್ದು, ಈಗ ಅದನ್ನು ವಿರೋಧ ಪಕ್ಷದ ನಾಯಕರಿಗೆ ಕಿರುಕುಳ ನೀಡಲು ಮತ್ತು ಅವರ ಧ್ವನಿ ಅಡಗಿಸಲು ಒಂದು ಸಾಧನವಾಗಿ ಬಳಸಿಕೊಳ್ಳಲಾಗುತ್ತಿದೆ ಎಂದರು. ಆರ್ಥಿಕ ಅಪರಾಧಗಳನ್ನು ನಿಭಾಯಿಸಲು ಆದಾಯ ತೆರಿಗೆ ಇಲಾಖೆ ಮತ್ತು ಜಿಎಸ್‌ಟಿ ಅಧಿಕಾರಿಗಳಂತಹ ಹಲವಾರು ಸಂಸ್ಥೆಗಳು ಇರುವುದರಿಂದ ಇಡಿಯ ಅಗತ್ಯವಿಲ್ಲ. ಅದನ್ನು ಮುಚ್ಚಬೇಕು ಎಂದು ಮಾಜಿ ಸಿಎಂ ಆಗ್ರಹಿಸಿದರು.

ನಮ್ಮ ಪಕ್ಷ ಸೇರಿದಂತೆ ಹಲವಾರು ರಾಜಕೀಯ ಪಕ್ಷಗಳು ಈ ಹಿಂದೆ ಕಾಂಗ್ರೆಸ್ ನೇತೃತ್ವದ ಸರ್ಕಾರದ ಅವಧಿಯಲ್ಲಿ ಇಡಿ ರಚನೆಯನ್ನು ವಿರೋಧಿಸಿದ್ದವು ಮತ್ತು ನಂತರ ಆ ಸಂಸ್ಥೆಯನ್ನು ನಿಮ್ಮ ವಿರುದ್ಧವೂ ಬಳಸಬಹುದು ಎಂದು ಎಚ್ಚರಿಸಿದ್ದವು ಎಂದು ಎಸ್ಪಿ ಮುಖ್ಯಸ್ಥ ತಿಳಿಸಿದ್ದಾರೆ.

ನನ್ನ ಪ್ರಕಾರ, ಇಡಿಯಂತಹ ಇಲಾಖೆಯನ್ನು ರದ್ದುಗೊಳಿಸಬೇಕು. ನಾನು ಕಾಂಗ್ರೆಸ್ ಗೆ ಕೂಡ ಇಡಿ ಮುಚ್ಚುವಂತೆ ಒತ್ತಾಯಿಸುವಂತೆ ಕೇಳುತ್ತೇನೆ. ಅಂತಹ ಸಂಸ್ಥೆ ಅಸ್ತಿತ್ವದಲ್ಲಿದ್ದರೆ, ನೀವು ನಿಮ್ಮ ಸ್ವಂತ ಕಾರ್ಯವಿಧಾನಗಳನ್ನು ನಂಬುವುದಿಲ್ಲ ಎಂದರು.

## ದೀದಿ ನಾಡಿನ ಗಲಭೆ ಹಿಂದೆ ಬಾಂಗ್ಲಾ ನುಸುಳಕೋರರ ಕೈವಾಡ

**ಕೋಲ್ಕೊತ್ತಾ:** ಕಳೆದ ಕೆಲ ದಿನಗಳಿಂದಲೂಪಶ್ಚಿಮ ಬಂಗಾಳದಲ್ಲಿ ವಕ್ಫ್ ಕಾಯಿದೆ ವಿರೋಧಿ ಹೋರಾಟ, ಹಿಂಸಾಚಾರ ಆಗ್ತಾನೆ ಇದೆ. ಆದರೆ, ಹಿಂಸಾಚಾರದಲ್ಲಿ ಬಾಂಗ್ಲಾದೇಶದ ದುಷ್ಕರ್ಮಿಗಳ ಕೈವಾಡವಿರುವುದು ಬೆಳಕಿಗೆ ಬಂದಿದೆ.




ಕೇಂದ್ರ ತನಿಖಾ ಸಂಸ್ಥೆಗಳು ಕೈಗೊಂಡಿರುವ ತನಿಖೆಯ ಪ್ರಾಥಮಿಕ ಮಾಹಿತಿ ಪ್ರಕಾರ ಗಡಿ ದಾಟಿ ಬಂದ ಬಾಗ್ಲಾದೇಶದ ದುಷ್ಟಶಕ್ತಿಗಳು ಬಂಗಾಳದ ಹಿಂಸಾಚಾರದಲ್ಲಿಭಾಗಿಯಾಗಿದ್ದಾರೆ ಎಂದು ಕೇಂದ್ರ ಗೃಹ ಸಚಿವಾಲಯ ಮಾಹಿತಿ ನೀಡಿದೆ.

ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಸರಕಾರ ಒಳನುಸುಳುಕೋರರನ್ನು ತಡೆಯುವಲ್ಲಿ ವಿಫಲವಾಗಿದೆ. ರಾಜ್ಯದ ಆಡಳಿತ ವೈಫಲ್ಯದಿಂದ ಮುರ್ಶಿದಾಬಾದ್, ಮಾಲ್ಡಾ, ಉತ್ತರ 24 ಪರಗಣ, ದಕ್ಷಿಣ 24 ಪರಗಣ ಜಿಲ್ಲೆಯಲ್ಲಿ ಹಿಂಸಾಚಾರ ಘಟನೆಗಳು ಸಂಭವಿಸಿವೆ ಎಂಬ ಸಂಗತಿ ಪ್ರಾಥಮಿಕ ತನಿಖೆಯಲ್ಲಿ ಹೊರಬಿದ್ದಿದೆ. ವಕ್ಫ್ ಕಾಯಿದೆ ವಿರೋಧಿಸಿ ಮುರ್ಷಿದಾಬಾದ್‌ನಲ್ಲಿ ನಡೆದ ಹಿಂಸಾಚಾರಕ್ಕೆ ರಾಜ್ಯದಲ್ಲಿಮೂವರು ಬಲಿಯಾಗಿದ್ದಾರೆ.

**ತಮಿಳುನಾಡಿನಲ್ಲಿ ವಕ್ಫ್ ವಕ್ರ ಕಣ್ಣು**

ಗಲಭೆ ಪ್ರಕರಣ ಸಂಬಂಧ 210 ದುಷ್ಕರ್ಮಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಉತ್ತರ ಪ್ರದೇಶ (2.2 ಲಕ್ಷ) ಬಿಟ್ಟರೆ ಪಶ್ಚಿಮ ಬಂಗಾಳದಲ್ಲಿಅತ್ಯಧಿಕ 84,480 ವಕ್ಫ್ ಆಸ್ತಿಗಳಿವೆ. ವಕ್ಫ್ ಕಾಯಿದೆಗೆ ತಿದ್ದುಪಡಿ ತಂದ ಬಳಿಕ ಕಾಯಿದೆ ವಿರೋಧಿಸಿ ಹೋರಾಟ ನಡೆಸಲಾಗುತ್ತಿದೆ.

**ತಮಿಳುನಾಡಿನ ವೆಲ್ಲೂರು ಜಿಲ್ಲೆಯ ಆಸ್ತಿ ಮೇಲೆ ವಕ್ಫ್ ಕಣ್ಣು:** ದೇಶಾದ್ಯಂತ ವಕ್ಫ್ ತಿದ್ದುಪಡಿ ವಿಧೇಯಕ ವಿಚಾರವಾಗಿ ಪರ-ವಿರೋಧ ಚರ್ಚೆ ನಡೆಯುತ್ತಿರುವಾಗಲೇ ತಮಿಳುನಾಡಿನ ವೆಲ್ಲೂರು ಜಿಲ್ಲೆಯ ಕುಟ್ಟುಕೊಳ್ಳೈ ಗ್ರಾಮದ ಭೂಮಿ ತನ್ನದೆಂದು ವಕ್ಫ್ ಮಂಡಳಿ ಹಕ್ಕು ಪ್ರತಿಪಾದಿಸಿದೆ.

ವಕ್ಫ್ ಮಂಡಳಿ, ನ್ಯಾಯಾಧೀಕರಣ ಪುನರ್ ರಚನೆಗೆ ಇತ್ತೀಚೆಗೆ ಕೇಂದ್ರ ಸರಕಾರ ವಕ್ಫ್ ಕಾಯಿದೆಗೆ ತಿದ್ದುಪಡಿ ತಂದಿದೆ. ಕಾನೂನು ಬದಲಾವಣೆ ಹೊರತಾಗಿಯೂ, ''ವೆಲ್ಲೂರು ಜಿಲ್ಲೆಯ ಕುಟ್ಟುಕೊಳ್ಳೈ ಗ್ರಾಮದ ಸಂಪೂರ್ಣ ಭೂಮಿ ವಕ್ಫ್ ಮಂಡಳಿಗೆ ಸೇರಿದೆ.

- ವೆಲ್ಲೂರಿನಲ್ಲಿ 150 ಕುಟುಂಬಕ್ಕೆ ಜಾಗ ಖಾಲಿ ಮಾಡಲು ನೋಟಿಸ್ ಜಾರಿ
- ಪ.ಬಂಗಾಳ ಹಿಂಸಾಚಾರದಲ್ಲಿ ಬಾಂಗ್ಲಾ ದುಷ್ಕರ್ಮಿಗಳ ಕೈವಾಡ
- ಮಮತಾ ಬ್ಯಾನರ್ಜಿ ಸರಕಾರ ಒಳ ನುಸುಳುಕೋರ ತಡೆಯುವಲ್ಲಿ ವಿಫಲ

## ನಾಸಿಕ್‌ನಲ್ಲಿ ದರ್ಗಾ ಧ್ವಂಸ ವೇಳೆ ಘರ್ಷಣೆ: 21 ಪೊಲೀಸರಿಗೆ ಗಾಯ, 15 ಮಂದಿ ಬಂಧನ

**ನಾಶಿಕ್:** ಮಹಾರಾಷ್ಟ್ರದ ನಾಸಿಕ್ ನಗರದಲ್ಲಿ ಅನಧಿಕೃತ ದರ್ಗಾವನ್ನು ಕೆಡವುದನ್ನು ವಿರೋಧಿಸುತ್ತಿದ್ದವರ ಮೇಲೆ ಗುಂಪೊಂದು ನಡೆಸಿದ ದಾಳಿಯಲ್ಲಿ ಇಪ್ಪತ್ತೊಂದು ಪೊಲೀಸ್ ಸಿಬ್ಬಂದಿ ಗಾಯಗೊಂಡಿದ್ದು, ಮೂರು ಪೊಲೀಸ್ ವಾಹನಗಳಿಗೆ ಹಾನಿಯಾಗಿವೆ.

ನಿನ್ನೆ ತಡರಾತ್ರಿ ಈ ಘಟನೆ ನಡೆದಿದ್ದು, ಉದ್ರಿಕ್ತ ಗುಂಪು ಚದುರಿಸಲು ಪೊಲೀಸರು ಲಾಠಿ ಚಾರ್ಜ್ ಮತ್ತು ಅಶ್ರುವಾಯು ಶೆಲ್‌ಗಳನ್ನು ಪ್ರಯೋಗಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು, ಹಿಂಸಾಚಾರಕ್ಕೆ ಸಂಬಂಧಿಸಿದಂತೆ 15 ಜನರನ್ನು ಬಂಧಿಸಲಾಗಿದೆ. ಗಾಯಗೊಂಡ ಪೊಲೀಸ್ ಸಿಬ್ಬಂದಿ ಸ್ಥಳದಲ್ಲಿ ಅತಿಕ್ರಮಣ ವಿರೋಧಿ ಕಾರ್ಯಾಚರಣೆಯ ಸಮಯದಲ್ಲಿ ಭದ್ರತಾ ಕರ್ತವ್ಯದಲ್ಲಿದ್ದರು. ಪರಿಸ್ಥಿತಿ ಪ್ರಸ್ತುತ ಶಾಂತಸ್ಥಿತಿಗೆ ಬಂದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಾಂಬೆ ಹೈಕೋರ್ಟ್‌ನ ಆದೇಶದ ನಂತರ, ನಾಸಿಕ್ ಮುನ್ಸಿಪಲ್ ಕಾರ್ಪೊರೇಷನ್ ಸಿಬ್ಬಂದಿ ನಗರದ ಕಥೆ ಗಲ್ಲಿ ಪ್ರದೇಶದಲ್ಲಿರುವ ಅನಧಿಕೃತ ಸತ್ಪೀರ್ ಬಾಬಾ ದರ್ಗಾವನ್ನು ಕೆಡವಿದರು. ಹೈಕೋರ್ಟ್ ಆದೇಶದಂತೆ, ಸತ್ಪೀರ್ ದರ್ಗಾ ಟ್ರಸ್ಟಿಗಳು ದರ್ಗಾವನ್ನು ಕೆಡವಿ ಹಾಕುವ ಪ್ರಕ್ರಿಯೆಯನ್ನು ಪ್ರಾರಂಭಿಸಿದರು. ದರ್ಗಾ ಕೆಡವುದನ್ನು ವಿರೋಧಿಸಲು ಗುಂಪೊಂದು ಜಮಾಯಿಸಿ ಪ್ರತಿಭಟನಾಕಾರರನ್ನು ಸಮಾಧಾನಪಡಿಸಲು ಹೋದ ಪೊಲೀಸರು ಮತ್ತು ಮುಸ್ಲಿಂ ನಾಯಕರ ಮೇಲೆ ಕಲ್ಲು ತೂರಾಟ ನಡೆಸಿತು ಎಂದು ನಾಶಿಕ್ ಪೊಲೀಸ್ ಆಯುಕ್ತ ಸಂದೀಪ್ ಕಾರ್ಣಿಕ್ ತಿಳಿಸಿದ್ದಾರೆ. ದಾಳಿಯಲ್ಲಿ ಮೂರು ಪೊಲೀಸ್ ವಾಹನಗಳು ಹಾನಿಗೊಳಗಾದವು ಮತ್ತು 21 ಪೊಲೀಸ್ ಸಿಬ್ಬಂದಿ ಗಾಯಗೊಂಡರು. ಬೆಳಗ್ಗೆ ದರ್ಗಾವನ್ನು ಕೆಡವಲಾಯಿತು. ಎಫ್‌ಐಆರ್ ದಾಖಲಿಸುವ, ಹಿಂಸಾಚಾರದಲ್ಲಿ ಭಾಗಿಯಾಗಿರುವವರನ್ನು ಬಂಧಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಹೇಳಿದರು.

## ಅನೇಕ ಅಂತಾರಾಷ್ಟ್ರೀಯ ವಿದ್ಯಾರ್ಥಿಗಳಿಗೆ ತೊಂದರೆ, ಡೊನಾಲ್ಡ್ ಟ್ರಂಪ್‌ಗೆ ಸೆಡ್ಡು ಅಮೆರಿಕ ವೀಸಾ ರದ್ದತಿ ಪ್ರಶ್ನಿಸಿ ಕೋರ್ಟ್ ಮೊರೆ ಹೋದ ವಿದ್ಯಾರ್ಥಿಗಳು

**ಹೊಸದಿಲ್ಲಿ:** ಅಮೆರಿಕದಲ್ಲಿ ವ್ಯಾಪಕವಾಗಿ ವೀಸಾ ರದ್ದುಗೊಳಿಸುವಿಕೆಯು ನಡೆಯುತ್ತಿದೆ. ಇದರಿಂದ ಅನೇಕ ಅಂತಾರಾಷ್ಟ್ರೀಯ ವಿದ್ಯಾರ್ಥಿಗಳು ತೊಂದರೆಗೀಡಾಗಿದ್ದಾರೆ. ಇನ್ನು ಟ್ರಂಪ್ ಆಡಳಿತವು ತಮ್ಮ ವೀಸಾಗಳನ್ನು ರದ್ದುಗೊಳಿಸಿದ್ದನ್ನು ಪ್ರಶ್ನಿಸಿ ಹಲವಾರು ವಿದ್ಯಾರ್ಥಿಗಳು ನ್ಯಾಯಾಲಯದ ಮೊರೆ ಹೋಗಿದ್ದಾರೆ.

ಡೊನಾಲ್ಡ್ ಟ್ರಂಪ್ ಅಮೆರಿಕ ಅಧ್ಯಕ್ಷರಾದ ಮೇಲೆ ಅಮೆರಿಕದ ವಲಸೆ ನೀತಿ ಸಂಪೂರ್ಣವಾಗಿ ಬದಲಾಗಿದೆ. ಚಿಕ್ಕ ಚಿಕ್ಕ ವಿಚಾರಕ್ಕೆ ವಿದ್ಯಾರ್ಥಿಗಳ ವೀಸಾವನ್ನು ರದ್ದುಪಡಿಸಲಾಗುತ್ತಿದೆ. ಅಂತಾರಾಷ್ಟ್ರೀಯ ವಿದ್ಯಾರ್ಥಿಗಳು ಯಾವಾಗ ನಮ್ಮ ವೀಸಾ ರದ್ದಾಗುತ್ತೆ ಎಂಬ ಆತಂಕದಲ್ಲಿಯೇ ಜೀವನವನ್ನು ನಡೆಸುತ್ತಿದ್ದಾರೆ. ಇದರ ನಡುವೆ ಒಂದಿಷ್ಟು ಅಂತಾರಾಷ್ಟ್ರೀಯ ವಿದ್ಯಾರ್ಥಿಗಳು ಡೊನಾಲ್ಡ್ ಟ್ರಂಪ್ ಆಡಳಿತಕ್ಕೆ ಸೆಡ್ಡು ಹೊಡೆದಿದ್ದು, ತಮ್ಮ ವೀಸಾ ರದ್ದನ್ನು ಪ್ರಶ್ನಿಸಿ ಅಮೆರಿಕದ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಡೊನಾಲ್ಡ್ ಟ್ರಂಪ್ ಸರ್ಕಾರದ ವಿರುದ್ಧ ಕೋರ್ಟ್‌ಗಳಲ್ಲಿ ಮೊಕದ್ದಮೆಯನ್ನು ಹೂಡಿದ್ದು, ದಿಢೀರನೇ ನಮ್ಮ ವೀಸಾ ರದ್ದು ಮಾಡುವ ಮೂಲಕ ನಿಯಮಗಳನ್ನು ಉಲ್ಲಂಘಿಸುತ್ತಿದ್ದಾರೆ ಎಂದು ವಾದ ಮಾಡುತ್ತಿದ್ದಾರೆ.

ಈ ಹಿನ್ನೆಲೆ ದಿಢೀರ್ ವೀಸಾ ರದ್ದಾದ ವಿದ್ಯಾರ್ಥಿಗಳು ಹೋಮ್‌ಲ್ಯಾಂಡ್ ಸೆಕ್ಯುರಿಟಿ ಇಲಾಖೆಯ ವಿರುದ್ಧ ಕೇಸ್ ದಾಖಲಿಸಿದ್ದಾರೆ. ಸರ್ಕಾರವು ತಮ್ಮ ವೀಸಾವನ್ನು ರದ್ದುಗೊಳಿಸಿರುವುದು ಕಾನೂನು ಬಾಹಿರ, ಸರ್ಕಾರದ ನಿರ್ಧಾರ ಸಮರ್ಥನೀಯವಲ್ಲ ಎಂದು ವಾದಿಸಿದ್ದಾರೆ. ನ್ಯೂ ಹ್ಯಾಂಪ್‌ಶೈರ್‌ನಲ್ಲಿ ಕಳೆದ ವಾರ ಫೆಡರಲ್ ನ್ಯಾಯಾಧೀಶರು ಟ್ರಂಪ್ ಆಡಳಿತಕ್ಕೆ ಮಂಗಳಾರತಿ ಎತ್ತಿದ್ದರು. ಅದಲ್ಲದೇ ಚೀನಾದ ಡಾರ್ಟ್‌ಮೌತ್ ಕಾಲೇಜಿನ ಕಂಪ್ಯೂಟರ್ ಸೈನ್ಸ್ ವಿದ್ಯಾರ್ಥಿ ಕ್ಸಿಯೋಟಿಯನ್ ಲಿಯು ಅವರ ವೀಸಾ ರದ್ದುಗೊಳಿಸಿರುವುದಕ್ಕೆ ತಡೆಯಾಜ್ಞೆಯನ್ನು ನೀಡಿದ್ದರು. ಈ ಹಿನ್ನೆಲೆ ಜಾರ್ಜಿಯಾ ಮತ್ತು ಕ್ಯಾಲಿಫೋರ್ನಿಯಾದ ಫೆಡರಲ್ ನ್ಯಾಯಾಲಯದಲ್ಲಿ ವಕೀಲರು ಇದೇ ರೀತಿಯ ಅರ್ಜಿಗಳನ್ನು ಸಲ್ಲಿಸಿದ್ದು, ಟ್ರಂಪ್ ಆಡಳಿತವನ್ನು ಇಕ್ಕಟ್ಟಿಗೆ ಸಿಲುಕಿಸುವ ಪ್ರಯತ್ನವನ್ನು ಮಾಡುತ್ತಿದ್ದಾರೆ. ಕಾಲೇಜುಗಳು ವಿದ್ಯಾರ್ಥಿಗಳ ಬೆಂಬಲಕ್ಕೆ ನಿಂತಿದ್ದು, ವಿದ್ಯಾರ್ಥಿಗಳು ಪ್ರತಿಭಟನೆಗಳಲ್ಲಿ ಭಾಗವಹಿಸಿರುವುದಕ್ಕೆ ಯಾವುದೇ ಸಾಕ್ಷ್ಯಗಳು ಸಿಕ್ಕಿಲ್ಲ. ಕ್ಷುಲ್ಲಕ ಕಾರಣಕ್ಕೆ ಅಮೆರಿಕದ ಬಹಳಷ್ಟು ವಿದ್ಯಾರ್ಥಿಗಳ ವೀಸಾವನ್ನು ರದ್ದುಪಡಿಸಲಾಗುತ್ತಿದೆ ಎಂದು ವಾದಿಸುತ್ತಿವೆ.

- ಅಮೆರಿಕದಲ್ಲಿ ವ್ಯಾಪಕವಾಗಿ ನಡೆಯುತ್ತಿರುವ ವೀಸಾ ರದ್ದುಗೊಳಿಸುವಿಕೆ.
- ಅನೇಕ ಅಂತಾರಾಷ್ಟ್ರೀಯ ವಿದ್ಯಾರ್ಥಿಗಳಿಗೆ ತೊಂದರೆ.
- ಟ್ರಂಪ್ ಆಡಳಿತವು ತಮ್ಮ ವೀಸಾಗಳನ್ನು ರದ್ದುಗೊಳಿಸಿದ್ದನ್ನು ಪ್ರಶ್ನಿಸಿ ಹಲವಾರು ವಿದ್ಯಾರ್ಥಿಗಳು ನ್ಯಾಯಾಲಯದ ಮೊರೆ.



**ದಿಢೀರ್ ಅಂತಾ ವೀಸಾ ರದ್ದಾದರೆ ಏನು ಮಾಡಬೇಕು?:** ಅಂತಾರಾಷ್ಟ್ರೀಯ ವಿದ್ಯಾರ್ಥಿಗಳು ಎಫ್ - 1 ವೀಸಾ ಪಡೆಯಲು ಬಹಳಷ್ಟು ಕಷ್ಟ ಪಟ್ಟಿರುತ್ತಾರೆ. ಬಹಳಷ್ಟು ಸಮಯವನ್ನು ವ್ಯಯಿಸಿರುತ್ತಾರೆ. ಆದರೆ, ಒಂದೇ ಬಾರಿಗೆ ಅವರ ವೀಸಾ ರದ್ದುಪಡಿಸುವುದರಿಂದ ವಿದ್ಯಾರ್ಥಿಗಳು ಸಂಕಷ್ಟಕ್ಕೆ ಸಿಲುಕುತ್ತಾರೆ. ಅಮೆರಿಕದ ಕಾಲೇಜುಗಳಲ್ಲಿ ಪ್ರವೇಶ ಪಡೆದ ನಂತರ ವಿದ್ಯಾರ್ಥಿಗಳು ಅಮೆರಿಕ ರಾಯಭಾರ ಕಚೇರಿ ಅಥವಾ ವಿದೇಶದಲ್ಲಿರುವ ಕಾನ್ಸುಲೇಟ್‌ನಲ್ಲಿ ಅರ್ಜಿ ಮತ್ತು ಸಂದರ್ಶನ ಪ್ರಕ್ರಿಯೆಯಲ್ಲಿ ಭಾಗವಹಿಸಿರುತ್ತಾರೆ.

ಅದಲ್ಲಿ ತಮ್ಮ ಅಧ್ಯಯನಕ್ಕಾಗಿ ಸಾಕಷ್ಟು ಹಣಕಾಸಿನ ವ್ಯವಸ್ಥೆ ಇದೆ ಎಂಬುದನ್ನು ತೋರಿಸಬೇಕಾಗುತ್ತದೆ. ಇಷ್ಟೆಲ್ಲಾ ಮಾಡಿ ವೀಸಾ ತೆಗೆದುಕೊಂಡ ಬಳಿಕ ದಿಢೀರ್ ಅಂತಾ ವೀಸಾ ರದ್ದಾದರೆ ಏನು ಮಾಡಬೇಕು ಎಂಬುದು ವಿದ್ಯಾರ್ಥಿಗಳ ಪ್ರಶ್ನೆಯಾಗಿದೆ. ಬಂಧನ ಹಾಗೂ ಗಡಿಪಾರಿನ ಭೀತಿಯಿಂದ ಪಾರಾಗಲು ವಿದ್ಯಾರ್ಥಿಗಳು ವ್ಯಾಸಂಗವನ್ನು ತ್ಯಜಿಸಿ ದೇಶ ಬಿಟ್ಟು ಹೋಗುತ್ತಿದ್ದಾರೆ. ಕಾಲೇಜುಗಳು ವಿದ್ಯಾರ್ಥಿಗಳ ಪರ ನಿಲ್ಲುವ ಮಾತುಗಳನ್ನಾಡುತ್ತಿದ್ದು, ಫೆಡರಲ್ ಸರ್ಕಾರದ ಜೊತೆ ಮಾತುಕತೆ ನಡೆಯುತ್ತಿದೆ ಎಂದು ಭರವಸೆ ನೀಡುತ್ತಿವೆ.

### ವೀಸಾ ರದ್ದಾಗುವ ಭೀತಿ

**ಡೊನಾಲ್ಡ್ ಟ್ರಂಪ್ ಸರ್ಕಾರ ವಿದ್ಯಾರ್ಥಿಗಳ ವೀಸಾವನ್ನು ರದ್ದುಗೊಳಿಸುವ ಕ್ರಮವನ್ನು ತೆಗೆದುಕೊಳ್ಳುತ್ತಿದೆ. ಈ ನಿರ್ಧಾರದಿಂದ ನೂರಾರು ರಿಸರ್ಚರ್‌ಗಳು ಹಾಗೂ ವಿದ್ಯಾರ್ಥಿಗಳು ಬಂಧನ ಹಾಗೂ ಗಡೀಪಾರಿನ ಭೀತಿಯನ್ನು ಎದುರಿಸುತ್ತಿದ್ದಾರೆ. ಹಾರ್ವರ್ಡ್, ಸ್ಟ್ಯಾನ್‌ಫೋರ್ಡ್‌ನಂತಹ ಖಾಸಗಿ ವಿಶ್ವವಿದ್ಯಾಲಯಗಳಿಂದ ಹಿಡಿದು ಮೇರಿಲ್ಯಾಂಡ್ ವಿಶ್ವವಿದ್ಯಾಲಯ ಮತ್ತು ಓಹಿಯೋ ಸ್ಟೇಟ್ ವಿಶ್ವವಿದ್ಯಾಲಯದಂತಹ ದೊಡ್ಡ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಕೂಡ ವೀಸಾ ರದ್ದಾಗುವ ಭೀತಿ ಎದುರಿಸುತ್ತಿದ್ದು, ಈಗಾಗಲೇ ಹಲವರ ವೀಸಾ ರದ್ದಾಗಿದೆ.**

### ವಿದ್ಯಾರ್ಥಿಗಳ ವೀಸಾ ದಿಢೀರ್ ರದ್ದಾಗ್ತಿರೋದ್ಯಾಕೆ?

**ಅಮೆರಿಕದಲ್ಲಿ ಹಲವಾರು ಕಾರಣಗಳಿಗೆ ವೀಸಾಗಳನ್ನು ರದ್ದುಗೊಳಿಸಲಾಗುತ್ತಿದೆ. ಆದರೆ, ಕೆಲವು ವಿದ್ಯಾರ್ಥಿಗಳ ವೀಸಾವನ್ನು ಟ್ರಾಫಿಕ್ ರೂಲ್ಸ್ ಬ್ರೇಕ್ ಮಾಡಿದ್ದಕ್ಕೂ ರಿವೋಕ್ ಮಾಡಲಾಗುತ್ತಿದೆ. ವಿದ್ಯಾರ್ಥಿಗಳಿಗೆ ತಮ್ಮನ್ನು ಏಕೆ ಟಾರ್ಗೆಟ್ ಮಾಡಲಾಗುತ್ತಿದೆ ಎಂಬುದು ಕೂಡ ಗೊತ್ತಾಗುತ್ತಿಲ್ಲ. ಈ ಹಿನ್ನೆಲೆ ವೇಯ್ನ್ ಸ್ಟೇಟ್ ಯೂನಿವರ್ಸಿಟಿ ಹಾಗೂ ಮಿಚಿಗನ್ ಯೂನಿವರ್ಸಿಟಿಗಳ ವಿದ್ಯಾರ್ಥಿಗಳ ಪರವಾಗಿ ಮಿಚಿಗನ್‌ನ ಎಸಿಎಲ್‌ಯು ವಕೀಲರು ಕೋರ್ಟ್‌ನಲ್ಲಿ ಹೋಮ್‌ಲ್ಯಾಂಡ್ ಸೆಕ್ಯುರಿಟಿ ವಿರುದ್ಧ ಧಾವೆ ಹೂಡಿದ್ದಾರೆ. ವಿದ್ಯಾರ್ಥಿಗಳ ವೀಸಾ ರದ್ದುಗೊಳಿಸುವ ನಿರ್ಧಾರ ರಾಷ್ಟ್ರವ್ಯಾಪಿಯಾಗಿದೆಯಾ? ಇದರ ಬಗ್ಗೆ ಲಿಖಿತ ಆದೇಶವಿದೆಯೇ? ಇತ್ತೀಚಿನ ವೀಸಾ ರದ್ದತಿ ಕ್ರಮಗಳು ಅನುಮಾನ ಹುಟ್ಟಿಸುತ್ತಿವೆ ಎಂದು ಕೋರ್ಟ್‌ನಲ್ಲಿ ಪ್ರಶ್ನಿಸಿದ್ದಾರೆ.**

# ಟೀಂ ಇಂಡಿಯಾದಲ್ಲಿ ಸಿಗದ ಮನ್ನಣೆ ಆರ್‌ಸಿಬಿ ಸೇರಿದ ಬಳಿಕ ಸಿಕ್ತು!

ಭಾರತದಲ್ಲಿ ಕ್ರಿಕೆಟಿಗನೊಬ್ಬ ಟೀಂ ಇಂಡಿಯಾಗೆ ಆಯ್ಕೆಯಾಗಬೇಕೆಂದರೆ ಪ್ರತಿಭೆಯ ಜೊತೆಗೆ ಅದೃಷ್ಟವನ್ನು ಹೊಂದಿರಬೇಕು. ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಭಾರತದ ಪರ ಆಡುವುದು ಮತ್ತು ಪ್ರದರ್ಶನ ನೀಡುವುದು ಪ್ರತಿಯೊಬ್ಬರ ಕನಸಗಿರುತ್ತದೆ. ಆದರೆ ಆರ್‌ಸಿಬಿ ವಿಕೆಟ್ ಕೀಪರ್-ಬ್ಯಾಟ್ಸ್‌ಮನ್ ಜಿತೇಶ್ ಶರ್ಮಾ ಆಘಾತಕಾರಿ ಸಂಗತಿಯನ್ನು ಬಹಿರಂಗಪಡಿಸಿದ್ದಾರೆ. ಟೀಂ ಇಂಡಿಯಾದಲ್ಲಿ ಆಡಿದ್ದರೂ, ಆರ್‌ಸಿಬಿ ಸೇರಿದ ನಂತರ ಸಿಕ್ಕಷ್ಟು ಮನ್ನಣೆ ಭಾರತ ತಂಡದಲ್ಲಿ ಸಿಗಲಿಲ್ಲ. ಆರ್‌ಸಿಬಿ ಸೇರಿದ ಬಳಿಕ ಅಭಿಮಾನಿಗಳು ಆಟೋಗ್ರಾಫ್‌ಗಾಗಿ ಸಾಲುಗಟ್ಟಿ ನಿಲ್ಲುತ್ತಿದ್ದಾರೆ. ಆದರೆ ಟೀಂ ಇಂಡಿಯಾ ಪರ ಆಡುತ್ತಿದ್ದಾಗ ಕೇವಲ ಮೂರ್ನಾಲ್ಕು ಅಭಿಮಾನಿಗಳು ಆಟೋಗ್ರಾಫ್ ಕೇಳುತ್ತಿದ್ದರು ಎಂದಿದ್ದಾರೆ.

**ಈಗ ಕ್ಯೂ ನಿಲ್ಲುತ್ತಿದ್ದಾರೆ**

ವಾಸ್ತವವಾಗಿ, ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ತನ್ನ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಒಂದು ವೀಡಿಯೊವನ್ನು ಹಂಚಿಕೊಂಡಿದೆ. ಇದರಲ್ಲಿ ಜಿತೇಶ್ ಶರ್ಮಾ ತಮ್ಮ ಕ್ರಿಕೆಟ್ ಪ್ರಯಾಣದ ಬಗ್ಗೆ ಮಾತನಾಡಿದ್ದು, 'ನಾನು ಆರ್‌ಸಿಬಿ ಸೇರಿದ ಬಳಿಕ ಐಪಿಎಲ್‌ಗೂ ಮುನ್ನ ಸೈಯದ್ ಮುಷ್ತಾಕ್ ಅಲಿ ಟ್ರೋಫಿಯಲ್ಲಿ ಆಡಿದ್ದೆ. ಆ ವೇಳೆ ಅಭಿಮಾನಿಗಳು ಜಿತೇಶ್, ಜಿತೇಶ್, ಆರ್‌ಸಿಬಿ, ಆರ್‌ಸಿಬಿ ಎಂದು ಕೂಗುತ್ತಿದ್ದರು.

ಆಗ ನಾನು ಯಾವುದೇ ಸಣ್ಣ ತಂಡಕ್ಕೆ ಹೋಗಿಲ್ಲ ಎಂದು ಅರಿತುಕೊಂಡೆ. ಆರ್‌ಸಿಬಿ ಪರ ಆಡುವುದು ಸಣ್ಣ ವಿಷಯವಲ್ಲ. ಈ ತಂಡದಲ್ಲಿ ವಿಭಿನ್ನ ಭಾವನೆ ಇದೆ. ಇದೀಗ 100-150 ಜನರು ಆಟೋಗ್ರಾಫ್ ಕೇಳುತ್ತಾತೆ. ಇದಕ್ಕೂ ಮೊದಲು, ನಾನು ಭಾರತಕ್ಕಾಗಿ ಆಡಿದಾಗ, 2 ಜನರು ಸಹ ಬಂದಿರಲಿಲ್ಲ. ಆಗ ನನಗೆ ಈ ಫ್ರಾಂಚೈಸಿ ವಿಭಿನ್ನವಾಗಿದೆ ಎಂದು ಅನಿಸಿತು ಎಂದಿದ್ದಾರೆ.

**ಜಿತೇಶ್ ಪ್ರದರ್ಶನ:** ಜಿತೇಶ್ ಅವರ ಪ್ರದರ್ಶನದ ಬಗ್ಗೆ ಹೇಳುವುದಾದರೆ, ಅವರು ಭಾರತ ಪರ 9 ಟಿ20 ಪಂದ್ಯಗಳನ್ನು ಆಡಿದ್ದಾರೆ. ಇದರಲ್ಲಿ 14.28 ರ ಸರಾಸರಿಯಲ್ಲಿ ಕೇವಲ 100 ರನ್ ಕಲೆಹಾಕಿದ್ದಾರೆ. ಇದೀಗ ಐಪಿಎಲ್‌ನಲ್ಲಿ ಆರ್‌ಸಿಬಿ ಪರ 4 ಇನ್ನಿಂಗ್ಸ್‌ಗಳಲ್ಲಿ 29 ಸರಾಸರಿ ಮತ್ತು 157 ಸ್ಟ್ರೈಕ್ ರೇಟ್‌ನೊಂದಿಗೆ 88 ರನ್ ಗಳಿಸಿದ್ದಾರೆ. ಈ ಪಂದ್ಯಾವಳಿಯಲ್ಲಿ ಒಟ್ಟಾರೆ ದಾಖಲೆಯ ಬಗ್ಗೆ ಹೇಳುವುದಾದರೆ, ಜಿತೇಶ್ 46 ಪಂದ್ಯಗಳಲ್ಲಿ 23 ಸರಾಸರಿ ಮತ್ತು 151 ಸ್ಟ್ರೈಕ್ ರೇಟ್‌ನೊಂದಿಗೆ 818 ರನ್ ಗಳಿಸಿದ್ದಾರೆ.




# ಮತ್ತೆ ಅಗ್ರಸ್ಥಾನಕ್ಕೆ ಲಗ್ಗೆಯಿಟ್ಟ ಕ್ಯಾಪಿಟಲ್ಸ್

## ರಾಜಸ್ಥಾನ್ ರಾಯಲ್ಸ್ ವಿರುದ್ಧ ಡೆಲ್ಲಿ ತಂಡಕ್ಕೆ ರೋಚಕ ಸೂಪರ್ ಓವರ್ ಜಯ!

ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ರಾಜಸ್ಥಾನ್ ನಡುವಿನ ಐಪಿಎಲ್ 2025ರ 32ನೇ ಪಂದ್ಯದಲ್ಲಿ ಪಂದ್ಯ ರೋಚಕ ಅಂತ್ಯಕಂಡಿದೆ. ಡೆಲ್ಲಿ ಕ್ಯಾಪಿಟಲ್ಸ್ ಸೂಪರ್ ಓವರ್‌ನಲ್ಲಿ ಗೆಲುವು ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 188 ರನ್‌ಗಳಿಸಿದರೆ, ಇದಕ್ಕೆ ಉತ್ತರವಾಗಿ ರಾಜಸ್ಥಾನ್ ರಾಯಲ್ಸ್ 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು ಅಷ್ಟೇ ರನ್‌ಗಳಿಸಿತು. ಆದರೆ ಸೂಪರ್ ಓವರ್‌ನಲ್ಲಿ ರಾಜಸ್ಥಾನ್ ಇನ್ನೊಂದು ಎಸೆತವಿರುವಂತೆ 11 ರನ್‌ಗಳಿಸಿತು. 12 ರನ್‌ಗಳ ಸೂಪರ್ ಓವರ್ ಗುರಿಯನ್ನ ಬೆನ್ನಟ್ಟಿದ ಡೆಲ್ಲಿ ತಂಡ 4 ಎಸೆತಗಳಲ್ಲಿ 13 ರನ್‌ಗಳಿಸಿ ಗೆಲುವು ಸಾಧಿಸಿತು.

189ರನ್‌ಗಳ ಗುರಿಯನ್ನ ಬೆನ್ನಟ್ಟಿದ ಡೆಲ್ಲಿ ರಾಜಸ್ಥಾನ್ ರಾಯಲ್ಸ್ ಭರ್ಜರಿ ಆರಂಭ ಪಡೆದುಕೊಂಡಿತು. ಸಂಜು ಸ್ಯಾಮ್ಸನ್ ಹಾಗೂ ಯಶಸ್ವಿ ಮೊದಲ ವಿಕೆಟ್‌ಗೆ 63 ರನ್‌ಗಳ ಜೊತೆಯಾಟ ನೀಡಿದರು. 19 ಎಸೆತಗಳಲ್ಲಿ 2 ಬೌಂಡರಿ, 3 ಸಿಕ್ಸರ್ ಸಹಿತ 31 ರನ್‌ಗಳಿಸಿದ್ದ ಸಂಜು ಸ್ಯಾಮ್ಸನ್ ರಿಟೈರ್ಟ್ ಹರ್ಟ್ ತೆಗೆದುಕೊಂಡರು. ನಂತರ ಬಂದ ರಿಯಾನ್ ಪರಾಗ್ 11 ಎಸೆತಗಳಲ್ಲಿ ಕೇವಲ 8 ರನ್‌ಗಳಿಸಿ ಅಕ್ಷರ್ ಪಟೇಲ್ ಬೌಲಿಂಗ್‌ನಲ್ಲಿ ಬೌಲ್ಡ್ ಆದರು.

3ನೇ ವಿಕೆಟ್‌ಗೆ ನಿತೀಶ್ ರಾಣಾ ಮತ್ತು ಜೈಸ್ವಾಲ್ 36 ರನ್ ಗಳಿಸಿದರು. ಜೈಸ್ವಾಲ್ 37 ಎಸೆತಗಳಲ್ಲಿ 3 ಬೌಂಡರಿ, 4 ಸಿಕ್ಸರ್‌ಗಳ ಸಹಿತ 51 ರನ್‌ಗಳಿಸಿ ಔಟ್ ಆದರು. ನಿತೀಶ್ ರಾಣಾ 28 ಎಸೆತಗಳಲ್ಲಿ 6 ಬೌಂಡರಿ, 2 ಸಿಕ್ಸರ್‌ಗಳ ಸಹಿತ 51 ರನ್‌ಗಳಿಸಿದರು. ಅವರು ಔಟ್ ಆಗುವ ಮುನ್ನ ಧ್ರುವ್ ಜುರೆಲ್ ಜೊತೆ 26 ಎಸೆತಗಳಲ್ಲಿ 49 ರನ್‌ಗಳ ಮ್ಯಾಚ್ ವಿನ್ನಿಂಗ್ ಜೊತೆಯಾಟ ನಡೆಸಿದ್ದರು.



# ಐಪಿಎಲ್ ಮ್ಯಾಚ್ ಫಿಕ್ಸಿಂಗ್‌ಗೆ ಯತ್ನ

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18ರ 31 ಪಂದ್ಯಗಳು ಪೂರ್ಣಗೊಂಡಿದೆ. ಈ ಪಂದ್ಯಗಳ ನಡುವೆ ಫಿಕ್ಸಿಂಗ್ ಪ್ರಯತ್ನ ನಡೆಸಲಾಗಿದೆ ಎಂಬ ಆಘಾತಕಾರಿ ಸುದ್ದಿಯೊಂದು ಹೊರಬಿದ್ದಿದೆ. ಈ ಬಗ್ಗೆ ಬಿಸಿಸಿಐನ ಭ್ರಷ್ಟಾಚಾರ ನಿಗ್ರಹ ಮತ್ತು ಭದ್ರತಾ ಘಟಕ ಈಗಾಗಲೇ ಲೀಗ್‌ನ ಎಲ್ಲಾ 10 ತಂಡಗಳಿಗೆ ಎಚ್ಚರಿಕೆ ನೀಡಿದೆ. ಯಾರಾದರೂ ತಮ್ಮನ್ನು ಸಂಪರ್ಕಿಸಲು ಪ್ರಯತ್ನಿಸಿದರೆ ತಕ್ಷಣ ವರದಿ ಮಾಡಬೇಕೆಂದು ಸೂಚಿಸಲಾಗಿದೆ.

ಪ್ರಸ್ತುತ ಪಂದ್ಯಾವಳಿಯ ಮೇಲೆ ಭ್ರಷ್ಟಾಚಾರದ ಮೋಡಗಳು ಕವಿದಿವೆ. ಇದಕ್ಕಾಗಿ ಆಟಗಾರರು, ತರಬೇತುದಾರರು, ಸಹಾಯಕ ಸಿಬ್ಬಂದಿ, ತಂಡದ ಮಾಲೀಕರು ಮತ್ತು ವೀಕ್ಷಕರ ಕುಟುಂಬಗಳ ಸದಸ್ಯರ ಜೊತೆ ಅಭಿಮಾನಿಗಳಂತೆ ನಟಿಸಿ ದುಬಾರಿ ಉಡುಗೊರೆಗಳನ್ನು ನೀಡುವ ಮೂಲಕ ಅವರನ್ನು ಓಲೈಸುವ ಪ್ರಯತ್ನಗಳು ನಡೆಯುತ್ತಿವೆ. ಈ ಮೂಲಕ ಫಿಕ್ಸಿಂಗ್ ನಡೆಸಲು ಯತ್ನಿಸಲಾಗಿದೆ ಎಂದು ತಿಳಿದು ಬಂದಿದೆ.



ಮಾಸ್ಟರ್ ಮೈಂಡ್ ಯಾರು: ಕ್ರಿಕ್‌ಬಜ್‌ನ ವರದಿಯ ಪ್ರಕಾರ, ಹೈದರಾಬಾದ್ ಮೂಲದ ಉದ್ಯಮಿಯೊಬ್ಬರು ಪಂದ್ಯಾವಳಿಯಲ್ಲಿ ಭಾಗವಹಿಸುವವರೊಂದಿಗೆ ಸ್ನೇಹ ಬೆಳೆಸಲು ಪ್ರಯತ್ನಿಸುತ್ತಿದ್ದಾರೆ. ಆದಾಗ್ಯೂ, ಅವರು ಯಾರೆಂಬುದನ್ನು ಇನ್ನೂ ಸಹ ಬಹಿರಂಗಪಡಿಸಲಾಗಿಲ್ಲ. ಆದರೆ ಈ ಉದ್ಯಮಿ ಬುಕ್ಕಿಗಳೊಂದಿಗೆ ನೇರ ಸಂಪರ್ಕ ಹೊಂದಿದ್ದಾರೆ ಎಂಬುದು ಈಗಾಗಲೇ ಖಚಿತವಾಗಿದೆ.

ಈ ಉದ್ಯಮಿಯು ಈ ಹಿಂದೆಯೂ ಇಂತಹ ಭ್ರಷ್ಟಾಚಾರ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದರು. ಹೀಗಾಗಿಯೇ ಇದೀಗ ಐಪಿಎಲ್‌ನೊಂದಿಗೆ ಸಂಬಂಧ ಹೊಂದಿರುವ ಪ್ರತಿಯೊಬ್ಬರಿಗೂ ಬಿಸಿಸಿಐಎಚ್ಚರಿಕೆ ನೀಡಿದೆ. ಈ ಉದ್ಯಮಿ ಯಾವುದೇ ರೀತಿಯಲ್ಲಿ ಸಂಪರ್ಕಿಸಲು ಪ್ರಯತ್ನಿಸಿದರೆ ತಕ್ಷಣ ವರದಿ ಮಾಡಿ ಎಂದು ತಿಳಿಸಲಾಗಿದೆ.

## ಲಾಸ್ ಏಂಜಲೀಸ್ ಒಲಿಂಪಿಕ್ಸ್

# ಕ್ರಿಕೆಟ್ ಪಂದ್ಯಗಳಿಗೆ ಸ್ಥಳ ನಿಗದಿ

2028ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಮರಳಿ ಬರುತ್ತಿದೆ. ಪಂದ್ಯಗಳು ಕ್ಯಾಲಿಫೋರ್ನಿಯಾದ ಪೊಮೊನಾದ ಫೇರ್‌ಪ್ಲೆಕ್ಸ್‌ನಲ್ಲಿ ನಡೆಯಲಿವೆ. ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ತಲಾ 6 ತಂಡಗಳು ಟಿ20 ಸ್ವರೂಪದಲ್ಲಿ ಪದಕಕ್ಕಾಗಿ ಸ್ಪರ್ಧಿಸಲಿವೆ. ಆದಾಗ್ಯೂ ಈ ಪಂದ್ಯಾವಳಿಗೆ ಅರ್ಹತಾ ಮಾನದಂಡಗಳನ್ನು ಇನ್ನೂ ನಿರ್ಧರಿಸಬೇಕಾಗಿದೆ.

ಸುಮಾರು 128 ವರ್ಷಗಳ ನಂತರ ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಮತ್ತೆ ಕಾಣಿಸಿಕೊಳ್ಳುತ್ತಿದೆ. ಈ ಕ್ರೀಡೆಯನ್ನು 2028 ರ ಲಾಸ್ ಏಂಜಲೀಸ್ ಒಲಿಂಪಿಕ್ಸ್‌ಗೆ ಅಧಿಕೃತವಾಗಿ ಸೇರಿಸಲಾಗಿದೆ. ಇದೀಗ ಕ್ರಿಕೆಟ್ ಪಂದ್ಯಾವಳಿ ಯಾವ ಸ್ಥಳದಲ್ಲಿ ನಡೆಯಲಿದೆ ಎಂಬುದರ ಬಗ್ಗೆ ದೊಡ್ಡ ಮಾಹಿತಿ ಹೊರಬಿದ್ದಿದೆ. ಕ್ಯಾಲಿಫೋರ್ನಿಯಾದ ಪೊಮೊನಾ ನಗರದಲ್ಲಿ 500 ಎಕರೆ ವಿಸ್ತೀರ್ಣದ ಮೈದಾನದಲ್ಲಿ ಕ್ರಿಕೆಟ್ ಪಂದ್ಯಗಳು ನಡೆಯಲಿವೆ ಎಂಬ ಮಾಹಿತಿಯನ್ನು ಇದೀಗ ಐಸಿಸಿ ತನ್ನ ಅಧಿಕೃತ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಹಂಚಿಕೊಂಡಿದೆ.




**ತಲಾ 90 ಕ್ರೀಡಾಪಟುಗಳ ಕೋಟಾ**

**ತಾತ್ಕಾಲಿಕ ಕ್ರೀಡಾಂಗಣ ನಿರ್ಮಾಣ;** ಪೊಮೋನಾದಲ್ಲಿ ಕ್ರಿಕೆಟ್ ಆಡಲಾಗುವ ಮೈದಾನವನ್ನು ಫೇರ್‌ಪ್ಲೆಕ್ಸ್ ಎಂದೂ ಕರೆಯುತ್ತಾರೆ. ಅಲ್ಲಿ ಕ್ರಿಕೆಟ್ ಅಥವಾ ಯಾವುದೇ ಇತರ ಕ್ರೀಡೆಗೆ ಈಗಾಗಲೇ ಇರುವ ಯಾವುದೇ ಸಂಕೀರ್ಣವಿಲ್ಲ. ಸಾಮಾನ್ಯವಾಗಿ ಇದನ್ನು ಮೇಳಗಳನ್ನು ಆಯೋಜಿಸಲು ಬಳಸಲಾಗುತ್ತಿತ್ತು. 500 ಎಕರೆ ಪ್ರದೇಶದಲ್ಲಿ ಹರಡಿರುವ ಈ ಮೈದಾನವು 103 ವರ್ಷಗಳಿಂದ (1922) ಲಾಸ್ ಏಂಜಲೀಸ್ ಕೌಂಟಿ ಮೇಳವನ್ನು ಆಯೋಜಿಸುತ್ತಿದೆ. ಆದರೆ ಈಗ ಕ್ರಿಕೆಟ್‌ಗಾಗಿ ಇಲ್ಲಿ ತಾತ್ಕಾಲಿಕ ಸ್ಥಳವನ್ನು ಸಿದ್ಧಪಡಿಸಲಾಗುವುದು. ಇದಕ್ಕೂ ಮೊದಲು, ಅಂದರೆ 2024 ರಲ್ಲಿ ನಡೆದಿದ್ದ ಟಿ20 ವಿಶ್ವಕಪ್‌ಗೆ ಅಮೆರಿಕ ಆತಿಥ್ಯವಹಿಸಿತ್ತು. ಆ ಸಮಯದಲ್ಲಿ ಉದ್ಯಾನವನ ಪ್ರದೇಶದಲ್ಲಿ ತಾತ್ಕಾಲಿಕ ಕ್ರೀಡಾಂಗಣವನ್ನು ನಿರ್ಮಿಸಲಾಗಿತ್ತು.

**ಒಲಿಂಪಿಕ್ ಪೋಸ್ಟರ್‌ನಲ್ಲಿ ಕೊಹ್ಲಿಗೆ ಮಾತ್ರ ಸ್ಥಾನ!**

ಒಲಿಂಪಿಕ್ಸ್ ಆಯೋಜಿಸುವ ಸಮಿತಿಯು ಕ್ರಿಕೆಟ್ ಪಂದ್ಯಾವಳಿ ನಡೆಯುವ ಸ್ಥಳದ ಬಗ್ಗೆ ಮಾಹಿತಿ ನೀಡುವ ಪೋಸ್ಟರ್ ಅನ್ನು ಸಹ ಹಂಚಿಕೊಂಡಿದೆ. ಈ ಪೋಸ್ಟರ್‌ನಲ್ಲಿ ವಿರಾಟ್ ಕೊಹ್ಲಿ ಅವರ ಭಾವಚಿತ್ರವನ್ನು ಹೊರತುಪಡಿಸಿ ಮತ್ತಾ ್ಯವ ಕ್ರಿಕೆಟಿಗನಿಗೂ ಅವಕಾಶ ನೀಡಲಾಗಿಲ್ಲ. ಇದರಿಂದ, ಕ್ರಿಕೆಟ್‌ನಲ್ಲಿ ಕೊಹ್ಲಿ ಎಷ್ಟು ದೊಡ್ಡ ಹೆಸರು ಎಂದು ಅಂದಾಜು ಮಾಡಬಹುದು. ಕೊಹ್ಲಿ ಅವರ ಅಭಿಮಾನಿಗಳ ಸಂಖ್ಯೆ ಹೆಚ್ಚಿರುವುದರಿಂದ ಕ್ರಿಕೆಟ್ ಅನ್ನು ಸೇರಿಸುವ ಬಗ್ಗೆ ಯೋಚಿಸಲು ಪ್ರಾರಂಭಿಸಿದ್ದೇವೆ ಎಂದು ಒಲಿಂಪಿಕ್ ಸಮಿತಿ ಈ ಹಿಂದೆ ಹೇಳಿತ್ತು.

**6 ತಂಡಗಳು ಆಡಲಿವೆ:** ಇತ್ತೀಚೆಗೆ, ಐಒಸಿ (ಅಂತರರಾಷ್ಟ್ರೀಯ ಒಲಿಂಪಿಕ್ ಸಮಿತಿ) ಲಾಸ್ ಏಂಜಲೀಸ್ ಒಲಿಂಪಿಕ್ಸ್ 2028 ರಲ್ಲಿ ಪುರುಷ ಮತ್ತು ಮಹಿಳಾ ವಿಭಾಗಗಳಲ್ಲಿ ತಲಾ 6 ತಂಡಗಳನ್ನು ಸೇರಿಸಲು ಅನುಮೋದನೆ ನೀಡಿತ್ತು. ಈ ತಂಡಗಳು ಪದಕಗಳಿಗಾಗಿ ಟಿ20 ಸ್ವರೂಪದಲ್ಲಿ ಸ್ಪರ್ಧಿಸಬೇಕಾಗುತ್ತದೆ. ಇದಲ್ಲದೆ, ಎರಡೂ ವಿಭಾಗಗಳಲ್ಲಿ ತಲಾ 90 ಕ್ರೀಡಾಪಟುಗಳ ಕೋಟಾವನ್ನು ಸಹ ಅನುಮೋದಿಸಲಾಗಿದೆ. ಇದರರ್ಥ ಪ್ರತಿ ತಂಡವು ಒಲಿಂಪಿಕ್ಸ್‌ಗಾಗಿ 15 ಸದಸ್ಯರ ತಂಡವನ್ನು ಪ್ರಕಟಿಸಬಹುದಾಗಿದೆ.

ಆದಾಗ್ಯೂ, ಇದಕ್ಕೆ ಅರ್ಹತಾ ಮಾನದಂಡಗಳನ್ನು ಇನ್ನೂ ನಿರ್ಧರಿಸಲಾಗಿಲ್ಲ. ವರದಿಗಳ ಪ್ರಕಾರ, ಆತಿಥೇಯ ರಾಷ್ಟ್ರವಾಗಿರುವುದರಿಂದ ಅಮೆರಿಕ ತಂಡಕ್ಕೆ ನೇರ ಪ್ರವೇಶ ಸಿಗಬಹುದು.



# ಮತ್ತೊಂದು ಬಾಲಿವುಡ್ ಸಿನಿಮಾದಲ್ಲಿ ರಶ್ಮಿಕಾ

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ 'ಸಿಕಂದರ್' ಚಿತ್ರದ ಸೋಲಿನ ಬೆನ್ನಲ್ಲೇ ಬಾಲಿವುಡ್‌ನ 'ಥಾಮಾ' ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ. ಸೋಲಿನ ಕಹಿ ನಡುವೆ ಹೊಸ ಸಿನಿಮಾದಲ್ಲಿ ನಟಿ ತೊಡಗಿಸಿಕೊಂಡಿದ್ದಾರೆ. ಇತ್ತೀಚೆಗೆ ಸಲ್ಮಾನ್ ಖಾನ್ ಜೊತೆ ನಟಿಸಿದ್ದ 'ಸಿಕಂದರ್' ಸಿನಿಮಾ ಗಲ್ಲಾಪೆಟ್ಟಿಗೆಯಲ್ಲಿ ಮಕಾಡೆ ಮಲಗಿದೆ. 'ಸಿಕಂದರ್' ಚಿತ್ರ ಹೀನಾಯವಾಗಿ ಸೋತಿದ್ರೂ ಕೂಡ ರಶ್ಮಿಕಾ ಮಂದಣ್ಣಗೆ ಇರುವ ಬೇಡಿಕೆ ಕಮ್ಮಿಯಾಗಿಲ್ಲ. ಸದ್ಯ ಅವರು 'ಥಾಮಾ' ಚಿತ್ರದ ಶೂಟಿಂಗ್‌ನಲ್ಲಿ ಭಾಗಿಯಾಗಿದ್ದಾರೆ. ಈ ಚಿತ್ರದ ಶೂಟಿಂಗ್ ಭರದಿಂದ ನಡೆಯುತ್ತಿದೆ. ಡೈರೆಕ್ಟರ್ ಆದಿತ್ಯ ನಿರ್ದೇಶನದ ಸಿನಿಮಾದಲ್ಲಿ ಆಯುಷ್ಮಾನ್ ಖುರಾನಾಗೆ ರಶ್ಮಿಕಾ ನಾಯಕಿಯಾಗಿದ್ದಾರೆ. ಅವರೊಂದಿಗೆ ಪರೇಶ್ ರಾವಲ್ ಮತ್ತು ನವಾಜುದ್ದೀನ್ ಸಿದ್ದಿಕಿ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಈ ವರ್ಷ ಅಕ್ಟೋಬರ್ 19ರಂದು ಸಿನಿಮಾ ರಿಲೀಸ್ ಆಗಲಿದೆ ಎಂದು ಚಿತ್ರತಂಡ ಈಗಾಗಲೇ ರಿವೀಲ್ ಮಾಡಿದೆ.

ಮೊದಲ ಬಾರಿಗೆ ಆಯುಷ್ಮಾನ್ ಮತ್ತು ರಶ್ಮಿಕಾ ಜೊತೆಯಾಗಿ ನಟಿಸುತ್ತಿರೋದ್ರಿಂದ ಈ ಚಿತ್ರದ ಮೇಲೆ ಫ್ಯಾನ್ಸ್‌ಗೆ ಬೆಟ್ಟದಷ್ಟು ನಿರೀಕ್ಷೆಯಿದೆ. 'ಸ್ತ್ರೀ 2' ನಿರ್ಮಿಸಿ ಗೆದ್ದಿದ್ದ ಮ್ಯಾಡಾಕ್ ಫಿಲ್ಮ್ಸ್ ಸಂಸ್ಥೆ 'ಥಾಮಾ' ಚಿತ್ರವನ್ನು ನಿರ್ಮಾಣ ಮಾಡ್ತಿದೆ.



# ಕಿಚ್ಚ ಸುದೀಪ್ ಅಭಿನಯದ 'ಬಿಲ್ಲ ರಂಗ ಬಾಷಾ' ಸಿನಿಮಾ ಶೂಟಿಂಗ್ ಶುರು

ಕಿಚ್ಚ ಸುದೀಪ್ ಮತ್ತು ಅನುಪ್ ಭಂಡಾರಿ ಅವರ ಬಿಲ್ಲ ರಂಗ ಬಾಷ ಚಿತ್ರದ ಚಿತ್ರೀಕರಣ ಏಪ್ರಿಲ್ 16 ರಿಂದ ಆರಂಭವಾಗಿದೆ. ಚಿತ್ರದ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದೆ. ಇದರಲ್ಲಿ ಸುದೀಪ್ ಅವರ ಅದ್ಭುತ ನೋಟ ಗಮನ ಸೆಳೆಯುತ್ತದೆ. ಈ ಚಿತ್ರವು ದೊಡ್ಡ ಬಜೆಟ್‌ನೊಂದಿಗೆ ಕನ್ನಡ, ತೆಲುಗು, ಹಿಂದಿ ಮೊದಲಾದ ಭಾಷೆಗಳಲ್ಲಿ ಬಿಡುಗಡೆಯಾಗಲಿದೆ.

ಕಿಚ್ಚ ಸುದೀಪ್ ಹಾಗೂ ಅನುಪ್ ಭಂಡಾರಿ ಅವರ 'ಬಿಲ್ಲ ರಂಗ ಭಾಷ' ಚಿತ್ರದ ಬಗ್ಗೆ ಸಾಕಷ್ಟು ನಿರೀಕ್ಷೆ ಇಟ್ಟುಕೊಳ್ಳಲಾಗಿದೆ. ಸಿನಿಮಾ ಕಾರಣಾಂತರಗಳಿಂದ ವಿಳಂಬ ಆಗುತ್ತಲೇ ಇತ್ತು. ಈಗ ಸೆಟ್ ಹಾಕುವ ಕೆಲಸ ಪೂರ್ಣಗೊಂಡಿದ್ದು, ಸಿನಿಮಾದ ಶೂಟಿಂಗ್ ಆರಂಭ ಆಗಿದೆ. ಪೋಸ್ಟರ್ ರಿಲೀಸ್ ಮಾಡುವ ಮೂಲಕ ಸುದೀಪ್ ಅವರು ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಸುದೀಪ್ ಅವರ ಲುಕ್ ಇಲ್ಲಿ ಗಮನ ಸೆಳೆದಿದೆ.

ಕಿಚ್ಚ ಸುದೀಪ್ ನಿರ್ದೇಶಕ ಅನುಪ್ ಭಂಡಾರಿ ಜೊತೆ ಸೇರಿ 'ಬಿಲ್ಲ ರಂಗ ಬಾಷ' ಸಿನಿಮಾ ಮಾಡುತ್ತೇನೆ ಎಂದು ಈ ಮೊದಲೇ ಘೋಷಿಸಿದ್ದರು. ಬಜೆಟ್‌ನ ಕಾರಣಕ್ಕೆ 'ವಿಕ್ರಾಂತ್ ರೋಣ' ಚಿತ್ರವನ್ನು ಮೊದಲು ಕೈಗೆತ್ತಿಕೊಳ್ಳಲಾಯಿತು. ಈಗ ಸುದೀಪ್ ಹಾಗೂ ನಿರ್ದೇಶಕ ಅನುಪ್ ಭಂಡಾರಿ ಅವರು ಚಿತ್ರದ ಶೂಟಿಂಗ್ ಆರಂಭಿಸಿದ್ದಾರೆ.



# ಶ್ರೀದೇವಿ ಬಯೋಪಿಕ್‌ನಲ್ಲಿ ನಟಿಸಲು ಸಿದ್ಧ

ಚಿತ್ರರಂಗದಲ್ಲಿ ಈಗಾಗಲೇ ಸಂಜಯ್ ದತ್, ಎಂ.ಎಸ್ ಧೋನಿ, ಜಯಲಲಿತಾ ಸೇರಿದಂತೆ ಅನೇಕರ ಸಿನಿಮಾ ಬೆಳ್ಳಿಪರದೆಯಲ್ಲಿ ರಾರಾಜಿಸಿವೆ. ಇದೀಗ ಲೆಜೆಂಡರಿ ನಟಿ ಶ್ರೀದೇವಿ ಕುರಿತು ಬಯೋಪಿಕ್ ಮಾಡಲು ನಿರ್ದೇಶಕರೊಬ್ಬರು ಸಿದ್ಧತೆ ನಡೆಸುತ್ತಿದ್ದಾರೆ. ಶ್ರೀದೇವಿ ಪಾತ್ರಕ್ಕೆ ಜೀವ ತುಂಬಲು ಅನೇಕ ನಟಿಯರು ತುದಿಗಾಲಿನಲ್ಲಿ ನಿಂತಿದ್ದಾರೆ. ಶ್ರೀದೇವಿ ಬಯೋಪಿಕ್ ಸಿನಿಮಾ ರೂಪದಲ್ಲಿ ತರಲು ಪ್ಲ್ಯಾನಿಂಗ್ ನಡೆಯುತ್ತಿದೆ. ಚಿತ್ರತಂಡ ನಟಿಯ ಹುಡುಕಾಟದಲ್ಲಿದೆ. ಇದರ ನಡುವೆ ಪೂಜಾ ಹೆಗ್ಡೆ ಅವರು ಸಂದರ್ಶನದಲ್ಲಿ ಶ್ರೀದೇವಿ ಬಯೋಪಿಕ್‌ನಲ್ಲಿ ನಟಿಸಲು ಆಸಕ್ತಿಯಿದೆ. ಅವಕಾಶ ಸಿಕ್ಕರೆ ನಟಿಸುತ್ತೇನೆ ಎಂದಿದ್ದಾರೆ. ಈಗಾಗಲೇ ನಾನು ಶ್ರೀದೇವಿ ನಟನೆಯ ಹಾಡೊಂದಕ್ಕೆ ಡ್ಯಾನ್ಸ್ ಮಾಡಿದ್ದೇನೆ. ನಾನು ಅವರ ದೊಡ್ಡ ಅಭಿಮಾನಿ. ಅವರ ಜೀವನ ಚರಿತ್ರೆಯಲ್ಲಿ ನಟಿಸಲು ಚಾನ್ಸ್ ಸಿಕ್ಕರೆ ಅಭಿನಯಿಸಲು ಸಿದ್ಧ ಎಂದು ಪೂಜಾ ಹೆಗ್ಡೆ ಹೇಳಿದ್ದಾರೆ. ನಾನು ಇದುವರೆಗೂ ಬಯೋಪಿಕ್‌ನಲ್ಲಿ ನಟಿಸಿಲ್ಲ. ನಿಜ ಜೀವನದಲ್ಲಿ ಹೀರೋ ಆಗಿರುವ ವ್ಯಕ್ತಿಗಳ ಪಾತ್ರವನ್ನು ತೆರೆಯ ಮೇಲೆ ಪ್ರತಿನಿಧಿಸುವುದಕ್ಕೆ ಖುಷಿ ಆಗುತ್ತದೆ.



# 'ಜೈಲರ್ 2'ನಲ್ಲಿಯೂ ನಟಿಸಲಿದ್ದಾರೆ ಶಿವಣ್ಣ

ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ 'ಜೈಲರ್ 2'ನಲ್ಲಿ ನಟಿಸುತ್ತಾರಾ ಎಂಬ ಸುದ್ದಿಗೆ ಗುಡ್ ನ್ಯೂಸ್ ಸಿಕ್ಕಿದೆ. ಸುದ್ದಿಗೋಷ್ಠಿವೊಂದರಲ್ಲಿ 'ಜೈಲರ್ 2'ನಲ್ಲಿ ನಟಿಸೋದಾಗಿ ಶಿವಣ್ಣ ಅಧಿಕೃತವಾಗಿ ತಿಳಿಸಿದ್ದಾರೆ. ಹೈದರಾಬಾದ್‌ನಲ್ಲಿ ನಡೆದ ಸುದ್ದಿಗೋಷ್ಠಿಯೊಂದರಲ್ಲಿ 'ಜೈಲರ್ 2'ನಲ್ಲಿ ನಟಿಸುತ್ತೀರಾ ಎಂದು ಶಿವಣ್ಣಗೆ ವರದಿಗಾರರೊಬ್ಬರು ಕೇಳಿದ್ದಾರೆ. ಅದಕ್ಕೆ ನಟ ಮಾತನಾಡಿ, ನಾನು 'ಜೈಲರ್ 2' ಸಿನಿಮಾದ ಭಾಗವಾಗಲಿದ್ದೇನೆ. ಈ ಕುರಿತು ನಿರ್ದೇಶಕ ನೆಲ್ಸನ್ ನನ್ನ ಬಳಿ ಮಾತನಾಡಿದ್ದಾರೆ. ಈಗಾಗಲೇ ಇದರ ಶೂಟಿಂಗ್ ಶುರುವಾಗಿದೆ. ಆದರೆ ನನ್ನ ಭಾಗದ ಶೂಟಿಂಗ್ ಶುರು ಆಗಿಲ್ಲ. 'ಜೈಲರ್'ನಲ್ಲಿ ನಾನು ನಟಿಸಿದ ಪಾತ್ರಕ್ಕೆ ಅಷ್ಟೊಂದು ಮಹತ್ವ ಸಿಗುತ್ತೆ ಎಂದು ನಾನು ಅಂದುಕೊಂಡಿರಲಿಲ್ಲ.

ನಾನು ಈ ಸಿನಿಮಾ ಮಾಡಲು ರಜನಿಕಾಂತ್ ಅವರೇ ಕಾರಣ. ಅವರು ನನ್ನ ಕುಟುಂಬವಿದ್ದಂತೆ. ಚಿಕ್ಕ ವಯಸ್ಸಿನಿಂದ ಅವರನ್ನು ನೋಡುತ್ತಾ ಬೆಳೆದಿದ್ದೇವೆ. ಜೈಲರ್‌ನಲ್ಲಿ ನಟಿಸಲು ಕೇಳಿದಾಗ ಕಥೆಯನ್ನು ಕೇಳದೇ ಸಿನಿಮಾ ಒಪ್ಪಿಕೊಂಡೆ. ರಜನಿಕಾಂತ್ ಸಿನಿಮಾದಲ್ಲಿ ಒಂದು ಕ್ಷಣ ಕಾಣಿಸಿಕೊಳ್ಳುವ ಪಾತ್ರವಾದರೂ ನಟಿಸಲು ಸಿದ್ಧನಿದ್ದೆ ಎಂದಿದ್ದಾರೆ. ಜೈಲರ್‌ನಲ್ಲಿ ನನ್ನನ್ನು ಅತ್ಯುತ್ತಮವಾಗಿ ತೋರಿಸಿದ ಛಾಯಾಗ್ರಾಹಕರಿಗೆ ಮತ್ತು ಸಂಗೀತ ನಿರ್ದೇಶಕ ಅನಿರುದ್ಧ್‌ಗೆ ನನ್ನ ಧನ್ಯವಾದಗಳು ಎಂದಿದ್ದಾರೆ. ಈ ವೇಳೆ, 'ಜೈಲರ್ 2'ನಲ್ಲಿ ಬಾಲಯ್ಯ ಅವರು ನಟಿಸುವ ಬಗ್ಗೆ ಶಿವಣ್ಣಗೆ ಕೇಳಲಾಗಿದೆ.

**ಪಾತ್ರಕ್ಕೆ ಅಷ್ಟೊಂದು ಮಹತ್ವ**



# ಕೆಣಕಿದ ನೆಟ್ಟಿಗನಿಗೆ ಖುಷ್ಬೂ ತಿರುಗೇಟು

ಕನ್ನಡದ ರಣಧೀರ, ಅಂಜದ ಗಂಡು ಸಿನಿಮಾಗಳಲ್ಲಿ ನಟಿಸಿರುವ ಖುಷ್ಬೂ ಸುಂದರ್ ಸದಾ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ಬೋಲ್ಡ್ ಫೋಟೋ ಹಂಚಿಕೊಂಡಿದ್ದ ನಟಿಗೆ ಕಾಮೆಂಟ್ ಮೂಲಕ ಕಾಲೆಳೆದಿದ್ದಾನೆ. ಕೆಣಕಿದ ನೆಟ್ಟಿಗನಿಗೆ ಸರಿಯಾದ ತಿರುಗೇಟು ನೀಡಿದ್ದಾರೆ ಖುಷ್ಬೂ. ಖುಷ್ಬೂ ಸುಂದರ್‌ಗೆ 54 ವರ್ಷವಾಗಿದ್ರೂ ಫಿಟ್‌ನೆಸ್‌ಗೆ ಹೆಚ್ಚು ಆದ್ಯತೆ ನೀಡುತ್ತಾರೆ.

ನಟಿಯ ಬ್ಯೂಟಿ ಬಗ್ಗೆ ಆಗಾಗ ಫ್ಯಾನ್ಸ್ ಮೆಚ್ಚುಗೆ ಸೂಚಿಸುತ್ತಾರೆ. ಇದೀಗ ಹಸಿರು ಡ್ರೆಸ್‌ನಲ್ಲಿ ಸಖತ್ ಬೋಲ್ಡ್ ಆಗಿ ಕಾಣಿಸಿಕೊಂಡಿದ್ದಾರೆ. ಸಖತ್ ಸ್ಟೈಲೀಶ್ ಆಗಿ ಕಾಣಿಸಿಕೊಂಡಿರುವ ಖುಷ್ಬೂ ನೆಟ್ಟಿಗನೊಬ್ಬ ಕೆಣಕಿ ಕಾಮೆಂಟ್ ಮಾಡಿದ್ದಾನೆ.

ತೆಳ್ಳಗೆ ಬಳುಕುವ ಬಳ್ಳಿಯಂತೆ ಕಾಣಿಸಿಕೊಂಡಿರುವ ನಟಿಗೆ ಇದು ಮೌಂಜಾರೋ ಇಂಜೆಕ್ಷನ್ ಮ್ಯಾಜಿಕ್. ಇದರ ಬಗ್ಗೆ ನಿಮ್ಮ ಫಾಲೋವರ್ಸ್‌ಗೂ ತಿಳಿಸಿ, ಅವರು ಬಳಸುವಂತೆ ಆಗಲಿ ಎಂದು ಕಾಮೆಂಟ್ ಮಾಡಿದ್ದಾನೆ. ಇದು ನಟಿಗೆ ಕೋಪ ತರಿಸಿದೆ. ಅದಕ್ಕೆ ನಟಿ, ನಿಮ್ಮಂತಹ ಜನರ ನೋವು ನನಗೆ ಅರ್ಥವಾಗುತ್ತಿಲ್ಲ. ಸೋಷಿಯಲ್ ಮೀಡಿಯಾದಲ್ಲಿ ನಿಮ್ಮ ಮುಖವನ್ನು ತೋರಿಸುವುದಿಲ್ಲ. ನೀವೆಷ್ಟು ದಡ್ಡರು ಎಂದು ನಿಮಗೆ ತಿಳಿದಿದೆ. ಇದು ನಾಚಿಕೇಡಿನ ಸಂಗಿನ. ನಿಮ್ಮ ಹೆತ್ತವರ ಬಗ್ಗೆ ಯೋಚಿಸಿದಾಗ ಅಯ್ಯೋ ಅನಿಸುತ್ತದೆ ಎಂದು ಖುಷ್ಬೂ ಖಡಕ್ ಉತ್ತರ ನೀಡಿದ್ದಾರೆ. ನಟಿಯ ನಡೆಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ.

**ಮೌಂಜಾರೋ ಇಂಜೆಕನ್ ಮ್ಯಾಜಿಕ್**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966